ಸಂಪುಟ: 05 ಸಂಚಿಕೆ: 41 ಪುಟಗಳು: 08 ಶುಕ್ರವಾರ 25 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ನಮ್ಮ ಮಕ್ಕಳು ಉತ್ತಮ ನಾಳೆಗಳನ್ನು ಹೊಂದಲು ನಮ್ಮ ಇಂದಿನ ದಿನವನ್ನು ತ್ಯಾಗ ಮಾಡೋಣ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 3,647 ಕೋಟಿ ರೂ. ಯೋಜನೆಗೆ ಅನುಮೋದನೆ: ಸಿದ್ದರಾಮಯ್ಯ

• ಉದಯವಾಹಿನಿ, ಚಾಮರಾಜನಗರ

ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮೈಸೂರು ಪ್ರಾದೇಶಿಕ ವಿಭಾಗದಲ್ಲಿ 3,647 ಕೋಟಿ ರೂ. ಮೌಲ್ಯದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದ ನಾಲ್ಕು ಪ್ರದೇಶಗಳಲ್ಲಿ ಸಚಿವ ಸಂಪುಟ ಸಭೆಗಳನ್ನು ನಡೆಸಲು ಸಂಪುಟ ಸಭೆ ನಿರ್ಧರಿಸಿದೆ ಎಂದು ಹೇಳಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಸಂಪುಟ ಸಭೆ ಖಂಡಿಸಿದೆ ಮತ್ತು ಘಟನೆಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಸಂತಾಪ ಸೂಚಿಸಿದೆ ಎಂದು ಸಿಎಂ ತಿಳಿಸಿದರು. ಸಭೆಯಲ್ಲಿ 78 ವಿಷಯಗಳ ಕುರಿತು ಚರ್ಚಿಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು. ನಾನು ಮಲೆ ಮಹದೇಶ್ವರ ಬೆಟ್ಟದಲ್ಲಿ ಐತಿಹಾಸಿಕ ಸಚಿವ ಸಂಪುಟ ಸಭೆಯ ಅಧ್ಯಕ್ಷತೆ ವಹಿಸಿದ್ದೆ. ಕರ್ನಾಟಕದ ನಾಲ್ಕು ಪ್ರದೇಶಗಳಲ್ಲಿ ಸಚಿವ ಸಂಪುಟ ಸಭೆಗಳನ್ನು ನಡೆಸಲು ನಾವು ನಿರ್ಧರಿಸಿದ್ದೇವೆ.

ಇದಕ್ಕೂ ಮೊದಲು, ಕಲಬುರಗಿ ಪ್ರದೇಶದಲ್ಲಿ ಸಭೆ ನಡೆದಿತ್ತು; ಮೈಸೂರು ಪ್ರದೇಶದಲ್ಲಿ ನಡೆದಿದ್ದು, ಮುಂಬರುವ ಸಭೆಗಳು ಬೆಳಗಾವಿ ಮತ್ತು ಬಿಜಾಪುರದಲ್ಲಿ ಹಾಗೂ ಬೆಂಗಳೂರು ವಿಭಾಗದ ಸಭೆ ನಂದಿ ಬೆಟ್ಟದಲ್ಲಿ ನಡೆಯಲಿದೆ ಮತ್ತು ಆಯಾ ಪ್ರದೇಶಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದರು. ನಡೆದ ಸಭೆಯಲ್ಲಿ 1,787 ಕೋಟಿ ರೂ.ಗಳ ನೀರಾವರಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.

ಆರೋಗ್ಯ ಕ್ಷೇತ್ರದ ಸುಧಾರಣೆಗೆ 228 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು, ಕೊಳ್ಳೇಗಾಲದಲ್ಲಿರುವ ಸರ್ಕಾರಿ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಗುಂಡ್ಲುಪೇಟೆ 110 ಕೆರೆಗಳಿಗೆ ನೀರು ತುಂಬಿಸಲು 475 ಕೋಟಿ ವೆಚ್ಚಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ.

## ಕರ್ನಾಟಕದಲ್ಲಿ ಒಳಮಿಸಲು ಸಮೀಕ್ಷೆಗೆ 70 ಸಾವಿರ ಶಿಕ್ಷಕರ ಬಳಕೆ

• ಉದಯವಾಹಿನಿ, ಬೆಂಗಳೂರು

ನ್ಯಾ.ಎಚ್.ಎನ್. ನಾಗಮೋಹನ್ ದಾಸ್ ನೇತೃತ್ವದ ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿಯ ಒಳ ಮೀಸಲು ಕುರಿತು ದತ್ತಾಂಶ ಸಂಗ್ರಹಕ್ಕೆ ನಡೆಯಲಿರುವ ಸಮೀಕ್ಷಾ ಕಾರ್ಯದಲ್ಲಿ ಅಂದಾಜು 70 ಸಾವಿರಕ್ಕೂ ಹೆಚ್ಚು ಶಿಕ್ಷಕರು ಭಾಗಿಯಾಗಲಿದ್ದಾರೆ. ಈ ಬಗ್ಗೆ ಶಾಲಾ ಶಿಕ್ಷಣ ಇಲಾಖೆಯು ಆದೇಶ ಹೊರಡಿಸಿದ್ದು, ಕರಾರುವಕ್ಕಾದ ಪ್ರಮಾಣೀಕೃತ ಮಾಹಿತಿ ಪಡೆಯುವ ಸಲುವಾಗಿ ಸಮೀಕ್ಷಾ ಕಾರ್ಯಕ್ಕೆ 58,932 ಶಿಕ್ಷಕರನ್ನು ಗಣತಿದಾರರನ್ನಾಗಿ ಗುರುತಿಸಲಾಗುತ್ತದೆ. ಜತೆಗೆ, ಶೇ.10ರಷ್ಟು ಶಿಕ್ಷಕರನ್ನು ಹೆಚ್ಚುವರಿಯಾಗಿ ಗಣತಿದಾರರನ್ನಾಗಿ ಕಾಯ್ದಿರಿಸಲಾಗುತ್ತದೆ. ಹಾಗೆಯೇ 10 ರಿಂದ 12 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರಂತೆ 5,000 ಮೇಲ್ವಿಚಾರಕರನ್ನು ಗುರುತಿಸುವಂತೆ ಸೂಚಿಸಲಾಗಿದೆ. ಜಿಲ್ಲಾವಾರು ಅಗತ್ಯವಿರುವ ಗಣತಿದಾರರ ಸಂಖ್ಯೆಯನ್ನು ಸರಕಾರ ಸೂಚಿಸಿದ್ದು, ಅಷ್ಟು ಪ್ರಮಾಣದ ಶಿಕ್ಷಕ ಗಣತಿದಾರರನ್ನು ಗುರುತಿಸುವಂತೆ ಶಾಲಾ ಶಿಕ್ಷಣ ಇಲಾಖೆಗೆ ಸೂಚನೆ ನೀಡಲಾಗಿದೆ. ಪ್ರತಿ ಮತಗಟ್ಟೆಗೆ ಒಬ್ಬ ಶಿಕ್ಷಕ ಗಣತಿದಾರನ ನೇಮಕವಾಗಲಿದೆ. ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರ ನೇಮಕ ಮಾಡಬಾರದು ಎಂದು ನಿರ್ದೇಶನ ನೀಡಲಾಗಿದೆ. ಶಿಕ್ಷಕರು ಬೂತ್ ಲೆವೆಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

## ಧಾರವಾಡದಲ್ಲಿ ಮತಾಂತರಕ್ಕೆ ಒತ್ತಾಯ: ವಿಎಚ್ ಪಿ ಆರೋಪ

• ಉದಯವಾಹಿನಿ, ಧಾರವಾಡ

ಮನೆ, ಮನೆಗೆ ತೆರಳಿ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ ಆಗುವಂತೆ ಒತ್ತಾಯಿಸುತ್ತಿದ್ದ ಮೂವರು ಮಹಿಳೆಯರನ್ನು ಹಿಡಿದ ವಿಶ್ವ ಹಿಂದೂ ಪರಿಷದ್ ಹಾಗೂ ಬಜರಂಗದಳ ಕಾರ್ಯಕರ್ತರು ಪೊಲೀಸರ ವಶಕ್ಕೆ ನೀಡಿದ್ದಾರೆ. ಧಾರವಾಡದ ಲಕ್ಷ್ಮೀಸಿಂಗನ ಕೇರಿಯಲ್ಲಿರುವ ರಾಜು ಪೂಜಾರ ಎಂಬುವರ ಮನೆಗೆ ಬೈಬಲ್ ಹಿಡಿದುಕೊಂಡು ಹೋದ ಮಹಿಳೆಯರು, ನೀವು ಕ್ರೈಸ್ತ ಧರ್ಮಕ್ಕೆ ಮತಾಂತರ ಆಗಿ. ನಿಮ್ಮೆಲ್ಲಸಮಸ್ಯೆಗಳು ಬಗೆಹರಿಯುತ್ತವೆ. ನಿಮಗೆ ದುಡ್ಡು, ನಿಮ್ಮ ಮಕ್ಕಳ ಶಿಕ್ಷಣದ ಖರ್ಚು ಕೊಡುತ್ತೇವೆ ಎಂದು ಕೆಲವರು ಆಮಿಷ ಒಡ್ಡಿರುವುದಾಗಿ ಆರೋಪಗಳು ಕೇಳಿಬಂದಿವೆ. ''ನಿಮಗೆ ಅನಾರೋಗ್ಯ ಇದ್ದರೆ ಯೇಸು ನಿವಾರಿಸುತ್ತಾನೆ ಎಂದು ರಾಜುನ ಮೇಲೆ ಒತ್ತಡ ಹೇರಿದ್ದಾರೆ. ಇವರ ಒತ್ತಡ ತಾಳಲಾರದೆ ರಾಜು ವಿಶ್ವ ಹಿಂದೂ ಪರಿಷದ್ ಕಾರ್ಯಕರ್ತರು ಮತ್ತು ಬಜರಂಗದಳ ಕಾರ್ಯಕರ್ತರಿಗೆ ಮಾಹಿತಿ ಮುಟ್ಟಿಸಿದ್ದರಿಂದ ಸ್ಥಳಕ್ಕೆ ಬಂದ ಕಾರ್ಯಕರ್ತರು ಆ ಮಹಿಳೆಯರನ್ನು ಹಿಡಿದು ತರಾಟೆಗೆ ತೆಗೆದುಕೊಂಡಿದ್ದಾರೆ'' ಎಂದು ಹೇಳಿದ್ದಾರೆ. ಧಾರವಾಡ ವಿದ್ಯಾಗಿರಿ ಪೊಲೀಸ್ ಠಾಣೆಯಲ್ಲಿ ಪೊಟ್ರೆಟ್ ಜಾನ್ ರಫೇಲ, ನಾಗವೇಣಿ ರುದ್ರಪಾಟಿ, ಕಮಲಮ್ಮ ದೇವದಾಸ, ಚೆನ್ನಮ್ಮ ದಾಸ, ಸೀಮಿ ನಾಯಕ ಅವರ ವಿರುದ್ಧ ದೂರು ದಾಖಲಾಗಿದೆ. ಲಕ್ಷ್ಮಿ ಮಸಿಂಗನಕೇರಿಯ ರಾಜು ಪೂಜಾರಿ ಎಂಬುವರು ಈ ಕುರಿತು ವಿದ್ಯಾಗಿರಿ ಪೊಲೀಸ್ ಠಾಣೆಯಲ್ಲಿದೂರು ನೀಡಿದ್ದಾರೆ.

**ಮಾಜಿ ಪ್ರಧಾನಿ ಮಂತ್ರಿ** **ಜೆಡಿಎಸ್ ಸರ್ವೋಚ್ಚ ನಾಯಕ**

# ಎಚ್ ಡಿ ದೇವೇಗೌಡರನ್ನು ಭೇಟಿ ಮಾಡಿ ಸನ್ಮಾನಿಸಿದ ಹೊಂಬೇಗೌಡರು

• ಉಮೇಶ್ ಬಾಣಾವರ ಉದಯವಾಹಿನಿ ಬೆಂಗಳೂರು

ಸಾಮಾಜಿಕ ಸೇವೆ ರೈತ ಸಂಘಗಳ ಒಕ್ಕೂಟವಾದ ನವದೆಹಲಿಯ ಭಾರತೀಯ ಕೃಷಿಕ ಸಮಾಜ ಸಂಘಟನೆಯಲ್ಲಿ ರಾಮನಗರ ಜಿಲ್ಲೆಯಲ್ಲಿ ಜಿಲ್ಲಾ ಅಧ್ಯಕ್ಷರಾಗಿ ಸೇವೆ ಸಲ್ಲಿಸಿ ನಂತರ ಪತ್ರಿಕಾ ರಂಗದ ಮೂಲಕ ಸಾಮಾಜಿಕ ಸೇವೆ, ನೊಂದವರ ಪರ ಕಾಳಜಿ, ಸಮಾಜದಲ್ಲಿ ತುಳಿತಕ್ಕೆ ಒಳಗಾದವರ ಪರ ಧ್ವನಿ ಎತ್ತಿ, ಎಲೆಮರೆಕಾಯಿಯಂತೆ ಸಮಾಜ ಸೇವೆ ನಡೆಸಿಕೊಂಡು ಬರುತ್ತಿರುವ ಟಿ.ಹೊಂಬೇಗೌಡರು ರಾಮನಗರ ಜಿಲ್ಲೆಯ ರಾಮನಗರ ತಾಲ್ಲೂಕು ರೈತರ ಹಲವಾರು ಸಮಸ್ಯೆಗಳ ಬಗ್ಗೆ ಮಾಜಿ ಪ್ರಧಾನ ಮಂತ್ರಿಗಳು ಕರ್ನಾಟಕ ಪ್ರದೇಶ ಜನತಾದಳ ಜಾತ್ಯತೀತ ಪಕ್ಷದ ವರಿಷ್ಠರು ಸರ್ವೋಚ್ಚ ನಾಯಕರು ಆದ ದೇವೇಗೌಡ ಅವರನ್ನು ಪದ್ಮನಾಭನಗರದ ನಿವಾಸದಲ್ಲಿ ಭೇಟಿ ಮಾಡಿದ ಹೊಂಬೇಗೌಡರು ಹಲವಾರು ಸಮಸ್ಯೆಗಳ ಬಗ್ಗೆ ಚರ್ಚಿಸಿದರು.



ಸಮಸ್ಯೆಗಳನ್ನು ಸಂಪೂರ್ಣವಾಗಿ ಆಲಿಸಿದ ದೇವೇಗೌಡರು ಸ್ವಲ್ಪ ದಿನಗಳ ಕಾಲ ಸುಮ್ಮನಿರಿ ನಂತರ ಎಲ್ಲವೂ ಸರಿ ಹೋಗಲಿದೆ. ರೈತರ ಸಮಸ್ಯೆಗಳ ಬಗ್ಗೆ ನಿಮ್ಮ ಹೋರಾಟ ಮುಂದುವರೆಯಲಿ. ಇದಕ್ಕೆ ಸದಾ ನನ್ನ ಬೆಂಬಲವಿದೆ. ದಿನಗಳು ಯಾವತ್ತೂ ಒಂದೇ



ರೀತಿ ಇರುವುದಿಲ್ಲ ಎಂದು ಮಾರ್ಮಿಕವಾಗಿ ನುಡಿದರು.

ಸ್ವಲ್ಪ ಕಾಲ ಸಮಾಧಾನವಾಗಿ ರೈತರ ಸಮಸ್ಯೆಯನ್ನು ಗಮನವಿಟ್ಟು ಆಲಿಸಿದ ನಂತರ ರಾಮನಗರ ಜಿಲ್ಲೆ, ರಾಮನಗರ ತಾಲ್ಲೂಕು ಬಿಡದಿ ಹೋಬಳಿಯ ರೈತ ಮುಖಂಡರುಗಳಾದ ಹೊಂಬೇಗೌಡರು ಮಾಜಿ ಪ್ರಧಾನ ಮಂತ್ರಿಗಳಾದ ದೇವೇಗೌಡರಿಗೆ ಸನ್ಮಾನಿಸಿದರು.

ಮಾಜಿ ಪ್ರಧಾನ ಮಂತ್ರಿಗಳ ವಿಶೇಷ ಕರ್ತವ್ಯ ಅಧಿಕಾರಿಗಳಾದ ಅಂಜನಿಗೌಡರು, ಜೆಡಿಎಸ್ ಸೇವಾದಳ ರಾಜ್ಯ ಪ್ರಧಾನ ಕಾರ್ಯದರ್ಶಿ, ಉದಯವಾಹಿನಿ ಪತ್ರಿಕೆಯ ರಾಜ್ಯ ವಿಶೇಷ ವರದಿಗಾರ ಬಾಣಾವರ ಉಮೇಶ್, ಉಪ ಸಂಪಾದಕರಾದ ಮೋಹನ್ ಸೇರಿದಂತೆ ರಾಮನಗರ ತಾಲ್ಲೂಕಿನ ಹಲವಾರು ರೈತ ಮುಖಂಡರು, ಮತ್ತಿತರರು ಉಪಸ್ಥಿತರಿದ್ದರು.

**ಹೊಂಬೆಗೌಡರನ್ನು ಸನ್ಮಾನಿಸಿದ ಮಾಜಿ ಪ್ರಧಾನಿ**

ಹೊಂಬೇಗೌಡರ ರೈತಪರ ಕಾಳಜಿಯನ್ನು ಸಾಮಾಜಿಕ ಸೇವೆ ಹೋರಾಟವನ್ನು ಗಮನಿಸಿದ ಮಾಜಿ ಪ್ರಧಾನ ಮಂತ್ರಿಗಳಾದ ಎಚ್.ಡಿ. ದೇವೇಗೌಡರು ಹೋರಾಟ ಹೀಗೆ ಮುಂದುವರೆಯಲಿ, ನಿಮ್ಮ ಪ್ರಾಮಾಣಿಕ ಹೋರಾಟಕ್ಕೆ ಸದಾ ನನ್ನ ಬೆಂಬಲವಿದೆ. ಕೆಲ ರಾಜಕಾರಣಿಗಳು ರೈತರಿಗೆ ತೊಂದರೆ ನೀಡುತ್ತಿರುವುದು ಸಹ ನನ್ನ ಗಮನಕ್ಕೆ ಬಂದಿದೆ. ಇದಕ್ಕೆ ಕಾಲ ಬಂದಾಗ ತಕ್ಕ ಉತ್ತರ ನೀಡೋಣ. ಆ ಕಾಲ ಶೀಘ್ರದಲ್ಲಿ ಬರಲಿದೆ ಎಂದು ಹೊಂಬೇಗೌಡರಿಗೆ ಮಾಜಿ ಪ್ರಧಾನಿಗಳು ಶಾಲು ಹೊದಿಸಿ ಸನ್ಮಾನಿಸಿ ಆಶೀರ್ವದಿಸಿದರು.



**ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಿಂದ 26 ಜನರು ಸಾವನ್ನಪ್ಪಿದ್ದಾರೆ. ಇದಕ್ಕೆ ತಿರುಗೇಟು ನೀಡಲು ಕೇಂದ್ರ ಸರ್ಕಾರ ಸಹ ಸಜ್ಜಾಗಿದ್ದು , ಈಗಾಗಲೇ ಪಾಕಿಸ್ತಾನ ವಿರುದ್ಧ ಕೆಲ ಮಹತ್ವದ ತೀರ್ಮಾನಗಳನ್ನು ಕೈಗೊಂಡಿದೆ. ಇನ್ನು ಉಗ್ರರ ದಾಳಿ ಸಂಬಂಧ ಮುಂದಿನ ನಡೆ ಬಗ್ಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ಗುರುವಾರ ಸಂಸತ್ ಭವನದಲ್ಲಿ ಸರ್ವ ಪಕ್ಷಗಳ ಸಭೆ ನಡೆದಿದ್ದು , ಸಭೆಯಲ್ಲಿ ಕೆಲ ಮಹತ್ವದ ಅಂಶಗಳನ್ನು ಚರ್ಚಿಸಲಾಗಿದೆ. ಉಗ್ರರ ಕೃತ್ಯವನ್ನ ಖಂಡಿಸಲಾಗಿದೆ. ಅಲ್ಲದೇ ಉಗ್ರರನ್ನು ಮಟ್ಟ ಹಾಕಲು ಕೇಂದ್ರ ಸರ್ಕಾರ ಯಾವುದೇ ಕ್ರಮಕೈಗೊಂಡರೂ ತಮ್ಮ ಬೆಂಬಲವಿದೆ ಎಂದು ವಿರೋಧ ಪಕ್ಷಗಳ ನಾಯಕರು ತಿಳಿಸಿದ್ದಾರೆ.**

# ಭಾರತ ಒಗಟ್ಟು ಪಾಕ್‌ಗೆ ಬಿಕಟ್ಟು

**ಉಗ್ರರನ್ನು ಹುಡುಕಿ ಹುಡುಕಿ ಹೊಡಿತೀವಿ, ಕಲ್ಪನೆಗೂ ಮೀರಿದ ಶಿಕ್ಷೆ ಫಿಕ್ಸ್**

**ಮೋದಿಗೆ ಇಸ್ರೇಲ್ ಪ್ರಧಾನಿ ನೆತನ್ಯಾಹು ಭರವಸೆ**

**ಸರ್ಕಾರ ಯಾವುದೇ ಕ್ರಮ ಕೈಗೊಳ್ಳಲು ಬೆಂಬಲ**

**ಕಾನೂನು ಅಸ್ಥಿರತೆಗೆ ಪಾಕಿಸ್ತಾನ ಸಿದ್ಧರಾಗಿರಬೇಕು**

1. "ಪಹಲ್ಗಾಮ್ ದಾಳಿಕೋರರು ಎಲ್ಲೇ ಅಡಗಿದ್ದರೂ ಸರಿ, ಹುಡುಕಿ ಕೊಲ್ಲುತ್ತೇವೆ" ದೇಶಕ್ಕೆ ಪ್ರಧಾನಿ ಮೋದಿ ಭರವಸೆ
2. ಬಿಹಾರದ ಮಧುಬನಿಯಲ್ಲಿ ಪಹಲ್ಗಾಮ್ ಬಲಿಪಶುಗಳ ಸ್ಮರಣಾರ್ಥ ಮೌನಾಚರಣೆ ಕೈಗೊಂಡ ಪ್ರಧಾನಿ ಮೋದಿ
3. ಪಹಲ್ಗಾಮ್ ಬಲಿಪಶುಗಳ ಕುಟುಂಬಸ್ಥರ ನೋವಿನಲ್ಲಿ ಇಡೀ ದೇಶ ಭಾಗಿಯಾಗಿದೆ ಎಂದ ಪ್ರಧಾನಿ ಮೋದಿ

• ಉದಯವಾಹಿನಿ, ನವದೆಹಲಿ

ಸರ್ವ ಪಕ್ಷಗಳ ಸಭೆ ಬಳಿಕ ಪ್ರತಿಕ್ರಿಯಿಸಿರುವ ವಿಪಕ್ಷ ನಾಯಕ ರಾಹುಲ್ ಗಾಂಧಿ, ಸರ್ವಪಕ್ಷಸಭೆಯಲ್ಲಿ ಉಗ್ರರ ದುಷ್ಕೃತ್ಯವನ್ನು ಖಂಡಿಸಿದ್ದೇವೆ. ಸರ್ಕಾರ ಕೈಗೊಳ್ಳುವ ಕ್ರಮಗಳಿಗೆ ನಮ್ಮ ಬೆಂಬಲವಿದೆ. ಭಯೋತ್ಪಾದನೆ ವಿರುದ್ಧ ಏನೇ ಕ್ರಮಕೈಗೊಂಡರೂ ಸಹಮತವಿದೆ ಎಂದು ಸ್ಪಷ್ಟಪಡಿಸಿದರು. ಇನ್ನು ಎಐಸಿಸಿ ಅಧ್ಯಕ್ಷ, ರಾಜ್ಯಸಭಾ ಸದಸ್ಯ ಮಲ್ಲಿಕಾರ್ಜುನ ಖರ್ಗೆ ಸಹ ಮಾತನಾಡಿ, ಕಾಶ್ಮೀರದಲ್ಲಿ ಶಾಂತಿ ಮರುಸ್ಥಾಪನೆ ಪ್ರಯತ್ನಗಳ ಬಗ್ಗೆ ಚರ್ಚೆಯಾಗಿದ್ದು, ಸರ್ಕಾರ ಯಾವುದೇ ಕ್ರಮಕೈಗೊಂಡರೂ ನಮ್ಮ ಬೆಂಬಲವಿದೆ ಎಂದಿದ್ದಾರೆ.

ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಸಭೆಯಲ್ಲಿ ಎಲ್ಲಾ ರಾಜಕೀಯ ನಾಯಕರು ಪಾಕಿಸ್ತಾನಕ್ಕೆ ಸಂಬಂಧಿಸಿದಂತೆ ಭದ್ರತೆ ಕುರಿತ ಸಂಪುಟ ತೆಗೆದುಕೊಂಡ ಕ್ರಮವನ್ನು ಸರ್ವಾನುಮತದಿಂದ ಬೆಂಬಲಿಸಿದರು. ಪ್ರಧಾನಿ ಮೋದಿ ಮತ್ತು ಸರ್ಕಾರವು ನಮ್ಮ ದೇಶದಲ್ಲಿ ಭಯೋತ್ಪಾದಕ ಚಟುವಟಿಕೆಗಳ ಬಗ್ಗೆ ಶೂನ್ಯ ಸಹಿಷ್ಣುತೆಯನ್ನು ಹೊಂದಿರುತ್ತದೆ ಎಂದು ಸರ್ಕಾರ ಸಭೆಯಲ್ಲಿ ಸ್ಪಷ್ಟಪಡಿಸಿತು. ಸರ್ಕಾರವು ತೆಗೆದುಕೊಳ್ಳುತ್ತಿರುವ ಎಲ್ಲಾ ಕ್ರಮಗಳು ಮತ್ತು ಭವಿಷ್ಯದಲ್ಲಿ ತೆಗೆದುಕೊಳ್ಳಬೇಕಾದ ಎಲ್ಲಾ ಕ್ರಮಗಳಿಗೆ ಎಲ್ಲಾ ನಾಯಕರು ಸರ್ಕಾರದೊಂದಿಗೆ ತಮ್ಮ ಒಗ್ಗಟ್ಟನ್ನು ವ್ಯಕ್ತಪಡಿಸಿದರು ಎಂದರು.

**ಭಾರತ-ಪಾಕ್ ನಡುವೆ ಬಿಗುವಿನ ವಾತಾವರಣ:** ಉಗ್ರರಿಗೆ ಬೆಂಬಲವಾಗಿ ನಿಂತಿರುವ ಪಾಕಿಸ್ತಾನಕ್ಕೆ ಭಾರತ ಕೆಲ ವಿಚಾರಗಳಲ್ಲಿ ಶಾಕ್ ಕೊಟ್ಟಿದೆ. ಪಾಕಿಸ್ತಾನಿ ನಾಗರಿಕರಿಗೆ ವಿಸಾ ರದ್ದುಗೊಳಿಸಿದೆ. ಅಲ್ಲದೇ ಭಾರತದಲ್ಲಿ ನೆಲೆಸಿರುವ ಪಾಕ್ ಪ್ರಜೆಗಳಿಗೆ ತಮ್ಮ ದೇಶಕ್ಕೆ ಹೋಗುವಂತೆ ಖಡಕ್ ಸೂಚನೆ ನೀಡಿದೆ. ಪಾಕಿಸ್ತಾನಿ ನಾಗರಿಕರಿಗೆ ವಿಸಾ ಇಲ್ಲ. ಇನ್ನು ಪಹಲ್ಗಾಮ್ ಉಗ್ರರ ದುಷ್ಕೃತ್ಯದ ನಂತರ ಪಾಕಿಸ್ತಾನದಿಂದ 108 ಭಾರತೀಯರು ವಾಪಸಾಗಿದ್ದಾರೆ. ಇತ್ತ ಭಾರತದಿಂದ 28 ಪಾಕಿಸ್ತಾನಿ ನಾಗರಿಕರು ತಮ್ಮ ರಾಷ್ಟ್ರಕ್ಕೆ ವಾಪಸ್ ಹೋಗಿದ್ದಾರೆ. ಈ ಬಗ್ಗೆ ಭಾರತದ ಹಿರಿಯ ಪ್ರೊಟೋಕಾಲ್ ಅಧಿಕಾರಿ ಅರುಣ್ ಮಹಲ್ ಮಾಹಿತಿ ನೀಡಿದ್ದಾರೆ. ಅಲ್ಲದೇ ಪಾಕಿಸ್ತಾನ ಸಹ ವಿಸಾ ರದ್ದುಗೊಳಿಸಿದ್ದಲ್ಲದೇ ತಮ್ಮ ರಾಷ್ಟ್ರದಿಂದ ಭಾರತರ ಪ್ರಜೆ ಗಳಿಗೆ ಸೂಚನೆ ರವಾನಿಸಿದೆ. ಹೀಗಾಗಿ ಭಾರತ ಮತ್ತು ಪಾಕಿಸ್ತಾನ ನಡುವೆ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

**ಖಡಕ್ ಎಚ್ಚರಿಕೆ ನೀಡಿರುವ ಮೋದಿ :** ಪ್ರಧಾನಿ ಮೋದಿ ಉಗ್ರರಿಗೆ, ಭಯೋತ್ಪಾದರಿಗೆ ನೆರವು ನೀಡುವವರಿಗೆ ತಕ್ಕ ಶಾಸ್ತಿ ಆಗಲಿದೆ ಎಂದು ಖಡಕ್ ಆಗಿ ಹೇಳಿದ್ದಾರೆ. ಗುರುವಾರ ಬಿಹಾರ್‌ನಲ್ಲಿ ಮಾತನಾಡಿದ ಮೋದಿ, ಈ ದಾಳಿ ಕೇವಲ ಪ್ರವಾಸಿಗರ ಮೇಲೆ ಆಗಿಲ್ಲ, ದೇಶದ ಶತ್ರುಗಳು ಭಾರತದ ಆತ್ಮದ ಮೇಲೆ ದಾಳಿ ಮಾಡುವ ಸಾಹಸ ಮಾಡಿವೆ. ನಾನು ತುಂಬಾ ಸ್ಪಷ್ಟವಾಗಿ ಹೇಳುತ್ತೇನೆ. ಯಾರು ಈ ದಾಳಿ ಮಾಡಿದ್ದಾರೋ ಆ ಉಗ್ರರನ್ನು. ಈ ದಾಳಿಗೆ ಸಂಚು ಮಾಡಿದವರಿಗೆ ಅವರ ಕಲ್ಪನೆಗೂ ಮೀರಿದ್ದ ಶಿಕ್ಷೆಯನ್ನ ನೀಡುತ್ತೇವೆ. ಶಿಕ್ಷೆ ಆಗೇ ಆಗುತ್ತೆ ಎಂದು ಕಡ್ಡಿ ಮುರಿದಂತೆ ಹೇಳಿದ್ದಾರೆ.



**ಭಾರತದ ಹೆಗಲಿಗೆ ಹೆಗಲು ಕೊಡುತ್ತೇವೆ!**

**ಭಾರತಕ್ಕೆ ಹಲವು ನಾಯಕರ ಬೆಂಬಲ**

ಹೌದು, ಭಾರತದ ಆಪ್ತಮಿತ್ರ ರಾಷ್ಟ್ರಗಳಾದ ಇಸ್ರೇಲ್, ಜಪಾನ್, ಫ್ರೆಂಚ್ ನಂತಹ ಹಲವು ರಾಷ್ಟ್ರಗಳ ನಾಯಕರು ಪ್ರಧಾನಿ ಮೋದಿ ಅವರಿಗೆ ಕರೆ ಮಾಡಿ ತಮ್ಮ ಬೆಂಬಲವನ್ನು ವ್ಯಕ್ತಪಡಿಸುತ್ತಿದೆ. ಇದೇ ವೇಳೆ, ಕಾಶ್ಮೀರವನ್ನು ಭಾರತ ಮತ್ತು ಪಾಕಿಸ್ತಾನದ ಆಂತರಿಕ ವಿಚಾರ ಎಂದು ಹೇಳಿದ್ದ ರಾಷ್ಟ್ರಗಳು ಸಹ ಕರೆ ಮಾಡಿ, ನಿಮ್ಮೊಂದಿಗೆ ನಾವಿದ್ದೇವೆ ಎಂದು ಹೇಳಿದ್ದಾರೆ. ಭಾರತದ ಮೇಲಿನ ಭಯೋತ್ಪದಕರ ಭೀಕರ ದಾಳಿಯನ್ನು ಕಟುವಾಗಿ ಖಂಡಿಸಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಭಾರತದ ಪ್ರಧಾನಿ ಮೋದಿ ಅವರಿಗೆ ಕರೆ ಮಾಡಿ, ಭಾರತದ ಜನರು ಮತ್ತು ಬಲಿಪಶುಗಳ ಕುಟುಂಬಗಳೊಂದಿಗೆ ಹೆಗಲಿಗೆ ಹೆಗಲು ನೀಡುವುದಾಗಿ ಹೇಳಿದ್ದಾರೆ. ಇನ್ನೊಂದೆಡೆ, ಜಪಾನ್‌ನ ಪ್ರಧಾನಿ ಶಿಗೆರುಶಿಬಾ ಅವರು ಮೋದಿ ಅವರಿಗೆ ಕರೆ ಮಾಡಿ, ಭಾರತದ ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಜೀವಹಾನಿಗೆ ತಮ್ಮ ತೀವ್ರ ಸಂತಾಪ ಸೂಚಿಸಿದರು. ಭಯೋತ್ಪಾದನೆಯನ್ನು ಸಮರ್ಥಿಸಲು ಸಾಧ್ಯವಿಲ್ಲ ಎಂದು ಹೇಳಿದ ಅವರು, ಭಯೋತ್ಪಾದನೆ ಮಾನವೀಯತೆಗೆ ಗಂಭೀರ ಬೆದರಿಕೆ ಎಂದು ಇಬ್ಬರೂ ನಾಯಕರು ಒತ್ತಿ ಹೇಳಿದರು. ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಡುವವರು ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಒಗ್ಗಟ್ಟಿನಿಂದ ನಿಲ್ಲುವುದಾಗಿ ತಿಳಿಸಿದರು.

**ಕಾಶ್ಮೀರಕ್ಕೆ ರಾಹುಲ್ ಗಾಂಧಿ ಭೇಟಿ**

26 ಪ್ರವಾಸಿಗರನ್ನು ಬಲಿ ಪಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಶುಕ್ರವಾರ ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಲಿದ್ದಾರೆ ಎಂದು ಕಾಂಗ್ರೆಸ್ ಪ್ರಕಟಿಸಿದೆ. ಭಯೋತ್ಪಾದಕ ದಾಳಿಯ ನಂತರ ರಾಹುಲ್ ಗಾಂಧಿ ತಮ್ಮ ಅಮೆರಿಕ ಭೇಟಿಯನ್ನು ಮೊಟಕುಗೊಳಿಸಿ ಭಾರತಕ್ಕೆ ವಾಪಸ್ ಆಗಿದ್ದಾರೆ ಮತ್ತು ದೆಹಲಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಹಾಗೂ ಕೇಂದ್ರ ಸರ್ಕಾರ ಕರೆದಿದ್ದ ಸರ್ವಪಕ್ಷ ಸಭೆಯಲ್ಲೂ ಭಾಗವಹಿಸಿದ್ದರು. ಕಾಶ್ಮೀರಕ್ಕೆ ತೆರಳುತ್ತಿರುವ ರಾಹುಲ್ ಗಾಂಧಿ ಅವರು ಜಿಎಂಸಿ ಅನಂತ್‌ನಾಗ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳ ಆರೋಗ್ಯ ವಿಚಾರಿಸಲಿದ್ದಾರೆ ಎಂದು ಕಾಂಗ್ರೆಸ್ ತಿಳಿಸಿದೆ. ಇನ್ನು ಸರ್ವಪಕ್ಷ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ರಾಹುಲ್ ಗಾಂಧಿ, ಭಯೋತ್ಪಾದನೆ ವಿರುದ್ಧ ಕೇಂದ್ರ ಸರ್ಕಾರ ಯಾವುದೇ ಕ್ರಮ ಕೈಗೊಂಡರೂ ಅದಕ್ಕೆ ನಮ್ಮ ಬೆಂಬಲ ಇರುತ್ತದೆ ಎಂದು ಹೇಳಿದ್ದಾರೆ. ಶೆಹಬಾಜ್ ಷರೀಫ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಂತರ ಈ ಪ್ರಕಟಣೆಗಳನ್ನು ಮಾಡಲಾಯಿತು.

# ಬಿಎಸ್‌ಎಫ್ ಯೋಧನನ್ನು ವಶಕ್ಕೆ ಪಡೆದ ಪಾಕಿಸ್ತಾನ; ಧ್ವಜ ಸಭೆ ಆರಂಭ


■ ಬಂಧಿತ ಯೋಧ 182ನೇ ಬಿಎಸ್‌ಎಫ್ ಬೆಟಾಲಿಯನ್‌ನ ಕಾನ್‌ಸ್ಟೇಬಲ್ ಪಿ.ಕೆ ಸಿಂಗ್ ■ ಭಾರತೀಯ ಸೇನೆ – ಪಾಕಿಸ್ತಾನ ಉನ್ನತ ಅಧಿಕಾರಿಗಳಿಂದ ತುರ್ತು ಸಭೆ

• ಉದಯವಾಹಿನಿ, ಬೆಂಗಳೂರು

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ-ಪಾಕಿಸ್ತಾನ ಸಂಬಂಧಗಳು ದಿನದಿಂದ ದಿನಕ್ಕೆ ಹದಗೆಡುತ್ತಿವೆ. ಈ ಮಧ್ಯೆ, ಪಾಕಿಸ್ತಾನ ರೇಂಜರ್ಸ್ ಭಾರತೀಯ ಸೈನಿಕರೊಬ್ಬರನ್ನು ಬಂಧಿಸಿದೆ ಎಂದು ವರದಿಯಾಗಿದೆ. ಬಂಧಿತ ಯೋಧ 182ನೇ ಬಿಎಸ್‌ಎಫ್ ಬೆಟಾಲಿಯನ್‌ನ ಕಾನ್‌ಸ್ಟೇಬಲ್ ಪಿ.ಕೆ ಸಿಂಗ್ ಎಂದು ತಿಳಿದು ಬಂದಿದೆ. ಪಂಜಾಬ್‌ನ ಫಿರೋಜ್‌ಪುರ ಸೆಕ್ಟರ್‌ನಲ್ಲಿ ಬಿಎಸ್‌ಎಫ್ ಜವಾನ್ ಪಿ.ಕೆ ಸಿಂಗ್ ಆಕಸ್ಮಿಕವಾಗಿ ಅಂತಾರಾಷ್ಟ್ರೀಯ ಗಡಿ (ಐಬಿ) ದಾಟಿದ್ದಾರೆ. ಹೀಗಾಗಿ ಬಿಎಸ್‌ಎಫ್ ಸೈನಿಕನನ್ನು ಪಾಕಿಸ್ತಾನ ರೇಂಜರ್‌ಗಳು ವಶಕ್ಕೆ ಪಡೆದಿದ್ದಾರೆ ಎಂದು ಸೇನಾ ಮೂಲಗಳು ಅಂತಾರಾಷ್ಟ್ರೀಯ ಮಾಧ್ಯಮಗಳಿಗೆ ತಿಳಿಸಿವೆ.

ಭಾರತ-ಪಾಕ್ ಗಡಿಯ ಸಮೀಪವಿರುವ ಕೃಷಿ ಭೂಮಿಯ ಬಳಿ ಏ.23 ಮಧ್ಯಾಹ್ನ ಕರ್ತವ್ಯದಲ್ಲಿದ್ದಾಗ ಈ ಘಟನೆ ಸಂಭವಿಸಿದೆ. ನಿಯಮಿತ ಸಮಯದಲ್ಲಿ, ಯೋಧ ಅಜಾಗರೂಕತೆಯಿಂದ ಭಾರತೀಯ ಗಡಿ ಬೇಲಿಯನ್ನು ದಾಟಿ ಪಾಕಿಸ್ತಾನ ಭೂ ಪ್ರದೇಶವನ್ನು ಪ್ರವೇಶಿಸಿದರು. ಆಗ ಅಲ್ಲಿ ಅವರನ್ನು ಪಾಕಿಸ್ತಾನಿ ರೇಂಜರ್‌ಗಳು ಬಂಧಿಸಿದರು. ಬಂಧನದ ನಂತರ ಭಾರತೀಯ ಸೇನೆ ಮತ್ತು ಪಾಕಿಸ್ತಾನ ರೇಂಜರ್ಸ್‌ನ ಉನ್ನತ ಅಧಿಕಾರಿಗಳು ಈ ವಿಷಯವನ್ನು ಪರಿಹರಿಸಲು





ಮತ್ತು ಸೈನಿಕನ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳಲು ಧ್ವಜ ಸಭೆಯನ್ನು ಪ್ರಾರಂಭಿಸಿದರು ಎಂದು ವರದಿಯಾಗಿದೆ.

**ಪತ್ನಿ ಕಣ್ಣೆದುರೇ ಉರುಳಿದ ಯೋಧ:** ಒಂದು ವಾರದ ಹಿಂದಷ್ಟೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದ ನೌಕಾಪಡೆಯ ಲೆಫ್ಟಿನೆಂಟ್ ವಿನಯ್ ನರ್ವಾಲ್ ಪಹಲ್ಗಾಮ್ ಉಗ್ರರ ದಾಳಿಯಲ್ಲಿ ಮೃತಪಟ್ಟಿದ್ದು, ಪತ್ನಿಯ ರೋದನ ಹೇಳತೀರದಾಗಿದೆ. ಪತಿಯ ಪ್ರಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸುವ ವೇಳೆ ಪತ್ನಿ ಹಿಮಾನ್ಷಿ ಬಿಕ್ಕಿಬಿಕ್ಕಿ ಅಳುತ್ತಿದ್ದ ದೃಶ್ಯ ಎಂಥವರ ಹೃದಯವನ್ನೂ ಕರಗಿಸುತ್ತಿತ್ತು. ಹರಿಯಾಣದ ಕರ್ನಾಲ್ ಜಿಲ್ಲೆಯ 26 ವರ್ಷದ ಲೆಫ್ಟಿನೆಂಟ್ ವಿನಯ್ ನರ್ವಾಲ್ ಏಪ್ರಿಲ್ 19ರಂದು ವಿವಾಹವಾಗಿದ್ದರು. ಪತ್ನಿ ಹಿಮಾನ್ಷಿ ಜತೆ ಕಾಶ್ಮೀರಕ್ಕೆ ಹನಿಮೂನ್ ಹೋಗಿದ್ದರು. ಶಿಕ್ಷಕಿಯಾಗಿರುವ ಹಿಮಾನ್ಷಿ ಪಾಲಿಗೆ ಹಾನಿಮೂನ್ ಘೋರ ದುರಂತವಾಗಿ ಮಾರ್ಪಟ್ಟಿತು.

ನರ್ವಾಲ್ ದಂಪತಿ ಹನಿಮೂನ್‌ಗೆಂದು ಸ್ವಿಡ್ಜರ್ಲೆಂಡ್‌ಗೆ ತೆರಳಬೇಕಿತ್ತು. ನೌಕಾಪಡೆಯಿಂದ ಅನುಮತಿ ಸಿಗದ ಹಿನ್ನೆಲೆಯಲ್ಲಿ ಕಾಶ್ಮೀರಕ್ಕೆ ತೆರಳಿದ್ದರು ಎನ್ನಲಾಗಿದೆ. ಹನಿಮೂನ್ ಪ್ರವಾಸ ಮುಗಿಸಿಕೊಂಡು ಬಂದ ಮೇಲೆ ಮೇ 1ರಂದು ವಿನಯ್ ನರ್ವಾಲ್ ಅವರ 27ನೇ ಹುಟ್ಟುಹಬ್ಬವನ್ನು ಅದ್ಧೂರಿಯಾಗಿ ಆಚರಿಸಲು ಕುಟುಂಬ ಸಿದ್ಧತೆ ನಡೆಸಿತ್ತು. ಆದರೆ, ವಿಧಿಬರಹ ಈಗ ಶೋಕ ಗೀತೆಯನ್ನು ಬರೆದಿದೆ. ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ನರಮೇಧದ ನಂತರ ಪಾಕಿಸ್ತಾನ ಜತೆಗಿನ ರಾಜತಾಂತ್ರಿಕ ಸಂಬಂಧವನ್ನು ಭಾರತ ಕಡಿದುಕೊಂಡಿದೆ.

ರಾಜತಾಂತ್ರಿಕ ಸಿಬ್ಬಂದಿ ಮರಳಿ ಪಾಕ್‌ಗೆ ಹೋಗಲು ಸೂಚನೆ, ಪಾಕಿಸ್ತಾನ ಪ್ರಜೆಗಳಿಗೆ ದೇಶ ಬಿಟ್ಟು ತೆರಳಲು ಸೂಚನೆ, ವೀಸಾ ರದ್ದು, ಸಿಂಧು ಜಲ ಒಪ್ಪಂದ ಅಮಾನತು ಸೇರಿದಂತೆ ಪ್ರಮುಖ ರಾಜತಾಂತ್ರಿಕ ಕ್ರಮ ಕೈಗೊಳ್ಳಲಾಗಿದೆ.

**ಪಾಕಿಸ್ತಾನ ಯಾವ ನಿಲುವು ತಾಳುತ್ತದೆ**

ಸೈನಿಕರು ಅಥವಾ ನಾಗರಿಕರು ಆಕಸ್ಮಿಕವಾಗಿ ಗಡಿದಾಟುತ್ತಾರೆ. ಆ ಬಳಿಕ ಇದನ್ನು ಸಾಮಾನ್ಯವಾಗಿ ಮಿಲಿಟರಿ ಶಿಷ್ಟಾಚಾರಗಳ ಮೂಲಕ ಪರಿಹರಿಸಲಾಗುತ್ತದೆ. ಉನ್ನತ ಅಧಿಕಾರಿಗಳ ಸಭೆ ನಡೆಸಿ ನಂತರ ಬಂಧಿತರನ್ನು ಸ್ವದೇಶಕ್ಕೆ ಕಳುಹಿಸಲಾಗುತ್ತದೆ. ಆದರೆ ಇದೀಗ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯು ಭಾರತ ಮತ್ತು ಪಾಕಿಸ್ತಾನದ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ಬಿಗಡಾಯಿಸಿದೆ. ಈ ಸಂದರ್ಭದಲ್ಲಿ ಪಾಕಿಸ್ತಾನ ಯಾವ ನಿಲುವು ತಾಳುತ್ತದೆ ಎಂಬುದನ್ನು ಕಾದುನೋಡಬೇಕಿದೆ.

**ಈ ದಿನದ ದರ**

| ಪೆಟ್ರೋಲ್ | ಡೀಸೆಲ್ | ಬಂಗಾರ | | ಬೆಳ್ಳಿ |
|---|---|---|---|---|
| 103.50 ₹/L | 90.03 ₹/L | ₹9,824/Gram24ct | ₹9,005/Gram22ct | ₹100.90/Gram |

# ನಾವು ಒಂದಾಗಿದ್ದೇವೆ ಎಂಬ ಸಂದೇಶ ರವಾನಿಸಲೇಬೇಕು

• ಉದಯವಾಹಿನಿ, ಬೆಂಗಳೂರು

ಜಮ್ಮುಕಾಶ್ಮೀರದ ಪಹಲ್ಯಾಮ್‌ನಲ್ಲಿ ನಡೆದ ಭಯೋತ್ಪಾದಕರ ಪೈಶಾಚಿಕ ಕೃತ್ಯವನ್ನು ಖಂಡಿಸಿರುವ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದನಾಥ ಸ್ವಾಮಿ, ನಾವು ಒಂದಾಗಿದ್ದೇವೆ ಎಂಬ ಸಂದೇಶ ರವಾನಿಸಲೇಬೇಕು ಎಂದು ಪ್ರತಿಪಾದಿಸಿದ್ದಾರೆ. ಇದು ಸಾರ್ವಭೌಮತೆ ಮೇಲೆ



ನಡೆದಿರುವ ದಾಳಿ. ಉಗ್ರರನ್ನು ಮಟ್ಟ ಹಾಕಲು ಸರ್ಕಾರ ಏನೆಲ್ಲ ಸಾಧ್ಯವೋ ಅದನ್ನು ಮಾಡಬೇಕು ಎಂದಿದ್ದಾರೆ. 26 ಮಂದಿ ಸಾವು ಆಘಾತ ನೀಡಿದೆ.

ಪ್ರೀತಿಪಾತ್ರರ ಕಳೆದುಕೊಂಡ ಕುಟುಂಬದವರಿಗೆ ಸಂತಾಪ ಸೂಚಿಸಿ, ಗಾಯಗೊಂಡವರು ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.ಒಂದು ಕಾಲದಲ್ಲಿ ಜಮ್ಮುಕಾಶ್ಮೀರ ಅಶಾಂತಿಯ ಬೀಡಾಗಿತ್ತು. ಮೋದಿ ನಿರ್ಧಾರಗಳಿಂದಾಗಿ ಕಳೆದ ಹಲವು ವರ್ಷಗಳಿಂದ ಶಾಂತಿ ನೆಲೆಸಿದೆ. ಇದನ್ನು ಸಹಿಸದ ಉಗ್ರರು ಮನುಷ್ಯತ್ವ ಮರೆತು ಅತ್ಯಂತ ಬರ್ಬರವಾಗಿ ಗುಂಡಿನ ದಾಳಿ ನಡೆಸಿರುವುದನ್ನು ಸಹಿಸಲು ಸಾಧ್ಯವಿಲ್ಲ. ಉಗ್ರರನ್ನು ಮಟ್ಟ ಹಾಕಲು ಸರ್ಕಾರ ಏನೆಲ್ಲಾ ಸಾಧ್ಯವೋ ಅದನ್ನೆಲ್ಲ ಮಾಡಬೇಕು. ಅದಕ್ಕೆ ಸಹಕಾರ ಕೊಡಬೇಕು ಎಂದು ಶ್ರೀಗಳು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಓಂ ಪ್ರಕಾಶ್ ಕೊಲೆ ಪ್ರಕರಣ ವಿವಿಧ ದೃಷ್ಟಿಕೋನಗಳಲ್ಲಿ ಸಿಸಿಬಿ ತನಿಖೆ

• ಉದಯವಾಹಿನಿ, ಬೆಂಗಳೂರು

ನಿವೃತ್ತ ಡಿಜಿಪಿ ಓಂ ಪ್ರಕಾಶ್ ರವರ ಕೊಲೆ ಪ್ರಕರಣದ ತನಿಖೆಯನ್ನು ಸಿಸಿಬಿ ಪೊಲೀಸರು ಆರಂಭಿಸಿದ್ದಾರೆ. ಎಚ್‌ಎಸ್‌ಆರ್ ಲೇಔಟ್ ಠಾಣೆ ಪೊಲೀಸರುಪ್ರಕರಣದ ದಾಖಲೆಗಳನ್ನು ನಿನ್ನೆ ಸಿಸಿಬಿಗೆ ಹಸ್ತಾಂತರಿಸಿದ್ದು, ಸಿಸಿಬಿಯ ಮಹಿಳಾ ಭದ್ರತಾ ವಿಭಾಗದಎಸಿಪಿ ಧರ್ಮೇಂದ್ರ ಅವರ ತಂಡ ವಿವಿಧ ದೃಷ್ಟಿಕೋನಗಳಲ್ಲಿ ತನಿಖೆ ಕೈಗೊಂಡಿದೆ. ಓಂ ಪ್ರಕಾಶ್ ಅವರ ಮಗಳು ಕೃತಿ ಅವರನ್ನು ಸಿಸಿಬಿ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ಮಾಡಲಿದ್ದಾರೆ.

ಓಂ ಪ್ರಕಾಶ್ ರವರ ಪತ್ನಿ ಪಲ್ಲವಿ ಅವರ ಬಂಧನವಾಗಿದ್ದು, ನ್ಯಾಯಾಂಗ ಬಂಧನದಲ್ಲಿದ್ದಾರೆ. ಹಾಡ ಹಗಲೇ ಓಂ ಪ್ರಕಾಶ್ ರವರನ್ನು ಮನೆಯಲ್ಲೇ ಚಾಕುವಿನಿಂದ ಇರಿದು ಭೀಕರವಾಗಿ ಕೊಲೆ ಮಾಡಲಾಗಿದ್ದು ಈ ಸಂಬಂಧ ಅವರ ಪುತ್ರ ಎಚ್‌ಎಸ್ ಆರ್ ಲೇಔಟ್ ಪೊಲೀಸ್ ಠಾಣೆಗೆ ದೂರು ನೀಡಿದ್ದು,ಪ್ರಕರಣ ದಾಖಲಾಗಿ ತನಿಖೆ ಮುಂದುವರೆಸಿದ ಪೊಲೀಸರು ಪಲ್ಲವಿಯನ್ನು ಬಂಧಿಸಿ ಮಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿ ಮಾಹಿತಿ ಪಡೆದಿದ್ದಾರೆ.

# ಶಿವಕುಮಾರ ಸ್ವಾಮೀಜಿ ವಿಶ್ವರತ್ನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಿದ್ಧಗಂಗಾ ಮಠದ ಶಿವಕುಮಾರ ಸ್ವಾಮೀಜಿ ಅವರಿಗೆ ಭಾರತ ರತ್ನ ಕೊಡಬೇಕೆಂಬ ಆಗ್ರಹ ಎಲ್ಲೆಡೆ ಇದೆ. ಅವರಿಗೆ ಭಾರತರತ್ನ ಕೊಟ್ಟಿದ್ದರೆ ಆ ಪ್ರಶಸ್ತಿ ಮೌಲ್ಯ ಹೆಚ್ಚಾಗುತ್ತಿತ್ತು. ಆದರೆ ಅವರು ಕರ್ನಾಟಕ ರತ್ನ, ಭಾರತರತ್ನವಷ್ಟೇ ಅಲ್ಲ, ವಿಶ್ವರತ್ನ ಎಂದು ನಿಡುಮಾಮಿಡಿ ಮಠದ ವೀರಭದ್ರ ಚನ್ನಮಲ್ಲ ದೇಶಿಕೇಂದ್ರ ಸ್ವಾಮೀಜಿ ಅಭಿಪ್ರಾಯಪಟ್ಟರು. ಶಿವಕುಮಾರ ಸ್ವಾಮೀಜಿಯವರ ಜಯಂತ್ಯೋತ್ಸವ ಹಾಗೂ ನ್ಯಾಯಮೂರ್ತಿ ನಾಡೋಜ ಶಿವರಾಜ ಪಾಟೀಲರ ಅಭಿನಂದನಾ ಸಮಿತಿ ವತಿಯಿಂದ ಆಯೋಜಿಸಿದ್ದ ಸಮಾರಂಭ ದಲ್ಲಿ ಅವರು ಮಾತನಾಡಿದರು.

ಶಿವಕುಮಾರ ಸ್ವಾಮೀಜಿಯವರು ಅನ್ನ, ಅಕ್ಷರ, ಆಶ್ರಯ, ಜ್ಞಾನದಾನ ದಾಸೋಹದಿಂದ ಅವರು ಚತುರ್ವಿಧ ದಾಸೋಹಿ ಎಂದು ಬಣ್ಣಿಸಿದರು. ಮಠಮಾನ್ಯ, ನ್ಯಾಯಾಂಗ ಕ್ಷೇತ್ರವೂ ಸೇರಿದಂತೆ ರಾಜಕೀಯ, ಆಡಳಿತ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಅನಾಹುತಕಾರಿ ಅಪರಾಧಗಳಾಗುತ್ತಿವೆ. ಇಂತಹ ಕುಕೃತ್ಯ ಮಾಡುವವರಿಗೆ ಶೀಘ್ರ ಶಿಕ್ಷೆಯಾಗುವ ನ್ಯಾಯ ವ್ಯವಸ್ಥೆ ಜಾರಿಯಾಗಬೇಕಿದೆ. ಇದಕ್ಕೆ ಶಿವರಾಜ ಪಾಟೀಲರಂತಹ ನ್ಯಾಯಾಂಗ ಕ್ಷೇತ್ರದ ಅಗ್ರಗಣ್ಯರು ಸಲಹೆ ನೀಡಬೇಕು ಎಂದು ಕಾನೂನು, ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ಹೇಳಿದರು.

# ಸಪ್ತ ಪಾತಕಗಳ ವಿರೋಧ ಪ್ರತಿಜ್ಞಾವಿಧಿ

• ಉದಯವಾಹಿನಿ, ಹೊಸಕೋಟೆ

ಮಹಾತ್ಮ ಗಾಂಧೀಜಿ ಬೆಳಗಾಂ ಕಾಂಗ್ರೆಸ್ ಅಧಿವೇಶನದಲ್ಲಿ ಅಧ್ಯಕ್ಷತೆಯನ್ನು ವಹಿಸಿ 100 ವರ್ಷ ಪೂರೈಸಿದ ಹಿನ್ನೆಲೆ ಉನ್ನತ ಶಿಕ್ಷಣ ಇಲಾಖೆ ಹಮ್ಮಿಕೊಂಡಿರುವ 'ಗಾಂಧಿ ವಿಚಾರ ಧಾರೆ' ಕಾರ್ಯಕ್ರಮ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಿತು. ಗಾಂಧೀಜಿ ಅವರು ಹೇಳಿದ್ದ ಸಪ್ತ ಪಾತಕಗಳ ವಿರುದ್ಧವಾಗಿ ವಿದ್ಯಾರ್ಥಿಗಳು ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ಸಮಾಜದಲ್ಲಿ ಸಪ್ತಪಾತಕದಿಂದ ಮುಕ್ತವಾಗಿ ಜೀವಿಸುವುದು ಅತಿ ಮುಖ್ಯ. ದುಡಿಮೆಯಿಲ್ಲದೆ ಗಳಿಸಿದ ಸಂಪತ್ತು, ಆತ್ಮಸಾಕ್ಷಿ ಇಲ್ಲದ ಭೋಗ, ಚಾರಿತ್ರ ಇಲ್ಲದ ಜ್ಞಾನ, ನೀತಿಯಿಲ್ಲದ ವ್ಯಾಪಾರ, ಮಾನವೀಯತೆ ಇಲ್ಲದ ವಿಜ್ಞಾನ, ತ್ಯಾಗವಿಲ್ಲದ ಧರ್ಮ, ನೀತಿಯಿಲ್ಲದ ರಾಜಕೀಯ. ಈ ಏಳು ಪಾತಕ ಮಾಡದಂತೆ ಪ್ರತಿಜ್ಞೆ, ಮಾಡುವವರನ್ನು ತ್ಯಜಿಸುವಂತೆ ಮಾಡುವ ಜರೂರು ಇದೆ ಎಂದು ಕಾಲೇಜಿನ ಪ್ರಾಂಶುಪಾಲ ಪ್ರೊ.ರಾಮಲಿಂಗಪ್ಪ ಟಿ.ಬೇಗೂರು ಹೇಳಿದರು.

# ವೃತ್ತಿ ಆಧಾರಿತ ಜಾತಿಗಳಲ್ಲೇ ಭೇದ: ಮಹಾಸಭಾ ಆರೋಪ

• ಉದಯವಾಹಿನಿ, ಬೆಂಗಳೂರು

ಲಿಂಗಾಯತ ಪಂಥಕ್ಕೆ ಸೇರಿದ ಅತ್ಯಂತ ಹಿಂದುಳಿದ, ವೃತ್ತಿ ಆಧಾರಿತ ಜಾತಿಗಳನ್ನು ಪ್ರವರ್ಗ 3 'ಬಿ'ಗೆ ಸೇರಿಸುವ ಮೂಲಕ ಹಿಂದುಳಿದ ವರ್ಗಗಳ ಆಯೋಗ ಘೋರ ಅಪರಾಧ ಎಸಗಿದೆ ಎಂದು ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾದ ಅಧ್ಯಕ್ಷ ಶಂಕರ ಬಿದರಿ ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ನಾಲ್ಕು ವರ್ಣಗಳಿಗೆ ಸೇರಿದ 99ಕ್ಕೂ ಹೆಚ್ಚು ವೃತ್ತಿಗಳ ಜನರು 12ನೇ ಶತಮಾನದಲ್ಲಿ ಬಸವಣ್ಣನವರು ಪ್ರತಿಪಾದಿಸಿದ ಲಿಂಗಾಯತ ಪಂಥಕ್ಕೆ ಸೇರ್ಪಡೆ ಯಾದರು.

ಅದೇ ವೃತ್ತಿಯ ಕೆಲವರು ಸನಾತನ ಹಿಂದೂ ಧರ್ಮದ ಭಾಗವಾಗಿಯೇ ಮುಂದುವರಿದಿದ್ದಾರೆ. ಹಿಂದೂ ಧರ್ಮ, ಲಿಂಗಾಯತ ಪಂಥಗಳಲ್ಲಿ ವಿಭಜಿತ ವಾದರೂ ಎರಡೂ ಕಡೆ ಗುರುತಿಸಿಕೊಂಡಿರುವ ಅವರ ವೃತ್ತಿ ಇಂದಿಗೂ ಒಂದೇ ತೆರನಾಗಿವೆ. ಆದರೆ, ಹಿಂದುಳಿದ ಜಾತಿಗಳನ್ನು ವಿಂಗಡಿಸುವಾಗ ಆಯೋಗ ಭೇದ ಮಾಡಿದೆ. ಇಂತಹ ತಾರತಮ್ಯ ಸರಿಯಲ್ಲ ಎಂದು ದೂರಿದರು.

# ಸುರಕ್ಷಿತವಾಗಿ ತವರಿಗೆ ಮರಳಿದ 177 ಕನ್ನಡಿಗರು

• ಉದಯವಾಹಿನಿ, ಬೆಂಗಳೂರು

ಜಮು–ಕಾಶೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಲ್ಲಿ ನಡೆದ ದೃಶ್ಯಗಳು ಅತ್ಯಂತ ಘೋರ, ಭಯಾನಕ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ವಿಶ್ಲೇಷಿಸಿದ್ದಾರೆ. ಜಮು–ಕಾಶೀರದಿಂದ 177 ಕನ್ನಡಿಗರನ್ನು ಸುರಕ್ಷಿತವಾಗಿ ಬೆಂಗಳೂರಿಗೆ ಕರೆತಂದ ಬಳಿಕ ವಿಮಾನನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರಿಹಾರ ಕಾರ್ಯಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಹಕಾರ, ಸೂಚನೆಗಳು ಶ್ಲಾಘನೀಯ. ಪೊಲೀಸ್ ಅಧಿಕಾರಿ ಚೇತನ್ ಅವರ ಸಹಕಾರವೂ ಸರಣೀಯ ಎಂದರು. ಶೇ.99ರಷ್ಟು ನಮ ಕಾರ್ಯಾಚರಣೆ ಯಶಸ್ವಿಯಾಗಿದೆ. ಜಮ್ಮು–ಕಾಶೀರದಲ್ಲಿನ ಕನ್ನಡಿಗರ ಸಹಕಾರವೂ ಅವಿಸರಣೀಯ. 177 ಕನ್ನಡಿಗರನ್ನು ಶ್ರೀನಗರದಿಂದ ಬೆಂಗಳೂರಿಗೆ ಕರೆತರಲಾಗಿದೆ. ಇನ್ನೂ ಕೆಲವರು ಜಮ್ಮು ಮತ್ತು ಕಟ್ರದಲ್ಲಿದ್ದಾರೆ. ಅವರಿಗೆ ಈಗಾಗಲೇ ಮಾರ್ಗದರ್ಶನ ನೀಡಲಾಗಿದ್ದು, ಸ್ಥಳೀಯ ಅಧಿಕಾರಿಗಳ ಜೊತೆ ಚರ್ಚಿಸಿ ಸುರಕ್ಷತೆಯನ್ನು ಗಮನದಲ್ಲಿರಿಸಿಕೊಂಡು ಪ್ರವಾಸದ



ಉದಯವಾಹಿನಿ ಚಿತ್ರ

ಯೋಜನೆ ರೂಪಿಸಿಕೊಳ್ಳುವಂತೆ ಸಲಹೆ ನೀಡಲಾಗಿದೆ ಎಂದು ಹೇಳಿದರು. ಸಂಕಷ್ಟಕ್ಕೆ ಸಿಲುಕಿದವರನ್ನು ಸುರಕ್ಷಿತವಾಗಿ ಕರೆತರಲು ಮುಖ್ಯಮಂತ್ರಿಯವರ ಸೂಚನೆಯಂತೆ ನಾನು ಯಶಸ್ವಿಯಾಗಿದ್ದೇನೆ. ಪಹಲ್ಗಾಮ್‌ನಲ್ಲಿ ದಾಳಿಯ ಬಳಿಕ ಅಲ್ಲಿನ ವಾತಾವರಣವನ್ನು ಮಾತಿನಲ್ಲಿ ವರ್ಣಿಸಲು ಸಾಧ್ಯವಿಲ್ಲ ಎಂದು ದುಗುಡ ವ್ಯಕ್ತಪಡಿಸಿದರು.

ಇದು ಅತ್ಯಂತ ಭಯಾನಕವಾದ ಅನುಭವ. ಹೆಣ್ಣು ಮಕ್ಕಳ ಕಣ್ಣೆದುರೇ ಅವರ ಗಂಡನನ್ನು ಕೊಲ್ಲಲಾಗಿದೆ. ಆ ವೇಳೆ ಹೆಣ್ಣುಮಕ್ಕಳು ನಮನ್ನೂ ಕೊಲ್ಲಿ ಎಂದು ಪ್ರತಿರೋಧಿಸಿರುವ ಧೈರ್ಯ ಪ್ರದರ್ಶಿಸಿರುವುದು ವರ್ಣಿಸಲು ಸಾಧ್ಯವಿಲ್ಲ. ನಮ ದೇಶದ ಹೆಣ್ಣು ಮಕ್ಕಳು ಮಾತ್ರ ಈ ರೀತಿ ಧೈರ್ಯ ಪ್ರದರ್ಶಿಸಲು ಸಾಧ್ಯ. ಇದನ್ನು ನಾನು ಕಣ್ಣಿನಲ್ಲಿ ನೇರವಾಗಿ ನೋಡಿಲ್ಲ. ಆದರೆ ಕೇಳಿ ತಿಳಿದುಕೊಂಡ ಪ್ರಕಾರ ಅತೀ ಘೋರವಾಗಿದೆ ಎಂದರು.

ಭದ್ರತಾ ಲೋಪದ ಬಗ್ಗೆ ಈ ಸಂದರ್ಭದಲ್ಲಿ ನಾನು ಮಾತ ನಾಡುವುದಿಲ್ಲ. ಸದ್ಯಕ್ಕೆ ನಾನು ರಾಜಕೀಯ ಬೆರೆಸಲು ಬಯಸುವುದಿಲ್ಲ. ಮುಖ್ಯಮಂತ್ರಿಯವರ ಸೂಚನೆಯಂತೆ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರುವಲ್ಲಿ ಮಗ್ನನಾಗಿದ್ದೇನೆ. ನಮ ಜೊತೆ 177 ಮಂದಿ ಬಂದಿದ್ದಾರೆ. ಉಳಿದ 13 ಮಂದಿ ಸಂಜೆಯ ವಿಮಾನದಲ್ಲಿ ಬರುತ್ತಾರೆ.


ಬಾಕಿ ಇರುವವರು ನಾಳೆ ಬೆಳಿಗ್ಗೆ ವಿಮಾನದಲ್ಲಿ ಬರುತ್ತಾರೆ. ಎಲ್ಲರಿಗೂ ವಿಮಾನಗಳು ಬುಕ್ ಆಗಿವೆ ಎಂದು ತಿಳಿಸಿದರು. ಪಾಕಿಸ್ತಾನಕ್ಕೆ ಭಾರತ ದೇಶ ತಕ್ಕ ಪ್ರತಿಕ್ರಿಯೆ ನೀಡಲಿದೆ. ಅದನ್ನು ಇಡೀ ಜಗತ್ತೇ ನೋಡುತ್ತದೆ. ನಮ ಸೇನೆಯ ಸಾಮರ್ಥ್ಯ ಯಾವ ರೀತಿ ಉತ್ತರ ನೀಡಬೇಕು ಎಂಬುವಷ್ಟು ಬಲವಾಗಿದೆ ಎಂದರು.

# ದೊಡ್ಡಬಳ್ಳಾಪುರದ 95 ಮಂದಿ ಸೇಫ್

• ಉದಯವಾಹಿನಿ, ದೊಡ್ಡಬಳ್ಳಾಪುರ

ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದ ದೊಡ್ಡಬಳ್ಳಾಪುರ ತಾಲ್ಲೂಕಿನ 95 ಪ್ರವಾಸಿಗರು ಯಾವುದೇ ಅಪಾಯಕ್ಕೆ ಸಿಲುಕದೆ ಸುರಕ್ಷಿತವಾಗಿದ್ದಾರೆ. ಜಮ್ಮುಕಾಶ್ಮೀರದಲ್ಲಿ ಪಹಲ್ಯಾಮನ ಬೈಸರನ್ ವ್ಯಾಲಿಯ ಹುಲ್ಲುಗಾವಲಿನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕರ ಗುಂಡಿನ ದಾಳಿ ನಡೆದಿತ್ತು. ಆದಾಗ್ಯೂ ಕಾಶ್ಮೀರದ ಪ್ರವಾಸದಲ್ಲಿದ್ದ ತಾಲ್ಲೂಕಿನ 95 ಮಂದಿಯೂ ಸುರಕ್ಷಿತರಾಗಿದ್ದಾರೆ ಎಂದು ಕುಟುಂಬಸ್ಥರು ನಿಟ್ಟುಸಿರು ಬಿಟ್ಟಿದ್ದಾರೆ.

ತಾಲ್ಲೂಕಿನ ಹಾಡೋನಹಳ್ಳಿ, ಲಕ್ಷ್ಮೀದೇವಿಪುರ, ತಿರುಮಗೊಂಡನಹಳ್ಳಿ, ತಿಮ್ಮೋಜನಹಳ್ಳಿ, ತೂಬಗೆರೆ, ಹೀರೆ ಮುದ್ದೇನಹಳ್ಳಿ, ನೆಲಗುದಿಗೆ ಗ್ರಾಮಗಳಿಂದ ಸುಮಾರು 95 ಮಂದಿ 9 ದಿನಗಳ ಜಮ್ಮುಕಾಶ್ಮೀರ ಪ್ರವಾಸ ಕೈಗೊಂಡಿದ್ದಾರೆ. ಒಂದು ವೇಳೆ ಶ್ರೀನಗರಕ್ಕೆ ತೆರಳುವ ಮಾರ್ಗದಲ್ಲಿನ ಬೆಟ್ಟ ಕುಸಿಯದೇ ಇದ್ದಲ್ಲಿ, ನಿದಿಯಂತೆ



ಉದಯವಾಹಿನಿ ಚಿತ್ರ

ಹೋಟೆಲ್ ತಲುಪಿದ್ದರೆ ದೊಡ್ಡಬಳ್ಳಾಪುರದಿಂದ ಪ್ರವಾಸಕ್ಕೆ ತೆರಳಿರುವ ಪ್ರವಾಸಿಗರು ಕೂಡ ಉಗ್ರರ ದಾಳಿಗೆ ಸಿಲುಕುವ ಅಪಾಯ ಇತ್ತು ಎಂದು ತಿಳಿದು ಬಂದಿದೆ. ಶ್ರೀನಗರದಲ್ಲಿ ಉಗ್ರರ ದಾಳಿ ಬೆನ್ನಲ್ಲೇ ಕಾಶ್ಮೀರ ಪ್ರವಾಸಕ್ಕೆ ತೆರಳಿರುವ ದೊಡ್ಡಬಳ್ಳಾಪುರ ತಾಲ್ಲೂಕಿನ ಪ್ರವಾಸಿಗರ ಕುರಿತು ಗ್ರಾಮಸ್ಥರು, ಸಂಬಂಧಿಕರು ಆತಂಕಕ್ಕೆ ಒಳಗಾಗಿದ್ದರು, ಆದರೆ ದೇವಾಲಯಗಳ ದರ್ಶನ ಬಳಿಕ ಮೊಬೈಲ್ ಆನ್ ಮಾಡಿದ ಪ್ರವಾಸಿಗರೆಲ್ಲರೂ ಸಂಪರ್ಕಕ್ಕೆ ದೊರಕಿದ ಕಾರಣ ನಿಟ್ಟಿಸಿರು ಬಿಟ್ಟಿದ್ದಾರೆ.

# ಉಗ್ರರ ದಾಳಿಗೆ ಬಲಿಯಾದ ಭರತ್ ಭೂಷಣ್ ಪತ್ನಿ ಬಿಚ್ಚಿಟ್ಟ ಭಯಾನಕ ಅನುಭವ

## ಉಗ್ರರನ್ನು ಮಟ್ಟ ಹಾಕುವ ಇನ್ನೂ ಹೆಚ್ಚಿನ ಕ್ರಮಗಳಿಗೆ ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲ: ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ನೀವು ಇಲ್ಲಿ ಇಷ್ಟು ಖುಷಿಯಿಂದ ಹೇಗೆ ಇರಲು ಸಾಧ್ಯ ಅಂತ ಪ್ರಶ್ನಿಸಿ ಉಗ್ರರು ಜನರ ಮೇಲೆ ಗುಂಡು ಹಾರಿಸುತ್ತಿದ್ದರು ಆ ದೃಶ್ಯ ಭಯಾನಕ ಎಂದು ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಗೆ ಬಲಿಯಾದ ಭರತ್ ಭೂಷಣ್ ಪತ್ನಿ ಡಾ.ಸುಜಾತ ಕಣ್ಣೀರು ಹಾಕಿದರು. ಗುರುವಾರ ಬೆಳಗ್ಗೆ ಭರತ್ ಭೂಷಣ್ ಪಾರ್ಥಿವ ಶರೀರ ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಆಗಮಿಸಿತು. ಅಲ್ಲಿಂದ ಆಂಬ್ಯುಲೆನ್ಸ್‌ನಲ್ಲಿ ಶವವನ್ನು ಮತ್ತೀಕೆರೆಯಲ್ಲಿರುವ ಸುಂದರ ನಗರಕ್ಕೆ ತರಲಾಯಿತು. ಮನೆಗೆ ಬಂದ ಬಳಿಕ ಡಾ.ಸುಜಾತ ಅವರನ್ನು ಮಾಧ್ಯಮದ ಮುಂದೆ ಭಾವುಕರಾಗಿ ಭಯಾನಕ ಕ್ಷಣಗಳನ್ನ ನೆನೆದು ಕಣ್ಣೀರು ಹಾಕಿದರು. ನಾವು ಏ.18ಕ್ಕೆ ಕಾಶ್ಮೀರಕ್ಕೆ ಹೋಗಿದ್ದೆವು. ಏ.22 ನಮ್ಮ ಪ್ರವಾಸದ ಕೊನೆಯ ದಿನ ಅಂದು ನಾವು ಪಹಲ್ಗಾಮ್ ಭೇಟಿ ನೀಡಿದ್ದೆವು.

ಸುಮಾರು 4 ಕಿ.ಮೀ ದೂರದವರೆಗೆ ಕುದುರೆಯಲ್ಲಿ ಬೈಸರನ್‌ಗೆ ಹೋಗಿದ್ದೆವು. ಆ ಬಯಲು ಪ್ರದೇಶದಲ್ಲಿ ಮಗುವಿನ ಜೊತೆ ಆಟ ಆಡುತ್ತಾ ಕುಳಿತಿದ್ದೆವು. ಮೈದಾನದಲ್ಲಿ ಇದ್ದ ಟೆಂಟ್‌ನಲ್ಲಿ ಕಾಶ್ಮೀರದ ದಿರಿಸು ಧರಿಸಿ ಫೋಟೋ ತೆಗೆಯಬಹುದಿತ್ತು. ನಾನು, ಇನ್ನೊಂದು ಕುಟುಂಬದವರು ಕೊನೆಯ ಎರಡು ದಿನದಿಂದ ಜೊತೆಯಾಗಿ ಓಡಾಡುತ್ತಿದ್ದೆವು. ಫೋಟೋ ಎಲ್ಲಾ ತೆಗೆದು ಮುಗಿಯುಷ್ಟರಲ್ಲಿ ಮಧ್ಯಾಹ್ನ 1:30 1:45 ಆಗಿರಬಹುದು. ಊಟ ಮಾಡಲು ಮತ್ತೆ ಕೆಳಗೆ ಹೋಗಬೇಕಿತ್ತು. ಹೀಗಾಗಿ ನಾವು ಬೈಸರನ್‌ನಿಂದ ಹೊರಡಲು ಮುಂದಾಗುತ್ತಿದ್ದಾಗ ಜೋರಾಗಿ ಗುಂಡಿನ ಶಬ್ದ ಕೇಳಿಸಿತು. ಈ ಶಬ್ದ ಕೇಳಿದಾಗ ಪಕ್ಷಿ, ಪ್ರಾಣಿ ಓಡಿಸಲು ಗನ್‌ನಿಂದ ಶೂಟ್ ಮಾಡುತ್ತಿರಬಹುದು ಎಂದು ಭಾವಿಸಿದೆವು. ಆದರೆ ಶಬ್ದದ ತೀವ್ರತೆ ಜಾಸ್ತಿ



ಉದಯವಾಹಿನಿ ಚಿತ್ರ

ಆಗುತ್ತಿದ್ದಂತೆ ಹತ್ತಿರದಲ್ಲೇ ಗುಂಡಿನ ದಾಳಿ ನಡೆಯುತ್ತಿದೆ ಎನ್ನುವುದು ಗೊತ್ತಾಗಿ ನಾನು, ಪತಿ ಭೂಷಣ್ ಮಗು ಟೆಂಟ್ ಹಿಂಭಾಗದಲ್ಲಿ ಅಡಗಿ ಕುಳಿತೆವು. ಸುಮಾರು 100 ಅಡಿ ದೂರದಲ್ಲಿ ಉಗ್ರನೊಬ್ಬ, ಒಬ್ಬರನ್ನು ಮಾತನಾಡಿಸಿ ಶೂಟ್ ಮಾಡಿದ. ನೀವು ಹೇಗೆ ಖುಷಿಯಲ್ಲಿ ಇದ್ದೀರಿ. ಮತ್ತೊಬ್ಬರಿಗೆ ಅಲ್ಲಿ ನಮ್ಮ ಮಕ್ಕಳು ಸಾಯುತ್ತಿದ್ದಾರೆ. ಇಲ್ಲಿ ನೀವು ಮಕ್ಕಳೊಂದಿಗೆ ಹೇಗೆ ಆಟ ಆಡುತ್ತಾ ಖುಷಿಯಾಗಿದ್ದೀರಿ ಎಂದು ಪ್ರಶ್ನಿಸಿದ.

**ಭಯಾನಕ ಕ್ಷಣಗಳನ್ನ ನೆನೆದು ಕಣ್ಣೀರು**

ಅದಕ್ಕೆ ಅವರು ನಾನು ಏನು ಮಾಡಬೇಕು ಯಾವ ರೀತಿ ಸಹಾಯ ಮಾಡಬೇಕು ಎಂದು ಕೇಳಿದರು. ಅವರ ಮಾತನ್ನು ಕೇಳದೇ ಶೂಟ್ ಮಾಡಿ ನೂಕಿದ ಬಳಿಕ ಮತ್ತೆ ಅವರ ದೇಹಕ್ಕೆ ಬೀಕವಾಗಿ ಮೂರು–ನಾಲ್ಕು ಬಾರಿ ಗುಂಡು ಹಾರಿಸಿದ. ಇದನ್ನು ನೋಡುತ್ತಿರುವಾಗ ಭೂಷಣ್, ಏನು ಆಗಲ್ಲ, ಧೈರ್ಯವಾಗಿರು ಎಂದು ನಮಗೆ ಧೈರ್ಯ ತುಂಬುತ್ತಿದ್ದರು. ಉಗ್ರರು ಪತಿಯ ಮೇಲೆ ಗುಂಡಿನ ದಾಳಿ ಮಾಡಿದ ಬಳಿಕ ನಾನು ತಲೆ ಎತ್ತಲೇ ಇಲ್ಲ. ಮಗುವನ್ನು ಬಚ್ಚಿಟ್ಟುಕೊಂಡೆ. ನನಗೆ ಬೇಕಾದರೆ ಗುಂಡು ಹೊಡೆಯಲಿ ಮಗುವಿಗೆ ಏನು ಆಗದೇ ಇರಲಿ ಎಂದು ಆತನನ್ನು ಕಾಪಾಡಲು ಮುಂದಾದೆ. ಉಗ್ರರು ಪತಿಯ ತಲೆಗೆ ಗುಂಡು ಹಾರಿಸಿದ್ದರು. ನಾನು ವೈದ್ಯೆಯಾಗಿರುವ ಕಾರಣ ಭೂಷಣ್ ಇನ್ನು ಬದುಕುವುದಿಲ್ಲ ಎನ್ನುವುದು ಗೊತ್ತಾಯಿತು. ಹೀಗಾಗಿ ನನ್ನ ಮೂರು ವರ್ಷದ ಮಗುವನ್ನು ಉಳಿಸಲು ನಾನು ಅಲ್ಲಿಂದ ಓಡಿಕೊಂಡು ಬಂದೆ ಎಂದು ಹೇಳಿ ಭಾವುಕರಾದರು.

ನಮ್ಮ ಟೆಂಟ್ ಬಳಿ ಬಂದಾಗ ನಾನು ಮಗುವನ್ನು ಬಚ್ಚಿಟ್ಟುಕೊಂಡೆ.ಸಣ್ಣ ಮಗು ಇದೆ ಬಿಟ್ಟುಬಿಡಿ ಅಂತ ಕೈ ಮುಗಿದು ನಮ್ಮನ್ನು ಏನು ಮಾಡಬೇಡಿ ಎಂದು ಬೇಡಿಕೊಂಡೆ ನನ್ನ ಪತಿ ಭೂಷಣ್ ಮೇಲೆ ಶೂಟ್ ಮಾಡಿ ಹೋದ. ಉಗ್ರ ಹೋಗುತ್ತಿದ್ದಂತೆ ಅಲ್ಲಿದ್ದವರು ಓಡಿ ಹೋಗಲು ಮುಂದಾದರು. ನಾನು ಮಗುವನ್ನು ಎತ್ತಿಕೊಂಡು ಓಡಲು ಆರಂಭಿಸಿದೆ. ನಾನು ಓಡಿ ಬರುವಾಗ ಅಲ್ಲಿ ಹೆಣಗಳ ರಾಶಿ ಇತ್ತು.

ನಮ್ಮನ್ನು ಅಟ್ಟಿಸಿಕೊಂಡು ಬಂದು ದಾಳಿ ಮಾಡಬಹುದು ಎಂಬ ಭಯದಿಂದ ನಾನು ಮಗುವನ್ನು ಎತ್ತಿಕೊಂಡು ಓಡತೊಡಗಿದೆ. ಈ ವೇಳೆ ಹಲವು ಮಂದಿ ಓಡಿಕೊಂಡು ಬರುತ್ತಿದ್ದರು. ಕೊನೆಗೆ ಕುದುರೆ ಸಿಕ್ಕಿತು. ಕುದುರೆಯಲ್ಲಿ ಕುಳಿತು ಸಿಆರ್ ಪಿಎಫ್ ಮೆಸ್‌ಗೆ ಬಂದೆ ಎಂದು ಕಣ್ಣೀರು ಹಾಕಿದರು.

### ಅಮಾಯಕ ಜನರನ್ನು ಕೊಲ್ಲುವುದು ಹೇಯಕೃತ್ಯ




ಉದಯವಾಹಿನಿ ಚಿತ್ರ

ಉಗ್ರರನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ನಮ್ಮ ಸರ್ಕಾರ ದೇಶದಲ್ಲಿ ಭಯೋತ್ಪಾದನಾ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಗ್ರಹಿಸಿ, ಉಗ್ರರನ್ನು ಸದೆಬಡಿಯುವ ನಿಟ್ಟಿನಲ್ಲಿ ಕೇಂದ್ರಕ್ಕೆ ಸಂಪೂರ್ಣ ಬೆಂಬಲ ನೀಡುತ್ತದೆ. ಅಮಾಯಕ ಜನರನ್ನು ಹಾಡುಹಗಲೇ ತಮ್ಮ ಕುಟುಂಬದವರ ಎದುರು ಕೊಲ್ಲುವುದು ಹೇಯಕೃತ್ಯ. ಕಾಶ್ಮೀರದಲ್ಲಿ ಈ ಹಿಂದೆಯೂ ಪುಲ್ವಾಮಾ ಬಾಲಾಕೋಟ್ ಘಟನೆ ನಡೆದಿದ್ದು, ಪುನಃ ಅಂತಹ ಘಟನೆ ಮರುಕಳಿಸಿದೆ. ಇಂತಹ ಘಟನೆ ನಡೆಯಲು ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವೂ ಇರಬಹುದು ಎಂದರು. ಕನ್ನಡಿಗರಾದ ಭರತ್ ಭೂಷಣ್, ಮಂಜುನಾಥ್ ರಾವ್, ಬೆಂಗಳೂರಿನಲ್ಲಿ ನೆಲೆಸಿದ್ದ ಮಧುಸೂದನ್ ಅವರು ಮೃತಪಟ್ಟಿದ್ದಾರೆ. ಬೆಂಗಳೂರಿನ ಭರತ್ ಭೂಷಣ್ ಕುಟುಂಬದೊಂದಿಗೆ ಸಚಿವ ರಾಮಲಿಂಗಾರೆಡ್ಡಿಯವರನ್ನು, ಶಿವಮೊಗ್ಗದ ಮಂಜುನಾಥ್ ರಾವ್ ಅವರ ಕುಟುಂಬದವರನ್ನು ಸಚಿವ ಮಧುಬಂಗಾರಪ್ಪ ಅವರು ಭೇಟಿಯಾಗಿದ್ದು, ಕುಟುಂಬಕ್ಕೆ ಸಹಕಾರ ನೀಡುವಂತೆ ಸೂಚನೆ ನೀಡಲಾಗಿದೆ. ಮೃತರ ಕುಟುಂಬಕ್ಕೆ ಸರ್ಕಾರದ ಬೆಂಬಲವಿದೆ ಎಂದರು. ಕಾಶ್ಮೀರದಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆ, ಘಟನೆಯಲ್ಲಿ ಮೃತಪಟ್ಟವರ ಪಾರ್ಥಿವ ಶರೀರವನ್ನು ರಾಜ್ಯಕ್ಕೆ ಕರೆತರುವ ವ್ಯವಸ್ಥೆಗಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್, ಅಧಿಕಾರಿಗಳ ತಂಡವನ್ನು ಕೂಡಲೇ ಕಳುಹಿಸಿಕೊಡಲಾಗಿತ್ತು. 175 ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತರಲಾಗುತ್ತಿದೆ. ಸಂಕಷ್ಟದಲ್ಲಿರುವ ಕನ್ನಡಿಗರನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯ ಎಂದು ತಿಳಿಸಿದರು. ಕಾಶ್ಮೀರದಲ್ಲಿ ನಡೆದ ಉಗ್ರರ ದಾಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಕೆಲವು ಕ್ರಮಗಳನ್ನು ಈಗಾಗಲೇ ಕೈಗೊಂಡಿದೆ. ಉಗ್ರರನ್ನು ಮಟ್ಟ ಹಾಕುವ ಇನ್ನೂ ಹೆಚ್ಚಿನ ಕ್ರಮಗಳಿಗೆ ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲವಿರಲಿದೆ ಎಂದರು.

# ಯೋಗಾ ಲಕ್ಷ್ಮೀನರಸಿಂಹಸ್ವಾಮಿಯ ಪ್ರತಿಷ್ಠಾಪನಾ ಮಹೋತ್ಸವ

• ಉದಯವಾಹಿನಿ, ಬೆಂಗಳೂರು

ಭಕ್ತ ಜನರ ಆಶಯ, ಆಶ್ರಮದ ಸಂಸ್ಥಾಪಕರಾದ ಪರಮ ಪೂಜ್ಯ ಶ್ರೀ 1008 ಶ್ರೀವಿಶ್ವಭೂಷಣತೀರ್ಥ ಶ್ರೀಪಾದಂಗಳವರ ಬಹುದಿನಗಳ ಸಂಕಲ್ಪದಂತೆ ರಾಮೋಹಳ್ಳಿಯ ಶ್ರೀ ಮಧ್ವ ನಾರಾಯಣ ಆಶ್ರಮದಲ್ಲಿ ಮೇ 4, ಭಾನುವಾರದಂದು ರಾಮೋಹಳ್ಳಿಯ ಶ್ರೀ ಮಧ್ವನಾರಾಯಣ ಆಶ್ರಮದ ಆವರಣದಲ್ಲಿ ಶ್ರೀ ಯೋಗಾಲಕ್ಷ್ಮೀನರಸಿಂಹ ದೇವರ ನೂತನ ಶಿಲಾಮಯ ದೇವಳದ ಅನಾವರಣ, ಪ್ರತಿಷ್ಠಾಪನಾ ಮಹೋತ್ಸವವು ನಡೆಯಲಿದೆ. ಹಿಂದೆಯೇ ಉಡುಪಿಯ ಶ್ರೀ ಪೇಜಾವರ ಮಠದ ಶ್ರೀ 1008 ಶ್ರೀ ವಿಶ್ವೇಶತೀರ್ಥ ಶ್ರೀಪಾದರ ಅಮೃತ ಹಸ್ತದಿಂದ ಭೂಮಿ ಪೂಜೆ – ಶಿಲನ್ಯಾಸಗಳನ್ನು ನೆರವೇರಿಸಲ್ಪಟ್ಟ ಪುಣ್ಯ ಭೂಮಿಯಲ್ಲಿ ನೂತನವಾಗಿ ನಿರ್ಮಿಸಲಾದ ಭವ್ಯ ದೇವಾಲಯದ ಶಿಲಾಮಯ ಗರ್ಭಗುಡಿಯಲ್ಲಿ ಶ್ರೀ ಪಲಿಮಾರು ಮಠಾಧೀಶರಾದ ಪರಮಪೂಜ್ಯ ಶ್ರೀ 1008 ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರ ಹಾಗೂ ಶ್ರೀ ಪೇಜಾವರ ಮಠಾಧೀಶರಾದ ಶ್ರೀ 1008 ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದಂಗಳವರ ಅಮೃತ ಹಸ್ತಗಳಿಂದ ಶ್ರೀ ಯೋಗಾಲಕ್ಷ್ಮೀನರಸಿಂಹ ಸ್ವಾಮಿಯ ಪ್ರತಿಷ್ಠಾಪನೆ ಮಿಥುನ ಲಗ್ನದಲ್ಲಿ (ಬೆಳಿಗ್ಗೆ 10.00 ರಿಂದ 10.15) ನೆರವೇರಲಿದೆ. ಅಂತೆಯೇ ಭಕ್ತ ಜನರ ಆಶಯ, ಆಶ್ರಮದ ಸಂಸ್ಥಾಪಕರಾದ ಪರಮ ಪೂಜ್ಯ ಶ್ರೀ 1008 ಶ್ರೀ ವಿಶ್ವಭೂಷಣತೀರ್ಥ ಶ್ರೀಪಾದಂಗಳವರ ಬಹುದಿನಗಳ ಸಂಕಲ್ಪವು ಸಾಕಾರಗೊಳ್ಳಲಿದೆ.



ಉದಯವಾಹಿನಿ ಚಿತ್ರ

ಭಗವದ್ಭಕ್ತ ರಾದ ತಾವುಗಳು ಸಕುಟುಂಬ ಸಪರಿವಾರ ಸಮೇತರಾಗಿ ಈ ಮಂಗಳಮಯ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಭಾಗವಹಿಸಿ, ತಾನು–ಮನ–ಧನಗಳಿಂದ ಸೇವೆ ಸಲ್ಲಿಸಿ ಶ್ರೀ ಹರಿ– ವಾಯು–ಗುರುಗಳ ವಿಶೇಷ ಅನುಗ್ರಹಕ್ಕೆ ಪಾತ್ರರಾಗಬೇಕಾಗಿ ವಿನಂತಿ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ. ಸಿಟಿ ಮಾರ್ಕೆಟ್ ನಿಂದ 227 ಸಂಖ್ಯೆಯ ಎಲ್ಲಾ ಬಸ್ ಗಳು (ಸಿ, ಡಿ ಹೊರತುಪಡಿಸಿ), ಅಲ್ಲದೇ ನೆಲಮಂಗಲ, ಮೆಜೆಸ್ಟಿಕ್, ಬನಶಂಕರಿ, ಕೆಂಗೇರಿಯಿಂದಲೂ ರಾಮೋಹಳ್ಳಿಗೆ ಬಸ್ ಸೌಲಭ್ಯವಿದೆ. ಇಳಿಯುವ ಸ್ಥಳ: ಶುಭಂ ಕರೋತಿ ಮೈತ್ರೇಯಿ ಗುರುಕುಲ ಆಶ್ರಮ ಸ್ಟಾಪ್. ಪ್ರತಿಷ್ಠಾಪನಾ ದಿನದಂದು ಶುಭಂ ಕರೋತಿ ಸ್ಟಾಪ್ ನಿಂದ ಮಧ್ವನಾರಾಯಣ ಆಶ್ರಮಕ್ಕೆ ಬರಲು ವಾಹನ ಸೌಲಭ್ಯ ಕಲ್ಪಿಸಲಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಭಾಗವಹಿಸಿ ಪ್ರತಿಷ್ಠಾಪನಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕಾಗಿ ಶ್ರೀ ಯೋಗಾಲಕ್ಷ್ಮೀನರಸಿಂಹ ಸ್ವಾಮಿ ಪ್ರತಿಷ್ಠಾಪನಾ ಸಮಿತಿಯ ಪದಾಧಿಕಾರಿಗಳು, ಸರ್ವ ಸದಸ್ಯರ ವಿನಂತಿ.

# ಸಕಾಲ ವ್ಯಾಪ್ತಿಯಡಿ ಸಲ್ಲಿಸಿದ ಅರ್ಜಿ ತಕ್ಷಣ ವಿಲೇವಾರಿ ಮಾಡಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯದಲ್ಲಿ ನಾಗರಿಕರಿಗೆ ನಿಗದಿತ ಕಾಲಾವಧಿಯೊಳಗೆ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಸಂಬಂಧಿಸಿದಂತೆ ಖಾತರಿ ಸೇವೆ ನೀಡುವಂತೆ ಕರ್ನಾಟಕ ರಾಜ್ಯ ಶಾಸಕಾಂಗವು ಬಿಲ್ ಅನ್ನು ಅಂಗೀಕರಿಸಿದೆ. ಈ ಕಾಯಿದೆಯನ್ನು ಕರ್ನಾಟಕ ನಾಗರಿಕರ ಖಾತರಿ



ಸೇವೆ ಕಾಯ್ದೆ 2011 ಎಂದು ಕರೆಯಲಾಗುತ್ತದೆ. ಜನರು ಕಛೇರಿಯಿಂದ, ಕಛೇರಿಗೆ ಅಲೆಯಬಾರದು, ಅವರು ಸಲ್ಲಿಸಿದ ಅರ್ಜಿ ಶೀಘ್ರದಲ್ಲಿ ವಿಲೇವಾರಿಯಾಗಬೇಕು ಅದ್ದರಿಂದ ಸಕಾಲ ಸಹಕಾರಿಯಾಗಿದೆ. ಬಿಬಿಎಂಪಿ ಮುಖ್ಯ ಆರೋಗ್ಯಾಧಿಕಾರಿಗಳು ಸಕಾಲ ತಂತ್ರಾಂಶದ ವರದಿಯಂತೆ ವ್ಯಾಪ್ತಿಯಡಿ ಹಲವು ಅರ್ಜಿಗಳು ಸಕಾಲದಡಿ ವಿಲೇವಾರಿ ಆಗದೇ ಬಾಕಿ ಉಳಿದುಕೊಂಡಿರುತ್ತವೆ.

ಸಕಾಲ ತಂತ್ರಾಂಶದ ವರದಿಯಂತೆ ಪಾಲಿಕೆಯ ಆರೋಗ್ಯ ಇಲಾಖೆಯ ಸಾರ್ವಜನಿಕ ಆರೋಗ್ಯ ವಿಭಾಗದ ಸಕಾಲದಡಿ ವಿಲೇವಾರಿ ಆಗದೇ ಕಛೇರಿವಾರು ಬಾಕಿ ಉಳಿದುಕೊಂಡಿರುವ ಅರ್ಜಿಗಳನ್ನು ಈ ಕೂಡಲೇ ವಿಲೇವಾರಿಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲು, ಇನ್ನು ಮುಂದೆ ಸಕಾಲದಡಿ ಸಲ್ಲಿಸುವ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇ ವಾರಿ ಮಾಡಲು ತಿಳಿಸುತ್ತಾ, ತಪ್ಪಿದ್ದಲ್ಲಿ ಸಂಬಧಪಟ್ಟ ಅಧಿಕಾರಿಗಳನ್ನು ನೇರ ಜವಾಬ್ದಾರರಾಗಿರುತ್ತಾರೆಂದು ಆದೇಶ ಮಾಡಿದ್ದಾರೆ.

**ಪಾಲಿಕೆ ಆರೋಗ್ಯ ಇಲಾಖೆಯಲ್ಲಿ ಅತಿಆಸೆ, ದುರಾಸೆಯಿಂದ ಲೋಕಾಯುಕ್ತದಲ್ಲಿ ಲಂಚದ ಪ್ರಕರಣದಲ್ಲಿ ಪರಪ್ಪನ ಅಗ್ರಹಾರದಲ್ಲಿ ಜೈಲುವಾಸ ಅನುಭವಿಸಿ ಬಂದವರ ವಿವರ**


- 1)ಆರೋಗ್ಯ ವೈದ್ಯಾಧಿಕಾರಿ – ಚಂದ್ರಶೇಖರ್ (ಭಾರತಿನಗರ)
- 2)ಆರೋಗ್ಯ ವೈದ್ಯಾಧಿಕಾರಿ – ಭಸವೇಂದ್ರ (ಶಾಂತಿನಗರ)
- 3) ಆರೋಗ್ಯ ವೈದ್ಯಾಧಿಕಾರಿ – ಡಾ. ನವೀನ್ (ಆರ್. ಆರ್. ನಗರ)
- 4) ಆರೋಗ್ಯ ವೈದ್ಯಾಧಿಕಾರಿ – ರಾಜೇಂದ್ರ (ಗೋವಿಂದರಾಜ ನಗರ)
- 5)ಆರೋಗ್ಯ ವೈದ್ಯಾಧಿಕಾರಿ – ಶಿವೇಗೌಡ (ಸಿ. ವಿ. ರಾಮನಗರ)
- 6) ಹಿರಿಯ ಆರೋಗ್ಯ ಪರಿವೀಕ್ಷಕರು – ಲೋಕೇಶ್
- 7) ಹಿರಿಯ ಆರೋಗ್ಯ ಪರಿವೀಕ್ಷಕರು – ಪ್ರದೀಪ್
- 8) ಹಿರಿಯ ಆರೋಗ್ಯ ಪರಿವೀಕ್ಷಕರು – ಪ್ರವೀಣ್
- 9) ಹಿರಿಯ ಆರೋಗ್ಯ ಪರಿವೀಕ್ಷಕರು – ನಿರ್ಮಲ
- 10) ಹಿರಿಯ ಆರೋಗ್ಯ ಪರಿವೀಕ್ಷಕರು – ರಾಮಯ್ಯ
- 11) ಹಿರಿಯ ಆರೋಗ್ಯ ಪರಿವೀಕ್ಷಕರು – ಎಸ್. ಕುಮಾರ್
- 12) ಹಿರಿಯ ಆರೋಗ್ಯ ಪರಿವೀಕ್ಷಕರು – ಜಗದೀಶ್
- 13) ಹಿರಿಯ ಆರೋಗ್ಯ ಪರಿವೀಕ್ಷಕರು – ಜಯ್ ಕುಮಾರ್
- 14) ಹಿರಿಯ ಆರೋಗ್ಯ ಪರಿವೀಕ್ಷಕರು – ಕುಳ್ಳಯ್ಯ ಪ್ಪ
- 15) ಹಿರಿಯ ಆರೋಗ್ಯ ಪರಿವೀಕ್ಷಕರು – ಹನುಮಂತರಾಯಪ್ಪ
- 16) ಹಿರಿಯ ಆರೋಗ್ಯ ಪರಿವೀಕ್ಷಕರು – ದೇವರಾಜ

## ಹಲವು ಬಾರಿ ದೂರು ಸಲ್ಲಿಸಿದರೂ ಕ್ರಮ ಕೈಗೊಳ್ಳದ ಸಾರಿಗೆ ಇಲಾಖೆ: ಆರೋಪ

# ವೈಟ್‌ಬೋರ್ಡ್ ವಾಣಿಜ್ಯ ಸಂಚಾರ: ದೂರು ಕೊಟ್ಟರೂ ಇಲ್ಲ ಕಡಿವಾಣ

• ಉದಯವಾಹಿನಿ, ಬೆಂಗಳೂರು

ಖಾಸಗಿ ಬಳಕೆಯ ವಾಹನಗಳನ್ನು ವಾಣಿಜ್ಯ ಬಳಕೆಗೆ ಬಳಸುವುದಕ್ಕೆ ಯಾವುದೇ ನಿಯಂತ್ರಣ ಬಿದ್ದಿಲ್ಲ. ಸಾರಿಗೆ ಇಲಾಖೆಗೆ ದೂರು ನೀಡಿದರೂ ಇಲಾಖೆ ಕ್ರಮ ಕೈಗೊಂಡಿಲ್ಲ. ಇದರಿಂದ ಸರ್ಕಾರದ ಬೊಕ್ಕಸಕ್ಕೂ ನಷ್ಟವಾಗುತ್ತಿದೆ. ವಾಣಿಜ್ಯ ವಾಹನಗಳಿಗೂ ನಷ್ಟವಾಗುತ್ತಿದೆ. ಚಲನಚಿತ್ರ ವಾಹನ ಚಾಲಕರ ಸಂಘ, ಕರ್ನಾಟಕ ಟೆಲಿವಿಷನ್ ಅಸೋಸಿಯೇಷನ್ ಮತ್ತು ಕ್ಯಾಂಪರ್ ವ್ಯಾನ್ ಸಂಸ್ಥೆಗಳು ರಾಜಾರೋಷವಾಗಿಯೇ ಖಾಸಗಿ ಬಳಕೆಯ ವಾಹನಗಳನ್ನು ವಾಣಿಜ್ಯ ಬಳಕೆ ಮಾಡುತ್ತಿವೆ. ಆರ್‌ಟಿಒ ಅಧಿಕಾರಿಗಳಿಗೆ ವಾಹನಗಳ ಮಾಹಿತಿಯನ್ನು ನೀಡಿ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದರೂ, ದೂರು ನೀಡಿದರೂ ಕ್ರಮ ಕೈಗೊಂಡಿಲ್ಲ ಎಂದು ಕರ್ನಾಟಕ ಟ್ಯಾಕ್ಸಿ ಡ್ರೈವರ್ಸ್ ಟ್ರೇಡ್ ಯೂನಿಯನ್ (ಕೆಟಿಡಿಟಿಯು) ಅಧ್ಯಕ್ಷ ಸಾರಿಗೆ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ನ್ಯಾಯಯುತವಾಗಿ ತೆರಿಗೆ ಪಾವತಿಸಿ ಬಾಡಿಗೆ ನಡೆಸುವ ಮಾಲೀಕರು ಮತ್ತು ಚಾಲಕರ ಬದುಕು ಬೀದಿಗೆ ಬೀಳುವಂತಾಗಿದೆ. ವಾಣಿಜ್ಯ ಸಂಚಾರಕ್ಕೆ ಬಳಸುವ ಖಾಸಗಿ ಬಳಕೆಯ ವಾಹನಗಳ ಮಾಲೀಕರ ಮೇಲೆ ಕ್ರಮ ಕೈಗೊಳ್ಳದೇ ಹೋದರೆ ಇಲಾಖೆಯ ವಿರುದ್ಧ ಪ್ರತಿಭಟನೆ ನಡೆಸಲಾಗುವುದು. ನ್ಯಾಯಾಲಯದ ಮೆಟ್ಟಿಲು ಏರಲಾಗುವುದು ಎಂದು ಆ ಪತ್ರದಲ್ಲಿ ಎಚ್ಚರಿಸಿದ್ದಾರೆ.



ಕದ್ದುಮುಚ್ಚಿ ಕೆಲವು ವಾಹನಗಳ ಮಾಲೀಕರು ವಾಣಿಜ್ಯ ಸಂಚಾರ ನಡೆಸುತ್ತಿದ್ದಾರೆ. ಚಲನಚಿತ್ರ ವಾಹನ ಚಾಲಕರ ಸಂಘದಲ್ಲಿ ಇರುವ 80ಕ್ಕೂ ಅಧಿಕ ವಾಹನಗಳಲ್ಲಿ ಐದಾರು ವಾಹನಗಳಷ್ಟೇ ಹಳದಿ ನಂಬರ್ ಪ್ಲೇಟ್ ಹೊಂದಿವೆ. ಉಳಿದೆಲ್ಲವೂ ಖಾಸಗಿ ವಾಹನಗಳು. ನಾವು ದೂರು ಕೊಟ್ಟಾಗ ಒಮ್ಮೆ ಒಂದೆರಡು ವಾಹನಗಳಿಗೆ ದಂಡ ವಿಧಿಸುತ್ತಾರೆ. ಆನಂತರ ಸಂಚಾರ



ಉದಯವಾಹಿನಿ ಚಿತ್ರ

> **ವೈಟ್‌ಬೋರ್ಡ್ ವಾಹನಗಳು ವಾಣಿಜ್ಯ ಸಂಚಾರ ನಡೆಸುವಂತಿಲ್ಲ. ಅಂಥ ವಾಹನಗಳ ಮಾಲೀಕರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು.**
> –ರಾಮಲಿಂಗಾರೆಡ್ಡಿ ಸಾರಿಗೆ ಸಚಿವ

ಹಾಗೇ ಮುಂದುವರಿಯುತ್ತಿದೆ. ಅವುಗಳ ಪರ್ಮಿಟ್ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಕರ್ನಾಟಕ ಟ್ಯಾಕ್ಸಿ ಡ್ರೈವರ್ಸ್ ಆರ್ಗನೈಸೇಶನ್ ಸದಸ್ಯ ರಮೇಶ್ ಸಿ. ಒತ್ತಾಯಿಸಿದ್ದಾರೆ. ಲಾಂಗ್ ಡ್ರೈವ್, ಝೂಮ್ ಕಾರ್ಸ್, ಆನ್‌ರೋಡ್ ಕಾರ್ ರೆಂಟಲ್, ಫಿಲಿಯೊ ಕಾರ್ಸ್, ಗುಜರಾಲ್ ಕಾರ್ ರೆಂಟಲ್ಸ್ ಮುಂತಾದ ಕಂಪನಿಗಳ ವೈಟ್‌ಬೋರ್ಡ್ ವಾಹನಗಳು ವಾಣಿಜ್ಯ ಸಂಚಾರ ನಡೆಸುತ್ತಿದ್ದಾಗ, ಅವುಗಳನ್ನು ಹಿಡಿದು ಆರ್‌ಟಿಒ ಅಧಿಕಾರಿಗಳಿಗೆ ಒಪ್ಪಿಸಿದರೂ ಕ್ರಮ ಕೈಗೊಂಡಿಲ್ಲ. ಆ್ಯಪ್ ಆಧಾರಿತವಾಗಿ ಖಾಸಗಿ ಬಳಕೆ ವಾಹನಗಳಲ್ಲಿ ಬಾಡಿಗೆ ಮಾಡುವುದನ್ನೂ ನಿಷೇಧಿಸಬೇಕು ಎಂದು ಕೆಟಿಡಿಟಿಯು ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ವಾಣಿಜ್ಯ ವಾಹನಗಳು ಹಳದಿ ನಂಬರ್ ಪ್ಲೇಟ್ ಹೊಂದಿರುತ್ತವೆ. ಈ ವಾಹನಗಳಿಗೆ ತೆರಿಗೆಯೂ ಅಧಿಕ ಇರುತ್ತದೆ. ಸ್ವಂತಕ್ಕೆ ಬಳಸುವ ವಾಹನಗಳು ಬಿಳಿ ನಂಬರ್ ಪ್ಲೇಟ್ ಹೊಂದಿರುತ್ತವೆ ಮತ್ತು ತೆರಿಗೆ ಕೂಡ ಕಡಿಮೆ ಇರುತ್ತದೆ. ಅಧಿಕ ತೆರಿಗೆ ತಪ್ಪಿಸಲು ಸ್ವಂತ ಬಳಕೆಯ ವಾಹನಗಳನ್ನೇ ವಾಣಿಜ್ಯ ವಾಹನಗಳಂತೆ ಬಳಸುತ್ತಿರುವುದು ಸಮಸ್ಯೆಯ ಮೂಲವಾಗಿದೆ. ವಾಣಿಜ್ಯ ಸಂಚಾರದ ವಾಹನಗಳನ್ನೇ ನಂಬಿ ದವರ ಹೊಟ್ಟೆ ಮೇಲೆ ಹೊಡೆಯುವ ಇಂಥ ವಾಹನಗಳ ಮೇಲೆ ಸಾರಿಗೆ ಸಚಿವರು, ಇಲಾ ಖೆಯ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊ ಳ್ಳಬೇಕು ಎಂದು ಆಗ್ರಹಿಸಿದ್ದಾರೆ.

**ತೆರಿಗೆ ಕೂಡ ಕಡಿಮೆ**

### ಸಮಯ ಕೇಳಿದ್ದೇವೆ


ಚಲನಚಿತ್ರ ವಾಹನ ಚಾಲಕರ ಸಂಘವು ಹಲವು ದಶಕಗಳಿಂದ ಇದೆ. ಸಿನಿಮಾ ನಟ ನಟಿಯರನ್ನು ಸಹಕಲಾವಿದರನ್ನು ಸಿನಿಮಾಕ್ಕೆ ಸಂಬಂಧಪಟ್ಟವರನ್ನು ಕರೆದೊಯ್ಯುವ ಕೆಲಸ ಮಾಡುತ್ತಿದೆ. ಹೊರಗೆ ಯಾವುದೇ ವಾಣಿಜ್ಯ ಸಂಚಾರ ಮಾಡುತ್ತಿಲ್ಲ. 60 ವರ್ಷಗಳಿಂದ ಇಲ್ಲದ ಸಮಸ್ಯೆಯನ್ನು ಕೆಲವರು ಒಂದು ವರ್ಷದಿಂದ ಹುಟ್ಟುಹಾಕಿದ್ದಾರೆ ಎಂದು ಕರ್ನಾಟಕ ಚಲನಚಿತ್ರ ಕಾರ್ಮಿಕರ ಒಕ್ಕೂಟದ ಅಧ್ಯಕ್ಷ ಕೆ. ಮಹಾಬಲ ತಿಳಿಸಿದ್ದಾರೆ. 'ಸರ್ಕಾರಕ್ಕೆ ನಷ್ಟ ಉಂಟುಮಾಡುವ ಉದ್ದೇಶ ನಮಗಿಲ್ಲ. ಸಾರಿಗೆ ಸಚಿವರನ್ನು ಅಧಿಕಾರಿಗಳನ್ನು ಭೇಟಿ ಮಾಡಿದ್ದೇವೆ. 6 ತಿಂಗಳ ಕಾಲಾವಕಾಶವನ್ನು ಕೇಳಿದ್ದೇವೆ. ದೊಡ್ಡ ಕಲಾವಿದರು ಹಳದಿ ಫಲಕಗಳ ವಾಹನಗಳಲ್ಲಿ ಬರಲು ಹಿಂಜರಿಯುತ್ತಿದ್ದಾರೆ. ಕಲಾವಿದರನ್ನು ಚಲನಚಿತ್ರ ಮಂಡಳಿಯವರನ್ನು ಒಪ್ಪಿಸುತ್ತೇವೆ ಎಂದರು.

# 26 ಪ್ರವಾಸಿಗರ ಮಾರಣಹೋಮಕ್ಕೆ ಭದ್ರತಾ ವೈಫಲ್ಯವೇ ಕಾರಣ: ಸಿದ್ದರಾಮಯ್ಯ

• **ಉದಯವಾಹಿನಿ, ಚಾಮರಾಜನಗರ**

ಪುಲ್ವಾಮಾ ದಾಳಿಯಾದ ನಂತರ ಅತ್ಯಂತ ಎಚ್ಚರಿಕೆಯಿಂದ ಇರಬೇಕಿತ್ತು. ಘಟನೆಯಾದ ಬಳಿಕ ಕ್ರಮ ಕೈಗೊಳ್ಳುವುದೇ ಬೇರೆ, ದುರ್ಘಟನೆಗಳೇ ನಡೆಯದಂತೆ ಮುಂಜಾಗ್ರತೆ ವಹಿಸುವುದು ಮುಖ್ಯವಾಗಿತ್ತು. ಇದರಲ್ಲಿ ಕೇಂದ್ರಸರ್ಕಾರ ವಿಫಲವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಆರೋಪಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅವಧಿ ಮೀರಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಬಗ್ಗೆ ತೀವ್ರ ನಿಗಾ ವಹಿಸುವಂತೆ ಸೂಚಿಸಿರುವುದಾಗಿ ತಿಳಿಸಿದರು.

ಜಮ್ಮು-ಕಾಶೀರದ ಅನಂತ್‌ನಾಗ್ ಜಿಲ್ಲೆಯಲ್ಲೇ ಈ ಮೊದಲು ಪುಲ್ವಾಮ ದಾಳಿಯಾಗಿ 40 ಮಂದಿ ಯೋಧರು ಜೀವ ಕಳೆದುಕೊಂಡಿದ್ದರು. ಅದರ ಬಳಿಕ ಅತ್ಯಂತ ಎಚ್ಚರಿಕೆಯಿಂದಿರಬೇಕಿತ್ತು. ಆದರೆ ಭದ್ರತಾ ವೈಫಲ್ಯ


ಉದಯವಾಹಿನಿ ಚಿತ್ರ

ಹಾಗೂ ಮುಂಜಾಗ್ರತಾ ಕೊರತೆಯಿಂದಾಗಿ ದೇಶದ 26 ಮಂದಿ ನಾಗರಿಕರು ಜೀವ ಕಳೆದುಕೊಳ್ಳುವಂತಾಯಿತು. ಭಯೋತ್ಪಾದಕ ದಾಳಿ ನಡೆಸಿದ ಉಗ್ರರನ್ನು ಹುಡುಕಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು. ಇಲ್ಲಿ ಯಾವುದೇ ಜಾತಿ, ಧರ್ಮ ಮುಖ್ಯವಲ್ಲ. ದೇಶದ ಭದ್ರತೆ, ನಾಗರೀಕರ ಸುರಕ್ಷತೆ ಪ್ರಮುಖವಾಗಿದೆ.

**ಕೇಂದ್ರದ ನಿರ್ಲಕ್ಷ್ಯ**

**ರಾಜ್ಯದಲ್ಲಿ ಮೇಕೆದಾಟು ಯೋಜನೆಯನ್ನು ಕೈಗೆತ್ತಿಕೊಳ್ಳಲು ರಾಜ್ಯಸರ್ಕಾರ ಸಿದ್ಧವಿದೆ. ಕೇಂದ್ರ ಸರ್ಕಾರ ಅಗತ್ಯ ಪೂರ್ವಾನುಮತಿಗಳನ್ನು ನೀಡಿದ ತಕ್ಷಣವೇ ಕಾಮಗಾರಿ ಆರಂಭವಾಗಲಿದೆ. ಇಂದು ಒಪ್ಪಿಕೊಂಡರೆ ನಾಳೆಯಿಂದಲೇ ಕಾಮಗಾರಿ ಆರಂಭವಾಗುತ್ತದೆ ಎಂದರು.ತಾವು ದೆಹಲಿಗೆ ಅನೇಕ ಬಾರಿ ಭೇಟಿ ನೀಡಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಗೃಹಸಚಿವ ಅಮಿತ್ ಷಾ ಸೇರಿದಂತೆ ಹಲವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದೇವೆ. ಆದರೆ ಯಾವುದೂ ಪ್ರಯೋಜನವಾಗಿಲ್ಲ ಎಂದು ಆರೋಪಿಸಿದರು.**

ಮತ್ತೆ ಇಂತಹ ದುರ್ಘಟನೆಗಳು ಮರುಕಳಿಸದಂತೆ ನಿಗಾವಹಿಸಬೇಕು. ಘಟನೆಯಾದ ಬಳಿಕ ಕ್ರಮ ಕೈಗೊಳ್ಳುವುದು ಬೇರೆಯ ವಿಚಾರ. ಆದರೆ ಪುಲ್ವಾಮ ಬಳಿಕ ವಿಶ್ರಮಿಸುವುದು ಸರಿಯಲ್ಲ ಎಂದರು. ಪಹಲ್ಗಾಮ್ ದಾಳಿಯಲ್ಲಿ ಹತ್ಯೆಯಾದ ರಾಜ್ಯದ ಮೂವರಿಗೂ ತಲಾ 10 ಲಕ್ಷ ರೂ. ಪರಿಹಾರ ನೀಡಲಾಗುವುದು. ಮಂಜುನಾಥ್ ರಾವ್, ಭರತ್ ಭೂಷಣ್ ಅವರಿಗೆ ಸರ್ಕಾರಿ ಸಕಲ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಸಲಾಗುತ್ತಿದೆ. ಆಂಧ್ರಪ್ರದೇಶದ ನಲ್ಲೂರಿನ ಮಧುಸೂದನ್ ಬೆಂಗಳೂರಿನಲ್ಲೇ ನೆಲೆಸಿದ್ದರು. ಹೀಗಾಗಿ ಅವರನ್ನೂ ಸೇರಿದಂತೆ ಮೂವರಿಗೂ ಪರಿಹಾರ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡಬೇಕಾದ ಅನುದಾನವನ್ನೇ ಕೊಡುತ್ತಿಲ್ಲ. ಭದ್ರಾ ಮೇಲ್ದಂಡೆಗೆ 5,400 ಕೋಟಿ ರೂ. ನೀಡುವುದಾಗಿ 2023-24ರ ಸಾಲಿನ ಬಜೆಟ್‌ನಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದ್ದರು. ಇಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜು ಬೊಮ್ಮಾಯಿ ಅದನ್ನು ತಮ ಬಜೆಟ್‌ನಲ್ಲಿ ಸೇರಿಸಿ ಕೇಂದ್ರಕ್ಕೆ ಧನ್ಯವಾದ ಹೇಳಿದರು. ಆದರೆ ಈವರೆಗೂ ಒಂದು ರೂಪಾಯಿ ಹಣ ಬಂದಿಲ್ಲ ಎಂದು ಆರೋಪಿಸಿದರಲ್ಲದೆ, ಇದನ್ನು ನೋಡಿದರೆ ದ್ವೇಷದ ರಾಜಕಾರಣವಿದ್ದಂತಿದೆ ಎಂದರು.

ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ನಡೆಯುತ್ತಿದ್ದು, ಬಜೆಟ್‌ನಲ್ಲಿ ಘೋಷಿಸಿದ್ದ ಕಾರ್ಯಕ್ರಮಗಳ ಕುರಿತು ನಿರ್ಧಾರ ತೆಗೆದುಕೊಳ್ಳಲಾಗುವುದು ಜೊತೆಗೆ ಈ ಭಾಗದ ಸಮಸ್ಯೆಗಳ ಬಗ್ಗೆ ಕುರಿತು ಚರ್ಚಿಸುವುದಾಗಿ ಎಂದರು.

## ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಮುಖ್ಯ ಆರ್ಥಿಕ ಸಲಹೆಗಾರ ಭೇಟಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಹಾರೋಹಳ್ಳಿ**

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಮುಖ್ಯ ಆರ್ಥಿಕ ಸಲಹೆಗಾರ ಕುಂತಲ್ ಸೆನ್ಸರ್ಮಾ ಅವರು ತಾಲ್ಲೂಕಿನ ವಿವಿಧ ಕಡೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಾರೋಹಳ್ಳಿ ಪಟ್ಟಣದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಗೆ ಭೇಟಿ ನೀಡಿದರು. ನಂತರ ಸ್ವ-ಉದ್ಯೋಗ ಕೌಶಲ ತರಬೇತಿ ಪಡೆಯುತ್ತಿರುವ ಶಿಕ್ಷಣಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಚೀಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಸ್ತೆ ಅಭಿವೃದ್ಧಿ ಕಾಮಗಾರಿ, ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಹನುಮನಹಳ್ಳಿ ಗ್ರಾಮದ ಶಿವಮ್ಮ ಅವರ ಕುರಿ ಶೆಡ್, ದನದ ಕೊಟ್ಟಿಗೆ ಕಾಮಗಾರಿ, ಅಮೃತ ಸರೋವರ ಕೆರೆ ವೀಕ್ಷಿಸಿದರು. ದೊಡ್ಡಮರಳವಾಡಿ ಗ್ರಾಮ ಪಂಚಾಯಿತಿಯ ಆನೆಹೊಸಹಳ್ಳಿ ಅಂಗನವಾಡಿ ಕೇಂದ್ರ, ಶಾಲಾ ಶೌಚಾಲಯ, ಹನುಮಂತಪುರ ಗ್ರಾಮದ ಕೆರೆಯನ್ನು ವೀಕ್ಷಿಸಿ ನಂತರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಮಹಾತ್ಮಗಾಂಧಿ ನರೇಗಾ ಯೋಜನೆ ಕಡತಗಳನ್ನು ಪರಿಶೀಲಿಸಿದರು. ಪಿಂಚಣಿ, ಮಾಸಾಶನ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು.


### ಬಿಡದಿ ಟೌನ್‌ಶಿಪ್ ನಿರ್ಮಾಣ ವಿಚಾರ; ರೈತರ ಭೂಮಿ ಸ್ವಾಧೀನಕ್ಕೆ ಹೆಚ್‌ಡಿಡಿ ತೀವ್ರ ವಿರೋಧ

## ಬಡ ರೈತರ ಜೀವನೋಪಾಯಕ್ಕೆ ಕೃಷಿ ಭೂಮಿಯೇ ಆಧಾರ

• **ಉದಯವಾಹಿನಿ, ರಾಮನಗರ**

ಬಿಡದಿ ಹೋಬಳಿ ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಟೌನ್‌ಶಿಪ್ ನಿರ್ಮಾಣ ಸಂಬಂಧ ರೈತರ ಭೂಮಿ ಸ್ವಾಧೀನಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

**ಪತ್ರದಲ್ಲಿ ಉಲ್ಲೇಖಿಸಿರುವ ಅಂಶಗಳು:** ಬೆಂಗಳೂರು ಗ್ರಾಮಾಂತರ ಲೋಕಸಭೆ ಕ್ಷೇತ್ರದ ಬಿಡದಿ ಹೋಬಳಿಯ ಬೈರಮಂಗಲ, ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 24 ಗ್ರಾಮಗಳಲ್ಲಿನ ಹಲವಾರು ಸರ್ವೆ ನಂಬರ್‌ಗಳಲ್ಲಿರುವ ಸುಮಾರು 10,000 ಎಕ್ರೆ ಜಮೀನನ್ನು ಸರ್ಕಾರ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಟೌನ್‌ಶಿಪ್ ಯೋಜನೆ ನಿರ್ಮಾಣಕ್ಕೆ ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಿರುವುದಾಗಿ ವರದಿಯಾಗಿದೆ. ಜಿಲ್ಲೆಯ ರಾಮನಗರ, ಕನಕಪುರ ತಾಲ್ಲೂಕಿನಲ್ಲಿ ಈಗಾಗಲೇ ರಾಜ್ಯ ಸರ್ಕಾರ ಸಾವಿರಾರು ಎಕರೆ ರೈತರ ಭೂಮಿಯನ್ನು ವಶಪಡಿಸಿಕೊಂಡು ಕೈಗಾರಿಕಾಭಿವೃದ್ಧಿ ಪ್ರದೇಶವನ್ನಾಗಿ ಸ್ಥಾಪಿಸಿದೆ. ಜಿಲ್ಲೆಯು ಬೆಂಗಳೂರು ಮಹಾನಗರಕ್ಕೆ ಹೊಂದಿ ಕೊಂಡಂತೆ ಇದ್ದು, ಇಲ್ಲಿ ಹಲವಾರು ಉದ್ಯಮಿಗಳು ಖಾಸಗಿಯಾಗಿ ಕೈಗಾರಿಕೆಗಳನ್ನು ಸ್ಥಾಪಿಸಿದ್ದಾರೆ.



ಉಳಿದಂತೆ ಇರುವ ಕೃಷಿ ಭೂಮಿಯಲ್ಲಿ ರೈತರು ತಮ್ಮ ಜೀವನ ನಿರ್ವಹಣೆಗೆ ಹೈನುಗಾರಿಕೆ, ರೇಷ್ಮೆ, ತೋಟಗಾರಿಕೆ, ಕೃಷಿ ಅವಲಂಬಿತರಾಗಿದ್ದಾರೆ. ಬಹುಪಾಲು ರೈತರು ಅತೀ ಸಣ್ಣ, ಸಣ್ಣ ಹಿಡುವಳಿದಾರರಾಗಿದ್ದು, ಬಡ ಕುಟುಂಬಕ್ಕೆ ಸೇರಿದವರಾಗಿದ್ದಾರೆ. ರೈತರು ತಮ್ಮ ಜಮೀನಿನಲ್ಲಿ, ಸುತ್ತ ಮುತ್ತ ಲಕ್ಷಾಂತರ ಮರಗಿಡಗಳನ್ನು ಬೆಳೆಸಿ ದ್ದಾರೆ. ಇಂತಹ ಪ್ರದೇಶವನ್ನು ಟೌನ್‌ಶಿಪ್ ಯೋಜನೆಗೆ ಸ್ವಾಧೀನ ಪಡಿಸಿಕೊಂಡರೆ ಪರಿಸರಕ್ಕೆ ಅಪಾರ ಹಾನಿ ಉಂಟಾಗುತ್ತದೆ.

ಬಡ ರೈತರ ಹಿತ ದೃಷ್ಟಿಯಿಂದ ರಾಜ್ಯ ಸರ್ಕಾರ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸುತ್ತಿರುವ ಟೌನ್‌ಶಿಪ್ ಯೋಜನೆಗೆ ರೈತರ ಭೂಮಿ ಸ್ವಾಧೀನಪಡಿಸಿಕೊಳ್ಳುತ್ತಿರುವ ಪ್ರಕ್ರಿಯೆಯನ್ನು ಕೈಬಿಡಬೇಕೆಂದು ಈ ಮೂಲಕ ಒತ್ತಾಯಿಸುತ್ತೇನೆ ಎಂದು ಹೆಚ್.ಡಿ.ದೇವೇಗೌಡ ಅವರು ಪತ್ರದ ಮೂಲಕ ವಿರೋಧ ವ್ಯಕ್ತಪಡಿಸಿದ್ದಾರೆ.

**ನಿರುದ್ಯೋಗಿಗಳಾಗಿ ಬೀದಿಪಾಲಾಗುತ್ತಾರೆ**

**ಸಾವಿರಾರು ಕುಟುಂಬಗಳ ಜೀವನ ನಿರ್ವ ಹಣೆಗೆ ಧಕ್ಕೆ ಉಂಟಾಗಿ, ರೈತ ಕುಟುಂಬದ ಯುವಕರು ನಿರುದ್ಯೋಗಿಗಳಾಗಿ ಬೀದಿಪಾಲಾಗುತ್ತಾರೆ. ಈ ಬಡ ರೈತರ ಜೀವನೋಪಾಯಕ್ಕೆ ಕೃಷಿ ಭೂಮಿಯೇ ಆಧಾರವಾಗಿದೆ. ಇದಲ್ಲದೇ ಕರ್ನಾಟಕ ಹೌಸಿಂಗ್ ಬೋರ್ಡ್, ಇತರೆ ಸರ್ಕಾರಿ ಪ್ರಾಧಿಕಾರಗಳು ಬಿಡದಿಯ ಸುತ್ತಮುತ್ತಲೂ ಹಲವಾರು ವಸತಿ ಯೋಜನೆಗಳನ್ನು ರೂಪಿಸಿ, ರೈತರ ಜಮೀನನ್ನು ಸ್ವಾಧೀನಪಡಿಸಿಕೊಂಡು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿವೆ.**

## ಸ್ವಂತ ಹಣದಲ್ಲೇ ಎಲ್ಲಾರನ್ನು ಕರೆತರುತ್ತಿರೋ ಸಂತೋಷ್ ಲಾಡ್

• **ಉದಯವಾಹಿನಿ, ತುಮಕೂರು**

ಜಮ್ಮು ಕಾಶ್ಮೀರದ ಪಹಲ್ಗಾಮ್‌ನ ಭಯೋತ್ಪಾದಕರ ದಾಳಿಯಲ್ಲಿ ಬಲಿಯಾದ ಮೂವರು ಕನ್ನಡಿಗರ ಹೊರತಾಗಿ 180 ಕನ್ನಡಿಗರು ಸುರಕ್ಷಿತರಾಗಿದ್ದಾರೆ ಎಂದು ರಾಜ್ಯ ಪ್ರವಾಸೋದ್ಯಮ ಇಲಾಖೆ ಮಾಹಿತಿ ನೀಡಿದೆ. ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದ 180 ಮಂದಿ ಕನ್ನಡಿಗರು ಸುರಕ್ಷಿತವಾಗಿದ್ದು, ಶ್ರೀನಗರದ ವಿವಿಧ ಹೋಟೆಲ್‌ಗಳಲ್ಲಿ ತಂಗಿದ್ದಾರೆ. ಎಲ್ಲರನ್ನೂ ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರಲು ವಿಮಾನ ವ್ಯವಸ್ಥೆಗೆ ಸೂಚನೆ ನೀಡಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದು, ಕಾರ್ಮಿಕ ಸಚಿವ ಸಂತೋಷ್ ಲಾಡ್ ಮೇಲು ಸ್ತುವಾರಿ ಮೂಲಕ ರಾಜ್ಯ ಸರ್ಕಾರ ಕನ್ನಡಿಗರ ರಕ್ಷಣೆ ಮಾಡುತ್ತಿದೆ. ಶ್ರೀನಗರದಿಂದ 180 ಜನರ ತಂಡ ಬೆಂಗಳೂರಿಗೆ ಪ್ರಯಾಣ ಬೆಳೆಸಿದ್ದು,

**ಕಾಶ್ಮೀರಕ್ಕೆ ತೆರಳಿದ್ದ 180 ಕನ್ನಡಿಗರು ಸೇಫ್**


ಉದಯವಾಹಿನಿ ಚಿತ್ರ

ಬೆಳಿಗ್ಗೆ 7.30ಕ್ಕೆ ಶ್ರೀನಗರದಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ. ಸ್ವಂತ ದುಡ್ಡಿನಲ್ಲೇ 180 ಜನರನ್ನ ಕರೆತರುತ್ತಿದ್ದು, ಸ್ವತಃ ಎಲ್ಲರಿಗೂ ಕರೆ ಮಾಡಿ ಬೆಂಗಳೂರಿಗೆ ತಲುಪಿಸುವುದಾಗಿ ಮಾಹಿತಿ ನೀಡಿದ್ದಾರೆ. ಸದ್ಯ ಶ್ರೀನಗರದಲ್ಲಿರುವ ಕನ್ನಡಿಗರು ನಿಟ್ಟುಸಿರು ಬಿಟ್ಟಿದ್ದಾರೆ.

ಇನ್ನೂ, ಘಟನೆ ನಡೆದ ಸ್ಥಳದಲ್ಲೇ ಇದ್ದ ಯಾದಗಿರಿ ಜಿಲ್ಲೆಯ ಸುರಪುರ ಪಟ್ಟಣದ ಪ್ರಭಾಕರ್ ಕುಟುಂಬ ಕೇವಲ 100 ಮೀಟರ್ ದೂರದಲ್ಲಿ ಪಾರಾದೆವು ಎಂದಿದ್ದಾರೆ. ಹಾನಗಲ್ ಪಟ್ಟಣದ 32 ಜನ, ಕೊಪ್ಪಳದ 4 ಕುಟುಂಬಗಳ 20 ಜನರು ಸೇಫ್ ಆಗಿದ್ದು, ಶ್ರೀನಗರದ ಹೋಟೆಲ್‌ನಲ್ಲಿ ತಂಗಿದ್ದಾರೆ. ಉಡುಪಿಯ ಬ್ರಹ್ಮಾವರ, ಕುಂದಾಪುರದ 20 ಮಂದಿಯ ತಂಡ ಸುರಕ್ಷಿತವಾಗಿದೆ. ಚಿಕ್ಕಮಗಳೂರು ನಗರದ ರಾಮೇಶ್ವರ ನಗರದ ಚಂದ್ರಶೇಖರ್ ಫ್ಯಾಮಿಲಿಯ ಐವರು, ವಿಜಯನಗರ ಜಿಲ್ಲೆಯ ಹರಪನಹಳ್ಳಿ ಪಟ್ಟಣದ ನಿವಾಸಿಗಳಾದ ನಾಲ್ವರು ನಿವಾಸಿಗಳು ಸೇಫ್ ಆಗಿದ್ದಾರೆ. ತುಮಕೂರಿನ ರೂಪೇಶ್ ಕೃಷ್ಣಯ್ಯ ಕುಟುಂಬ ಅರ್ಧಗಂಟೆ ಅಂತರದಲ್ಲಿ ಹಾಗೂ ಕಲಬುರಗಿಯ ಬ್ರಂಗಿಮಠ್ ಕುಟುಂಬದ 9 ಜನರು 1 ಗಂಟೆ ಮುಂಚಿತವಾಗಿ ಸ್ಥಳದಿಂದ ವಾಪಸ್ ಆಗಿದ್ದರಿಂದ ಬಚಾವ್ ಆಗಿದ್ದಾರೆ. ಹಾವೇರಿಯ ವಿರೇಶ್ ದಂಪತಿ, ಶಿಗ್ಗಾಂವಿಯ ನಾಗರಾಜ್ ದಂಪತಿ ಸುರಕ್ಷಿತರಾಗಿದ್ದಾರೆ. ಬಾಗಲಕೋಟೆಯ ಮಾರವಾಡಿ ಗಲ್ಲಿಯ 13 ಜನರು ಕಾಶ್ಮೀರ ಪ್ರವಾಸ ಕೈಗೊಂಡಿದ್ದರು. ಇನ್ನೇನು ಪಹಲ್ಗಾಮ್‌ಗೆ ತೆರಳಬೇಕಿತ್ತು. ಅಷ್ಟರಲ್ಲಿ ಮನೆಯವರು ಕರೆ ಮಾಡಿ ಘಟನೆ ಬಗ್ಗೆ ಹೇಳಿದ್ದಾರೆ. ತಕ್ಷಣವೇ ಎಲ್ಲರೂ ಜಮ್ಮು ತಲುಪಿದ್ದಾರೆ.

## ಕಾಶ್ಮೀರದ ಉಗ್ರರ ದಾಳಿ ಹೊಣೆಯನ್ನ ಕೇಂದ್ರ ಸರ್ಕಾರವೇ ಹೊರಬೇಕು: ಹೆಚ್.ಸಿ ಬಾಲಕೃಷ್ಣ

• **ಉದಯವಾಹಿನಿ, ರಾಮನಗರ**

ಜಮ್ಮು-ಕಾಶ್ಮೀರ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಹೊಣೆಯನ್ನು ಕೇಂದ್ರ ಸರ್ಕಾರವೇ ಹೊರಬೇಕು ಎಂದು ಮಾಗಡಿ ಶಾಸಕ ಹೆಚ್.ಸಿ ಬಾಲಕಷ್ಣ ಹೇಳಿದ್ದಾರೆ. ಮಾಗಡಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಸಹಮತ ವ್ಯಕ್ತಪಡಿಸುತ್ತೇನೆ. ಇದರಲ್ಲಿ ರಾಜಕೀಯ ಮಾಡುವ ಅವಶ್ಯಕತೆ ಇಲ್ಲ. ಯಾವ ಸರ್ಕಾರ ಅಧಿಕಾರದಲ್ಲಿ ಇರುತ್ತೋ ಅದೇ ಸರ್ಕಾರ ಹೊಣೆ ಹೊರಬೇಕು. ಕೇಂದ್ರ ಸರ್ಕಾರದ ಗುಪ್ತಚರ ಇಲಾಖೆ ಫೆಲ್ಯೂರ್ ಆಗಿದೆ. ಹಾಗಾಗಿ ಅಮಾ ಯಕರು ಬಲಿಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ಕಾಶ್ಮೀರದಲ್ಲಿ ಪ್ರವಾಸಿಗರಿಗೆ ರಕ್ಷಣೆ ನೀಡಬೇಕಿತ್ತು. ಕೇಂದ್ರದಲ್ಲಿ ಅಧಿಕಾರ ನಡೆಸುವವರೇ ಇದಕ್ಕೆ ಜವಾಬ್ದಾರಿ. ಮೃತರ ಕುಟುಂಬಕ್ಕೆ ಇಡೀ ರಾಜ್ಯ ಸರ್ಕಾರ ಸಾಂತ್ವನ ಹೇಳಿದೆ. ಸಿಎಂ ಮೃತರ ಕುಟುಂಬಕ್ಕೆ 10 ಲಕ್ಷ ರೂ. ಪರಿಹಾರ ನೀಡಿದ್ದಾರೆ. ಸಂತೋಷ್ ಲಾಡ್ ಕಾಶ್ಮೀರದಲ್ಲಿ


ಉದಯವಾಹಿನಿ ಚಿತ್ರ

ಸಿಲುಕಿರುವ ಕನ್ನಡಿಗರನ್ನ ರಕ್ಷಣೆ ಮಾಡಿದ್ದಾರೆ. ನಾವು ನಮ್ಮ ಕೆಲಸ ಮಾಡಿದ್ದೇವೆ. ಯಾರು ಅಮಾಯಕರ ರಕ್ಷಣೆ ಮಾಡಬೇಕಿತ್ತೋ ಅವರು ಮಾಡಿಲ್ಲ ಎಂಬುದು ದೂರು ಎಂದು ಅಸಮಾಧಾನ ಹೊರಹಾಕಿದ್ದಾರೆ.

ಕೇಂದ್ರ ಗೃಹ ಮಂತ್ರಿಗಳು ಈಗ ಆ ಜಾಗಕ್ಕೆ ಹೋದ್ರೆ ಸತ್ತವರು ಬದುಕಿ ಬರೋಲ್ಲ. ಘಟನೆ ನಡೆಯದ ಹಾಗೆ ತಡೆಯುವುದು ಕೇಂದ್ರ ಸರ್ಕಾರದ ಜವಾಬ್ದಾರಿ. ಮುಗಿದ ಮೇಲೆ ಸಾಂತ್ವನ ಎಲ್ಲರೂ ಹೇಳುತ್ತಾರೆ. ಘಟನೆ ನಡೆಯುವ ಮುನ್ನವೇ ಮಿಲಿಟರಿ ನಿಯೋಜನೆ ಮಾಡಬೇಕಿತ್ತು. ಸೂಕ್ಷ್ಮ ಪ್ರದೇಶದಲ್ಲಿ ಹೇಗೆ ಕಾರ್ಯ ನಿರ್ವಹಣೆಯ ಮಾಡಬೇಕೆಂದು ಕೇಂದ್ರಕ್ಕೆ ಗೊತ್ತಿರಲಿಲ್ವಾ? ಎಂದು ಕೇಂದ್ರ ಸರ್ಕಾರಕ್ಕೆ ತರಾಟೆ ತೆಗೆದುಕೊಂಡಿದ್ದಾರೆ.

## ಮನೆಬಾಗಿಲಿಗೆ ಸರ್ಕಾರಿ ಸೇವೆ: ಶಾಸಕ ಎಸ್.ಎನ್. ನಾರಾಯಣಸ್ವಾಮಿ

• **ಉದಯವಾಹಿನಿ, ಬಂಗಾರಪೇಟೆ**

ವಿವಿಧ ಯೋಜನೆಗಳ ಮೂಲಕ ಸರ್ಕಾರಿ ಸೇವೆಗಳನ್ನು ಗ್ರಾಮೀಣ ಭಾಗದ ಜನರ ಮನೆಬಾಗಿಲಿಗೆ ತಲುಪಿಸುವಲ್ಲಿ ಕಾಂಗ್ರೆಸ್ ಸರ್ಕಾರ ಯಶಸ್ವಿಯಾಗಿದೆ ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ಹೇಳಿದರು. ತಾಲ್ಲೂಕಿನ ಬೂದಿಕೋಟೆ ಗ್ರಾಮದಲ್ಲಿ ನಡೆದ ಗ್ರಾಮ ಸಭೆಯಲ್ಲಿ ಗುರುವಾರ ಮಾತನಾಡಿದರು.

ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆಯಡಿ ಕೂಸಿನ ಮನೆ, ಅರಿವು ಕೇಂದ್ರ, ಸಮುದಾಯ ಶೌಚಾಲಯಗಳ ನಿರ್ಮಾಣದಂತಹ ಕಾರ್ಯಗಳು ಹಂತ ಹಂತವಾಗಿ ನಡೆಯುತ್ತಿವೆ. ನರೇಗಾ ಕೂಲಿಕಾರ್ಮಿಕರ ದೈನಂದಿನ ಕೂಲಿಯ ಮೊತ್ತವನ್ನು ಹೆಚ್ಚಿಸಲಾಗಿದೆ. ಬಡವರಿಗೆ ನೂರು ದಿನಗಳ ಕೂಲಿಯನ್ನು ನೀಡುವ ಮೂಲಕ ಆರ್ಥಿಕ ಸಬಲೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಎಲ್ಲಾ ಗ್ರಾಮಗಳಲ್ಲಿ ಅಗತ್ಯವಿರುವ ಮೂಲ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆಗಳ ನಿರ್ಮಾಣ, ಸಿಸಿ ರಸ್ತೆ, ಬೀದಿ ದೀಪಗಳ ಅಳವಡಿಕೆ, ಸ್ವಚ್ಛತೆ ಮತ್ತು ನೈರ್ಮಲ್ಯ , ಇತರೆ ಕಾಮಗಾರಿಗಳನ್ನು ಕೈಗೊಳ್ಳಲು



ಉದಯವಾಹಿನಿ ಚಿತ್ರ

ಕ್ರಿಯಾಯೋಜನೆ ರೂಪಿಸಲು ಈ ಸಭೆಯನ್ನು ಆಯೋಜಿಸಲಾದೆ. ಈ ಭಾಗದ ರೈತರ ಹಿತದೃಷ್ಟಿಯಿಂದ ಮಾರ್ಕಾಂಡೇಯ ಜಲಾಶಯದ ನಾಲೆಗಳನ್ನು ಅಭಿವೃದ್ಧಿಪಡಿಸಲು 2 ಕೋಟಿ ಅನುದಾನವನ್ನು ಮಂಜೂರು ಮಾಡಲಾಗಿದ್ದು, ಶೀಘ್ರದಲ್ಲೇ ಕಾಮಗಾರಿ ಪ್ರಾರಂಭಿಸುವುದಾಗಿ ತಿಳಿಸಿದರು.

**ಗ್ರಾಮೀಣ ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲೇ ಪರಿಹಾರ ಒದಗಿಸಲು ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಗ್ರಾಮಗಳಿಗೆ ಕರೆ ತರಲಾಗಿದೆ**

**- ಎಸ್.ಎನ್. ನಾರಾಯಣಸ್ವಾಮಿ**
**ಶಾಸಕ**

## ಐಶ್ವರ್ಯಗೌಡ ಮನೆಯ ಮೇಲೆ ಇ.ಡಿ ದಾಳಿ

• **ಉದಯವಾಹಿನಿ, ಮಳವಳ್ಳಿ**

ತಾಲ್ಲೂಕಿನ ಕಿರುಗಾವಲು ಗ್ರಾಮದಲ್ಲಿ ಗುರುವಾರ, ಚಿನ್ನ ವಂಚನೆ ಪ್ರಕರಣದ ಆರೋಪಿ ಐಶ್ವರ್ಯಗೌಡ ಅವರ ಮನೆಯ ಮೇಲೆ ಇಡಿ (ಜಾರಿ ನಿರ್ದೇಶನಾಲಯ) ಅಧಿಕಾರಿಗಳು ದಾಳಿ ನಡೆಸಿದರು. ಇಬ್ಬರು ಸಿಆರ್‌ಪಿಎಫ್ ಸಿಬ್ಬಂದಿಯ ಭದ್ರತೆಯೊಂದಿಗೆ, ಬೆಳಿಗ್ಗೆ 9ರ ವೇಳೆಗೆ ಬಂದ ಅಧಿಕಾರಿಗಳು ಸಂಜೆಯವರೆಗೂ ದಾಖಲೆಗಳ ಪರಿಶೀಲನೆಯಲ್ಲಿ ತೊಡಗಿದ್ದರು. ಕೆಲ ದಾಖಲೆಗಳ ಸಂಬಂಧ ಅವರ ತಾಯಿ ಮತ್ತು ಸಹೋದರನ ವಿಚಾರಣೆ ನಡೆಸಿದರು. ಐಶ್ವರ್ಯ ಗೌಡ ವಿರುದ್ಧ ಬೆಂಗಳೂರಿನಲ್ಲಿ ಸುಮಾರು 9 ಕೋಟಿ ಮೌಲ್ಯದ ಚಿನ್ನ ವಂಚನೆ ಮಾಡಿದ


ಉದಯವಾಹಿನಿ ಚಿತ್ರ

ಆರೋಪವಿದೆ. ಮಂಡ್ಯದ ಪೊಲೀಸ್ ಠಾಣೆಯಲ್ಲೂ ವಂಚನೆ ಪ್ರಕರಣಗಳ ಸಂಬಂಧ ದೂರು ದಾಖಲಾಗಿದೆ.

## ಕೇಂದ್ರ ಸರ್ಕಾರ ಉಗ್ರರ ಹುಟ್ಟಡಗಿಸಲಿ: ಮಹದೇವಯ್ಯ

• **ಉದಯವಾಹಿನಿ, ನಂಜನಗೂಡು**

ಕಾಶ್ಮೀರದ ಪಹಲ್ಲಾವ್‌ನಲ್ಲಿ ಭಯೋತ್ಪಾದಕರು ಹಿಂದೂಗಳನ್ನು ಗುಂಡಿಟ್ಟು ಕೊಂದಿರುವ ಘಟನೆ ಅಮಾನವೀಯವಾದುದು ಎಂದು ಬಿಜೆಪಿ ಮುಖಂಡ ಎಸ್.ಮಹದೇವಯ್ಯ ಹೇಳಿದರು. ನಗರದ ಚಿಂತಾಮಣಿ ಗಣಪತಿ ದೇವಾಲಯದಿಂದ ಹುಲ್ಲಹಳ್ಳಿ ವೃತ್ತದವರೆಗೆ ಬುಧವಾರ ರಾತ್ರಿ ಮೊಂಬತ್ತಿ ಹಿಡಿದು ಮೆರವಣಿಗೆ ನಡೆಸಿ ಪ್ರತಿಭಟಿಸಿದ ನಂತರ ಮಾತನಾಡಿದರು. ಉಗ್ರಗಾಮಿಗಳು ಪ್ರವಾಸಿಗಳ ಧರ್ಮ ಕೇಳಿ, ದಾಖಲೆ ನೋಡಿ ಹಿಂದೂ ಎಂದು ಖಾತ್ರಿ ಪಡಿಸಿಕೊಂಡು ಕುಟುಂಬದವರ ಕಣ್ಣೆದುರಿಗೆ


ಉದಯವಾಹಿನಿ ಚಿತ್ರ

ತಲೆಗೆ ಗುಂಡಿಟ್ಟು ಕೊಂದಿದ್ದಾರೆ.

ನಿಶಸ್ತ್ರರಾಗಿದ್ದ ಪ್ರವಾಸಿಗಳ ಮೇಲೆ ದಾಳಿನಡೆಸಿ ಹೇಡಿತನ ಪ್ರದರ್ಶಿಸಿದ್ದಾರೆ, ಕೇವಲ ಹಿಂದೂಗಳನ್ನು ಗುರಿಯಾಗಿಸಿ ದೇಶದಲ್ಲಿ ನಡೆಯುತ್ತಿರುವ ಹಿಂಸಾಚಾರ ಕೊನೆಗೊಳ್ಳಬೇಕು, ನೇರವಾಗಿ ನಮ್ಮೊಂದಿಗೆ ಯುದ್ಧ ಮಾಡಲು ಸಾಧ್ಯವಿಲ್ಲದ ಹೇಡಿ ಪಾಕಿಸ್ತಾನ ಇಂತಹ ಕುಕೃತ್ಯದ ಹಿಂದಿದೆ. ಕೇಂದ್ರ ಸರ್ಕಾರ ಉಗ್ರಗಾಮಿಗಳ ಹುಟ್ಟಡಗಿಸಬೇಕು ಎಂದು ಹೇಳಿದರು.

ಮುಖಂಡ ಚಿಕ್ಕರಂಗನಾಯ್ಕ ಮಾತನಾಡಿ, ಪೈಶಾಚಿಕ ಕೃತ್ಯ ನಡೆಸಿದ ಉಗ್ರಗಾಮಿಗಳ ವಿರುದ್ಧ ಕೇಂದ್ರ ಸರ್ಕಾರ ಉಗ್ರ ಕ್ರಮಕೈಗೊಳ್ಳಬೇಕು, ನಮ್ಮ ಸೇನೆ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಈ ಸೇಡನ್ನು ತೀರಿಸುತ್ತಾರೆ, ಉಗ್ರಗಾಮಿಗಳನ್ನು ಸಲಹುತ್ತಿರುವ ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ಸೈಟ್ ಎಂಜಿನಿಯರ್ ನೇಮಕಾತಿಯಲ್ಲಿ ಅಕ್ರಮ

### ನಿಗದಿತ ವಿದ್ಯಾರ್ಹತೆ ಇಲ್ಲದಿದ್ದರೂ ನೇಮಕ: ಮೂವರನ್ನು ಹುದ್ದೆಯಿಂದ ಕೈಬಿಡಲು ತನಿಖಾ ತಂಡ ಶಿಫಾರಸು

• **ಉದಯವಾಹಿನಿ, ಮಂಡ್ಯ**

ಜಿಲ್ಲಾ ನಿರ್ಮಿತಿ ಕೇಂದ್ರದ ಸೈಟ್ ಎಂಜಿನಿಯರ್ ಹುದ್ದೆಗೆ ನಿಗದಿತ ವಿದ್ಯಾರ್ಹತೆ ಹೊಂದಿಲ್ಲದಿದ್ದರೂ ಮೂವರನ್ನು ಅಕ್ರಮವಾಗಿ ನೇಮಕಾತಿ ಮಾಡಿಕೊಂಡಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ಮೂವರು ಸೈಟ್ ಎಂಜಿನಿಯರ್‌ಗಳು ನಕಲಿ ಅಂಕಪಟ್ಟಿ ದಾಖಲೆಗಳನ್ನು ನೀಡಿ, ಕೆಲಸಕ್ಕೆ ಸೇರಿರುತ್ತಾರೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಿ, ವಂಚನೆ ಮಾಡಿರುವ ನೌಕರರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಳ್ಳಿ ಎಂದು ಮಂಡ್ಯದ ಸಾಮಾಜಿಕ ಹೋರಾಟಗಾರ ಕೆ.ಆರ್. ರವೀಂದ್ರ ಅವರು ಜಿಲ್ಲಾಧಿಕಾರಿಗೆ ದೂರು ಸಲ್ಲಿಸಿದ್ದರು.



**ತನಿಖಾ ಸಮಿತಿ ರಚನೆ:** ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ ನೇತೃತ್ವದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಕಾರ್ಯಪಾಲಕ ಎಂಜಿನಿಯರ್ ಪ್ರತಾಪ್, ಸಹಾಯಕ ಕಾರ್ಯಪಾಲಕ ಎಂಜಿನಿಯರ್ ರಾಘವೇಂದ್ರ ಈ ಮೂವರನ್ನು ಒಳಗೊಂಡ ಸಮಿತಿಯನ್ನು ರಚಿಸಿ, ತನಿಖೆ ನಡೆಸುವಂತೆ ಜಿಲ್ಲಾಧಿಕಾರಿ ಕುಮಾರ ಅವರು ಮಾರ್ಚ್ 7ರಂದು ಆದೇಶಿಸಿದ್ದರು. ಸೈಟ್ ಎಂಜಿನಿಯರ್‌ಗಳಾದ ಬಿ.ಎಲ್. ವೇಣು ಗೋಪಾಲ್, ಪ್ರಶಾಂತ್, ಶ್ರೀಧರ್ ಈ ಮೂವರ ವಿರುದ್ಧ ಆರೋಪ ಕೇಳಿಬಂದಿತ್ತು. ಈ ಮೂವರು ಆಪಾದಿತ ನೌಕರರ ನೇಮಕಾತಿ ಅಧಿಸೂಚನೆ, ಅಧಿಸೂಚನೆಗೆ ಪೂರಕವಾಗಿ ನಿಗದಿಪಡಿಸಿರುವ ಮಾನದಂಡಗಳು, ನಿಗದಿತ ಮಾನದಂಡಗಳಿಗೆ ಪೂರಕವಾಗಿ ಸಲ್ಲಿಸಿರುವ ದಾಖಲೆಗಳು ಎಲ್ಲವನ್ನೂ ತನಿಖಾ ಸಮಿತಿಯು ಸಮಗ್ರವಾಗಿ ಪರಿಶೀಲಿಸಿದೆ. ನಿಗದಿತ ವಿದ್ಯಾರ್ಹತೆ ಇಲ್ಲದಿದ್ದರೂ ನೇಮಕಾತಿ ಮಾಡಿಕೊಂಡಿರುವುದು ನಿಯಮಬಾಹಿರವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಿದೆ.

**ಮೊದಲು ಉದ್ಯೋಗ, ನಂತರ ವಿದ್ಯಾರ್ಹತೆ:** ಪ್ರಶಾಂತ್ ಕೆ. ಅವರು 2017ರಿಂದ ಸೈಟ್ ಎಂಜಿನಿಯರ್ ಆಗಿ ನೇಮಕಗೊಂಡಿದ್ದು, ಕಾರ್ನಿಕ್ ಸಂಸ್ಥೆಗೆ ಸಲ್ಲಿಸಿರುವ ಮಾಹಿತಿಯಲ್ಲಿ ಡಿಪ್ಲೊಮಾ ಇನ್ ಸಿವಿಲ್' ಎಂದು ನಮೂದಾಗಿದೆ. ವಾಸ್ತವವಾಗಿ 2020ರಲ್ಲಿ ಡಿಪ್ಲೊಮಾ



ಉದಯವಾಹಿನಿ ಚಿತ್ರ

ವಿದ್ಯಾರ್ಹತೆ ಪೂರ್ಣಗೊಳಿಸಿದ್ದು, ಪ್ರಮಾಣಪತ್ರವನ್ನು 2023ರಲ್ಲಿ ಪಡೆದಿದ್ದಾರೆ. ಶ್ರೀಧರ್ ಕೆ.ಪಿ. ಅವರು 2013ರಿಂದ ಸೈಟ್ ಎಂಜಿನಿಯರ್ ಆಗಿ ಕರ್ತವ್ಯ ನಿರ್ವಹಿಸಿದ್ದಾರೆ. ಆದರೆ, ಇವರು ಡಿಪ್ಲೊಮಾ ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರುವುದು 2023 ರಲ್ಲಿ. ಅಂದರೆ, ಇವರು ಹುದ್ದೆಯ ನಿರ್ವಹಣೆಗೆ ಅಗತ್ಯವಿರುವ ಕನಿಷ್ಠ ವಿದ್ಯಾರ್ಹತೆ ಹೊಂದದೇ ನಿರ್ಮಿತಿ ಕೇಂದ್ರದಲ್ಲಿ ನಿಯಮಬಾಹಿರವಾಗಿ ಸುಮಾರು 10 ವರ್ಷ ಕರ್ತವ್ಯ ನಿರ್ವಹಿಸಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.

**ನಿಗದಿತ ವಿದ್ಯಾರ್ಹತೆ ಇಲ್ಲದಿದ್ದರೂ ನೇಮಕಾತಿ ಮಾಡಿಕೊಂಡಿರುವುದು ನಿಯಮಬಾಹಿರ. ಆದ್ದರಿಂದ ಈ ಮೂವರನ್ನು ಸೈಟ್ ಎಂಜಿನಿಯರ್ ಹುದ್ದೆಯಿಂದ ಕೈಬಿಡುವ ಬಗ್ಗೆ ಕ್ರಮವಹಿಸಬಹುದು**

**- ಎಡಿಸಿ ನೇತೃತ್ವದ ತನಿಖಾ ಸಮಿತಿ**

2023ರ ಜುಲೈನಲ್ಲಿ ಕೆಲಸ ಬಿಟ್ಟಿದ್ದಾರೆ.

**ದಕ್ಷ ವಿವಿಗೆ ಮಾನ್ಯತೆ ಇಲ್ಲ!** ಬಿ.ಎಲ್. ವೇಣುಗೋಪಾಲ್ ಅವರು 2023ರಿಂದ ಸೈಟ್ ಎಂಜಿನಿಯರ್ ಆಗಿ ನೇಮಕಗೊಂಡಿದ್ದು ಕಾರ್ನಿಕ್ ಸಂಸ್ಥೆಗೆ ಸಲ್ಲಿಸಿರುವ ಮಾಹಿತಿಯಲ್ಲಿ 'ಡಿಪ್ಲೊಮಾ ಅಂಡ್ ಬಿ.ಟೆಕ್ ಇನ್ ಸಿವಿಲ್' ಎಂದು ನಮೂದಾಗಿದೆ. ಈ ಪ್ರಮಾಣಪತ್ರದ ನೈಜತೆ ಪರಿಶೀಲಿಸಲು 2023ರಲ್ಲಿ ಆಲ್ ಇಂಡಿಯಾ ಕೌನ್ಸಿಲ್ ಫಾರ್ ಟೆಕ್ನಿಕಲ್ ಎಜುಕೇಷನ್‌ಗೆ ಪತ್ರ ಬರೆಯಲಾಗಿತ್ತು. 2024ರ ಜನವರಿಯಲ್ಲಿ ಯುಜಿಸಿ ಅಧೀನ ಕಾರ್ಯದರ್ಶಿ ಜಿಲ್ಲಾ ನಿರ್ಮಿತಿ ಕೇಂದ್ರಕ್ಕೆ ಪತ್ರ ಬರೆದು 'ಯುಜಿಸಿ ಕಾಯ್ದೆ 1956ರ ಸೆಕ್ಷನ್ 2 (ಎಫ್) ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯಗಳ ಯುಜಿಸಿ ಪಟ್ಟಿಯಲ್ಲಿ ದಕ್ಷ ವಿಶ್ವವಿದ್ಯಾಲಯ ವೃತ್ತಿಪರ ಮತ್ತು ಜೀವನ ಕೌಶಲ ಜಾರ್ಖಂಡ್ ಎಂಬ ಹೆಸರು ಇಲ್ಲ ಮತ್ತು ಯುಜಿಸಿ ನಿರ್ದಿಷ್ಟ ಪದವಿಗಳನ್ನು ನೀಡುವ ಅಧಿಕಾರವೂ ಇಲ್ಲ' ಎಂದು ತಿಳಿಸಿದ್ದಾರೆ.

**ತನಿಖಾ ಸಮಿತಿ ವರದಿ ಸಲ್ಲಿಕೆಯಾಗಿದೆ. ಈ ಬಗ್ಗೆ ಸಾಮಾನ್ಯ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿದೆ. ಸಭೆಯ ಅನುಮೋದನೆ ಪಡೆದು ಮುಂದಿನ ಕ್ರಮ ಜರುಗಿಸಲಾಗುವುದು**

**- ಕುಮಾರ ಜಿಲ್ಲಾಧಿಕಾರಿ ಮತ್ತು ಅಧ್ಯಕ್ಷರು ಜಿಲ್ಲಾ ನಿರ್ಮಿತಿ ಕೇಂದ್ರ**

## ಮಿನಿ ನ್ಯೂಸ್

### ಸಿನಿಮಾಗೆ ರಾಜ್ ಕುಮಾರ್ ಮಾದರಿ ವ್ಯಕ್ತಿತ್ವ: ಸಾಹಿತಿ ಕೂಗಿ ಗಿರಿಯಪ್ಪ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕನಕಪುರ**

ಡಾ.ರಾಜಕುಮಾರ್ ಅವರು ಮುತ್ತುರಾಜನಾಗಿ ಚಿತ್ರರಂಗ ಪ್ರವೇಶಿಸಿ ಇಡೀ ಭಾರತೀಯ ಚಿತ್ರರಂಗದಲ್ಲಿ ರಾಜಕುಮಾರನಾಗಿ, ಕನ್ನಡ ಚಲನಚಿತ್ರದ ಧ್ರುವತಾರೆಯಾಗಿದ್ದಾರೆ ಎಂದು ಜಿಲ್ಲಾ ಲೇಖಕರ ವೇದಿಕೆ ಅಧ್ಯಕ್ಷ, ಸಾಹಿತಿ ಕೂಗಿ ಗಿರಿಯಪ್ಪ ಅಭಿಪ್ರಾಯಪಟ್ಟರು. ಇಲ್ಲಿನ ರಂಗನಾಥ ಬಡಾವಣೆ ಹೊಂಗಿರಣ ಆವರಣದಲ್ಲಿ ಸ್ವತಂತ್ರ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಗುರುವಾರ ನಡೆದ ಡಾ.ರಾಜ್ ಕುಮಾರ್ ಜಯಂತಿಯಲ್ಲಿ ಮಾತನಾಡಿದರು.

ರಾಜ್ ಕುಮಾರ್ ಅವರು ಪೌರಾಣಿಕ, ಸಾಮಾಜಿಕ, ಸಾಂಸ್ಕೃತಿಕ ಚಿತ್ರಗಳಲ್ಲಿ ಲೀಲಾಜಾಲವಾಗಿ ನಟಿಸಿದ್ದಾರೆ. ಅವರ ಚಿತ್ರಗಳು ಸಾಮಾಜಿಕ ಕಳಕಳಿಯಿಂದ ಕೂಡಿರುತ್ತಿದ್ದವು. ಕೌಟುಂಬಿಕ ಹಿನ್ನೆಲೆಯುಳ್ಳ ಉತ್ತಮ ಸಂದೇಶ ನೀಡುವ ಸಿನಿಮಾಗಳನ್ನು ಕನ್ನಡ ಚಿತ್ರರಂಗಕ್ಕೆ ನೀಡಿ ನಟಸಾರ್ವಭೌಮ ಎನಿಸಿಕೊಂಡಿದ್ದಾರೆ ಎಂದರು.

ಸ್ವತಂತ್ರ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಭಾಸ್ಕರ್ ಮಾತನಾಡಿ, ಅಣ್ಣಾವ್ರು ಮಾಡಿರದ ಪಾತ್ರಗಳಿಲ್ಲ, ಪ್ರತಿ ಪಾತ್ರಕ್ಕೂ ಜೀವ ತುಂಬಿ ನಟಿಸುತ್ತಿದ್ದರು. ಕನ್ನಡ ಚಿತ್ರರಂಗಕ್ಕೆ ಕನ್ನಡ ನಾಡಿಗೆ ನಮ್ಮನ್ನು ಸಮರ್ಪಿಸಿಕೊಂಡಿದ್ದರು' ಎಂದರು. ಅವರು ಸಿನಿಮಾ ರಂಗಕ್ಕೆ ಸೀಮಿತವಾಗದೆ ಕನ್ನಡ ನಾಡು ನುಡಿ ಭಾಷೆ ಪರವಾಗಿ ನಿಂತಿದ್ದರು. ಕನ್ನಡ ಭಾಷೆ, ನೆಲ-ಜಲದ ವಿಚಾರವಾಗಿ ರಸ್ತೆಗಿಳಿದು ಹೋರಾಟ ನಡೆಸಿದ್ದಾರೆ. ಕನ್ನಡ ಚಿತ್ರರಂಗಕ್ಕೆ ಮಾರ್ಗದರ್ಶಕರಾಗಿದ್ದರು ಎಂದು ಸ್ಮರಿಸಿದರು. ಮಾತೃಶ್ರೀ ನಮನ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಚಂದ್ರು ಮಾತನಾಡಿ, ಡಾ.ರಾಜ್ ಕನ್ನಡ ಭಾಷೆ ಮತ್ತು ನಾಡಿನ ಸಾಂಸ್ಕೃತಿಕ ರಾಯಭಾರಿಯಾಗಿದ್ದರು. ಕನ್ನಡ ಚಿತ್ರರಂಗಕ್ಕೆ ರೋಲ್ ಮಾಡಲಾಗಿದ್ದಾರೆ. ಕನ್ನಡ ನಾಡಿನ ಎಲ್ಲರ ಮನಸ್ಸು ಗೆದ್ದಿದ್ದು ಅಭಿಮಾನಿ ದೇವರುಗಳನ್ನು ಸಂಪಾದಿಸಿದ್ದರು. ಇಂದಿಗೂ ಅವರ ಮೇಲಿನ ಅಭಿಮಾನ ಹಾಗೆಯೇ ಉಳಿದಿದೆ ಎಂದರು.

### ಸಕಲೇಶ್ ಗಡಿಪಾರಿಗೆ ಒತ್ತಾಯ

• **ಉದಯವಾಹಿನಿ, ಶಿಡ್ಲಘಟ್ಟ**

ರೈತರ ಮೇಲೆ ಗುಂಡು ಹಾರಿಸಿ ಪ್ರಾಣ ಬೆದರಿಕೆ ಹಾಕಿದ ಉದ್ಯಮಿ ಸಕಲೇಶ್ ಅವರನ್ನು ಗಡಿಪಾರು ಮಾಡಬೇಕೆಂದು ಒತ್ತಾಯಿಸಿ ಹಸಿರು ಸೇನೆ ಹಾಗೂ ರೈತ ಸಂಘದ ಕಾರ್ಯಕರ್ತರು ಶಿಡ್ಲಘಟ್ಟದಲ್ಲಿ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು. ತಾಲ್ಲೂಕು ಕಚೇರಿಗೆ ಆಗಮಿಸಿದ ರೈತರು ಕೆಲ ಕಾಲ ಸಾಂಕೇತಿಕ ಪ್ರತಿಭಟನೆ ನಡೆಸಿದರು. ರೌಡಿಯಂತೆ ವರ್ತಿಸಿ ರೈತರ ಮೇಲೆ ಗುಂಡು ಹಾರಿಸಿ ಪ್ರಾಣ ಬೆದರಿಕೆ ಹಾಕಿದ ಸಕಲೇಶ್ ವಿರುದ್ಧ ಘೋಷಣೆ ಕೂಗಿ ಆತನ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಮಾತನಾಡಿದ ರೈತ ಮುಖಂಡ ಪ್ರತೀಶ್, ಮಂಚೇನಹಳ್ಳಿ ಬಳಿಯ ಕನಗಾನಕೊಪ್ಪ ಬಳಿ ಗಣಿಗಾರಿಕೆ ನಡೆಸಲು ಸರ್ಕಾರವು ಅನುಮತಿ ನೀಡಿದ್ದು, ಅದನ್ನು ಸ್ಥಳೀಯರು ವಿರೋಧಿಸುತ್ತಲೇ ಬಂದಿದ್ದಾರೆ. ಆದರೆ, ಗಣಿಗಾರಿಕೆಗೆ ಅನುಮತಿ ಪಡೆದ ಸಕಲೇಶ್ ಏಕಾಏಕಿ ರಸ್ತೆ ನಿರ್ಮಿಸಲು ಬಂದಿದ್ದು ರೈತರು ವಿರೋಧಿಸಿದ್ದಾರೆ. ಇದರಿಂದ ಕುಪಿತಗೊಂಡ ಸಕಲೇಶ್ ಏಕಾಏಕಿ ತನ್ನ ಬಳಿಯಿದ್ದ ಗನ್‌ನಿಂದ ಅಲ್ಲಿದ್ದ ರೈತರ ಮೇಲೆ ಗುಂಡು ಹಾರಿಸಿದ್ದು ಪ್ರಾಣ ಬೆದರಿಕೆ ಹಾಕಿರುವುದು ಖಂಡನೀಯ ಎಂದರು. ಸಕಲೇಶ್ ಅವರನ್ನು ಜಿಲ್ಲೆಗೆ ಕಾಲಿಡದಂತೆ ಗಡಿಪಾರು ಮಾಡಬೇಕೆಂದು ಒತ್ತಾಯಿಸಿ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು. ತಹಶೀಲ್ದಾರ್ ಬಿ.ಎನ್.ಸ್ವಾಮಿ ಅವರು ಮನವಿ ಪತ್ರ ಸ್ವೀಕರಿಸಿದರು.

### ಈಶಾ ರಸ್ತೆ; ಹಣ ವಸೂಲಿ ಮಾಡುವಂತಿಲ್ಲ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಈಶಾ ಯೋಗ ಕೇಂದ್ರದ ಬಳಿ ರಸ್ತೆಗೆ ಯಾರಾದರೂ ಗೇಟ್‌ಗಳನ್ನು ಅಡ್ಡಹಾಕಿ ಹಣ ವಸೂಲಿ ಮಾಡುತ್ತಿದ್ದರೆ ಅದು ತಪ್ಪು. ಆ ರೀತಿಯಲ್ಲಿ ಮಾಡುವಂತಿಲ್ಲ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದರು. ನಗರದ ಜಿಲ್ಲಾಡಳಿತ ಭವನದ ಮುಂಭಾಗ ರೈತ ಸಂಘದ ಕಾರ್ಯಕರ್ತರ ಪ್ರತಿಭಟನೆಯಲ್ಲಿ ಅಹವಾಲು ಸ್ವೀಕರಿಸಿ ಮಾತನಾಡಿದರು.

ಈ ಹಿಂದೆಯೂ ಬ್ಯಾರಿಕೇಡ್ ಅಳವಡಿಸಿ ಹಣ ವಸೂಲಿ ಮಾಡುತ್ತಿದ್ದರು. ಆಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ, ತಹಶೀಲ್ದಾರ್ ಕಳುಹಿಸಿ ತೆರವುಗೊಳಿಸಿದ್ದೆ. ಈಗ ಮತ್ತೆ ಹಣ ವಸೂಲಿ ಮಾಡುತ್ತಿದ್ದಾರೆ ಎಂದು ನೀವು ತಿಳಿಸಿದ್ದೀರಿ. ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸಿ ಮಾಹಿತಿ ಪಡೆಯುವೆ ಎಂದರು. ರಸ್ತೆಯಲ್ಲಿ ಬ್ಯಾರಿಕೇಡ್‌ಗಳನ್ನು ಅಳವಡಿಸಿ ಹಣ ವಸೂಲಿ ಮಾಡಿದರೆ ಅದು ತಪ್ಪು. ಪಂಚಾಯಿತಿ ಅವರಿಗೂ ಹಣ ವಸೂಲಿ ಮಾಡುವ ಅಧಿಕಾರ ಇಲ್ಲ. ಗೇಟ್‌ಗಳನ್ನು ಅಥವಾ ಬ್ಯಾರಿಕೇಡ್‌ಗಳನ್ನು ಅಳವಡಿಸಿದ್ದರೆ ತೆಗೆಸಲಾಗುವುದು ಎಂದು ಹೇಳಿದರು.

### ಅತ್ಯಾಚಾರಿಗೆ ಜೀವಾವಧಿ ಶಿಕ್ಷೆ

• **ಉದಯವಾಹಿನಿ, ತುಮಕೂರು**

ನಾಲ್ಕನೇ ತರಗತಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿದ್ದ ಅಪರಾಧಿ ಬಸವರಾಜ ಎಂಬಾತನಿಗೆ ಪೋಕ್ಸೆ ನ್ಯಾಯಾಲಯ ಜೀವಾವಧಿ ಶಿಕ್ಷೆ, 1 ಲಕ್ಷ ದಂಡ ವಿಧಿಸಿದೆ. 2022ರ ಮೇ 24ರಂದು ತಿಂಡಿ, ಚಿಕನ್ ಕೊಡಿಸುವುದಾಗಿ ನಂಬಿಸಿ ಬಾಲಕಿಯನ್ನು ನಿರ್ಜನ ಪ್ರದೇಶಕ್ಕೆ ಕರೆದುಕೊಂಡು ಹೋಗಿ ಅತ್ಯಾಚಾರವೆಸಗಿದ್ದ. ಬಾಲಕಿ ಹೆದರಿ ಕೊಂಡು ಯಾರ ಬಳಿಯೂ ವಿಚಾರ ತಿಳಿಸಿರಲಿಲ್ಲ. ಸ್ವಲ್ಪ ದಿನಗಳ ನಂತರ ಬಾಲಕಿ ಆರೋಗ್ಯ ಹದಗೆಟ್ಟಿದೆ. ರಕ್ತ ಪರೀಕ್ಷೆ ಮಾಡಿಸಿದಾಗ ಬಾಲಕಿ ಘಟನೆ ಬಗ್ಗೆ ಪೋಷಕರಿಗೆ ತಿಳಿಸಿದ್ದಾಳೆ. ಮಹಿಳಾ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.




ಎಂ.ಬಿ.ನವೀನ್ ಕುಮಾರ್ ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಪಟ್ಟಿ ಸಲ್ಲಿಸಿದ್ದರು. ವಿಚಾರಣೆ ವೇಳೆ ಬಸವರಾಜ ವಿರುದ್ಧ ಆರೋಪ ಸಾಬೀತಾಗಿದ್ದು, ಶಿಕ್ಷೆ ವಿಧಿಸಲಾಗಿದೆ. ಬಾಲಕಿಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ 8 ಲಕ್ಷ, ದಂಡದ ಹಣ 1 ಲಕ್ಷ ಸೇರಿ ಒಟ್ಟು 9 ಲಕ್ಷ ಪರಿಹಾರ ನೀಡುವಂತೆ ನ್ಯಾಯಾಲಯ ಸೂಚಿಸಿದೆ. ಸದರಿ ಪ್ರಕರಣದಲ್ಲಿ ಬಾಲಕಿ ಪರವಾಗಿ ಕೆ.ಎಸ್.ಆಶಾ ವಾದ ಮಂಡಿಸಿದ್ದರು.

ಅಂತರಾಳದಿಂದ... EDITORIAL

# ನಾಗರಿಕರ ಮೇಲೆ ಕೋಮು ಮನಃಸ್ಥಿತಿಯ ದಾಳಿ ಖಂಡನೀಯ

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಪಟ್ಟಣದ ಸಮೀಪವಿರುವ ಬೈಸರನ್ ಎಂಬ ಪ್ರವಾಸಿ ಸ್ಥಳದಲ್ಲಿ ಭಯೋತ್ಪಾದಕರು ನಡೆಸಿದ ಹೇಯ ಗುಂಡಿನ ದಾಳಿಯಲ್ಲಿ 26 ಮಂದಿ ಮೃತಪಟ್ಟಿದ್ದಾರೆ. ಇತ್ತೀಚಿನ ದಿನಗಳಲ್ಲಿ ನಡೆದ ಅತ್ಯಂತ ಕ್ರೂರವಾದ ದಾಳಿ ಇದಾಗಿದೆ. ಕೋಮುವಾದಿ ಮನಃಸ್ಥಿತಿಯಿಂದ ನಾಗರಿಕರ ಮೇಲೆ ನಡೆಸಿದ ಈ ದಾಳಿ ಖಂಡನೀಯ. ಸಂತ್ರಸ್ತರಲ್ಲಿ ಕರ್ನಾಟಕ ಮತ್ತು ಇತರ ಹಲವು ರಾಜ್ಯಗಳವರು ಇದ್ದಾರೆ. ವಿದೇಶದ ಪ್ರಜೆಗಳಿಬ್ಬರು ಕೂಡ ಮೃತಪಟ್ಟಿದ್ದಾರೆ. ಕಾಶ್ಮೀರದ ಪ್ರವಾಸೋದ್ಯಮವು ಈಚಿನ ಎರಡು ವರ್ಷಗಳಲ್ಲಿ ಚೇತರಿಕೆ ಕಂಡಿತ್ತು. ಅದನ್ನು ಹಾಳುಗೆಡಹುವುದೇ ಈ ದಾಳಿಯ ಮುಖ್ಯ ಉದ್ದೇಶ ಎಂಬುದರಲ್ಲಿ ಸಂದೇಹವೇನೂ ಇಲ್ಲ. ಈ ವರ್ಷದ ಮೊದಲ ತ್ರೈಮಾಸಿಕದಲ್ಲಿ ಸುಮಾರು ಐದು ಲಕ್ಷ ಪ್ರವಾಸಿಗರು ಇಲ್ಲಿಗೆ ಭೇಟಿ ಕೊಟ್ಟಿದ್ದಾರೆ. ಕಳೆದ ವರ್ಷ ಒಂದು ಕೋಟಿ ಪ್ರವಾಸಿಗರು ಬಂದಿದ್ದರು. ಪಾಕಿಸ್ತಾನವನ್ನು ನೆಲೆಯಾಗಿರಿಸಿಕೊಂಡಿರುವ ಲಷ್ಕರ್–ಎ–ತಯ್ಯಬಾ ಉಗ್ರಗಾಮಿ ಸಂಘಟನೆಗೆ ನಿಷ್ಠೆ ಹೊಂದಿರುವ 'ದಿ ರೆಸಿಸ್ಟೆನ್ಸ್ ಫ್ರಂಟ್' (ಟಿಆರ್‌ಎಫ್) ಎಂಬ ಗುಂಪು ಈ ದುಷ್ಕೃತ್ಯದ ಹೊಣೆ ಹೊತ್ತಿದೆ. ಹಾಗಾಗಿ, ದಾಳಿಯ ಹಿಂದೆ ಯಾರಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಅವರು ಭಾರತಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿಯೇ ದಾಳಿ ನಡೆಸಲಾಗಿದೆ. ಭಾರತಕ್ಕೆ ಮುಜುಗರ ಆಗಲಿ ಎಂಬುದು ದಾಳಿಯ ಇನ್ನೊಂದು ಉದ್ದೇಶವಾಗಿರಬಹುದು. ಕಾಶ್ಮೀರದಲ್ಲಿ ಭಯೋತ್ಪಾದನೆ ಇನ್ನೂ ಇದೆ ಎಂಬ ಸಂದೇಶ ಸಾರುವ ಗುರಿಯೂ ಉಗ್ರರಿಗೆ ಇದ್ದಿರಬಹುದು. ಬಲೂಚ್ ಪ್ರತ್ಯೇಕತಾವಾದಿಗಳು ಜಪ್ಪರ್ ಎಕ್ಸ್‌ಪ್ರೆಸ್ ಅನ್ನು ಮಾರ್ಚ್‌ನಲ್ಲಿ ಅಪಹರಿಸಿದ ಕೃತ್ಯದಲ್ಲಿ ಭಾರತದ ಕೈವಾಡವೂ ಇದೆ ಎಂಬ ಭಾವನೆ ಪಾಕಿಸ್ತಾನದ ಸೇನೆಯ ಪ್ರಮುಖರು ಮತ್ತು ಇತರರಲ್ಲಿ ಇದೆ. ಪಹಲ್ಗಾಮ್ ದಾಳಿಯ ಹಿಂದೆ ಪಾಕಿಸ್ತಾನದ ಕೈವಾಡ ಇದೆ ಎಂಬುದು ಸಾಬೀತಾದರೆ ತಕ್ಕ ಪ್ರತಿಕ್ರಿಯೆಯನ್ನು ಭಾರತ ನೀಡಬೇಕಾಗುತ್ತದೆ.

☛ ಉದಯವಾಹಿನಿ ಚಿತ್ರ



> **ಅಲ್ಲೊಂದು-ಇಲ್ಲೊಂದು ಭಯೋತ್ಪಾದನಾ ಕೃತ್ಯಗಳು ನಡೆದಿವೆ ಮತ್ತು ಎನ್‌ಕೌಂಟರ್‌ಗಳು ಆಗಾಗ ನಡೆಯುತ್ತಲೇ ಇವೆ. ಪ್ರತಿಯೊಂದು ಇಂಚು ನೆಲ ಮತ್ತು ಪ್ರತಿಯೊಬ್ಬ ವ್ಯಕ್ತಿಯನ್ನು ಭದ್ರತಾ ಪಡೆಗಳು ರಕ್ಷಿಸಲು ಸಾಧ್ಯವಿಲ್ಲ ಎಂದು ಆಡಳಿತದಲ್ಲಿದ್ದವರು ಈ ಹಿಂದೆ ಹೇಳಿದ್ದಿದೆ. ಹಾಗಿದ್ದರೂ ಪಹಲ್ಗಾಮ್ ಪ್ರಮುಖ ಪ್ರವಾಸಿ ತಾಣವಾಗಿದ್ದು ಇಲ್ಲಿಗೆ ವಿಶೇಷ ಗಮನ ಹರಿಸಬೇಕಿತ್ತು. ಗುಪ್ತಚರ ವ್ಯವಸ್ಥೆಯ ವೈಫಲ್ಯವೂ ಇಲ್ಲಿ ಎದ್ದು ಕಾಣುವಂತಿದೆ.**

ದಾಳಿಯಿಂದಾಗಿ ಇಡೀ ದೇಶ ಆಘಾತಗೊಂಡಿದೆ. ಕೃತ್ಯವನ್ನು ಇಡೀ ದೇಶ ಖಂಡಿಸಿದೆ. ಇಂತಹ ಕೃತ್ಯ ಮರುಕಳಿಸುವುದಿಲ್ಲ. ಎಂಬುದನ್ನು ಸರ್ಕಾರವು ಖಾತರಿ ಪಡಿಸಬೇಕು. ಕಾಶ್ಮೀರದಿಂದ ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗಿದೆ ಎಂದು ಸರ್ಕಾರವು ಈ ಹಿಂದೆ ಹೇಳಿಕೊಂಡಿತ್ತು. ಆದರೆ ಇದು ನಿಜವಲ್ಲ. ಇಂತಹ ಹೀನ ನರಮೇಧ ನಡೆಸಿ ತಮ್ಮ ಆರ್ಥಿಕತೆಯನ್ನು ಹಾಳು ಮಾಡಿದವರ ಮೇಲೆ ಸ್ಥಳೀಯರಿಗೆ ಸಹಾನುಭೂತಿ ಇರಲು ಸಾಧ್ಯವಿಲ್ಲ. ಜಮ್ಮು–ಕಾಶ್ಮೀರದಲ್ಲಿ ಬುಧವಾರ ಬಂದ್ ನಡೆಸಲಾಗಿದೆ. ಸರ್ಕಾರವು ಜನರೊಂದಿಗಿನ ಸಂಬಂಧವನ್ನು ಹೆಚ್ಚು ನಿಕಟಗೊಳಿಸಬೇಕು. ಸಾರ್ವಜನಿಕರ ವಿಶ್ವಾಸವನ್ನು ಗಳಿಸಲು ಹೆಚ್ಚು ಪ್ರಯತ್ನಗಳನ್ನು ಮಾಡಬೇಕು.

ಕೇಂದ್ರಾಡಳಿತ ಪ್ರದೇಶವಾಗಿರುವ ಜಮ್ಮು–ಕಾಶ್ಮೀರಕ್ಕೆ ರಾಜ್ಯದ ಸ್ಥಾನ ನೀಡುವ ಭರವಸೆ ಈಡೇರಿಸುವುದಕ್ಕಾಗಿ ಸರ್ಕಾರ ಈವರೆಗೆ ಏನನ್ನೂ ಮಾಡಿಲ್ಲ. ಇಲ್ಲಿ ಕಳೆದ ವರ್ಷ ವಿಧಾನಸಭಾ ಚುನಾವಣೆ ನಡೆದಿದೆ. ಜನರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನದಲ್ಲಿ ಭಾಗವಹಿಸಿದ್ದರು. ಮತದಾನವು ಶಾಂತಿಯುತವಾಗಿ ನಡೆದಿತ್ತು. ಜನರು ಸರ್ಕಾರವೊಂದನ್ನು ಆಯ್ಕೆ ಮಾಡಿದ್ದಾರೆ. ಆದರೆ, ಕೇಂದ್ರ ಸರ್ಕಾರವು ಅಲ್ಲಿನ ಸರ್ಕಾರದ ಅಧಿಕಾರವನ್ನು ಮೊಟಕುಗೊಳಿಸಿ ಲೆಫ್ಟಿನೆಂಟ್ ಗವರ್ನರಗೆ ಹೆಚ್ಚಿನ ಅಧಿಕಾರ ನೀಡಿದೆ. ಭದ್ರತಾ ಪಡೆಗಳನ್ನು ಹೆಚ್ಚಾಗಿ ನಿಯೋಜಿಸುವುದರಿಂದ ಮಾತ್ರ, ಶಾಂತಿ ಸ್ಥಾಪಿಸಲು ಸಾಧ್ಯವಿಲ್ಲ. ಜನರ ಜೊತೆಗೆ ಹೆಚ್ಚಿನ ನಂಟು ಬೆಳೆಸಿಕೊಳ್ಳುವ ಮೂಲಕ ಜನರ ವಿಶ್ವಾಸವನ್ನು ಹೆಚ್ಚಿಸಬಹುದು.

---

# ರಾಮಾಯಣ



## ಶ್ರೀರಾಮನು ತಮಸಾ ನದೀತೀರವನ್ನು ಸೇರಿದ್ದು

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ತನ್ನ ಬೆನ್ನುಹಿಡಿದು ಬರುತ್ತಿದ್ದ ಪ್ರಜೆಗಳನ್ನು ತಂದೆಯು ಮಕ್ಕಳನ್ನು ಕಾಣುವಂತೆ ಕೃಪಾದೃಷ್ಟಿಯಿಂದ ನೋಡುತ್ತ ಅವರನ್ನು ಕುರಿತು ಹೀಗೆಂದನು: ಎಲೈ ಪ್ರಜೆಗಳಿರಾ, ನೀವು ನನ್ನಲ್ಲಿ ಎಷ್ಟು ಪ್ರೀತಿಯುಳ್ಳವರಾಗಿದ್ದೀರೋ ಭರತನಲ್ಲಿಯೂ ಅಷ್ಟು ಪ್ರೀತಿಯುಳ್ಳವರಾಗಿರಿ, ಕೈಕೇಯಾದೇವಿಯ ಕುಮಾರನಾದ ಭರತನು ಸದ್ಗುಣಸಂಪನ್ನನು. ನಿಮಗೆ ಯಾರಿಗೆ ಯಾವ ಪ್ರಿಯಕಾರವಾಗಬೇಕೆ ಆ ಕಾವ್ಯಗಳನ್ನು ಮಾಡುವವನು. ಆತನು ಬಾಲಕನಾದರೂ ಬುದ್ದಿವಂತನು, ಜ್ಞಾನದಲ್ಲಿಯೂ ದೊಡ್ಡವನು. ಮೃದುವಾದ ನುಡಿಯುಳ್ಳವನು. ಮಹಾಬಲವಂತನು, ಪರಾಕ್ರಮಿಯಾದವನು. ಯುವರಾಜಪಟ್ಟವನ್ನು ಕಟ್ಟಿಕೊಂಡು ನಿಮಗೆ ಸರಿಯಾಗಿ ನಡೆದು ನಿಮಗೆ ಒಡೆಯನಾಗುವನು. ನಾನು ವನಕ್ಕೆ ಹೋಗುವುದರಿಂದ ನೀವು ನಮ್ಮೆಲ್ಲರಿಗೂ ಒಡೆಯನಾದ ದಶರಥರಾಯನು ನಿರೂಪಿಸಿದಂತಿರಬೇಕು. ನೀವು ನನಗೆ ಪ್ರಿಯವನ್ನು ಮಾಡಬೇಕಾದರೆ ಆ ರಾಜನ ಸೇವೆಯನ್ನು ಮಾಡಿಕೊಂಡಿರಿ ಎಂದು ನುಡಿದನು.


ಈ ಪ್ರಕಾರದಲ್ಲಿ ಧರ್ಮವಚನಗಳನ್ನು ನುಡಿಯುತ್ತ ಧರ್ಮಮಾರ್ಗಪ್ರವರ್ತಕನಾದ ಶ್ರೀರಾಮನು ಸಮಸ್ತ ಪ್ರಜೆಗಳೂ ತನ್ನಲ್ಲಿ ಪ್ರೀತಿಯುಳ್ಳವರಾಗಿ ತನ್ನನ್ನು ಬಯಸುತ್ತ ಕಣ್ಣೀರು ತುಂಬಿ ನಿಟ್ಟುಸಿರುಬಿಡುತ್ತಿರುವುದನ್ನು ನೋಡಿ ಅವರನ್ನು ಸಂತವಿಡುತ್ತಿದ್ದನು. ಅವರಲ್ಲಿ ಜ್ಞಾನವೃದ್ಧರೂ ತಪೋವೃದ್ಧರೂ ಗುಣವೃದ್ಧರೂ ಆದ ಬ್ರಾಹ್ಮಣರು ದೂರದಿಂದ ಆತನನ್ನು ಕಂಡು ಶಿರಃಕಂಪನಮಾಡುತ್ತ ಎಳೈ ವಾಯುವೇಗ ಮನೋವೇಗವುಳ್ಳ ಕುದುರೆಗಳಿರಾ, ನೀವು ಹಿಂದಿರುಗಿರಿ, ಮುಂದಕ್ಕೆ ಹೋಗಬೇಡಿರಿ. ನೀವು ಕಿವಿಯುಳ್ಳ ಪ್ರಾಣಿಗಳಲ್ಲಿ ವೆಗ್ಗಳವಾದ ಕಿವಿಗಳುಳ್ಳ ಪ್ರಾಣಿಗಳಾದ್ದರಿಂದ ನಮ್ಮ ಮಾತನ್ನು ಕೇಳಿ, ನಿಮ್ಮ ಒಡೆಯನಲ್ಲಿ ಹಿತವುಳ್ಳವರಾಗಿ , ದೃಢಪ್ರತನಾಗಿ ಶುದ್ಧಾತ್ಮನಾದ ಶ್ರೀರಾಮನು ನಿಮಗೆ ಒಡೆಯನು. ಈತನನ್ನು ನೀವು ವನಕ್ಕೆ ಬಿಜಯಂಗೈಯಿಸಿಕೊಂಡು ಹೋಗಬೇಡಿ. ಧರ್ಮಸತ್ಯಾಚಾರಗಳಿಂದ ಶುದ್ಧಾತ್ಮನಾದ ಶ್ರೀರಾಮನು ವನವನ್ನೇ ದದೆ ಇಲ್ಲಿಯೇ ಇರಲಿ ಎಂದು ಹಂಬಲಿಸುತ್ತಿದ್ದರು.

ಶ್ರೀರಾಮನು ಅದನ್ನು ಕಂಡು ರಥದಿಂದಿಳಿದು ಸೀತಾಲಕ್ಷ್ಮಣಸಮೇತನಾಗಿ ಮೆಲ್ಲಗೆ ಹೆಜ್ಜೆಯನ್ನಿಡುತ್ತ, ವನಾಭಿಮುಖವಾಗಿ ಕಾಲುನಡೆಯಲ್ಲಿ ನಡೆದು ಬರುತ್ತಿದ್ದ ವೃದ್ಧರಾದ ಬ್ರಾಹ್ಮಣರನ್ನು ನೋಡುತ್ತ, ರಥವನ್ನು ಮುಂದೆ ನಡೆಸಿಕೊಂಡು ಕಾಲುನಡೆಯಿಂದ ಹೋಗುತ್ತಿದ್ದನು. ಆ ಬ್ರಾಹ್ಮಣರು ಕಂಗೆಟ್ಟು ಆತನನ್ನು ಕುರಿತು ಹೇಳಿದರು: ಶ್ರೀ ರಾಮ, ನಾವೆಲ್ಲರೂ ಬ್ರಾಹ್ಮಣರನ್ನು ಪರಿಪಾಲಿಸುವ ನಿನ್ನ ಹಿಂದೆ ಬರುತ್ತಿದ್ದೇವೆ. ಆಗ್ನಿ ಹೋತ್ರಗಳಾದವರು ಆಹವನೀಯ ಗಾರ್ಹಪತ್ಯ ದಕ್ಷಿಣಾಗ್ನಿಗಳೆಂಬ ಶ್ವೇತಾಗ್ನಿಗಳನ್ನೂ ಪಾತ್ರೆಗಳಲ್ಲಿಟ್ಟುಕೊಂಡು ಕಾವಡಿಗಳಲ್ಲಿ ಕಟ್ಟಿ ಹೊತ್ತುಕೊಂಡು ಬರುತ್ತಿದ್ದಾರೆ. ನಾವೆಲ್ಲರೂ ವಾಜಪೇಯ ಯಾಗಗಳನ್ನು ಮಾಡಿ ಸತ್ತಿಗೆಗಳನ್ನು ಹಿಡಿದುಕೊಂಡು ಬರುತ್ತೇವ. ನಮ್ಮ ಸತ್ತಿಗೆಗಳನ್ನು ನೋಡು. ನಿನ್ನ ಹಿಂದೆ ತೆಗೆದುಕೊಂಡುಬರುವ ಸತ್ತಿಗೆಗಳು ಶರತ್ಕಾಲದಲ್ಲಿ ಮಾನಸಸರೋವರಕ್ಕೆ ನಡೆಯುವ ರಾಜಹಂಸ ಪಕ್ಷಿಗಳ ಹಾಗೆ ಒಪ್ಪುತ್ತಿವೆ. ಬಿಸಿಲಿನಲ್ಲಿ ನಡೆಯುವ ನಿನಗೆ ಈ ಸತ್ತಿಗೆಗಳು ನೆರಳನ್ನುಂಟು ಮಾಡುವುವು. ಇಷ್ಟು ದಿನ ನಿನ್ನ ಧರ್ಮದಿಂದ ಅಗ್ನಿಹೋತ್ರಗಳನ್ನೂ ವೇದಾರ್ಥ ವಿಚಾರಗಳನ್ನೂ ಮಾಡಿಕೊಂಡಿದ್ದ ನಮ್ಮ ಮನಸ್ಸು ನೀನು ವನಕ್ಕೆ ತೆರಳುವುದರಿಂದ ನಿನ್ನ ಸಂಗಡ ಬರಬೇಕೆಂದು ಇಚ್ಛಿಸುತ್ತದೆ, ನಮಗೆ ಪ್ರಧಾನವಾದ ವೇದಗಳು ನಮ್ಮ ಹೃದಯದಲ್ಲಿಯೇ ನಿಂತುಬಿಟ್ಟಿವೆ. ನೀನು ವನಕ್ಕೆ ತೆರಳಿದ ದುಃಖಾತಿಶಯದಿಂದ ನಾವು ಅವುಗಳನ್ನು ಪಠಿಸಲಾರೆವು. ಸ್ತ್ರೀಯರು ಮನೆಗಳಲ್ಲಿ ನಿನ್ನ ವನವಾಸಪ್ರಯಾಣವನ್ನು ತಿಳಿಯದೆ ಇದ್ದಾರೆ. ನೀನು ಧರ್ಮವನ್ನು ಉಪೇಕ್ಷೆ ಮಾಡಿದರೆ ಮುಂದೆ ಧರ್ಮವನ್ನು ನಿಲ್ಲಿಸುವವರಾರು ಹಂಸಪಕ್ಷಿಗಳ ಹಾಗೆಯೂ ಮುತ್ತಿನ ಚಿಪ್ಪಿನ ಹಾಗೆಯೂ ಬಿಳುಪಾದ ತಲೆಗೂದಲುಗಳುಳ್ಳ ನಾವು ನಿನ್ನನ್ನು ಬೇಡಿಕೊಳ್ಳುತ್ತೇವೆ.

ಮುಂದುವರಿಯುವುದು...

---

# ತಂಗಳನ್ನ, ಜಗತ್ತಿನ ಉತ್ಕೃಷ್ಟ ಉಪಹಾರ ಅಂದ್ರೆ ನಂಬ್ತಿರಾ?



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಕನ್ನಡದಲ್ಲಿ ತಂಗಳನ್ನ, ಇಂಗ್ಲೀಷಿನಲ್ಲಿ ಸೋಕ್ಡ್ ರೈಸ್ ಅಂತ ಕರೆದರೆ, ತುಳುವಿನಲ್ಲಿ ತಂಞನವೆಂದೂ, ಮಲಯಾಳದಲ್ಲಿ ಪಝುಕಂಜಿ, ತಮಿಳಿನಲ್ಲಿ ಪಝುಯ ಸಾಧಮ್, ತೆಲುಗಿನಲ್ಲಿ ಸದ್ದಿ ಅನ್ನಮು ಎಂದೂ ಕರೆಯುತ್ತಾರೆ. ಇದು ಕಡುಬಡವರ ಆಹಾರ. ಪಾಪರುಗಳ ಊಟ. ಈ ದಿನದ ಬಿಸಿ ಬಿಸಿಯಾದ ಹೈ ಕ್ಯಾಲೋರಿಯ ಬ್ಯಾಲೆನ್ಸ್ಡ್ ಆಹಾರವೆಲ್ಲಿ? ಈ ತಂಗಳನ್ನವೆಲ್ಲಿ ಆದರೆ ಕಾಲಚಕ್ರ ತಿರುಗಿದೆ.

ಅಮೇರಿಕನ್ ನ್ಯೂಟ್ರಿಷನ್ ಅಸೋಸಿಯೇಷನ್ ಜಗತ್ತಿನ ವಿವಿಧ ಪ್ರದೇಶಗಳ, ವಿವಿಧ ದೇಶಗಳ, ವಿವಿಧ ಜನಾಂಗಗಳ ಆಹಾರ ಪದ್ಧತಿಯನ್ನು ಅಧ್ಯಯನ ಮಾಡಿ ನಮ್ಮ ತಂಗಳನ್ನವನ್ನು ಅತ್ಯಂತ 'ಬೆಸ್ಟ್ ಬ್ರೇಕ್ ಫಾಸ್ಟ್ ಎಂದು ಸರ್ಟಿಫೈ ಮಾಡಿದೆ ಹಿಂದೆಲ್ಲಾ ಹಳ್ಳಿಯ ಜನರು ತಾವು ಕೆಲಸಕ್ಕೆ ಹೋಗುವ ಮೊದಲು ರಾತ್ರಿ ಬಾಕಿ ಉಳಿದ ನೀರಿನಲ್ಲಿ ನೆನೆಸಿಟ್ಟ ಅನ್ನವನ್ನು 4 ಕಲ್ಲು ಉಪ್ಪು, ಒಂದು ಹಸಿಮೆಣಸು ಅದಕ್ಕೆ ನುಗ್ಗಿಸಿ, ಇರಿದು ಒಂದು ಕಪ್ಪು ಕೆನೆಮೊಸರು ಹಾಕಿ ಕಲಸಿಕೊಂಡು ತಿಂದು ಕೆಲಸಕ್ಕೆ ಹೋಗುತ್ತಿದ್ದರು. ಹಾಗೆ ತಂಗಳನ್ನ ಜೊತೆ ಹಾಕಿ ತಿನ್ನಲು ಉಪ್ಪು–ಹಸಿಮೆಣಸುವೇ ಆಗಬೇಕಾಗಿಲ್ಲ. ಒಂದು ತುಂಡು ಉಪ್ಪಿನಕಾಯಿ, ಒಂದು ತುಂಡು ಸುಟ್ಟ ಕುರ್ಚಿ ಮೀನು, ಕೆಂಡದಲ್ಲಿ ಬಿಸುಟು ಸುಟ್ಟ ಒಣಮೆಣಸು, ತೆಂಗಿನಕಾಯಿ ಚಟ್ನಿ– ಯಾವುದಾದರೂ ಸರಿ ಹೊಂದಿಕೊಳ್ಳುತ್ತದೆ. ಹಾಗೆ ತಿಂದು ಗದ್ದೆಯ ಕೆಲಸಕ್ಕೆ ಹೊರಳಿದರೆ ಮಧ್ಯಾಹ್ನ 2 ಗಂಟೆಯವರೆಗೂ unshakable ಇವತ್ತು ಭಾರತವೂ ಸೇರಿ ದಕ್ಷಿಣ–ಪೂರ್ವ ಏಷ್ಯಾದ ಹಳ್ಳಿ ಜನರ ಒಂದು ಆಹಾರ ಪ್ರಕಾರ ಇದಾಗಿದೆ. ಭಾರತದಲ್ಲಿ ದಕ್ಷಿಣ ಭಾರತೀಯರಾದ ಕರ್ನಾಟಕ, ಕೇರಳ, ತಮಿಳುನಾಡು ಮತ್ತು ಆಂಧ್ರದಲ್ಲಿ ಬಳಕೆಯಲ್ಲಿರುವ ಆಹಾರ ಪದಾರ್ಥದ ಮಹತ್ವ ಒಂದೆರಡಲ್ಲ. ನೀರಿನಲ್ಲಿ ನೆನೆಸಿ ಇಡುವುದರಿಂದ ಅನ್ನದಲ್ಲಿರುವ ಲ್ಯಾಕ್ಟಿಕ್ ಆಸಿಡ್, ನ್ಯೂಟ್ರಿಷನ್ ಆಗಿ ದೇಹಕ್ಕೆಸಿಗಲಾರದ ಸ್ಥಿತಿಯಿಂದ, ಮನುಷ್ಯ ದೇಹ ಹೀರಿಕೊಳ್ಳಬಹುದಾದ ಕಬ್ಬಿಣ ಮತ್ತು ಕ್ಯಾಲ್ಸಿಯಂ ಅಂಶಗಳನ್ನು ಅಂಶಗಳನ್ನಾಗಿ ಬದಲಾಯಿಸುತ್ತದೆ. ಹನ್ನೆರಡು ಗಂಟೆ ನೆನೆಸಿಟ್ಟ 100 ಗ್ರಾಂ ಕುಚ್ಚುಲಕ್ಕಿಯಲ್ಲಿ 3.4 ಮಿಲಿ ಗ್ರಾಂ ಇದ್ದ ಕಬ್ಬಿಣದ ಅಂಶವು 73.91 ಮಿಲಿ ಗ್ರಾಂ ವರೆಗೆ, ಅಂದರೆ, ಕಬ್ಬಿಣದ ಅಂಶವು ಅಂದರೆ 2073 % ನಷ್ಟು ವೃದ್ಧಿಗೊಳ್ಳುತ್ತದೆ. ಹೀಗೆ ತಂಗಳನ್ನ ತಿನ್ನುವುದರಿಂದ ಹೊಟ್ಟೆಯಲ್ಲಿನ ಅತಿಯಾದ ಉಷ್ಣದ ಅಂಶ ಕಡಿಮೆಯಾಗಿ ದೇಹವನ್ನು ತಂಪಾಗಿಸುತ್ತದೆ. ಹೊಟ್ಟೆಯಲ್ಲಿರುವ ಬೇಡದ ಬ್ಯಾಕ್ಟೀರಿಯಾಗಳನ್ನು ತೊಲಗಿಸಿ ದೇಹಕ್ಕೆ ಅಗತ್ಯವಿರುವ ಒಳ್ಳೆಯ ಬ್ಯಾಕ್ಟೀರಿಯಾವನ್ನು ಟ್ರಿಲಿಯನ್ ಗಟ್ಟಲೆ ಉತ್ಪತ್ತಿಮಾಡುತ್ತದೆ. ಈ ಬ್ಯಾಕ್ಟೀರಿಯಾಗಳು ನಮ್ಮ ದೈನಂದಿನ ಜೀರ್ಣಕ್ರಿಯೆಯನ್ನು ಚುರುಕುಗೊಳಿಸಲು ಸಹಾಯ ಮಾಡುತ್ತವೆ ಮತ್ತು ದೇಹದಲ್ಲಿನ ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ.ಅಲ್ಲದೆ ತಂಗಳನ್ನದ ಬಳಕೆಯಿಂದ ದೇಹದ ಆಂತರಿಕ ಅಂಗಗಳ ಸಮರ್ಪಕ ಕಾರ್ಯ ನಿರ್ವಹಣೆಗೆ ಪ್ರೋತ್ಸಾಹಿಸಿ ಆ ಅಂಗಗಳನ್ನು ಕಾಪಾಡುತ್ತದೆ. ತಂಗಳನ್ನವು ದೇಹವನ್ನು ತಂಪಾಗಿಡುತ್ತದೆ. ದೇಹ ಹಗುರವಾಗಿ ಫೀಲ್ ಆಗುತ್ತದೆ ಮತ್ತು ಮನಸ್ಸು ಹಗುರವಾಗುತ್ತದೆ. ಹೊಟ್ಟೆಯ ಸಮಸ್ಯೆಗಳು ಕರಗಿಹೋಗುತ್ತವೆ. ಮಲಬದ್ಧತೆ ನಿವಾರಣೆಯಾಗುತ್ತದೆ. ನಮ್ಮನ್ನು ದಿನವಿಡೀ ಉಲ್ಲಾಸಮಯವಾಗಿಡುತ್ತದೆ. ತಂಗಳನ್ನ ಉಂಡ ಮೇಲೆ ಟೀ–ಕಾಫಿ ಮುಂತಾದ ಪಾನೀಯಗಳಿಗೆ ದೇಹದಿಂದ ಹೆಚ್ಚಿನ ಬೇಡಿಕೆ ಮೂಡುವುದಿಲ್ಲ. ಆಶ್ಚರ್ಯದ ಸಂಗತಿಯೆಂದರೆ ಬಿ 6 ಮತ್ತು ಬಿ 12– ಈ ಎರಡು ವಿಟಮಿನ್ ಗಳು ಹೇರಳವಾಗಿ ತಂಗಳನ್ನದಲ್ಲಿ ಸಿಗುತ್ತದೆ. ಸಾಧಾರಣವಾಗಿ ಇವು ಶಾಖಾಹಾರಿ ಆಹಾರದಲ್ಲಿ ಸಿಗುವುದಿಲ್ಲ.

☛ ಉದಯವಾಹಿನಿ ಚಿತ್ರ



ಇವೆಲ್ಲ ಅಲ್ಲದೆ, ಇದರಲ್ಲಿರುವ ಮೆಗ್ನೀಷಿಯಂ ಖನಿಜ ಪದಾರ್ಥಗಳು ದೇಹದ ಎಲುಬುಗಳನ್ನು ಗಟ್ಟಿಗೊಳಿಸಿ ದೇಹ ಸವಕಳಿಯ ರೋಗಗಳಾದ ಅರ್ಥರೈಟಿಸ್ ಕ್ಯಾನ್ಸರ್ ಅನ್ನು ತಡೆಯುವಲ್ಲಿ ಸಹಕಾರಿ ಯಾಗುತ್ತದೆ. ದೇಹದಲ್ಲಿನ ಆಂತರಿಕ ಬೆಳವಣಿಗೆಗೆ ಮಾತ್ರವಲ್ಲ, ಇದು ಬಾಹ್ಯಸೌಂದರ್ಯವನ್ನು ಕೂಡ ವೃದ್ಧಿಸಬಲ್ಲದು. ಚರ್ಮವು ಕಾಂತಿಯುಕ್ತವಾಗುತ್ತದೆ ಮತ್ತು ದೇಹಕ್ಕೆ ವಯಸ್ಸಾಗುವ ಪ್ರಕ್ರಿಯೆಯನ್ನು ನಿಧಾನಗೊಳಿಸುತ್ತದೆ. ಒಟ್ಟಾರೆಯಾಗಿ ಚಾಲ್ತಿಯಲ್ಲಿರುವ ಎಲ್ಲ ಹೈಕ್ಯಾಲೊರಿ ಆಹಾರದ ಎದುರು ನಮ್ಮ ಹಿರಿಯರು ಸಾವಿರಾರು ವರ್ಷಗಳಿಂದ ಮಾಡಿಕೊಂಡು ಬಂದ ತಂಗಳನ್ನವು ಎಲ್ಲಾ ರೀತಿಯಿಂದಲೂ ಒಂದು ಸರಳ ಮತ್ತು ಪರ್ಫೆಕ್ಟ್ ಮುಂಜಾನೆಯ ಆಹಾರವಾಗಿದೆ.ಪೌಷ್ಟಿಕತೆ ಆಹಾರದ ಒಂದು ಗುಣ. ಪೌಷ್ಟಿಕತೆ ಮಾತ್ರ ಮುಖ್ಯವಲ್ಲ. ಪೌಷ್ಟಿಕತನವಲ್ಲದೆ, ಆಯುರ್ವೇದದಲ್ಲಿ ಹೇಳಿದ ಮೂರು ತರಹದ ದೋಷಗಳಾದ ವಾತ, ಪಿತ್ತ ಮತ್ತು ಕಫ ನಿವಾರಕವಾಗಿಯೂ ಆಹಾರವಿರಬೇಕು. ಆ ಎಲ್ಲಾ ಅರ್ಹತೆ ನಮ್ಮ ತಂಗಳನ್ನಕ್ಕೆ ಇದೆ.

---

# ಜನಿವಾರ ಜಟಾಪಟಿ

## ಇದು ಪರೀಕ್ಷಾ ಕ್ರಮವ್ರೋ?, ಹುನ್ನಾರವ್ರೋ?



☛ ಬಾಲರಾಜ ಎಂ.
• ಉದಯವಾಹಿನಿ, ವಿಶೇಷ

ಕಳೆದ ವಾರದಿಂದ ಭಾರೀ ವಿರೋಧಕ್ಕೆ ಗ್ರಾಸವಾಗಿ ದಿನಪತ್ರಿಕೆಗಳಲ್ಲೆಲ್ಲ ಜನಿವಾರ ಜಟಾಪಟಿ, ಜನಿವಾರ ತೆಗೆದರೆ ಮಾತ್ರ ಪರೀಕ್ಷೆ ಎಂಬೆಲ್ಲ ವರದಿಗಳು ಪ್ರಕಟಗೊಂಡವು. ಎ.17ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ ಕೆ ಸಿಇಟಿ ಪರೀಕ್ಷೆಯಂದು ಬೀದರ್ ಜಿಲ್ಲೆಯ ಸಾಯಿಸ್ಫೂರ್ತಿ ಪದವಿ ಪೂರ್ವ ಕಾಲೇಜ್‌ನಲ್ಲಿ ಜನಿವಾರ ಧರಿಸಿದ್ದಾನೆ ಎಂಬ ಕಾರಣಕ್ಕೆ ಕು. ಸುಚಿವೃತ ಕುಲಕರ್ಣಿ ಎಂಬ ವಿದ್ಯಾರ್ಥಿಗೆ ಪರೀಕ್ಷಾ ಕೇಂದ್ರದ ಒಳಗೆ ಬಿಡಲು ಅಧಿಕಾರಿಗಳು ಪ್ರವೇಶ ನಿರಾಕರಿಸಿದ್ದು, ಪರೀಕ್ಷೆ ಬರೆಯುವುದಾದರೆ ಜನಿವಾರ ತೆಗೆದು ಬನ್ನಿ ಎಂದು ಹೇಳಿದ್ದಾರೆ. ಇದಕ್ಕೆ ಒಪ್ಪದ ವಿದ್ಯಾರ್ಥಿಯನ್ನು ಮನೆಗೆ ಮರಳಿ ಕಳುಹಿಸಿದ್ದಾರೆ. ಇಂತಹುದೇ ಘಟನೆ ಶಿವಮೊಗ್ಗ ಜಿಲ್ಲೆಯಲ್ಲಿಯೂ ಸಹ ಬೆಳಕಿಗೆ ಬಂದಿದೆ.

ಕರ್ನಾಟಕ ಪರಿಕ್ಷಾ ಪ್ರಾಧಿಕಾರವು (ಕೆ.ಇ.ಎ) ಯಾವುದೇ ಒಬ್ಬ ವಿದ್ಯಾರ್ಥಿಯು ಪರೀಕ್ಷಾ ಕೊಠಡಿಗೆ ತಮ್ಮ ಪ್ರವೇಶ ಪತ್ರ, ಒಂದು ಗುರುತಿನ ಚೀಟಿ, ಒಂದು ನೀಲಿ ಅಥವಾ ಕಪ್ಪು ಬಣ್ಣದ ಬಾಲ್ ಪಾಯಿಂಟ್ ಪೆನ್ ಮತ್ತು ಪಾರದರ್ಶಕ ನೀರಿನ ಬಾಟಲ್ ಇಷ್ಟು ಮಾತ್ರ ತರಬಹುದು. ಇವುಗಳನ್ನು ಹೊರತುಪಡಿಸಿ ವಿದ್ಯುತ್ ಜನಿತ ಉಪಕರಣಗಳಾದ ಕ್ಯಾಲ್ಕುಲೇಟರ್, ಸ್ಮಾರ್ಟ್ ವಾಚ್, ಸ್ಮಾರ್ಟ್ ಫೋನ್, ಪೇಜರ್ ನಂತಹ ಉಪಕರಣಗಳನ್ನು ಕೊಠಡಿಯೊಳಗೆ ತರುವಂತಿಲ್ಲ ಎಂದು ಮಾರ್ಗಸೂಚನೆಯನ್ನು ಪರೀಕ್ಷೆಯ ಕೆಲ ದಿನಗಳ ಮೊದಲೇ ಪ್ರಕಟಗೊಳಿಸಿತ್ತು. ಪ್ರಾಧಿಕಾರದ ಅಧಿಸೂಚನೆಗಳ ಪ್ರಕಾರವೇ ವಿದ್ಯಾರ್ಥಿಗಳನ್ನು ಒಮ್ಮೆ ಪರೀಕ್ಷಾ ಕೊಠಡಿಯ ಹೊರಗೆ ಪರಿಶೀಲಿಸಿ ಒಳಗೆ ಬಿಡಲಾಗುತ್ತದೆ. ಎಲ್ಲೆಡೆಯೂ ನಡೆಯುವುದು ಇದೇ ವಿಧಾನವೇ. ಆದರೇ ಬೀದರ್ ಮತ್ತು ಶಿವಮೊಗ್ಗದಲ್ಲಿ ಯಜ್ಞೋಪವೀತ ಅಥವಾ ಜನಿವಾರ ಧರಿಸಿರುವ ಕಾರಣ ಪರೀಕ್ಷೆಗೆ ನಿರಾಕರಿಸಿದ ಘಟನೆ ನಡೆದಿದೆ. ಈ ಹಿಂದೆಯೂ ಸಹ 2023ರಲ್ಲಿ ಕೆ.ಪಿ.ಎಸ್.ಸಿ ಸ್ಪರ್ಧಾತ್ಮಕ ಪರೀಕ್ಷೆಯ ವೇಳೆ ಸಿಬ್ಬಂದಿಗಳು ಮಹಿಳೆಯರ ಕೊರಳಲ್ಲಿರುವ ಮಾಂಗಲ್ಯ, ಕಾಲುಂಗುರ, ಕಿವಿಯಲ್ಲಿನ ಓಲೆಗಳನ್ನು ತೆಗೆಸಿ ದೊಡ್ಡ ಯಡವಟ್ಟು ಮಾಡಿಕೊಂಡಿದ್ದ ಘಟನೆ ಕಲಬುರಗಿ ನಗರದಲ್ಲಿ ನಡೆದಿತ್ತು. ಇದಕ್ಕೆ ವ್ಯಾಪಕ ಜನಾಕ್ರೋಶವೂ ಉಂಟಾಗಿತ್ತು.

**ಜನಿವಾರ ತೆಗೆದು ಬನ್ನಿ!**

ಈ ಎಲ್ಲಾ ಘಟನೆಗಳನ್ನು ನೋಡುತ್ತಾ ಹೋದರೇ, ಇದು ಉದ್ದೇಶ ಪೂರ್ವಕ ಕೃತ್ಯವೋ?, ಒಂದು ಧರ್ಮವನ್ನು ಗುರಿಯಾಗಿಸಿರಬಹುದಾದ ಹುನ್ನಾ ರವೋ? ಎಂಬ ಪ್ರಶ್ನೆಗಗಳು ಸಾಮಾನ್ಯವಾಗಿ ಹುಟ್ಟಿಕೊಳ್ಳುತ್ತವೆ. ಇಂತಹ ಕೃತ್ಯಗಳು ಸಮಾಜದಲ್ಲಿನ ಸಾಮಾಜಿಕ ಸ್ವಾಸ್ಥ್ಯತೆಗೆ ಹಾನಿ ಮಾಡಿದಂತಾಗುತ್ತವೆ, ಧಾರ್ಮಿಕ ಸಹಿಷ್ಣುತೆಗೆ ಧಕ್ಕೆ ತಂದಂತಾಗುತ್ತವೆ.

ಇಂತಹ ಘಟನೆಗಳ ನಂತರ ಎಚ್ಚೆತ್ತುಕೊಳ್ಳುವ ಸರ್ಕಾರವು ಸಂಬಂಧಿಸಿದ ಅಧಿಕಾರಿಗಳಿಗೆ, ಸಿಬ್ಬಂದಿಗಳಿಗೆ ಅಮಾನತ್ತು ಎಂಬ ಶಿಕ್ಷೆ ನೀಡಿ, ಆಕ್ರೋಶ ಹೊರಹಾಕಿದ ಜನರನ್ನು ಸಮಾಧಾನಪಡಿಸುವ ಪ್ರಯತ್ನ ಮಾಡುತ್ತದೆಯಾದರೂ ಅಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕಾಗಿರುವುದು ಅವಶ್ಯಕ. ಸರ್ಕಾರಗಳು ಬರುತ್ತವೆ ಹೋಗುತ್ತವೆ ಆದರೆ ಇಂತಹ ಘಟನೆಗಳು ಸಂಭವಿಸದಂತೆ ನೋಡಿಕೊಳ್ಳುವುದು ಉತ್ತಮ. ಇಂತಹ ಘಟನೆಗಳಿಂದ ವರ್ಷಗಟ್ಟಲೇ ಪರೀಕ್ಷೆಗಳಿಗಾಗಿ ಹಾತೊರೆದು, ಹಣತೆತ್ತು ತರಬೇತಿ ಪಡೆದು ಪರೀಕ್ಷೆ ಬರೆಯಲು ಬಂದ ವಿದ್ಯಾರ್ಥಿಗಳ, ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳ ಉನ್ನತ ಕನಸುಗಳು ಭಗ್ನಗೊಳ್ಳುವುದಲ್ಲದೆ ಅವರ ಎಲ್ಲಾ ಶ್ರಮವು ವ್ಯರ್ಥವಾಗುತ್ತದೆ.

☛ ಉದಯವಾಹಿನಿ ಚಿತ್ರ



ಯಾವುದೇ ಧರ್ಮವಾಗಲಿ ಪಂಥವಾಗಲಿ ಅದರ ಧಾರ್ಮಿಕ ಆಚರಣೆಯ ಆಯ ಚೌಕಟ್ಟಿಗೊಳಪಡುವ ಯಾವುದೇ ನಂಬಿಕೆಗಳಾಗಲಿ, ಸಂಕೇತಗಳಾಗಲಿ, ಆಚರಣೆಗಳಾಗಲಿ ಅವುಗಳನ್ನು ಪ್ರತಿಯೊಬ್ಬರು ಗೌರವಿಸಬೇಕು. ಅಂತೆಯೇ ಹಿಂದೂ ಧರ್ಮದ ಧಾರ್ಮಿಕ ಸಂಕೇತಗಳಾದ ಪವಿತ್ರ ಮಾಂಗಲ್ಯ, ಕಿವಿಯೋಲೆ, ಕಾಲುಂಗುರ, ಪವಿತ್ರ ಯಜ್ಞೋಪವೀತ ಅಥವಾ ಜನಿವಾರ, ಶಿವದಾರ, ಲಿಂಗದಾರ, ಕಾಶಿದಾರ ಇತರೆ ಸಂಕೇತಗಳು ಬಲವಾದ ನಂಬಿಕೆ, ಶ್ರದ್ಧಾ ಭಕ್ತಿಯುಳ್ಳ ಆಚರಣೆಯ ಸಂಕೇತಗಳೇ ವಿನಃ ಅವುಗಳಿಂದ ಯಾವುದೇ ತೆರನಾದ ಪರೀಕ್ಷಾ ನಕಲು ಮಾಡಲು ಸಾಧ್ಯವಿಲ್ಲ ಎಂಬುದನ್ನು ಸರ್ಕಾರ ಮತ್ತು ಸಂಬಂಧಿಸಿದ ಅಧಿಕಾರಿಗಳು ಅರ್ಥೈಸಿಕೊಳ್ಳಬೇಕಾಗಿದೆ.

**॥ ಸರ್ವೇ ಜನಃ ಸುಖಿನೋ ಭವಂತು ॥**

---

# ಈ ಮೂರು ಸಮಯದಲ್ಲಿ ಕಾಫಿ ಕುಡಿಲೇ ಬಾರದು ಎನ್ನುತ್ತಾರೆ ತಜ್ಞರು

ಕಾಫಿ ಅಥವಾ ಟೀ ಕುಡಿಯುವ ಅಭ್ಯಾಸ ಬಹಳಷ್ಟು ಮಂದಿಗೆ ಇದೆ. ಕೆಲವರಿಗಂತೂ ಪದೇ ಪದೇ ಕಾಫಿನೋ ಟೀ ನೋ ಕುಡಿಯುವ ಅಭ್ಯಾಸವಿರುತ್ತದೆ. ನೀವೂ ಕೂಡಾ ಕಾಫಿ ಪ್ರಿಯರಾಗಿದ್ದರೆ ಅದನ್ನು ಕುಡಿಯುವ ಸರಿಯಾದ ಸಮಯದ ಬಗ್ಗೆ ತಿಳಿದಿರಬೇಕು. ಯಾಕೆಂದರೆ ದಿನದ ಈ ಕೆಲವು ಸಮಯದಲ್ಲಿ ಕಾಫಿ ಕುಡಿಯೋದ್ರಿಂದ ಆರೋಗ್ಯಕ್ಕೆ ಹಾನಿ ಕಾರಕವಾಗಬಲ್ಲದು ಎನ್ನುತ್ತಾರೆ ಪೌಷ್ಟಿಕ ತಜ್ಞೆ ಲವ್ನೀತ್ ಬಾತ್ರಾ.



**ನೀವು ಕಾಫಿ ಪ್ರಿಯರೇ**

**ಖಾಲಿ ಹೊಟ್ಟೆಯಲ್ಲಿ ಕಾಫಿ ಕುಡಿಯುವುದು:** ತಜ್ಞರ ಪ್ರಕಾರ, ಖಾಲಿ ಹೊಟ್ಟೆಯಲ್ಲಿ ಕಾಫಿ ಕುಡಿಯಬಾರದು. ಇದು ಆಮ್ಲೀಯತೆಯನ್ನು ಹೆಚ್ಚಿಸಬಹುದು. ರಾತ್ರಿಯಿಡೀ ಹೊಟ್ಟೆ ಖಾಲಿಯಾಗಿರುತ್ತದೆ ಮತ್ತು ಬೆಳಿಗ್ಗೆ ಆಮ್ಲವು ಈಗಾಗಲೇ ಇರುತ್ತದೆ, ಅಂತಹ ಪರಿಸ್ಥಿತಿಯಲ್ಲಿ ಕಾಫಿ ಕುಡಿಯುವುದರಿಂದ ಆಮ್ಲೀಯತೆ ಹೆಚ್ಚಾಗುತ್ತದೆ. ಇದು ಹೊಟ್ಟೆಯ ಕಿರಿಕಿರಿಯನ್ನು ಉಂಟುಮಾಡಬಹುದು. ಒತ್ತಡದ ಹಾರ್ಮೋನುಗಳ ಮಟ್ಟಗಳು ಹೆಚ್ಚಾಗಬಹುದು, ಇದು ಹೆದರಿಕೆ ಮತ್ತು ಚಡಪಡಿಕೆಯ ಭಾವನೆಗಳಿಗೆ ಕಾರಣವಾಗಬಹುದು. ಕಾಫಿ ಮೂತ್ರ ವರ್ಧಕವಾಗಿರುವುದರಿಂದ ಪದೇ ಪದೇ ಮೂತ್ರ ವಿಸರ್ಜನೆಯಾಗುತ್ತದೆ. ಇದುದೇಹದಲ್ಲಿ ನೀರಿನ ನಷ್ಟವಾಗಬಹುದು.

**ವ್ಯಾಯಾಮದ ನಂತರ ಕಾಫಿ ಕುಡಿಯಬೇಡಿ:** ಕೆಲವರು ವ್ಯಾಯಾಮದ ನಂತರ ಆಯಾಸವನ್ನು ಹೋಗಲಾಡಿಸಲು ಒಂದು ಕಪ್ ಕಾಫಿ ಕುಡಿಯುತ್ತಾರೆ, ಅದು ಶಕ್ತಿಯನ್ನು ನೀಡುತ್ತದೆ ಆದರೆ ನಿಮ್ಮ ದೇಹಕ್ಕೆ ಹಾನಿ ಮಾಡುತ್ತದೆ. ಕಾಫಿ ಕುಡಿಯುವುದರಿಂದ ದೇಹವು ನಿರ್ಜಲೀಕರಣಗೊಳ್ಳಬಹುದು. ಇದು ಸ್ನಾಯುಗಳ ಚೇತರಿಕೆಯನ್ನು ನಿಧಾನಗೊಳಿಸಬಹುದು, ಆದರೆ ಹೃದಯ ಬಡಿತವನ್ನು ಹೆಚ್ಚಿಸಬಹುದು. ಹಾಗಾಗಿ ನೀವು ವ್ಯಾಯಾಮ ಮಾಡುವ ಮೊದಲು ಕಾಫಿ ಕುಡಿಯಬಹುದು. ವ್ಯಾಯಾಮದ ನಂತರ ಕಾಫಿ ಕುಡಿಯಬಾರದು.



**ಮಲಗುವುದಕ್ಕಿಂತ ಮೊದಲು:** ಮಲಗುವುದಕ್ಕಿಂತ ಮೊದಲು ಕಾಫಿ ಕುಡಿಯಬಾರದು. ಅಂದರೆ ನೀವು ರಾತ್ರಿ ಮಲಗುವುದಕ್ಕೂ ಆರು ಗಂಟೆ ಮುಂಚೆ ಕಾಫಿ ಕುಡಿಯಬಾರದು. ಒಂದು ವೇಳೆ ನೀವು ರಾತ್ರಿ ಹತ್ತು ಗಂಟೆಗೆ ಮಲಗುವುದಾದರೆ ಸಂಜೆ 4 ಗಂಟೆಗೆ ಕಾಫಿ ಕುಡಿಯಬೇಕು. ಆ ನಂತರ ಕಾಫಿ ಕುಡಿಯ ಬಾರದು ಎನ್ನುತ್ತಾರೆ ತಜ್ಞರು. ಕಾಫಿಯಲ್ಲಿ ಉತ್ತೇಜಕ ಗುಣಗಳಿರುವುದರಿಂದ ರಾತ್ರಿ ನಿದ್ದೆಗೆ ಅಡ್ಡಿಯನ್ನುಂಟು ಮಾಡುತ್ತದೆ.

---


# ಹೆಚ್ಚು ಟೂತ್‌ಪೇಸ್ಟ್ ಬಳಸಿದರೆ ಹಲ್ಲು, ವಸಡಿನಲ್ಲಿ ಸಮಸ್ಯೆ ಕಾಣಿಸಿಕೊಳ್ಳಬಹುದು

ಉತ್ತಮ ಬಾಯಿಯ ಆರೋಗ್ಯಕ್ಕಾಗಿ, ಬೆಳಗ್ಗೆ ಎದ್ದ ನಂತರ ಮತ್ತು ರಾತ್ರಿ ಮಲಗುವ ಮೊದಲು ಹಲ್ಲುಜ್ಜುವುದು ಒಳ್ಳೆಯದು. ನಮ್ಮ ಹಿರಿಯರು ಹಾಗೂ ವೈದ್ಯರು ಕೂಡ ಇದನ್ನೇ ಸಲಹೆ ನೀಡುತ್ತಾರೆ. ಆದರೆ ಹಲ್ಲುಜ್ಜಲು ಬಳಸುವ ಟೂತ್‌ಪೇಸ್ಟ್‌ನ ಬಗ್ಗೆ ಎಚ್ಚರವಹಿಸಬೇಕು ಎನ್ನುತ್ತಾರೆ ತಜ್ಞರು. ಹಲ್ಲುಜ್ಜಲು ಅತಿಯಾಗಿ ಟೂತ್‌ಪೇಸ್ಟ್ ಬಳಸಿದರೆ, ಕೊನೆಗೆ ಹಲ್ಲುಗಳಲ್ಲಿಯೇ ಸಮಸ್ಯೆಗಳು ಕಾಣಿಸಿಕೊಳ್ಳಬಹುದಂತೆ!

ಹಲ್ಲು ಮತ್ತು ಬಾಯಿಯ ಆರೋಗ್ಯವು ಹಾಳಾದರೆ ಕೆಲವು ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ, ಹೀಗಾಗಿ ದಿನದಲ್ಲಿ ಎರಡು ಬಾರಿ ತಪ್ಪದೆ ಹಲ್ಲುಜ್ಜಬೇಕು. ಅಂದರೆ ಬೆಳಗ್ಗೆ ಎದ್ದ ಬಳಿಕ ಹಾಗು ರಾತ್ರಿ ಮಲಗುವ ಮುನ್ನ ಇಲ್ಲವಾದರೆ ತಿಂದ ಆಹಾರಗಳು ಹಲ್ಲಿನ ನಡುವೆ ಸಿಲುಕಿಕೊಂಡು ಬಾಯಲ್ಲಿ ಬ್ಯಾಕ್ಟೀರಿಯಾಗಳ ಉತ್ಪತ್ತಿಯನ್ನು ಹೆಚ್ಚಿಸುವುದು ಎಂದು ಹೇಳಲಾಗುತ್ತದೆ. ಆದರೆ ನಮ್ಮಲ್ಲಿ ಹೆಚ್ಚಿನವರು ಹಲ್ಲುಗಳು ಫಳಫಳ ಹೊಳೆಯಬೇಕು, ಬಾಯಿ ದುರ್ವಾಸನೆ ದೂರವಾಗಬೇಕು ಎನ್ನುವ ಕಾರಣಕ್ಕೆ ಹಲ್ಲುಜ್ಜುವ ಬ್ರಷ್ ಗೆ ಸರಿಯಾಗಿ ಪೇಸ್ಟ್ ಹಚ್ಚಿ ದಿನಾ ಎರಡು ಬಾರಿಯಾದರೂ ಸ್ವಚ್ಛಗೊಳಿಸುತ್ತಾರೆ. ಆದರೆ ನಿಮಗೆ ಗೊತ್ತಿರಲಿ ದಿನಾ ಹಲ್ಲುಜ್ಜುವ ಪೇಸ್ಟ್ ಜಾಸ್ತಿ ಬಳಸುವುದರಿಂದ, ನಿಮಗೆ ಗೊತ್ತಿಲ್ಲದೆ, ಕೆಲವೊಂದು ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಲು ಶುರುವಾಗುವ ಸಾಧ್ಯತೆ ಇರುತ್ತದೆ!

**ಮೌತ್‌ವಾಶ್ ಬಳಸುವುದು:** ಬಾಯಿಯ ಆರೋಗ್ಯಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಗಳಿದ್ದರೆ, ಮೊದಲು ದಂತ ವೈದ್ಯರನ್ನು ಸಂಪರ್ಕಿಸಿ. ನಿಮ್ಮ ಬಾಯಿಯ ಆರೋಗ್ಯ ಸಾಮಾನ್ಯವಾಗಿದ್ದರೆ, ಹಲ್ಲುಜ್ಜಿದ ನಂತರ ಮೌತ್ ವಾಶ್ ಬಳಸ ಬಹುದು. ಮೌತ್‌ವಾಶ್ ಬಳಸುವುದರ ಲಾಭ ಗಳು ಏನೆಂದರೆ ಇದು ದುರ್ವಾಸನೆಯ ದೂರ ಮಾಡಿ, ಬಾಯಿ ಯೊಳಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳನ್ನು ನಿವಾರಣೆ ಮಾಡುತ್ತದೆ.






ಇದರ ಹೊರತಾಗಿ ಬಾಯಿಯಲ್ಲಿರುವ ಹಾನಿಕಾರಕ ಬ್ಯಾಕ್ಟೀರಿಯಾಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಆದಾಗ್ಯೂ, ಯಾವ ರೀತಿಯ ಮೌತ್‌ವಾಶ್ ನಿಮಗೆ ಉತ್ತಮ ಎಂದು ತಿಳಿಯಲು, ನೀವು ದಂತವೈದ್ಯರ ಸಲಹೆಗಳನ್ನು ಪಡೆದುಕೊಂಡರೆ ಒಳ್ಳೆಯದು!

**ವೈದ್ಯರು ಕೂಡ ಅನ್ನು ಅತಿಯಾಗಿ ಬಳಸಬಾರದು ಎನ್ನುತ್ತಾರೆ:** ಹೆಚ್ಚು ಟೂತ್‌ಪೇಸ್ಟ್ ಬಳಸುವುದು ಹಲ್ಲುಗಳಿಗೆ ಹಾನಿಕಾರಕ. ಹಲ್ಲುಗಳನ್ನು ಬಲಪಡಿಸಲು ಬಳಸುವ ಟೂತ್‌ಪೇಸ್ಟ್‌ನಲ್ಲಿರುವ ಸೋಡಿ ಯಂ ಫ್ಲೋರೈಡ್, ಅತಿಯಾಗಿ ಬಳಸಿದರೆ ಬಾಯಿಯ ಆರೋಗ್ಯ ಹದಗೆಡಬಹುದು ಎನ್ನುತ್ತಾರೆ ಆರೋಗ್ಯ ತಜ್ಞರು. ಇಂತಹ ಪರಿಸ್ಥಿತಿಯಲ್ಲಿ, ಹಲ್ಲುಗಳ ಮೇಲೆ ಕುಳಿಗಳು ಉಂಟಾಗ ಬಹುದು ಮತ್ತು ಮಕ್ಕಳಲ್ಲಿ ಫ್ಲೋರೋಸಿಸ್‌ನಂತಹ ಸಮಸ್ಯೆಗಳು ಸಹ ಉದ್ಭವಿಸ ಬಹುದು. ಇದೇ ಕಾರಣಕ್ಕೆ ವೈದ್ಯರು ಹಲ್ಲುಗಳನ್ನು ಸ್ವಚ್ಛವಾಗಿಡಲು ಸ್ವಲ್ಪ ಪ್ರಮಾಣದ ಟೂತ್‌ಪೇಸ್ಟ್ ಬಳಸಲು ಶಿಫಾರಸು ಮಾಡುತ್ತಾರೆ.?

**ಟೂತ್‌ಪೇಸ್ಟ್‌ನ ಬಗ್ಗೆ ಇರಲಿ ಎಚ್ಚರ!:** ಹಲ್ಲುಜ್ಜುವಾಗ ಟೂತ್‌ಪೇಸ್ಟ್‌ನ ಪ್ರಮಾಣಕ್ಕೆ ವಿಶೇಷ ಗಮನ ನೀಡಬೇಕು. ಈ ಬಗ್ಗೆ ತಜ್ಞರು ಹೇಳುವ ಪ್ರಕಾರ, ಸ್ವಲ್ಪವೇ–ಸ್ವಲ್ಪ ಪ್ರಮಾಣದಲ್ಲಿ ಟೂತ್ ಪೇಸ್ಟ್ ಅನ್ನು ಬ್ರಷ್‌ಗೆ ಹಚ್ಚಿದರೆ ಸಾಕು. ಹಲ್ಲುಗಳನ್ನು ಚೆನ್ನಾಗಿ ಸ್ವಚ್ಛ ಗೊಳಿಸಲು ಇಷ್ಟೇ ಸಾಕಾಗುತ್ತದೆ. ಇನ್ನು ಮಕ್ಕಳ ವಿಚಾರದಲ್ಲಿಯೂ ಕೂಡ ಎಚ್ಚರಿಕವಹಿಸಬೇಕು.

ಜಾಸ್ತಿ ಪ್ರಮಾಣದಲ್ಲಿ ಟೂತ್‌ಪೇಸ್ಟ್ ಅನ್ನು ಮಕ್ಕಳಿಗೆ ಹಲ್ಲುಜ್ಜುವುದಕ್ಕೆ ನೀಡಬಾರದು. ಸಣ್ಣ ಮಕ್ಕಳಿಗೆ ಟೂತ್‌ಪೇಸ್ಟ್ ಅನ್ನು ಕಡಿಮೆ ಪ್ರಮಾಣದಲ್ಲಿ ಮಾತ್ರ ನೀಡಬೇಕು. ನೆನಪಿಡಿ, ಯಾವುದನ್ನಾದರೂ ಅತಿಯಾಗಿ ಬಳಸುವುದು ಆರೋಗ್ಯಕ್ಕೆ ಹಾನಿಕಾರಕ! ಹೀಗಾಗಿ ಹೆಚ್ಚುವರಿ ಟೂತ್‌ಪೇಸ್ಟ್ ಬಳಕೆಯು ಹಲ್ಲು ಮತ್ತು ಒಸಡುಗಳ ಆರೋಗ್ಯಕ್ಕೆ ಸಮಸ್ಯೆಯಾಗಬಹುದು.

**ಈ ಬಗ್ಗೆ ವೈದ್ಯರು ಏನು ಹೇಳುತ್ತಾರೆ:** ಸಾಮಾನ್ಯವಾಗಿ ನಾವೆಲ್ಲರೂ ಜಾಹೀರಾತುಗಳಲ್ಲಿ ಟೂತ್ ಪೇಸ್ಟ್ ಅನ್ನು ಬ್ರಶ್ ನ ಪೂರ್ತಿ ಮೇಲ್ಭಾಗದಲ್ಲಿ ಹಾಕುವುದನ್ನು ನೋಡಿರುತ್ತೇವೆ . ಇದನ್ನೇ ನಾವು ಕೂಡ ಅನುಸರಿಸುವುದು. ಆದರೆ ನಿಮಗೆ ಗೊತ್ತಿರಲಿ ಅಷ್ಟು ಪ್ರಮಾಣದ ಟೂತ್ ಪೇಸ್ಟ್ ಬೇಕಾಗಿಲ್ಲ ಎನ್ನುತ್ತಾರೆ ದಂತ ವೈದ್ಯರು. ಕೇವಲ ಬಟಾಣಿ ಗಾತ್ರದಷ್ಟು ಟೂತ್ ಪೇಸ್ಟ್ ಅನ್ನು ಮಾತ್ರ ಬಳಸಿದರೆ ಸಾಕು . ಅಗತ್ಯಕ್ಕಿಂತ ಹೆಚ್ಚು ಬಳಸಿದರೆ ಅನುಕೂಲಕ್ಕಿಂತ ಆಗುವ ಅನಾನು ಕೂಲವೇ ಹೆಚ್ಚು. ಅಗತ್ಯಕ್ಕಿಂತ ಹೆಚ್ಚು ಟೂತ್ ಪೇಸ್ಟ್ ಬಳಸುವುದರಿಂದ ಹಲ್ಲುಗಳಲ್ಲಿ ಹಾಗೂ ವಸಡುಗಳಲ್ಲಿ ಸಮಸ್ಯೆ ಕಂಡು ಬರುವುದರ ಜೊತೆಗೆ, ಈ ಹಲ್ಲುಜ್ಜುವ ಪೇಸ್ಟ್ ನಿಂದ ಬರುವ ನೊರೆಯು ದೇಹದ ಒಳಗೆ ಸೇರಿ ಅರೋಗ್ಯ ಸಮಸ್ಯೆಯನ್ನು ಉಂಟು ಮಾಡುವ ಸಾಧ್ಯತೆ ಇರುತ್ತದೆ .ಆದ್ದರಿಂದ ಆದಷ್ಟು ಕಡಿಮೆ ಅಂದರೆ ಬ್ರಶ್ ನ ಕಾಲು ಭಾಗದಷ್ಟು ಪೇಸ್ಟ್ ಅನ್ನು ಮಾತ್ರ ಬಳಸಿದರೆ ಸಾಕು ಎನ್ನುತ್ತಾರೆ ವೈದ್ಯರು .



**ಸಣ್ಣ ಮಕ್ಕಳ ವಿಚಾರದಲ್ಲಿ ಇರಲಿ ಎಚ್ಚರ!:** ಸಣ್ಣ ಮಕ್ಕಳು ಟೂತ್ ಪೇಸ್ಟ್ ಸಿಹಿಯಾಗಿದೆ ಎಂದು ತಿನ್ನುವುದು ಕೂಡ ಉಂಟು. ಈ ಸಂದರ್ಭಗಳಲ್ಲಿ ಟೂತ್ ಪೇಸ್ಟ್ ನಲ್ಲಿ ಕಂಡುಬರುವ ಅಧಿಕ ಪ್ರಮಾಣದ ಫ್ಲೋರೈಡ್ ಮಕ್ಕಳ ದೇಹದೊಳಗೆ ಸೇರಿ, ಅವರಲ್ಲಿ ಹಲವಾರು ರೀತಿ ಅರೋಗ್ಯ ಸಮಸ್ಯೆ ಉಂಟು ಮಾಡುವ ಸಾಧ್ಯತೆ ಇರುತ್ತದೆ. ಹಾಗಾಗಿ ವೈದ್ಯರ ಸಲಹೆ ಪಡೆದು ಮಕ್ಕಳಿಗೆ ಫ್ಲೋರೈಡ್ ಅಂಶವಿಲ್ಲದ ಟೂತ್ ಪೇಸ್ಟ್ ಅನ್ನು ಕೊಡುವುದು ಸೂಕ್ತ.

# ಶಿಥಿಲಗೊಂಡ ಬಸ್ ನಿಲ್ದಾಣ: ಪ್ರಯಾಣಿಕರು ಆತಂಕದಲ್ಲಿಯೇ ಆಶ್ರಯ

• ಉದಯವಾಹಿನಿ ಹನುಮಸಾಗರ

ಬಸ್ ನಿಲ್ದಾಣದ ಗೋಡೆಗಳಲ್ಲಿ ಬಿರುಕು. ನಿರ್ವಹಣೆಯಾಗದ ಶೌಚಾಲಯ, ಕಿತ್ತು ಬೀಳುವ ಚಾವಣಿ ಸಿಮೆಂಟ್ ಚಕ್ಕೆಗಳು. ಶುದ್ಧ ಕುಡಿಯುವ ನೀರಿನ ಸಮಸ್ಯೆ, ಮೂಲಸೌಲಭ್ಯಗಳ ಕೊರತೆ, ಸಂಪೂರ್ಣ ಶಿಥಿಲಗೊಂಡಿರುವ ಕಟ್ಟಡ ನಿಲ್ದಾಣದಲ್ಲಿ ಪ್ರಯಾಣಿಕರು ಆತಂಕದಲ್ಲಿಯೇ ನಿಲ್ದಾಣದಲ್ಲಿ ಆಶ್ರಯ ಪಡೆಯಬೇಕಾದ ಪರಿಸ್ಥಿತಿಯಿದೆ.1998ರಲ್ಲಿ ನಿರ್ಮಾಣವಾಗಿರುವ ಬಸ್ ನಿಲ್ದಾಣಕ್ಕೀಗೆ 27 ವರ್ಷ. ನಿತ್ಯ 148ಕ್ಕೂ ಹೆಚ್ಚು ಬಸ್‌ಗಳು ನಿಲ್ದಾಣಕ್ಕೆ ಬಂದು ಹೋಗುತ್ತವೆ. ಗ್ರಾಮೀಣ ಹಾಗೂ ಪಟ್ಟಣ ಪ್ರದೇಶದ ಸಾವಿರಾರು ಜನರು ನಿಲ್ದಾಣವನ್ನು ಬಳಸುತ್ತಿದ್ದಾರೆ. ಆದರೆ ನಿಲ್ದಾಣದಲ್ಲಿ ಸೌಲಭ್ಯಗಳು ಮಾತ್ರ ಶೂನ್ಯ. ನಿಲ್ದಾಣವು ಅವ್ಯವಸ್ಥೆಯಿಂದ ಕೂಡಿದ್ದು, ಹೆಣ್ಣುಮಕ್ಕಳಿಗೆ ಹಾಗೂ ಹಿರಿಯ ನಾಗರಿಕರು ಕಿರಿಕಿರಿ ಅನುಭವಿಸುವಂತಾಗಿದೆ. ಪ್ರಯಾಣಿಕರು, ಶೌಚಾಲಯಗಳ


ಉದಯವಾಹಿನಿ ಚಿತ್ರ

ಬದಲು ನಿಲ್ದಾಣದ ಆವರಣದಲ್ಲಿಯೇ ಮೂತ್ರವಿಸರ್ಜನೆ ಮಾಡುತ್ತಿರುವ ಉದಾಹರಣೆಗಳಿವೆ. ಅಲ್ಲದೇ ಕರ್ತವ್ಯ ಮುಗಿಸಿದ ಬಳಿಕ ನಿರ್ವಾಹಕರು ಹಾಗೂ ಚಾಲಕರಿಗೆ ಉಳಿದುಕೊಳ್ಳಲು ಹಾಗೂ ವಿಶ್ರಾಂತಿ ಪಡೆಯಲು ಕೊಠಡಿಗಳಿಲ್ಲ.

**ನನಸಾಗದ ಹೈಟೆಕ್ ನಿಲ್ದಾಣದ ಕನಸು:** ಕಲ್ಯಾಣ ಕರ್ನಾಟಕ ಭಾಗದ ಬಹುತೇಕ ಬಸ್ ನಿಲ್ದಾಣಗಳು ಹೈಟೆಕ್ ಆಗಿ ರೂಪಾಂತರಗೊಂಡಿವೆ. ಎಲ್ಲಾ ಸೌಲಭ್ಯಗಳೊಂದಿಗೆ ಜನಸ್ನೇಹಿ ವ್ಯವಸ್ಥೆಗಳಿವೆ. ಆದರೆ ಹನುಮಸಾಗರದ ನಿಲ್ದಾಣಕ್ಕೆ ಈವರೆಗೂ ಹೈಟೆಕ್ ಆಗುವ ಭಾಗ್ಯ ಬಂದಿಲ್ಲ. ನಿಲ್ದಾಣವನ್ನು ನೆಲಸಮಗೊಳಿಸಿ. ಹೊಸ ನಿಲ್ದಾಣಕ್ಕೆ ಸಮೀಕ್ಷೆ ಮಾಡಲಾಗಿದೆ. ಆದರೆ ಪ್ರಕ್ರಿಯೆ ಆರಂಭವಾಗಿ ವರ್ಷಗಳು ಕಳೆದರೂ, ಕಾಮಗಾರಿ ಆರಂಭವಾಗಿಲ್ಲ.

**ಸೌಲಭ್ಯಗಳು ಮಾತ್ರ ಶೂನ್ಯ**

**ಜನಪ್ರತಿನಿಧಿಗಳ ನಿರ್ಲಕ್ಷ್ಯ:** ಇಲ್ಲಿನ ಶಾಸಕರಾಗಲಿ, ಸ್ಥಳೀಯ ಮುಖಂಡರಾಗಲಿ ನಿಲ್ದಾಣದ ಅಭಿವೃದ್ಧಿಗೆ ಕಾಳಜಿ ತೋರದೆ ನಿರ್ಲಕ್ಷ್ಯ ವಹಿಸಿದ್ದಾರೆ. ಇದು ಸಾರ್ವಜನಿಕರ ಆಕ್ರೋಶಕ್ಕೂ ಕಾರಣವಾಗಿದೆ. ನಿಲ್ದಾಣ ಅಭಿವೃದ್ಧಿಗೆ ಸಂಬಂಧಿಸಿದಂತೆ ಶೌಚಾಲಯ ನಿರ್ವಹಣೆ ಟೆಂಡರ್ ಪ್ರಕ್ರಿಯೆಯೂ ನಡೆದಿದೆ. ಆದರೆ ನಿರ್ವಹಣೆಗೆಯಾಗುತ್ತಿಲ್ಲ.

ಶೌಚಾಲಯಗಳ ಪರಿಸ್ಥಿತಿ ಮತ್ತಷ್ಟು ಹದಗೆಟ್ಟಿದೆ. ನಿಲ್ದಾಣದ ಗೋಡೆಗಳ ಬಿರುಕು. ಛಾವಣಿ ಕುಸಿತದ ಭೀತಿ ಹಾಗೂ ಅಸಮರ್ಪಕ ನಿರ್ವಹಣೆಯಿಂದಾಗಿ ನಿಲ್ದಾಣ ಅಪಾಯಕರವಾಗಿದೆ. ಹನುಮಸಾಗರ ಬಸ್ ನಿಲ್ದಾಣವನ್ನು ಶೀಘ್ರದಲ್ಲೇ ಹೈಟೆಕ್ ಗೊಳಿಸಬೇಕು. ಪ್ರಯಾಣಿಕರಿಗೆ ಕುಳಿತುಕೊಳ್ಳಲು ಸೌಲಭ್ಯ, ನಿಗದಿತ ಮಾಹಿತಿ ಫಲಕಗಳ ಹೂಡಿಕೆ, ಸ್ವಚ್ಛತೆ ಮತ್ತು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಜಾತ್ರೆಗಾಗಿ ಊರು ಬಿಟ್ಟ ಜನ ಮನೆ ಕಾದ ಶ್ವಾನ

• ಉದಯವಾಹಿನಿ ಕೂಡ್ಲಿಗಿ

ಗುಳೇ ಲಕ್ಕಮ್ಮದೇವಿಯ ವಿಶೇಷ ಜಾತ್ರೆಯಲ್ಲಿ ಊರು ತೊರೆದು ಊರೋರಗೆ ಇರುವ ಸಂಪ್ರದಾಯ ಜಾತ್ರೆಯಲ್ಲಿ ಮನೆಯವರು ಮನೆ ಬೀಗ ಹಾಕಿ ಜಾತ್ರೆ ಮಾಡುತ್ತಿದ್ದಾರೆ ನಿಯತ್ತಿಗೆ ಹೆಸರಾದ ಪ್ರಾಣಿ ಅನ್ನ ಹಾಕಿದ ಮನೆಯನ್ನು ನಿಯ್ಯತ್ತಿನಲ್ಲಿ ಕಾಯುವ ಪ್ರಸಂಗ ಕೂಡ್ಲಿಗಿ ಪಟ್ಟಣದಲ್ಲಿ ಕಂಡು ಬಂದಿತು.


ಉದಯವಾಹಿನಿ ಚಿತ್ರ

ನೂರಾರು ವರ್ಷಗಳ ಸಂಪ್ರದಾಯವಾಗಿರುವ ಶ್ರೀ ಗುಳೇ ಲಕ್ಕಮ್ಮನ ಜಾತ್ರೆ ಕೂಡ್ಲಿಗಿ ಎಂಬ ಪಟ್ಟಣದಲ್ಲಿ ಇಂದಿಗೂ ಎಲ್ಲಾ ಸಮುದಾಯದ ಜನತೆ ಆಚರಣೆ ಮಾಡಿಕೊಂಡು ಬಂದಿದ್ದು ನಿನ್ನೆ ನಡೆದ ಈ ವಿಶೇಷ ಜಾತ್ರೆ ಜರುಗಿದ್ದು ಇಡೀ ಊರಿಗೆ ಊರೇ ಜನರಿಲ್ಲದೆ ಬಿಕೋ ಎನ್ನುತ್ತಿದ್ದರೆ ಅಲ್ಲಲ್ಲಿ ಪೊಲೀಸರ ಕಣ್ ಗಾವಲು ಕೆಲವಡೆ ಬೀದಿ ನಾಯಿಗಳು ಸುತ್ತಾಡುತ್ತಿದ್ದರೆ ಇತ್ತ ಪಟ್ಟಣದ ರಾಮನಗರದ ಏರಿಯಾದಲ್ಲಿರುವ ಮನೆಯ ಮುಂದೆ ಸಾಕು ನಾಯಿ ಆ ಮನೆಯ ಅನ್ನ ತಿಂದ ಋಣ ತೀರಿಸುವಂತೆ ಬೀಗ ಹಾಕಿದ ಮನೆಯ ಮುಂದೆ ಕಾವಲುಗಾರನಂತೆ ಕಾಯುತ್ತ ಇರುವ ದೃಶ್ಯ ಮಾಧ್ಯಮದವರ ಕಣ್ಣಿಗೆ ಬಿದ್ದಿತು ಅಲ್ಲದೆ ನಿಯತ್ತಿನ ಮನೆ ಕಾಯುವ ಶ್ವಾನ ಮಾಧ್ಯಮದವರ ಮೊಬೈಲ್ ಕಣ್ಣಿಗೆ ಕ್ಲಿಕ್ಕಾಯಿತು.

### ಹಳ್ಳಿಗಳಲ್ಲಿ ಸಮರ್ಪಕವಾಗಿ ಕ್ಲೋರಿನೇಷನ್‌ನೊಂದಿಗೆ ಶುದ್ಧೀಕರಣಗೊಳಿಸಿದ ನೀರು ಪೂರೈಕೆಗೆ ಆದ್ಯತೆ ನೀಡಬೇಕು

# ಶುದ್ಧೀಕರಿಸಿದ ನೀರು ಪೂರೈಕೆಗೆ ಆದ್ಯತೆಯಾಗಲಿ: ಡಾ.ಕೆ.ವಿ.ತ್ರಿಲೋಕ ಚಂದ್ರ

• ಉದಯವಾಹಿನಿ ಬಳ್ಳಾರಿ

ಬೇಸಿಗೆಯಲ್ಲಿ ಜಿಲ್ಲೆಯ ಎಲ್ಲಾ ಗ್ರಾಪಂ ವ್ಯಾಪ್ತಿಯ ಹಳ್ಳಿಗಳಲ್ಲಿ ಸಮರ್ಪಕವಾಗಿ ಕ್ಲೋರಿನೇಷನ್‌ನೊಂದಿಗೆ ಶುದ್ಧೀಕರಣಗೊಳಿಸಿದ ನೀರು ಪೂರೈಕೆಗೆ ಆದ್ಯತೆ ನೀಡಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯ ದರ್ಶಿಗಳಾದ ಡಾ.ಕೆ.ವಿ. ತ್ರಿಲೋಕಚಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

**ಗರ್ಭಿಣಿ ಮಹಿಳೆಯರಲ್ಲಿ ಅಧಿಕ ರಕ್ತದೊತ್ತಡ**

ನಗರದ ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ (20 ಅಂಶ ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಬಹುದಾದಂತಹ 82 ಹಳ್ಳಿಗಳನ್ನು ಗುರುತಿಸಿದ್ದು, ಈಗಾಗಲೇ ಕುಡಿಯುವ ನೀರು ಪೂರೈಕೆಗೆ ಟ್ಯಾಂಕರ್‌ಗಳನ್ನು ಸಿದ್ಧತೆಯಲ್ಲಿಟ್ಟುಕೊಳ್ಳಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ


ಉದಯವಾಹಿನಿ ಚಿತ್ರ

ಇಂಜಿನಿಯರ್ ಇಂದುಧರ್ ಸಭೆಗೆ ತಿಳಿಸಿದರು.

ಶುದ್ಧ ಕುಡಿಯುವ ನೀರು ಸೇವನೆ ಕುರಿತು ಸಾರ್ವಜನಿಕರಿಗೆ ಜನಸಂದಣಿ ಇರುವ ಸ್ಥಳ, ಜಾತ್ರಾ, ಸಂದರ್ಭಗಳಲ್ಲಿ ಅರಿವು ಮೂಡಿಸುವ ಕಾರ್ಯ ಕೈಗೊಳ್ಳಬೇಕು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದ ಅವರು, ಗ್ರಾಮಗಳಲ್ಲಿ ತುರ್ತು ಆರೋಗ್ಯ ಸೇವೆಗಳಿಗಾಗಿ ಬರುವ ರೋಗಿಗಳನ್ನು ಪ್ರತಿ ಬಾರಿಯೂ ಜಿಲ್ಲಾ ಕೇಂದ್ರಗಳಿಗೆ ತೆರಳುವಂತೆ ಶಿಫಾರಸ್ಸು ಮಾಡುವುದು ಸಮಂಜಸವಲ್ಲ ತಪಾಸಣೆ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತಾವಿರುವಲ್ಲಿಯೇ ಆರೋಗ್ಯ ಸೇವೆ ನೀಡಬೇಕು. ಇದಕ್ಕೆ ಸಾಕಷ್ಟು ಮಾನವ ಸಂಪನ್ಮೂಲಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು. ಜಿಲ್ಲೆಯಲ್ಲಿ ಕಳಪೆ ಗುಣಮಟ್ಟದ

> ಜಿಲ್ಲೆಯಲ್ಲಿ ಗರ್ಭಿಣಿ ಮಹಿಳೆಯರಲ್ಲಿ ಅಧಿಕ ರಕ್ತದೊತ್ತಡ, ಅನೀಮಿಯಾ ತಡೆಗಟ್ಟಲು ಸೂಕ್ತ ಕಾರ್ಯಯೋಜನೆ ರೂಪಿಸಬೇಕು. ಗರ್ಭಿಣಿ ಮಹಿಳೆಯರಿಗೆ ಸೇವಿಸಲು ಆರೋಗ್ಯ ಇಲಾಖೆಯಿಂದ ನೀಡಲಾಗುವ ಕಬ್ಬಿಣಾಂಶ ಮಾತ್ರೆಗಳ ಸೇವನೆ ಕುರಿತು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮನೆ ಭೇಟಿ ನಡೆಸಿ ಖಚಿತಪಡಿಸಿಕೊಳ್ಳಬೇಕು. ಇದರಿಂದ ಸುಲಭ ಮತ್ತು ಸಾಮಾನ್ಯ ಹೆರಿಗೆಗೆ ಸಹಾಯಕವಾಗಲಿದೆ
> -ಡಾ.ಕೆ.ವಿ.ತ್ರಿಲೋಕ ಚಂದ್ರ

ಬಿತ್ತನೆ ಬೀಜ ವಿತರಣೆಯಾಗಿರುವ ಬಗ್ಗೆ ಹಾಗೂ ರೈತರ ಫಸಲಿನಲ್ಲಿ ಇಳುವರಿ ಬಾರದೇ ಇರುವ ಬಗ್ಗೆ ದೂರುಗಳು ಕೇಳಿಬರುತ್ತಿದೆ. ಈ ಕುರಿತು ಕೃಷಿ ಅಧಿಕಾರಿಗಳು ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಪೂರೈಕೆ ಮಾಡುತ್ತಿರುವ ಅನಧಿಕೃತ ರಸಗೊಬ್ಬರದ ಅಂಗಡಿಗಳ ಮೇಲೆ ದಾಳಿ ನಡೆಸಿ ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಕುರಿತು ರೈತರಿಗೆ

**ನೀರಿನ ಮೂಲಗಳ ಪರಿಶೀಲನೆ ನಡೆಸಿ, ಓಹೆಚ್ ಟಿ ಸ್ವಚ್ಛಗೊಳಿಸಿ**

ಬೇಸಿಗೆಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ವ್ಯತ್ಯವಾಗಬಾರದು. ಯಾವುದೇ ಕಾರಣಕ್ಕೂ ಕಲುಷಿತ ನೀರು ಪೂರೈಕೆಯಾಗಬಾರದು. ಇದರ ಬಗ್ಗೆ ಎಚ್ಚರ ವಹಿಸಬೇಕು. ನಿರಂತರವಾಗಿ ನೀರಿನ ಮೂಲಗಳನ್ನು ಪರಿಶೀಲನೆ ನಡೆಸುತ್ತಿರಬೇಕು. ನೀರಿನ ಸಂಗ್ರಹಾಗಾರಗಳನ್ನು ಶುಚಿಗೊಳಿಸುತ್ತಿರಬೇಕು. ನೀರಿನ ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಿದ ನಂತರವೇ ಸರಬರಾಜು ಮಾಡಬೇಕು ಮತ್ತು ಓವರ್ ಹೆಡ್ ಟ್ಯಾಂಕ್‌ಗಳ ಮುಚ್ಚಳ ಮುಚ್ಚಲಾಗುತ್ತಿದೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು. ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗಬಾರದು. ಈಗಾಗಲೇ ಇರುವ ಮೇವಿನ ಬ್ಯಾಂಕ್ ಗಳಲ್ಲಿ ಮೇವು ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಸೂಚಿಸಿದ ಅವರು, ಪಶು ವೈದ್ಯಾಧಿಕಾರಿಗಳಿಂದ ಜಿಲ್ಲೆಯಲ್ಲಿ ಮೇವಿನ ಲಭ್ಯತೆ ಕುರಿತು ಮಾಹಿತಿ ಪಡೆದುಕೊಂಡರು.

ಸಂಡೂರು ತಾಲ್ಲೂಕು ವ್ಯಾಪ್ತಿಯಲ್ಲಿ ಕಳೆದ ವಾರ ಅಕಾಲಿಕ ಗಾಳಿ-ಮಳೆಯಿಂದಾಗಿ ಬಾಳೆ ಬೆಳೆಯು ನೆಲಕ್ಕುರುಳಿರುವ ಕುರಿತು ವರದಿಯಾಗಿದೆ. ಈ ಕುರಿತು ತೋಟಗಾರಿಕೆ ಅಧಿಕಾರಿಗಳಿಗೆ ಪ್ರಶ್ನಿಸಿದರು, ಈ ಕುರಿತು ನಿಯಮಾನುಸಾರ ಬೆಳೆ ಪರಿಹಾರ ಒದಗಿಸಲು ಕ್ರಮ ವಹಿಸುವಂತೆ ತಾಲ್ಲೂಕು ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ ಎಂದು ತೋಟಗಾರಿಕೆ ಉಪನಿರ್ದೇಶಕರು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿ ಹೈನುಗಾರಿಕೆಗೆ ಉತ್ತೇಜನ ನೀಡಬೇಕು. ಸಾಮಾಜಿಕ ಅರಣ್ಯ ಬೆಳವಣಿಗೆಗೆ ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿ ರಸ್ತೆಗಳು ನಿರ್ಮಾಣ ಕಾಮಗಾರಿಗಳು ಗುಣಮಟ್ಟದ್ದಾಗಿರಬೇಕು. ರಾಷ್ಟ್ರೀಯ ಹೆದ್ದಾರಿ ರಸ್ತೆ ಕಾಮಗಾರಿಗಳಿಗೆ ಚುರುಕು ನೀಡಿ, ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಲಿಂಗೇಶ ಕಲ್ಲುಗಡಿ ನೇತೃತ್ವದಲ್ಲಿ

### ಪೆಟ್ರೋಲ್ ಡೀಸೆಲ್, ಅಡುಗೆ ಅನಿಲ ಬೆಲೆ ಏರಿಕೆ ಖಂಡಿಸಿ ಬೃಹತ್ ಪ್ರತಿಭಟನೆ

• ಉದಯವಾಹಿನಿ ಕಾರಟಗಿ

ಕೇಂದ್ರ ಬಿ.ಜೆ.ಪಿ ಸರ್ಕಾರದ ವಿರುದ್ಧ ಪೆಟ್ರೋಲ್ ಡೀಸೆಲ್, ಎಲ್.ಪಿ.ಜಿ ಗ್ಯಾಸ್ ಬೆಲೆ ಏರಿಕೆ ಹೆಚ್ಚಿಸುವುದನ್ನು ಖಂಡಿಸಿ ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಯಿತು. ಕೇಂದ್ರ ಬಿಜೆಪಿ ಸರ್ಕಾರವು ಜನ ವಿರೋಧಿ ಆಡಳಿತವನ್ನು ನಡೆಸುತ್ತಾ ದೇಶದ ಜನರು ಬಳಸುವ ದಿನನಿತ್ಯ ಬಳಸುವ ವಸ್ತು ಸಾಮಗ್ರಿ ಮತ್ತು ಡೀಸೆಲ್ ಪೆಟ್ರೋಲ್ ಮತ್ತು ಎಲ್ಪಿಜಿ ಗ್ಯಾಸ್ ಇವುಗಳ ಬೆಲೆ ಏರಿಕೆ ಮಾಡಿ ಜನರನ್ನು ಸಂಕಷ್ಟಕ್ಕೆ ಸಿಲುಕಿಸುತ್ತಿದೆ ಎಂದು ಕೊಪ್ಪಳ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಲಿಂಗೇಶ್ ಕಲ್ಲುಗಡಿ ಅವರು ಆಗ್ರಹ ವ್ಯಕ್ತಪಡಿಸಿದರು. ಕೇಂದ್ರ ಸರ್ಕಾರದ ಜನ ವಿರೋಧಿ ನೀತಿ ಆಡಳಿತವನ್ನು ವಿರೋಧಿಸಿ ಕೊಪ್ಪಳದಲ್ಲಿ ಹಮ್ಮಿಕೊಂಡ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿತ್ತು,

ನೂರಾರು ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಯುವ ಘಟಕದ ಪದಾಧಿಕಾರಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡು ಕೇಂದ್ರ ಬಿಜೆಪಿ


ಉದಯವಾಹಿನಿ ಚಿತ್ರ



ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಹಾಗೂ ಕಾಶ್ಮೀರ ಪಹಲ್ಗಾಮ್ ನಲ್ಲಿ ನಡೆದ ಉಗ್ರರ ದಾಳಿಗೆ ಕೇಂದ್ರ ಸರ್ಕಾರವೇ ನೇರ ಹೊಣೆ ಎಂದರು ದೇಶದ ಪ್ರಜೆಗಳ ರಕ್ಷಣಾ ವಿಚಾರದಲ್ಲಿ ಕೇಂದ್ರ ಸರ್ಕಾರ ನಿರ್ಲಕ್ಷ್ಯ ವಹಿಸಿದೆ ಎಂದು ಜ್ಯೋತಿ ಗೊಂಡಬಾಳ ಆರೋಪಿಸಿದರು. ಕೊಪ್ಪಳ ಪ್ರವಾಸಿ ಮಂದಿರದಿಂದ ಗಂಜಿ ಸರ್ಕಲ್ ವರೆಗೆ ನಡೆದ ಪ್ರತಿಭಟನೆ ಮೆರವಣಿಗೆ ನಡೆಯಿತು ,ಈ ಕೂಡಲೇ ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ಹಾಗೂ ಅಡುಗೆ ಅನಿಲ ಸಿಲಿಂಡರ್ ದರ ಇಳಿಕೆ ಮಾಡುವಂತೆ ಕೊಪ್ಪಳ ತಹಶೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷರು ಲಿಂಗೇಶ ಕಲ್ಲುಗಡಿ, ಜಿಲ್ಲಾ ಉಪಾಧ್ಯಕ್ಷ ಗವಿಸಿದ್ದನಗೌಡ ಪಾಟೀಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಬಸವರಾಜ ಮಲ್ಲಾಡದ, ಸಾಹಿಲ್ ಸಾಬ್, ಖಲಂದರ್ ಸಾಬ್, ಈರಣ್ಣ ಬದಾಮಿ ಕುಷ್ಟಗಿ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷರು, ಅಯ್ಯಪ್ಪ ಹವಾಲ್ದಾರ್ ಕುಷ್ಟಗಿ ಬ್ಲಾಕ್ ಅಧ್ಯಕ್ಷರು, ನಾಗರಾಜ ಭಂಗಿ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷರು, ಜೋಗದ ರವಿ ಗಂಗಾವತಿ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷರು, ಬಾಬರ್ ಗಂಗಾವತಿ ನಗರ, ಸಿದ್ದು ಹೊಸಮಠ ಗಂಗಾವತಿ ಗ್ರಾಮೀಣ, ದೇವರಾಜ ಕಟ್ಟಿಮನಿ ಕನಕಗಿರಿ ವಿಧಾನಸಭಾ, ಮಂಜುನಾಥ ನಾಗಲಾಪೂರ ಕನಕಗಿರಿ ನಗರ, ಸುನೀಲ್‌ಮೂಲಿಮನಿ ಕಾರಟಗಿ ನಗರ, ಬಸು ಮೈಲಾಪುರ, ವಿಜಯ ಕಂಬಳಿ, ಹನುಮೇಶ ಹಿರೇಖೇಡ, ಶಿವು, ನಾಗರಾಜ, ಪಂಚಾಕ್ಷರಿ, ಅಮರೇಶ ಮಡಿವಾಳ, ಹನುಮೇಶ ಅಂಟರತಾಣಾ ಇಯರರು ಇದ್ದರು.

## ಕನ್ನಡ ಸಾಹಿತ್ಯ ಸಮ್ಮೇಳನ ಲಾಂಛನ ಬಿಡುಗಡೆ

• ಉದಯವಾಹಿನಿ ಗುಳೇದಗುಡ್ಡ

ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಅಂಗವಾಗಿ ಸಮ್ಮೇಳನದ ಲಾಂಛನ ಹಾಗೂ ಪ್ರಚಾರ ಸಾಮಗ್ರಿಗಳನ್ನು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ತಾಲ್ಲೂಕು ಕಸಾಪ ಪದಾಧಿಕಾರಿಗಳು ಬಿಡುಗಡೆಗೊಳಿಸಿದರು.

ಕಸಾಪ ಜಿಲ್ಲಾ ಗೌರವ ಕೋಶಾಧ್ಯಕ್ಷ ಸಿ.ಎಂ. ಜೋಶಿ ಮಾತನಾಡಿ, ಪಟ್ಟಣದಲ್ಲಿ 5ನೇ ಸಮ್ಮೇಳನ ನಡೆಯುತ್ತಿರುವುದು ಖುಷಿಯ ವಿಚಾರವಾಗಿದ್ದು, ಈ ಸಮ್ಮೇಳನವನ್ನು ಬಹಳಷ್ಟು ಅರ್ಥಪೂರ್ಣವಾಗಿ, ವಿಜೃಂಭಣೆಯಿಂದ ಆಚರಿಸುವ ಹೊಣೆ ಎಲ್ಲಾ ಸಾಹಿತ್ಯಾಸಕ್ತರಾಗಿದ್ದು, ಪ್ರತಿಯೊಬ್ಬರು ಈ ಸಮ್ಮೇಳನಕ್ಕೆ ಬೆಂಬಲಿಸಿ, ಸಮ್ಮೇಳನ ಯಶಸ್ವಿಗೆ ಸಹಕರಿಸಬೇಕೆಂದು ಮನವಿ ಮಾಡಿದರು. ಕರವೇ ತಾಲ್ಲೂಕು ಅಧ್ಯಕ್ಷ ರವಿ ಅಂಗಡಿ ಮಾತನಾಡಿ, ಕನ್ನಡ ಸಮ್ಮೇಳನದಲ್ಲಿ ಈ ಬಾರಿ ಬರಗುಂಡಿ ಅವರನ್ನು ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು, ಖುಷಿಯ ವಿಚಾರವಾಗಿದ್ದು, ಉತ್ತಮ ವಾಗ್ಮೀಗಳು, ಬರಹಗಾರಾಗಿದ್ದಾರೆ. ಸಮ್ಮೇಳನದ ಯಶಸ್ವಿಗೆ ಕರವೇ ಸಹಕರಿಸುತ್ತದೆ.

## ಗ್ರಾ.ಪಂ ಗಳಿಂದ ದಾಖಲೆಯ 26 ಕೋಟಿ ರೂ. ಕರ ವಸೂಲಿ

• ಉದಯವಾಹಿನಿ ಕಲಬುರಗಿ

ಕಳೆದ 2024-25ನೇ ಸಾಲಿನಲ್ಲಿ ಜಿಲ್ಲೆಯ 261 ಗ್ರಾಮ ಪಂಚಾಯತಿಗಳಿಂದ ದಾಖಲೆ ಪ್ರಮಾಣದಲ್ಲಿ 26 ಕೋಟಿ ರೂ. ಕರ ವಸೂಲಿ ಸಂಗ್ರಹವಾಗಿದೆ. ಕಳೆದ 10 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಕರ ವಸೂಲಿ ದ್ವಿಗುಣವಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಹೇಳಿದರು.

ಗುರುವಾರ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ತಾಲ್ಲೂಕಾ ಪಂಚಾಯತ್ ಕಚೇರಿಯಿಂದ ಆಯೋಜಿಸಿದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸ್ಥಳೀಯ ಗ್ರಾಮ ಪಂಚಾಯತಿಗಳ ಸಮಗ್ರ ಅಭಿವೃದ್ಧಿಗೆ ಕರ ವಸೂಲಿ ಹಣ ಪೂರಕವಾಗಲಿದೆ. ಗ್ರಾಮೀಣ ಮಟ್ಟದಲ್ಲಿ ಅನೇಕ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹರಿಸುವ ನಿಟ್ಟಿನಲ್ಲಿ ಪಿಡಿಓಗಳು ಕಾರ್ಯಪ್ರವೃತ್ತರಾಗಬೇಕು. ವಿಶೇಷವಾಗಿ ಗ್ರಾಪಂಗಳಿಗೆ ಹೆಚ್ಚಿನ ಅಧಿಕಾರ ನೀಡಲಾಗಿದೆ.

ಆರ್‌ಡಿಪಿಆರ್ ಇಲಾಖೆಯಿಂದ ಅನೇಕ ಯೋಜನೆ ಜಾರಿಗೆ ತರಲಾಗಿದ್ದು, ಗ್ರಾಮಗಳ ಉದ್ಧಾರಕ್ಕೆ ಶ್ರಮಿಸಬೇಕು ಎಂದರು. ಗ್ರಾಮ ಪಂಚಾಯತಿಯ ಬಿಲ್ ಕಲೆಕ್ಟರ್, ವಾಟರ್ ಮ್ಯಾನ್, ಕಂಪ್ಯೂಟರ್ ಆಪರೇಟರ್, ಜವಾನರ ಮೇಲೆ ಪಿಡಿಓಗಳು ನಿಯಂತ್ರಿಸಲು ಅವಕಾಶವಿದ್ದು, ಸಣ್ಣ ಪ್ರಮಾಣದಲ್ಲಿ



> ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವ್ಯವಸ್ಥೆ ಸಬಲೀಕರಣಕ್ಕೆ ಎಲ್ಲಾ ಸಿಬ್ಬಂದಿಗಳ ಸಹಕಾರ ಅಗತ್ಯ. ಗ್ರಾಪಂ ಮಟ್ಟದ ಸಿಬ್ಬಂದಿ ಯಾವುದೇ ದೂರಿಗೆ ಅವಕಾಶ ನೀಡದೆ ತಮ್ಮ ಕೆಲಸದಲ್ಲಿ ತೊಡಗಿಸಿಕೊಂಡರೆ ಖಂಡಿತವಾಗಿಯೂ ಗ್ರಾಮಗಳು ಅಭಿವೃದ್ಧಿಯಾಗಲಿವೆ
> -ಸೈಯದ್ ಪಟೇಲ್, ತಾ.ಪಂ ಇ.ಓ ಎಂ.ಡಿ

ದಂಡ ಹಾಕುವ ಅಧಿಕಾರ ಇದೆ. ಹೀಗಾಗಿ, ಸಿಬ್ಬಂದಿ ತಪ್ಪು ಮಾಡಿದರೆ ಮೊದಲಿಗೆ ನೋಟಿಸ್ ಜಾರಿ ಮಾಡಿ ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸಬಹುದು. ಸಾರ್ವಜನಿಕರು ಒಳಗೊಂಡು ಗ್ರಾಮ ಸಭೆ, ಸಾಮಾನ್ಯ ಸಭೆ ಮಾಡಿದರೆ ಅರ್ಧ ತೊಂದರೆಗಳು ತಪ್ಪಲಿವೆ ಎಂದು ಭಂವರ್ ಸಿಂಗ್ ಮೀನಾ ತಿಳಿಸಿದರು.

## ಮನೆ ಬೀಗ ಮುರಿದು 1.40 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

• ಉದಯವಾಹಿನಿ ಕಲಬುರಗಿ

ಮನೆ ಬೀಗ ಮುರಿದು 1.40 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ಇಲ್ಲಿನ ಮಿಲ್ಲತ್ ನಗರದಲ್ಲಿ ನಡೆದಿದೆ. ಸಲ್ಮಾ ಬೇಗಂ ಆರೀಫ್ ಪಟೇಲ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 40 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಸುತ್ತುಂಗುರ, 1 ಲಕ್ಷ ರೂ.ಮೌಲ್ಯದ 5 ಗ್ರಾಂ.ಬಂಗಾರದ 5 ಸುತ್ತುಂಗುರ ಸೇರಿ 1.40 ಲಕ್ಷ ರೂ. ಮೌಲ್ಯದ ಚಿನ್ನಾಭರಣ ದೋಚಿಕೊಂಡು ಹೋಗಿದ್ದಾರೆ.

ಇವರು ಸಹೋದರನ ಮದುವೆ ಸಮಾರಂಭಕ್ಕೆಂದು ಮನೆಗೆ ಬೀಗ ಹಾಕಿಕೊಂಡು ಮಕ್ಕಳನ್ನು ಕರೆದುಕೊಂಡು ಹೊಡಲ್ ಗ್ರಾಮಕ್ಕೆ ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದು ಬಂದಿದೆ. ಈ ಸಂಬಂಧ ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಕಾಲುಬಾಯಿ ಜ್ವರದ ಲಸಿಕೆ ಅಭಿಯಾನ

• ಉದಯವಾಹಿನಿ ಬಾದಾಮಿ

ತಾಲ್ಲೂಕಿನಾದ್ಯಂತ ಬರುವ ಎ.26 ರಿಂದ ಜೂನ್ 9 ರ ವರೆಗೆ 7 ನೇ ಸುತ್ತಿನ ಕಾಲುಬಾಯಿ ಜ್ವರದ ಲಸಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾ.ಪಂ.ಇಒ ಸುರೇಶ ಕೊಕ್ಕರೆ ತಿಳಿಸಿದರು. ಅವರು ನಗರದ ಪಶು ಆಸ್ಪತ್ರೆಯ ಆವರಣದಲ್ಲಿ ಜರುಗಿದ ತಾಲ್ಲೂಕಾಮಟ್ಟದ ನಿರ್ವಹಣಾ ಸಮಿತಿಯ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. 20 ನೇ ಜಾನುವಾರು ಗಣತಿ ಪ್ರಕಾರ ತಾಲ್ಲೂಕಿನಲ್ಲಿ 583 ಬ್ಲಾಕಗಳಿದ್ದು, ದನ 38455 ಹಾಗೂ ಎಮ್ಮೆ 22730 ಸೇರಿದಂತೆ ಒಟ್ಟು 61185 ಜಾನುವಾರುಗಳಿವೆ. ರೈತರು ಪ್ರತಿಯೊಂದು ಜಾನುವಾರುಗಳಿಗೆ ಲಸಿಕೆ ಹಾಕುವ ಮೂಲಕ ಕಾಲು ಮತ್ತು ಬಾಯಿಜ್ವರ ರೋಗದ ನಿರ್ಮೂಲನೆಗೆ ಸಹಕಾರ ನೀಡಬೇಕು ಎಂದು ಮಾಹಿತಿ ನೀಡಿದರು. ಮುಖ್ಯಪಶುವೈದ್ಯಾಧಿಕಾರಿ ಡಾ. ಶ್ರೀಕಾಂತ ಸಬನೀಸ ಗಣತಿ ಕುರಿತು ಸುವಿವರವಾದ ಮಾಹಿತಿಯನ್ನು ನೀಡಿದರು.

## ಚಿನ್ನಾಭರಣ ಕಳವು

• ಉದಯವಾಹಿನಿ ಭದ್ರಾವತಿ

ತಾಲ್ಲೂಕಿನ ಗೊಂದಿ ಗ್ರಾಮದ ಕಾಲುವೆಯಲ್ಲಿ ಈಜಲು ಹೋಗುವ ಮುನ್ನ, ಕಾರಿನಲ್ಲಿ ಇರಿಸಿದ್ದ ?6 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ನಗದು ಕಳುವಾಗಿರುವ ಘಟನೆ ನಡೆದಿದೆ.

ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕಿನ ಕೋಣನೂರು ಗ್ರಾಮದಲ್ಲಿ ಅಬಿದಾ ಬಾನು 75 ಗ್ರಾಂ ತೂಕದ ಚಿನ್ನಾಭರಣ ಹಾಗೂ 10 ಸಾವಿರ ನಗದು ಕಳೆದುಕೊಂಡಿದ್ದಾರೆ. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಏ.20ರಂದು ನಗರದ ಜನ್ನಾಪುರದ ಚಂದ್ರಾಲಯದಲ್ಲಿ ಸಂಬಂಧಿಕರ ಮದುವೆ ಮುಗಿಸಿ ಗೊಂದಿ ಗ್ರಾಮಕ್ಕೆ ತೆರಳಿದ್ದ ಅಬಿದಾ ಬಾನು ಸೇರಿದಂತೆ ಒಟ್ಟು 20 ಮಂದಿ ಕಾಲುವೆಯಲ್ಲಿ ಈಜಾಡಲು ಮುಂದಾದರು.

## ಭಯೋತ್ಪಾದಕರ ದಾಳಿ: ಎಬಿವಿಪಿ ತೀವ್ರ ಖಂಡನೆ

• ಉದಯವಾಹಿನಿ ವಿಜಯಪುರ

ಜಮ್ಮು ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಭಯೋತ್ಪಾದಕರ ದಾಳಿಯನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ಅತ್ಯಂತ ತೀವ್ರವಾಗಿ ಖಂಡಿಸುತ್ತದೆ.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಮಾಳಿ ಮಾತನಾಡಿ, ಜಮ್ಮು ಕಾಶ್ಮೀರದ ಪಹಲ್ಗಾಮನಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ಹೇಡಿತನದ ಗುಂಡಿನ ದಾಳಿ ಕೃತ್ಯವನ್ನು ಎಬಿವಿಪಿ ತೀವ್ರವಾಗಿ ಖಂಡಿಸುತ್ತದೆ. ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವೆಂಬುದು ಸಾರ್ವಕಾಲಿಕ ಸತ್ಯ, ಅಲ್ಲಿನ ಪ್ರತ್ಯೇಕವಾದದ ಮನಸ್ಥಿತಿಯನ್ನು ಬದಲಾಯಿಸಲು ಹಾಗೂ ಜನ-ಜೀವನ ಸ್ಥಿತಿಗತಿಗಳನ್ನು ಸ್ಥಿರಗೊಳಿಸಿ ಶಾಂತಿಯುತ ಕಾಶ್ಮೀರವೆಂಬುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಈಗಾಗಲೇ ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿದೆ ಎಂದರು. ಮಹಾನಗರ ಸಹ ಕಾರ್ಯದರ್ಶಿ ಅಭಿಷೇಕ ಬಡಿಗೇರ ಮಾತನಾಡಿ, ಜಮ್ಮು ಕಾಶ್ಮೀರದಲ್ಲಿ ಕೇಂದ್ರ ಸರಕಾರ ಹಲವಾರು ಭಿಗಿ ಭದ್ರತೆ ಒದಗಿಸಿದರೂ ಸಹ ಭಯೋತ್ಪಾದಕರ


ಉದಯವಾಹಿನಿ ಚಿತ್ರ

ನುಸುಳುಕೋರರ ಹಾವಳಿ ತಡೆಗಟ್ಟಲು ಸಾಧ್ಯವಾಗಿಲ್ಲ. ಇತ್ತೀಚೆಗೆ ವಲಸೆ ಕಾರ್ಮಿಕರ ಮೇಲಿನ ದಾಳಿಗಳು ಮಾರುಕಟ್ಟೆಗಳಲ್ಲಿ ದಾಳಿಗಳು ಹಾಗೂ ನಡೆದಿರುವ ಪ್ರವಾಸಿಗರ ಮೇಲಿನ ದಾಳಿ ಗಮನಿಸುವುದಾದರೆ ಕಾಶ್ಮೀರದ ಶಾಂತಿ ಮತ್ತು ಭಾರತದೊಂದಿಗಿನ ಏಕತೆಗೆ ಉಗ್ರರು ಅರ್ಥಾತ್ ಪ್ರತ್ಯೇಕವಾದಿಗಳು ತೀವ್ರ ಸವಾಲುವೊಡ್ಡುತ್ತಿರುವುದು ಕಳವಳಕಾರಿಯದ ಸಂಗತಿಯಾಗಿದೆ.

ಆದ್ದರಿಂದ ಕೇಂದ್ರ ಸರ್ಕಾರ ಉಗ್ರದ ವಿರುದ್ಧ ವ್ಯಾಪಕ ಕಠಿಣ ಕ್ರಮಗಳನ್ನು ಕೈಗೊಂಡು ತಕ್ಕ ಉತ್ತರವನ್ನು ನೀಡಬೇಕೆಂದು ವಿದ್ಯಾರ್ಥಿ ಪರಿಷತ್ ಆಗ್ರಹಿಸುತ್ತದೆ. ಭಯೋತ್ಪಾದಕರ ದಾಳಿಯಲ್ಲಿ ತೀವ್ರವಾಗಿ ಗಾಯಗೊಂಡಿರುವವರಿಗೆ ಹಾಗೂ ಹತ್ಯೆಗೊಳಗಾಗಿರುವವರಿಗೆ ವಿದ್ಯಾರ್ಥಿ ಪರಿಷತ್ ಸಂತಾಪವನ್ನು ಸೂಚಿಸುತ್ತದೆ.

## ಲಂಚ ಸಾಬೀತಾದರೆ ನೇರ ಜೈಲಿಗೆ- ಅಧಿಕಾರಿಗಳಿಗೆ ಅಶೋಕ್ ರೈ ಎಚ್ಚರಿಕೆ

• ಉದಯವಾಹಿನಿ ಪುತ್ತೂರು

ಅಕ್ರಮಸಕ್ರಮ ವಿಚಾರವೂ ಸೇರಿದಂತೆ ಯಾವುದೇ ವಿಚಾರದಲ್ಲಿ ಲಂಚಕ್ಕೆ ಕೈಯೊಡ್ಡಿ ಅದು ಸಾಬೀತಾದರೆ ಅಂತವರನ್ನು ಜೈಲಿಗೆ ಹಾಕುವ ಕೆಲಸ ಮಾಡುತ್ತೇನೆ. ಇದರಲ್ಲಿ ಯಾವುದೇ ಮುಲಾಜಿಲ್ಲ. ಹಾಗಾಗಿ ಯಾರಿಂದಲೂ ಹಣ ತೆಗೆದುಕೊಳ್ಳಲು ಮುಂದಾಗಬೇಡಿ ಎಂದು ಶಾಸಕ ಅಶೋಕ್ ರೈ ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಅವರು ಕೆಯ್ಯೂರು ಗ್ರಾಮದ ಕೆಯ್ಯೂರು ಜಯ ಕರ್ನಾಟಕ ಸಭಾ ಭವನದಲ್ಲಿ ನಡೆದ ಪುತ್ತೂರು ವಿಧಾನಸಭಾ ಕ್ಷೇತ್ರದ 11 ನೇ ಅಕ್ರಮ ಸಕ್ರಮ ಬೈಠಕ್‌ನಲ್ಲಿ ಹಕ್ಕುಪತ್ರ ವಿತರಿಸಿ ಮಾತನಾಡಿದರು.

ಈಗಾಗಲೇ ಕೆಲವು ಅಧಿಕಾರಿ-ಸರ್ಕಾರಿ ಸಿಬಂದಿಗಳು ಬ್ರೋಕರ್ ಗಳ ಮೂಲಕ ಹಣ ಪಡೆದುಕೊಳ್ಳುವ ಕೆಲಸ ಮಾಡುತ್ತಿದ್ದಾರೆ ಎಂಬ ಮಾಹಿತಿ ಬಂದಿದೆ. ಬಡವರ ರಕ್ತ ಹೀರುವ ಕೆಲಸ ಮಾಡಬೇಡಿ. ಜಾಗ ನಿಮ್ಮದು ಹಣ ಯಾಕೆ ಕೊಡುತ್ತೀರಿ. ಯಾರಿಗೂ ಹಣ ಕೊಡಬೇಡಿ ಎಂದು ಅವರು ಜನತೆಗೂ ಮನವಿ ಮಾಡಿದರು. ಬಿಜೆಪಿ ಕಾರ್ಯಕರ್ತರು ಅಕ್ರಮ ಸಕ್ರಮ ಮಾಡಿಕೊಡಿ ಎಂದು ಮನವಿ ಮಾಡುತ್ತಿದ್ದಾರೆ. ತಮ್ಮ ಜತೆಗೆ ಕೆಲಸ ಮಾಡಿದ ಕಾರ್ಯಕರ್ತರನ್ನು ಮಾಜಿ ಶಾಸಕರು ಕಡೆಗಣಿಸಿದ್ದು,


ಉದಯವಾಹಿನಿ ಚಿತ್ರ

ದೇವರು ಮೆಚ್ಚದ ಕೆಲಸವಾಗಿದೆ. ಆದರೆ ನಾನು ಯಾವುದೇ ಪಕ್ಷ ಭೇದ ಇಲ್ಲದೆ ಕಾನೂನಾತ್ಮಕವಾಗಿ ಸರಿ ಇದ್ದರೆ ಅಂತವರ ಕೆಲಸ ಮಾಡಿಕೊಡುತ್ತಿದ್ದೇನೆ ಎಂದರು.

**ಪುತ್ತೂರು ಜಿಲ್ಲೆ ರೈ ಗಳಿಂದ ಮಾತ್ರ ಸಾಧ್ಯ:** ಮುಂದಿನ ದಿನಗಳಲ್ಲಿ ಪುತ್ತೂರು ಜಿಲ್ಲೆಯಾಗಬೇಕಾದರೆ ಅದು ಅಶೋಕ್ ರೈ ಇದ್ದರೆ ಮಾತ್ರ ಸಾಧ್ಯ. ಈಗಾಗಲೇ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡುವ ಮೂಲಕ ರಾಜ್ಯದಲ್ಲಿ ಯಾವ ಶಾಸಕರೂ ಮಾಡದ ಸಾಧನೆಯನ್ನು ಮಾಡುತ್ತಿದ್ದಾರೆ. ಮೆಡಿಕಲ್ ಕಾಲೇಜು ತರುವುದು ಸುಲಭದ ಕೆಲಸವಲ್ಲ ಅದನ್ನು ತಂದು ದೊಡ್ಡ ಕೆಲಸ ಮಾಡಿದ್ದಾರೆ.

ಅಕ್ರಮ ಸಕ್ರಮ ಪುತ್ತೂರು ಬಿಟ್ಟರೆ ಬೇರೆಲ್ಲೂ ಈ ಮಟ್ಟದಲ್ಲಿ ನಡೆದಿಲ್ಲ. ಇವರಂತ ಶಾಸಕರು ಸಿಕ್ಕಿರುವುದು ಜನತೆಯ ಪುಣ್ಯವಾಗಿದೆ ಎಂದು ಪುತ್ತೂರು ತಹಶೀಲ್ದಾರ್ ಪುರಂದರ ಹೆಗ್ಡೆ ಹೇಳಿದರು. ಶಾಸಕರ ಮನೆಯಲ್ಲಿ ಮದುವೆಯ ಸಂಭ್ರಮ ಇದ್ದರೂ ಅದರಲ್ಲಿ ಭಾಗವಹಿಸದೇ ಇವತ್ತು ಕೆಯ್ಯೂರಿನಲ್ಲಿ ಅಕ್ರಮ ಸಕ್ರಮ ಕಡತ ವಿಲೇವಾರಿಗೆ ಕೆಯ್ಯೂರಿಗೆ ಬಂದಿದ್ದಾರೆ ಇದು ಶಾಸಕರ ಕಾರ್ಯವೈಖರಿಗೆ ಸ್ಪಷ್ಟ ಉದಾಹರಣೆ. ಗ್ರಾಮ ಗ್ರಾಮಗಳಿಗೆ ಬಂದು ಮನೆ ಅಡಿಸ್ಥಳಕ್ಕೆ ಹಕ್ಕು ಪತ್ರ ಕೊಡುವ ಕೆಲಸವಾಗಿದೆ.

**ನ್ಯಾಯ ಕೊಡಿಸಿದ ತೃಪ್ತಿ**

ಬಡಗನ್ನೂರು ಗ್ರಾಮದ ಮೈಂದನಡ್ಕ ನಿವಾಸಿ ದೃಷ್ಟಿ ಹೀನರಾದ ಹಿರಿಯ ವ್ಯಕ್ತಿ ಕಾಂತಪ್ಪ ಪೂಜಾರಿಯವರು ತನ್ನ ಮನೆಯ ಅಡಿಸ್ಥಳದ ಹಕ್ಕು ಪತ್ರಕ್ಕಾಗಿ 35 ವರ್ಷಗಳಿಂದ ಕಚೇರಿಗೆ ಅಲೆದಾಡುತ್ತಿದ್ದಾರೆ. ಅವರನ್ನು ಕರೆಸಿ ಅವರಿಗೆ ಹಕ್ಕು ಪತ್ರವನ್ನು ನೀಡುವ ಕೆಲಸವನ್ನು ಮಾಡಿದ್ದೇನೆ. ಕಾಂತಪ್ಪ ಪೂಜಾರಿ ಯಾರಿಗೂ ಹಣ ಕೊಡದಂತೆ ಸೂಚಿಸಿದ್ದೆ, ಭ್ರಷ್ಟಾಚಾರವಿಲ್ಲದೆ ಕ್ಷೇತ್ರದ ಹಿರಿಯ ಜೀವವೊಂದಕ್ಕೆ ನ್ಯಾಯ ಕೊಡಿಸಿದ ತೃಪ್ತಿ ನನ್ನಲ್ಲಿದೆ - ಅಶೋಕ್ ರೈ

### ಜಿಲ್ಲೆಯಲ್ಲಿ ಕಳೆದ 7-8 ವರ್ಷಗಳಿಂದ ಮಲೇರಿಯಾ ಪ್ರಕರಣಗಳ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಇಳಿಕೆ


# ದಾವಣಗೆರೆ ಜಿಲ್ಲೆ ಈಗ ಮಲೇರಿಯಾ ಮುಕ್ತ: ಅಧಿಕೃತ ಘೋಷಣೆಯೊಂದೇ ಬಾಕಿ

• ಉದಯವಾಹಿನಿ ದಾವಣಗೆರೆ

ಜಿಲ್ಲೆಯಲ್ಲಿ ಕಳೆದ 7-8 ವರ್ಷಗಳಿಂದ ಮಲೇರಿಯಾ ಪ್ರಕರಣಗಳ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಿದ್ದು, ಜಿಲ್ಲೆಯು ಮಲೇರಿಯಾ ಮುಕ್ತ ಎಂಬ ಹಿರಿಮೆ ಹೊಂದಲು ಅಧಿಕೃತ ಘೋಷಣೆಯೊಂದೇ ಬಾಕಿ ಇದೆ.

ಯಾವ ಜಿಲ್ಲೆಯಲ್ಲಿ 3 ವರ್ಷಗಳಿಂದ 1ಕ್ಕಿಂತ ಹೆಚ್ಚು ಮಲೇರಿಯಾ ಪ್ರಕರಣಗಳು ಪತ್ತೆಯಾಗದಿದ್ದರೆ, ಆರೋಗ್ಯ ಇಲಾಖೆಯ ಮಾನದಂಡಗಳ ಪ್ರಕಾರ ಆ ಜಿಲ್ಲೆಯನ್ನು 'ಮಲೇರಿಯಾ ಮುಕ್ತ' ಎಂದು ಘೋಷಿಸಬಹುದಾಗಿದೆ. ಜಿಲ್ಲೆಯಲ್ಲಿ ಕಳೆದ ಕೆಲ ವರ್ಷಗಳಿಂದ ಅತೀ ಕಡಿಮೆ ಪ್ರಕರಣಗಳು ಕಂಡು ಬಂದಿವೆ. ಆದರೆ, ಈ ಎಲ್ಲಾ ಪ್ರಕರಣಗಳು ವಲಸೆ ಕಾರ್ಮಿಕರಲ್ಲಿ ಪತ್ತೆಯಾಗಿವೆ. ಸ್ಥಳೀಯರಲ್ಲಿ ಒಂದೇ ಒಂದು ಪ್ರಕರಣವೂ ಕಂಡುಬಂದಿಲ್ಲ.

7-8 ವರ್ಷಗಳಿಂದ ಜಿಲ್ಲೆಯಲ್ಲೇ ನೆಲೆಸಿರುವ ಜನರಲ್ಲಿ ಯಾರೊಬ್ಬರಲ್ಲೂ ಮಲೇರಿಯಾ ಜ್ವರ ಕಾಣಿಸಿಕೊಂಡಿಲ್ಲ. ದಕ್ಷಿಣ ಕನ್ನಡದ ಮಂಗಳೂರು, ಗೋವಾ, ದಕ್ಷಿಣ ಆಫ್ರಿಕಾದಿಂದ ಬರುವ ವಲಸಿಗರಲ್ಲಿ ಮಾತ್ರ ಕೆಲವು ಮಲೇರಿಯಾ ಪ್ರಕರಣ ಕಂಡುಬಂದಿವೆ.


ಉದಯವಾಹಿನಿ ಚಿತ್ರ

**ಮಲೇರಿಯಾ ನಿಯಂತ್ರಣ ಕ್ರಮಗಳು**

ಮಲೇರಿಯಾ ತಡೆಗೆ ಆರೋಗ್ಯ ಇಲಾಖೆಯು ಜಿಲ್ಲೆಯಲ್ಲಿ ಈಗಾಗಲೇ ಹಲವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲೂ ಜ್ವರದಿಂದ ಬಳಲುವವರಿಗೆ ಮಲೇರಿಯಾ ಪತ್ತೆಗೆ ರಕ್ತಲೇಪನ ಪರೀಕ್ಷೆ ನಡೆಸಲಾಗುತ್ತಿದೆ. ಮಲೇರಿಯಾ ಕೈಗೊಂಡ ಇತರ ಪ್ರಮುಖ ಕ್ರಮಗಳು ಇಲ್ಲಿವೆ. ಶೀಘ್ರ ಪತ್ತೆ ಸಂಪೂರ್ಣ ಚಿಕಿತ್ಸೆ, 24 ಗಂಟೆಗಳಲ್ಲಿ ರಕ್ತಲೇಪನಗಳ ಪರೀಕ್ಷೆ ಮತ್ತು ಚಿಕಿತ್ಸೆ ಎಲ್ಲಾ ಹಂತಗಳಲ್ಲೂ ವಲಸಿಗರ ಮೇಲೆ ಕಣ್ಣಾವಲು, ಶಾಲಾ ಕಾಲೇಜುಗಳು ಗ್ರಾಮಗಳಲ್ಲಿ ಜಾಗೃತಿ ಕಾರ್ಯಕ್ರಮ ಮಲೇರಿಯಾ ತಡೆಗೆ ಕೀಟನಾಶಕ ಸಿಂಪಡಣೆ, ಜೈವಿಕ ನಿಯಂತ್ರಣಾ ವಿಧಾನವಾದ ಲಾರ್ವಾಹಾರಿ ಮೀನುಗಳನ್ನು ಕೆರೆ ಹೊಂಡ ಬಾವಿ ದೊಡ್ಡ ನೀರಿನ ತೊಟ್ಟಿಗಳಲ್ಲಿ ಬಿಡುವುದು

> ಆಶ್ರಿತ ರೋಗಗಳ ನಿಯಂತ್ರಣದಲ್ಲಿ ಸಾರ್ವಜನಿಕರ ಪಾತ್ರ ಮುಖ್ಯವಾಗಿದೆ. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರ ವಹಿಸಬೇಕು. ನೀರಿನ ಸಂಗ್ರಹಗಳನ್ನು ಮುಚ್ಚಿಡಬೇಕು. ಸೊಳ್ಳೆ ಪರದೆ ಸೊಳ್ಳೆ ನಿರೋಧ ಬಳಸುವುದು ಅಗತ್ಯ
> -ಕೆ.ಎಚ್.ಗಂಗಾಧರ್ ಜಿಲ್ಲಾ ಮಲೇರಿಯಾ ನಿರ್ಮೂಲನಾ ಅಧಿಕಾರಿ

ಸ್ಥಳೀಯವಾಗಿ ಯಾರೊಬ್ಬರಲ್ಲೂ ಮಲೇರಿಯಾ ಸೋಂಕು ಕಾಣಿಸಿಕೊಳ್ಳದ ಕಾರಣಕ್ಕೆ ಜಿಲ್ಲೆಯನ್ನು ಮಲೇರಿಯಾ ಮುಕ್ತ ಎಂದು ಘೋಷಿಸಲು ಮಾನದಂಡಗಳು ಅನುವು ಮಾಡಿಕೊಡುತ್ತವೆ ಎಂದು ಜಿಲ್ಲಾ ಮಲೇರಿಯಾ ನಿರ್ಮೂಲನಾ ಅಧಿಕಾರಿ ಕೆ.ಎಚ್.ಗಂಗಾಧರ್ ವಿವರಿಸಿದರು.

ಜಿಲ್ಲೆಯ ಹಕ್ಕಿಪಿಕ್ಕಿ ಸಮುದಾಯದವರು ದಕ್ಷಿಣ ಆಫ್ರಿಕಾ ಸೇರಿದಂತೆ ಇನ್ನಿತರ ರಾಷ್ಟ್ರಗಳಿಗೆ ವ್ಯಾಪಾರದ ಕಾರಣಕ್ಕೆ ವಲಸೆ ಹೋಗುತ್ತಾರೆ. ಗೋವಾ ರಾಜ್ಯಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ತೆರಳುತ್ತಾರೆ. ಹೊರ ರಾಜ್ಯ ಅಥವಾ ವಿದೇಶಗಳಲ್ಲಿ ಕೆಲ ತಿಂಗಳು ಅಥವಾ ಕೆಲ ವರ್ಷ ಕಳೆದ ಬಳಿಕ ಜಿಲ್ಲೆಗೆ ಮರಳಿದಾಗ ಕೆಲವೊಮ್ಮೆ ಅವರಲ್ಲಿ ಜ್ವರ ಕಾಣಿಸಿಕೊಳ್ಳುತ್ತದೆ. ಆಸ್ಪತ್ರೆಯಲ್ಲಿ ರಕ್ತ ಲೇಪನ ಪರೀಕ್ಷೆ ನಡೆಸಿದಾಗ ಮಲೇರಿಯಾ ಪತ್ತೆಯಾಗುತ್ತಿದೆ. ಇಂತಹ ಪ್ರಕರಣಗಳನ್ನು 'ವಲಸೆ ಪ್ರಕರಣ' ಎಂದು ಗುರುತಿಸಲಾಗುತ್ತದೆ.

ಜಿಲ್ಲೆಯಲ್ಲೇ ನೆಲೆಸಿರುವವರಲ್ಲಿ ಮಲೇರಿಯಾ ಜ್ವರ ಪತ್ತೆಯಾದರೆ, ಅವುಗಳನ್ನು ಸ್ಥಳೀಯ ಪ್ರಕರಣ' ಎಂದು ಗುರುತಿಸಲಾಗುತ್ತಿದೆ. ಕಳೆದ ಕೆಲ ವರ್ಷಗಳಿಂದ ಜಿಲ್ಲೆಯಲ್ಲಿ ಸ್ಥಳೀಯ ಪ್ರಕರಣಗಳು ಪತ್ತೆಯಾಗಿಲ್ಲ ಎಂದು ತಿಳಿಸಿದರು. ಜಿಲ್ಲೆಯು 'ಮಲೇರಿಯಾ ಮುಕ್ತ'ವಾಗಿರುವ ಬಗ್ಗೆ ಆರೋಗ್ಯ ಇಲಾಖೆಯು ಜಿಲ್ಲಾ ಮಟ್ಟದ ಅಧಿಕಾರಿಗಳು ರಾಜ್ಯ ಸರ್ಕಾರಕ್ಕೆ ಅಂಕಿ ಅಂಶಗಳ ಸಮೇತ ವರದಿಯನ್ನು ಸಲ್ಲಿಸಿದ್ದಾರೆ. ರಾಜ್ಯಮಟ್ಟದ ಹಿರಿಯ ಆರೋಗ್ಯಾಧಿಕಾರಿಗಳು ಈಗಾಗಲೇ ಜಿಲ್ಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ವರದಿಯನ್ನು ಸ್ವೀಕರಿಸಿದ್ದಾರೆ. ಮಾತ್ರವಲ್ಲದೇ ಜಿಲ್ಲೆಯನ್ನು ಮಲೇರಿಯಾ ಮುಕ್ತ ಎಂದು ಘೋಷಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದಾರೆ. ಕೇಂದ್ರದ ಆರೋಗ್ಯ ಇಲಾಖೆಯ ಅಧಿಕಾರಿಗಳ ತಂಡ ಜಿಲ್ಲೆಗೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ, ಅಧಿಕೃತವಾಗಿ ಈ ಬಗ್ಗೆ ಘೋಷಣೆ ಮಾಡಬೇಕಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ.

**ವೃಷಭ** ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಮಿಥುನ** ಕೆಲವು ಒತ್ತಡ ನಿಮ್ಮ ಸಹನೆಯನ್ನು ಪರೀಕ್ಷಿಸುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು.

**ಕರ್ಕಾಟಕ** ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ.

**ಸಿಂಹ** ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು.

**ಕನ್ಯಾ** ಉತ್ತಮ ಲಾಭ ಪಡೆಯಲು ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ತುಲಾ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ವ್ಯಾಪಾರಿಗಳಿಗೆ ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು.

**ವೃಶ್ಚಿಕ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಪತ್ನಿಯೊಂದಿಗೆ ಶಾಪಿಂಗ್ ಅನ್ನು ಆನಂದಿಸುತ್ತೀರಿ.

**ಧನಸ್ಸು** ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ.

**ಮಕರ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು.

**ಕುಂಭ** ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ಮೀನ** ಅನಾವಶ್ಯಕ ಉದ್ವೇಗ ಮತ್ತು ಚಿಂತೆ ನಿಮ್ಮ ಜೀವನದ ರಸ ಹೀರಬಹುದು ನಿಮ್ಮನ್ನು ಖಾಲಿಯಾಗಿಸಬಹುದು. ಇವುಗಳನ್ನು ತೊಡೆದುಹಾಕದಿದ್ದಲ್ಲಿ ಅವು ಕೇವಲ ನಿಮ್ಮ ಸಮಸ್ಯೆಯನ್ನು ಉಲ್ಬಣಗೊಳಿಸುತ್ತವೆ.

## ವೈದ್ಯರ ನಿರ್ಲಕ್ಷ್ಯ, ಬಾಣಂತಿ ಸಾವು: ಶುಶ್ರೂಷಕ ಸೇವೆಯಿಂದ ವಜಾ

• ಉದಯವಾಹಿನಿ ವಿಜಯನಗರ

ಹೊಸಪೇಟೆಯ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದ ಬಾಣಂತಿ ಸಾವನ್ನಪ್ಪಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸ್ತ್ರೀ ರೋಗ ತಜ್ಞೆ ಹಾಗೂ ಹಾಗೂ ಶುಶ್ರೂಷಕರೊಬ್ಬರನ್ನು ಸೇವೆಯಿಂದ ವಜಾಗೊಳಿಸಿ ಜಿಲ್ಲಾವೈದ್ಯಾಧಿಕಾರಿ ಡಾ.ಶಂಕರ್ ನಾಯ್ಕ ಆದೇಶ ಹೊರಡಿಸಿದ್ದಾರೆ.

ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ದಶಮಾಪುರ ಗ್ರಾಮದ ಬಾಣಂತಿ ಶಾಂತಾ(26) ಸಾವನ್ನಪ್ಪಿದ್ದಾರೆ. ಹೆರಿಗೆ ನೋವಿನಿಂದ ಭಾನುವಾರ ಹೊಸಪೇಟೆಯ ಎಂಸಿಎಚ್ ಆಸ್ಪತ್ರೆಗೆ ದಾಖಲಾಗಿದ್ದರು. ಸ್ತ್ರೀ ರೋಗ ತಜ್ಞೆ ಡಾ.ಸಿಂಧು ಅವರು ಶಸ್ತ್ರ ಚಿಕಿತ್ಸೆ ಮೂಲಕ ಹೆರಿಗೆ ಮಾಡಿದ್ದರು. ಇದಾಗಿ ಮೂರು ದಿನಗಳು ಕಳೆದರೂ ಶಾಂತಾ ಅವರ ಆರೋಗ್ಯ ತಪಾಸಣೆ ಮಾಡದೇ, ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡದೇ ನಿರ್ಲಕ್ಷ್ಯ ತೋರಿದ್ದರಿಂದ ಬಾಣಂತಿ ಶಾಂತಾ ಮೃತಪಟ್ಟಿದ್ದಾರೆ. ಅಲ್ಲದೇ, ಹೆರಿಗೆ ಮಾಡಿಸಲು ಶುಶ್ರೂಷಕ ರಘುನಾಥ್ ಎಸ್.ಜೆ. ತಮ್ಮಿಂದ ಹಣ ಪಡೆದಿದ್ದಾರೆ. ಆದರೂ, ಸರಿಯಾಗಿ ಚಿಕಿತ್ಸೆ ಕೊಡಿಸದೇ, ಬಾಣಂತಿ ಸಾವಿಗೆ ಕಾರಣರಾಗಿದ್ದಾರೆ ಎಂದು ಆರೋಪಿಸಿ ಮೃತಳ ಕುಟುಬಸ್ಥರು ಕುಟುಂಬಸ್ಥರು ಜಿಲ್ಲಾ ವೈದ್ಯಾಧಿಕಾರಿಗೆ ದೂರು ನೀಡಿದ್ದರು.

**ಎಚ್ಚರಿಕೆಯ ಸಂದೇಶ:** ವೈದ್ಯರ ನಿರ್ಲಕ್ಷ್ಯದಿಂದ ಬಾಣಂತಿ ಸಾವನ್ನಪ್ಪಿದ್ದಾರೆ ಎಂಬ ಆರೋಪವನ್ನು ಗಂಭೀರವಾಗಿ ಪರಿಗಣಿಸಿದ ಡಿಎಚ್‌ಒ ಡಾ.ಶಂಕರ್ ನಾಯ್ಕ, ತುರ್ತು ವಿಚಾರಣೆ ನಡೆಸಿದರು. ಕರ್ತವ್ಯ ಲೋಪ ಎಸಗಿದ್ದರಿಂದ ಗುತ್ತಿಗೆ ಆಧಾರದಲ್ಲಿದ್ದ ಡಾ.ಸಿಂಧು ಹಾಗೂ ಶುಶ್ರೂಷಕ ರಘುನಾಥ್ ಎಸ್.ಜೆ. ಎಂಬುವವರನ್ನು ಸೇವೆಯಿಂದ ವಜಾಗೊಳಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಆದೇಶ ಹೊರಡಿಸಿದ್ದಾರೆ.



### ಮುಗಿಲು ಮುಟ್ಟಿದ ಆಕ್ರಂದನ

ಒಂದೂವರೆ ವರ್ಷದ ಹಿಂದೆಯಷ್ಟೇ ದಶಮಾಪುರದ ಶಾಂತಾ ಹಾಗೂ ಮಹೇಶ್ ಮದುವೆಯಾಗಿತ್ತು. ಚೊಚ್ಚಲ ಹೆರಿಗೆಯಾಗಿದ್ದರಿಂದ ಪತಿ ಮನೆಯವರು ಖಾಸಗಿ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಲು ನಿರ್ಧರಿಸಿದ್ದರು. ಆದರೆ, ಶಾಂತಾ ಅವರ ತಾಯಿ ಆಶಾ ಕಾರ್ಯಕರ್ತೆಯಾಗಿದ್ದರಿಂದ ಸರ್ಕಾರಿ ಎಂಸಿಎಚ್ ಆಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆ ದೊರೆಯುತ್ತದೆ ಎಂದು ಕರೆತಂದಿದ್ದರು. ಆದರೆ, ವೈದ್ಯರ ಬೇಜವಾಬ್ದಾರಿಯಿಂದಾಗಿ ಅಮಾಯಕ ಕುಟುಂಬದ ಆಶಾಭಾವನೆ ಹುಸಿಯಾಗಿದೆ. ಶಾಂತಾ ಸಾವಿನ ಮನೆ ಸೇರಿದ್ದು, ಪುಟ್ಟ ಕಂದಮ್ಮ ತಬ್ಬಲಿಯಾಗಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

### ಸಿಬ್ಬಂದಿ ವರ್ಗದವರ ಸಹಕಾರದಿಂದ ಲೋಕತಂತ್ರ ವ್ಯವಸ್ಥೆ ಹಾಗೂ ಸ್ಥಳಿಯ ಆಡಳಿತ ಸದೃಢ ಮಾಡಲು ಕೈಜೊಡಿಸಲು ಮನವಿ

## ಹಳ್ಳಿಯ ಅಭಿವೃದ್ಧಿಯಿಂದ ಮಾತ್ರ ದೇಶದ ಪ್ರಗತಿ ಸಾಧ್ಯ

• ಉದಯವಾಹಿನಿ ಕಲಬುರಗಿ

ರಾಷ್ಟ್ರಪಿತಾ ಮಹಾತ್ಮ ಗಾಂಧಿಜೀರವರ ನುಡಿದ ಭಾರತದ ಆತ್ಮವು ಹಳ್ಳಿಯಲ್ಲಿ ವಾಸವಾಗಿದೆ ಎಂಬ ವಿಚಾರದಾರೆಯನ್ನು ನೆನೆದು, ಹಳ್ಳಿ ಮಟ್ಟದಲ್ಲಿ ಕಲ್ಯಾಣಾಭಿವೃದ್ಧಿ ಯೋಜನೆಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನವಾದಲ್ಲಿ, ಹಳ್ಳಿಯ ಅಭಿವೃದ್ಧಿಯಿಂದ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಾದ ಸುನೀಲ ಪವಾರ ಅಭಿಪ್ರಾಯಪಟ್ಟರು.

ಕಲಬುರಗಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಕಲಬುರಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಇಂದು ನಡೆದ ರಾಷ್ಟ್ರೀಯ ಪಂಚಾಯತರಾಜ್ ದಿವಸ ಆಚರಣೆಯನ್ನು ಸಸಿಗೆ ನೀರು ಎರೆಯುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು. ಅದರಂತೆ ಗ್ರಾಮ ಪಂಚಾಯತಿಗಳಲ್ಲಿ ಎಲ್ಲಾ ಯೋಜನೆಗೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತ ಹಾಜರಾತಿ, ವೇತನ ಮತ್ತು ಗ್ರಾಮ ಸಭೆ, ಮಕ್ಕಳ ಸಭೆ ಹಾಗೂ ಮಹಿಳಾ ಸಭೆಗಳನ್ನು ಡಿಜಿಟಲಿಕರಣದಿಂದ ಪಂಚತಂತ್ರ 2.0 ರಡಿಯಲ್ಲಿ ಅಳವಡಿಸಲಾಗುತ್ತಿದೆ, ಮಕ್ಕಳ ಓದು ಬರಹ ವಿಕಾಸಕ್ಕಾಗಿ ಸೂಸಜ್ಜಿತ ಡಿಜಿಟಲ್ ಅರಿವು ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಿವಿಧ ಯೋಜನೆಗಳಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಪ್ರಶಂಸನಾ ಪತ್ರವನ್ನು ನೀಡಿ ಗೌರವಿಸಲಾಗಿತು.

ಕರ ವಸೂಲಿಯಲ್ಲಿ ಅತಿ ಹೆಚ್ಚು ಕರ ಸಂಗ್ರಹ ಮಾಡಿರುವ ಸೇಡಂ ತಾಲ್ಲೂಕಿನ ಊಡಗಿ ಗ್ರಾ.ಪಂ, ಆಳಂದ ತಾಲ್ಲೂಕಿನ ಮೋಘಾ(ಕೆ), ಅಫಜಲಪೂರ ತಾಲ್ಲೂಕಿನ ಗೌರ ಬಿ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಗೌರವಿಸಲಾಯಿತು.

ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ ಕಲಬುರಗಿ ತಾಲ್ಲೂಕಿನ ಭೀಮಳ್ಳಿ ಗ್ರಾ.ಪಂ, ಚಿತ್ತಾಪೂರ ತಾಲ್ಲೂಕಿನ ಲಾಡ್ಲಾಪೂರ ಗ್ರಾ.ಪಂ ಮತ್ತು ಅಫಜಲಪೂರ ತಾಲ್ಲೂಕಿನ ದೇವಲಗಾಣಗಾಪೂರ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಗೌರವಿಸಲಾಯಿತು.

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೂಸಿನ ಮನೆ ಯೋಜನೆಯನ್ನು ಉತ್ತಮವಾಗಿ ನಡೆಸಿಕೊಂಡು ಬಂದಿರುವ ಕಮಲಾಪೂರ ತಾಲ್ಲೂಕಿನ ಜೀವಣಗಿ ಗ್ರಾ.ಪಂ, ಅಫಜಲಪೂರ ತಾಲ್ಲೂಕಿನ ಅಳ್ಳಗಿ ಗ್ರಾ.ಪಂ ಮತ್ತು ಚಿತ್ತಾಪೂರ ತಾಲ್ಲೂಕಿನ ಲಾಡ್ಲಾಪೂರ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಗ್ರಾಮ ಪಂಚಾಯತಗಳಲ್ಲಿ ಪಂಚತಂತ್ರ ಮೂಲಕ ನಿಗದಿತ ಸಮಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಫಜಲಪೂರ ತಾಲ್ಲೂಕಿನ ಕರಜಗಿ ಮತ್ತು ಅಳ್ಳಗಿ ಗ್ರಾ.ಪಂ, ಆಳಂದ ತಾಲ್ಲೂಕಿನ ಭೋದನ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಗೌರವಿಸಲಾಯಿತು.


ಉದಯವಾಹಿನಿ ಚಿತ್ರ

**ಅಧಿಕಾರಿಗಳಿಗೆ ಪ್ರಶಂಸನಾ ಪತ್ರ**

> ಪಂಚಾಯತ್ ರಾಜ್ ಕಾಯ್ದೆ ಅನುಸಾರ ರಚನೆಯಾಗಿರುವ ಗ್ರಾಮ ಪಂಚಾಯತ್‌ಗಳಲ್ಲಿ, ಗ್ರಾಮ ಸಭೆ, ಸಾಮಾನ್ಯ ಸಭೆಗಳ ಮೂಲಕ ಸ್ಥಳಿಯ ಅಭಿವೃದ್ಧಿಗೆ ನಿರ್ಣಯಗಳ ಅಭಿವೃದ್ಧಿ ಪಡಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಲಬುರಗಿ ಜಿಲ್ಲೆಯ 11 ತಾಲ್ಲೂಕ ಪಂಚಾಯತಿಯ 261 ಗ್ರಾಮ ಪಂಚಾಯತಿಗಳ 2024-25 ನೇ ಸಾಲಿನಲ್ಲಿ ಒಟ್ಟು ರೂ-25.00 ಕೋಟಿ ಪ್ರಸ್ತುತ ಬೇಡಿಕೆಗೆ ಅನುಗೂಣವಾಗಿ ಉತ್ತಮ ರೀತಿಯಲ್ಲಿ ತೆರಿಗೆ ವಸೂಲಾತಿಯಾಗಿದ್ದು, ಕಳೇದ 5 ವರ್ಷಗಳ ತೆರಿಗೆ ವಸೂಲಾತಿ ಸಾಧನೆಯನ್ನು ಪರಿಗಣಿಸಿದಾಗ ಈ ವರ್ಷದ ತೆರಿಗೆ ವಸೂಲಾತಿಯು ಉತ್ತಮವಾಗಿದೆ
> -ಭಂವರ ಸಿಂಗ್ ಮೀನಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ

**ಸುಸಜ್ಜಿತ ಕೂಸಿನ ಮನೆ**

ನರೇಗಾ ಯೋಜನೆಯಡಿ ಸುಸಜ್ಜಿತ ಕೂಸಿನ ಮನೆ ನಿರ್ಮಿಸಿರುವುದರಿಂದ ನರೇಗಾ ಕೂಲಿ ಕಾರ್ಮಿಕರ ಮಕ್ಕಳ ಆರೈಕೆಯಲ್ಲಿ ಅನಕೂಲವಾಗಿದೆ. ಹಾಗೂ ಸರ್ಕಾರದ ಎಲ್ಲಾ ಯೋಜನೆಗಳನ್ನು ಹಾಗೂ ಸೌಲಭ್ಯಗಳನ್ನು ಗ್ರಾಮೀಣ ಭಾಗದ ಕಟ್ಟಕಡೆಯ ಜನ ಸಾಮಾನ್ಯರಿಗೂ ಕೂಡಾ ತಲುಪಿಸುವ ನಿಟ್ಟಿನಲ್ಲಿ ಚುನಾಯಿತ ಪ್ರತಿನಿಧಿಗಳ ಹಾಗೂ ಗ್ರಾಮ ಪಂಚಾಯತಿಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ಸಹಕಾರದಿಂದ ಲೋಕತಂತ್ರ ವ್ಯವಸ್ಥೆ ಹಾಗೂ ಸ್ಥಳಿಯ ಆಡಳಿತ ಸದೃಢ ಮಾಡಲು ಕೈಜೊಡಿಸಲು ಮನವಿ ಮಾಡಿದರು.

## ಪಹಲ್ಗಾಮ್ ನರಮೇಧ ಖಂಡಿಸಿಬಿಜೆಪಿಯ ಮೌನ ಪ್ರತಿಭಟನೆ

• ಉದಯವಾಹಿನಿ ಬಳ್ಳಾರಿ

ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ಮೊನ್ನೆ ಹಿಂದೂ ಪ್ರವಾಸಿಗರ ಮೇಲೆ ಭಯೋತ್ಪಾದಕರಿಂದ ನಡೆದ ನರಮೇಧ ಖಂಡಿಸಿ ನಿನ್ನೆ ನಗರದಲ್ಲಿ ಬಿಜೆಪಿಯಿಂದ ಪ್ರತಿಭಟನೆ ಮತ್ತು ಮೃತರ ಆತ್ಮಕ್ಕೆ ಶಾಂತಿ ಕೋರಿ ಮೇಣದ ಬತ್ತಿಯೊಂದಿಗೆ ಶ್ರದ್ಧಾಂಜಲಿ ಸಲ್ಲಿಸಲಾಯ್ತು. ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್, ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ನೇತೃತ್ವದಲ್ಲಿ ಮೌನ ಪ್ರತಿಭಟನಾ ಮೆರವಣಿಗೆ ಈಡಿಗ ಹಾಸ್ಟಲ್ ನಿಂದ ಗಡಿಗಿ ಚೆನ್ನಪ್ಪ ವೃತ್ತದಲ್ಲಿ ನಡೆಯಿತು. ಈ ವೇಳೆ ಮಾತನಾಡಿದ ಮುಖಂಡರು ಹಿಂದುಗಳನ್ನೆ ಗುರಿಯಾಗಿತಿಸಿಕೊಂಡು ಹತ್ಯೆಗೈದಿರೋದು ಹೇಯ ಕೃತ್ಯ, ಉಗ್ರರ ವಿರುದ್ದ ದೇಶದ ಆಡಳಿತದಿಂದ ತಕ್ಕ ಪಾಠ ಕಲಿಸಬೇಕು ಎಂದರು. ಬಿಜೆಪಿಯ ಮುಖಂಡರು, ಪಾಲಿಕೆ ಸದಸ್ಯರು ಪಾಲ್ಗೊಂಡಿದ್ದರು.



ಉದಯವಾಹಿನಿ ಚಿತ್ರ

## ಗಗನಕ್ಕೇರಿದ್ದ ಬಾಳೆಹಣ್ಣಿನ ಬೆಲೆಯಲ್ಲೀಗ ದಿಢೀರ್ ಕುಸಿತ

• ಉದಯವಾಹಿನಿ ಶೃಂಗೇರಿ

ಕಳೆದ 15-20 ದಿನಗಳ ಹಿಂದೆ ಗಗನಕ್ಕೇರಿದ್ದ ಬಾಳೆಹಣ್ಣಿನ ಬೆಲೆ ಈಗ ದಿಢೀರ್ ಕುಸಿತ ಕಂಡಿದೆ. ತಾಲ್ಲೂಕಿನಲ್ಲಿ ಹೆಚ್ಚು ಬೆಳೆಯುವ ಪುಟ್ಟ ಬಾಳೆಹಣ್ಣನ್ನು ಹಳ್ಳಿಯಿಂದ ಪೇಟೆಗೆ ತಂದರೂ ಕಡಿಮೆ ದರಕ್ಕೆ ಕೇಳಲಾಗುತ್ತಿದೆ. ಮಾರಾಟದ ದರದಲ್ಲಿ ಹೆಚ್ಚು ವ್ಯತ್ಯಾಸವಾಗದಿದ್ದರೂ ರೈತರಿಂದ ಖರೀದಿಸುವ ದರದಲ್ಲಿ ಭಾರಿ ಇಳಿಕೆಯಾಗಿದೆ. ತಾಲೂಕಿನಲ್ಲಿ ಅತೀ ಹೆಚ್ಚು ಬೆಳೆಯುವ ಪುಟ್ಟ ಬಾಳೆಗೆ ತಿಂಗಳ ಹಿಂದೆ ಹೆಚ್ಚು ಬೇಡಿಕೆ ಇತ್ತು. ಅಲ್ಲದೆ ನೆರೆಯ ದಕ್ಷಿಣ ಕನ್ನಡ ಜಿಲ್ಲೆಗೂ ತಾಲ್ಲೂಕಿನಿಂದ ಪುಟ್ಟಬಾಳೆ ಸಾಗಣೆಯಾಗುತ್ತಿತ್ತು. ಆದರೆ, ಈಗ ಬೇಡಿಕೆ ದಿಢೀರ್ ಕಡಿಮೆಯಾಗಿದ್ದರಿಂದ ಧಾರಣೆ ಸಹ ಇಳಿಕೆಯಾಗಿದೆ.

ಪ್ರಸ್ತುತ ಪಚ ಬಾಳೆಹಣ್ಣು ಕೆ.ಜಿ.ಗೆ 25 ರಿಂದ 35 ರೂ., ನೇಂದ್ರಕ್ಕೆ 70 ರೂ., ಕರಿಬಾಳೆಗೆ 30 ರಿಂದ 50 ರೂ.ವರೆಗೆ ಬೆಲೆ ಇದೆ. ಪುಟ್ಟಬಾಳೆ ಕಾಯಿಗೆ ಕೆ.ಜಿ ಗೆ 30 ರೂ., ಪಚ ಬಾಳೆಗೆ 14 ರೂ. ಇದೆ. ಬೆಲೆ ಇಳಿಕೆಯಿಂದ ತಾಲ್ಲೂಕಿನ ಬಾಳೆ ಬೆಳೆಗಾರರು ಕಂಗಾಲಾಗಿದ್ದಾರೆ. ಮಂಗಗಳ ಹಾವಳಿಯಿಂದಾಗಿ ಮಲೆನಾಡಿನಲ್ಲಿ ತರಕಾರಿ ಸೇರಿದಂತೆ ಬಾಳೆಹಣ್ಣ ಹಾಗೂ ಇತರೆ ಹಣ್ಣುಗಳನ್ನು ಬೆಳೆಯುವುದೇ ಕಷ್ಟವಾಗಿದೆ.

## ನ್ಯಾಯವಾದಿ ಮಾಜಿ ರಾಜ್ಯಾಧ್ಯಕ್ಷ ಸದಾಶಿವರೆಡ್ಡಿ ಮೇಲೆ ಹಲ್ಲೆ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಬಸ್ ನಿಲ್ದಾಣ ಎದುರು ರಾಷ್ಟ್ರೀಯ ಹೆದ್ದಾರಿ ಮೇಲೆ ತಾಲ್ಲೂಕಾ ವಕೀಲರ ಸಂಘದಿಂದ ಭಾರತಿಯ ವಕೀಲ ಪರಿಷತ್ತಿನ ಸಹ ಅಧ್ಯಕ್ಷ ಸದಾಶಿವರೆಡ್ಡಿ ಮೇಲೆ ಮಾಡಿದ ಹಲ್ಲೆಯನ್ನು ಖಂಡಿಸಿ ಹಲ್ಲೆ ನಡೆಸಿದವರ ಮೇಲೆ ಸೂಕ್ತ ಕಾನೂನು ಕ್ರಮಕ್ಕೆಗೊಳ್ಳುವಂತೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಮುಖ್ಯ ಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿದರು.

ತಾಲ್ಲೂಕಾ ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಮಾತನಾಡಿ ಭಾರತಿಯ ವಕೀಲ ಪರಿಷತ್ತಿನ ಸಹ ಅಧ್ಯಕ್ಷರು,ಕರ್ನಾಟಕ ರಾಜ್ಯ ವಕೀಲ ಪರಿಷತ್ತಿನ ಮಾಜಿ ಅಧ್ಯಕ್ಷರು,ಹಾಲಿ ಸದಸ್ಯ ಸದಾಶಿವರೆಡ್ಡಿ ಕಛೇರಿಯಲ್ಲಿ ಎ.16ರಂದು ಬೆಳಿಗ್ಗೆ ಅಪರಿಚಿತರಿಬ್ಬರು ಭೀಕರ ಹಲ್ಲೆ ನಡೆಸಿದ್ದು ವಕೀಲರ ಸಂಘವು ತೀವ್ರವಾಗಿ ಖಂಡಿಸುತ್ತದೆ.

ರಾಜ್ಯದಲ್ಲಿ ಇತ್ತೀಚಿಗೆ ವಕೀಲರ ಮೇಲೆ ಮಾರಣಾಂತಿಕ ಹಲ್ಲೆ ನಡೆಸುತ್ತಿರುವುದರಿಂದ ವಕೀಲರು ಸ್ವತಂತ್ರವಾಗಿ ತಮ್ಮ ಕೆಲಸಗಳನ್ನು ಮಾಡುವಲ್ಲಿ ತೊಂದರೆಯಾಗುತ್ತಿದೆ,ಆದ್ದರಿಂದ ಸದಾಶಿವರೆಡ್ಡಿ ಮೇಲೆ ಹಲ್ಲೆ ಮಾಡಿದ ಆರೋಪಿತರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಜಗನ್ನಾಥ ಗಂಜಗಿರಿ, ಜಿ.ಕೆ.ಗೋಖಲೆ, ಸುದರ್ಶನ್ ಬಿರಾದಾರ, ಚಂದ್ರಶೇಟ್ಟಿ ಜಾಧವ, ಶಶಿಕಾಂತ ಅಡಕಿ, ಪ್ರವೀಣ ನಮ್ಮಿಕರ, ಮಾಣಿಕರಾವ ಗುಲಗಂಜಿ, ಡಿಕೆ ಚವ್ಹಾಣ, ಹಣಮಂತ ಹಿರೇಮನಿ, ಇರ್ಫಾನ್ ಪಟೇಲ,ಸಂಜುಕುಮಾರ ಮೇತ್ರಿ, ಮಲ್ಲಿಕಾರ್ಜುನ ಅಲ್ಲಾಪೂರ, ಭೀಮಶಂಕರ ಕಳಸ್ಕರ, ಚಂದ್ರಶೇಖರ ಮಲಸಾ, ವೀರಶೇಟ್ಟಿ ಹಿತ್ತಲ,ಮಾಣಿಕ ಅಣವಾರಕರ್, ಗಿರಿಧರ್ ಹುಡ್ಗಿ, ಅರುಣ ಹೆಗ್ಡೆ, ರಾಜಶೇಖರ, ರಾಜು ರೇವನೂರ, ಶರಣು ಮೋದಿನಪೂರ, ಸೂರ್ಯಕಾಂತ, ಶಂಕರ ರಾಠೋಡ್, ಉಮೇಶ ಪಾಟೀಲ್, ವಿಜಯಕುಮಾರ್ ರಾಠೋಡ್ ನೀಲಕಂಠ ರಾಠೋಡ್, ಅನೇಕರಿದ್ದರು.


ಉದಯವಾಹಿನಿ ಚಿತ್ರ

**ಸ್ವತಂತ್ರವಾಗಿ ಕೆಲಸ ಮಾಡುಲು ತೊಂದರೆ**

## ಕಾಶ್ಮೀರದಲ್ಲಿ ಉಗ್ರರ ಗುಂಡಿಗೆ ಅಮಾಯಕರ ಬಲಿ: ಯೋಗ ಸಾಧಕರಿಂದ ಕಂಬನಿ

• ಉದಯವಾಹಿನಿ ಚಿತ್ರದುರ್ಗ

ಇತ್ತೀಚಿನ ದಿನಗಳಲ್ಲಿ ಹಿಂದೂ ಧರ್ಮದ ಜನರಲ್ಲಿ ಭಯವನ್ನು ಹುಟ್ಟುಹಾಕುವ ಘಟನೆಗಳು ಹೆಚ್ಚಾಗುತ್ತಿವೆ ಭಾರತೀಯರೆಲ್ಲರೂ ನಾವು ನಮ್ಮ ಜಾತಿ ವಿಚಾರಗಳನ್ನು ಮುಂದಿಟ್ಟುಕೊಂಡು ಎಲ್ಲಿಯವರೆಗೆ ನಮ್ಮಲ್ಲೇ ನಾವು ಭೇದಭಾವ ತೋರುವೆವೊ ಅಲ್ಲಿಯವರೆಗೂ ಪೆಹಲ್ಗಾಂವ್ ನಂತಹ ಕೃತ್ಯಗಳು ನಡೆಯುತ್ತಲೇ ಇರುತ್ತವೆ ಸಂಘಟನೆಗಳ ದಾಳಿ ತಪ್ಪಿದ್ದಲ್ಲ ನಮ್ಮ ಜಾತಿ-ಮತಗಳು ನಮ್ಮ ಮನೆಗಳ ಒಳಗೆ ಸೀಮಿತವಾಗಿರಬೇಕು.

ಮನೆಯಿಂದ ಹೊರಬಂದ ಮೇಲೆ ನಾವೆಲ್ಲ ಭಾರತೀಯರು ನಾವೆಲ್ಲ ಒಂದೇ ಎಂಬ ಸಂದೇಶ ಇಡೀ ವಿಶ್ವಕ್ಕೆ ರವಾನಿಸಬೇಕಿದೆ ಎಂದು ಯೋಗಗುರು ಹಾಗೂ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ ಅಭಿಪ್ರಾಯಪಟ್ಟರು. ಕಾಶ್ಮೀರದ ಪೆಹಲ್ಗಂವನಲ್ಲಿ ನಡೆದ ಅಮಾನವೀಯ ಭಯೋತ್ಪಾದಕ ದಾಳಿಯ ಖಂಡನೆ ಮತ್ತು ಭಯೋತ್ಪಾದಕರ ಗುಂಡಿಗೆ ಬಲಿಯಾದ ಅಮಾಯಕ ಭಾರತೀರಯರ ಸಾವಿಗೆ ಸಂತಾಪ ಸೂಚಿಸಲು ಚಿತ್ರದುರ್ಗದ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಸದಸ್ಯರು ನಗರದ ತುರುವನೂರು ರಸ್ತೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಾ ಕಾಶ್ಮೀರದಲ್ಲಿ 370ನೇ ಕಾಯಿದೆ ರದ್ದಾದ ನಂತರದಲ್ಲಿ ಕಾಶ್ಮೀರ ರಾಜ್ಯ ನಿಧಾನವಾಗಿ ಶಾಂತಿಯ ತೋಟವಾಗಿ ಬದಲಾಗುತಿತ್ತು ನಡೆಸಿದ ಭಯೋತ್ಪಾದಕ ಘಟನೆಯಿಂದ ಕಾಶ್ಮೀರದಲ್ಲಿ ಭಯೋತ್ಪಾದನೆ ಮರುಹುಟ್ಟುಹಾಕುವ ಪ್ರಯತ್ನ ಶತ್ರುದೇಶವಾದ ಪಾಕಿಸ್ಥಾನದ ಉಗ್ರರಿಂದ ನಡೆದಿದೆ ಈ ಘಟನೆಯನ್ನು ಭಾರತದ ಪ್ರತಿಯೊಬ್ಬ ನಾಗರೀಕರು ಖಂಡಿಸಬೇಕಾಗಿದೆ ಪಾಕಿಸ್ಥಾನಕ್ಕೆ ತಕ್ಕ ಉತ್ತರ ನೀಡಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಹಿರಿಯ ಪೋಲಿಸ್ ಅಧಿಕಾರಿ ಮಲ್ಲಿಕಾರ್ಜುನಚಾರ್, ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಸದಸ್ಯರಾದ ಮಹೇಶ್ ಡಿ, ಶ್ರೀಮತಿ ವನಜಾಕ್ಷಮ್ಮ, ತಿಪ್ಪಮ್ಮ, ನಳಿನಾಕ್ಷಿ, ಸರಸ್ವತಿ, ಅರುಣ, ದುರ್ಗಾಂಬಿಕಾ, ಚೈತ್ರಾ, ಸುನೀತಾ, ಸುಜಾತ, ಭಾಗ್ಯಮ್ಮ ಅನಿತಾ, ಯೋಗ ಶಿಕ್ಷಕರಾದ ಶ್ರೀಮತಿ ಮಂಜುಳಾ, ವಸಂತಲಕ್ಷ್ಮೀ ಹಾಗೂ ಬ್ಯಾಂಕ್ ಕಾಲೋನಿ ನಾಗರೀಕರು ಭಾವಹಿಸಿ ಭಯೋತ್ಪಾದಕ ಕೃತ್ಯವನ್ನು ಖಂಡಿಸಿ ದಾಳಿಗೆ ಬಲಿಯಾದ ಅಮಾಯಕ ಭಾರತೀಯರ ಸಾವಿಗೆ ಕಂಬನಿ ಮಿಡಿದರು.


ಉದಯವಾಹಿನಿ ಚಿತ್ರ

**ಭಯೋತ್ಪಾದಕ ದಾಳಿಯ ಖಂಡನೆ**

## ಕ್ರೀಡಾಂಗಣ ಅಭಿವೃದ್ಧಿಗೆ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಹೊರವಲಯದಲ್ಲಿರುವ ಪೊಲಕಪಳ್ಳಿ ಗ್ರಾಮ ಸಮೀಪ ನೂತನವಾಗಿ ನಿರ್ಮಾಣಗೊಂಡ ಹೊರ ಕ್ರೀಡಾಂಗಣವನ್ನು ಪಕ್ಕದಲ್ಲಿರುವ ಪವ್ವರ್ ಪ್ಲಾಂಟ್ ಕಾರ್ಖಾನೆಯವರು ಸಮಗ್ರ ಅಭಿವೃದ್ಧಿ ಮಾಡಬೇಕು ಎಂದು ಪವ್ವರ್ ಪ್ಲಾಂಟ್ ವ್ಯವಸ್ಥಾಪಕರಿಗೆ ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ನೇತೃತ್ವದಲ್ಲಿ ಮನವಿಪತ್ರ ಸಲ್ಲಿಸಿದರು. ರಾಜ್ಯ ಬಿಜೆಪಿ ಅಲ್ಪಸಂಖ್ಯಾಂತರ ಮೋರ್ಚಾದ ಉಪಾಧ್ಯಕ್ಷ ಕೆ.ಎಂ.ಬಾರಿ, ಪೋಲಕಪಳ್ಳಿ ಗ್ರಾ.ಪಂ.ಮಾಜಿ ಅಧ್ಯಕ್ಷ ಜಾಕೀರಸಾಬ,ಬಿಜೆಪಿ ಮಂಡಲದ ಮಾಜಿ ಅಧ್ಯಕ್ಷ ಭೀಮಶೇಟ್ಟಿ ಮುರುಡಾ ಇದ್ದರು.

## ತಲೆ ಮೇಲೆ ಕಲ್ಲು ಹಾಕಿ ಯುವಕನ ಕೊಲೆ

• ಉದಯವಾಹಿನಿ, ಕಮಲನಗರ

ತಾಲ್ಲೂಕಿನ ಚಾಂಡೇಶ್ವರ ಗ್ರಾಮದ ಹೊರವಲಯದ ಖೇಡ್ ರಸ್ತೆ ಬಳಿಯ ಹೊಲದಲ್ಲಿ ತಲೆ ಮೇಲೆ ಕಲ್ಲು ಹಾಕಿ ಯುವಕನ ಕೊಲೆ ಮಾಡಿದ ಘಟನೆ ನಡೆದಿದೆ.

ಚಾಂಡೇಶ್ವರ ಗ್ರಾಮದ ಗಂಗಶೆಟ್ಟಿ ಅಲಿಯಾಸ್ ಸಾಗರ ಧನರಾಜ ಧಭಾಲೆ (26) ಕೊಲೆಯಾದ ಯುವಕ ಎನ್ನಲಾಗಿದೆ.

ಕಮಲನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು. ತನಿಖೆ ಮುಂದುವರೆದಿದೆ.

ಘಟನಾ ಸ್ಥಳಕ್ಕೆ ಭಾಲ್ಕಿ ಡಿವೈಎಸ್ಪಿ ಶಿವಾನಂದ್ ಪವಾಡಶೆಟ್ಟಿ, ಕಮಲನಗರ ಸಿಪಿಐ ಅಮರೆಪ್ಪ ಶಿವಬಲ್, ಭಾಲ್ಕಿ ಸಿಪಿಐ ಹಣಮರೆಡ್ಡಿಪ್ಪ ಕಮಲನಗರ ಪಿಎ ಚಂದ್ರಶೇಖರ್ ನಿರ್ಣೆ, ಪಿಎ ಬಾಲಾಜಿ ಬೆಳಕಟ್ಟೆ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದರು. ಕೊಲೆಗೆ ಖಚಿತ ಕಾರಣ ತಿಳಿದು ಬಂದಿಲ್ಲ.ಆರೋಪಿ ಶೋಧ ಚುರುಕು ಗೊಳಿಸಿದೆ ಎಂದು ಬಲ್ಲ ಮೂಲಗಳಿಂದ ತಿಳಿದುಬಂದಿದೆ.

## ಸಹಕಾರಿ ಸಂಘದ ಶತಮಾನೋತ್ಸವ 26ರಂದು

• ಉದಯವಾಹಿನಿ ಗದಗ

ಸೊರಟೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಶತಮಾನೋತ್ಸವ ಏ.26 ರಂದು ಬೆಳಗ್ಗೆ 10ಕ್ಕೆ ಜರುಗಲಿದೆ ಎಂದು ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಂ. ಎಫ್.ಕಲಗುಡಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೊರಟೂರ ಜಗದ್ಗುರು ಅನ್ನದಾನೇಶ್ವರ ಶಾಖಾಮಠದ ಶಿವಯೋಗೀಶ್ವರ ಸ್ವಾಮೀಜಿ ಸಾನ್ನಿಧ್ಯವಹಿಸುವರು. ವಿಪಸಭಾಧ್ಯಕ್ಷ ಬಸವರಾಜ ಹೊರಟ್ಟಿ ಉಪಸ್ಥಿತಿಯಲ್ಲಿ ಸಚಿವ ಕೆ.ಎನ್.ರಾಜಣ್ಣಧ್ವಜಾರೋಹಣ ನೆರವೇರಿಸುವರು. ಸಚಿವ ಎಚ್. ಕೆ.ಪಾಟೀಲ್ ಉದ್ಘಾಟಿಸುವರು. ಸಂಸದ ಬಸವರಾಜ ಬೊಮ್ಮಾಯಿ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು. ಸೊರಟೂರ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಂ.ಎಫ್.ಕಲಗುಡಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಪಸ ಎಸ್.ವಿ.ಸಂಕನೂರ, ಶಾಸಕ ಜಿ.ಎಸ್.ಪಾಟೀಲ್, ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಸಚಿವ ಎಸ್. ಎಸ್.ಪಾಟೀಲ್, ಮಾಜಿ ಶಾಸಕ ಡಿ. ಆರ್.ಪಾಟೀಲ್, ಸಲೀಂ ಅಹ್ಮದ, ಶಾಸಕ ಜಿ.ಟಿ.ದೇವೆಗೌಡ, ಪ್ರದೀಪ ಶೆಟ್ಟರ, ಶಾಸಕ ಸಿ.ಸಿ.ಪಾಟೀಲ್, ಗ್ರಾ.ಪಂ ಅಧ್ಯಕ್ಷ ಚಂದ್ರಮ್ಮ ಓಂಕಾರಿ ಹಾಗೂ ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಉಪಾಧ್ಯಕ್ಷ ಪಿ. ವಾಯ್.ಮಲ್ಲಾರಿ ಭಾಗವಹಿಸುವರು, ಸನ್ಮಾನಿತರಾಗಿ ನಾಗಾವಿ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ.ಬಿ.ಆರ್. ದೇವರೆಡ್ಡಿ ಹಾಗೂ ಜಿಲ್ಲಾ ಪಂಚಾಯಿತಿ ಸ್ವಚ್ಛ ಭಾರತ ಮಿಷನ್ ಸಮಾಲೋಚಕ ಎಚ್.ಎಫ್.ಕುಸಣ್ಣವರ ಆಗಮಿಸು ವರು, ಬಾಗಲಕೋಟಿ ಬಯಲಾಟ ಅಕಾಡೆಮಿ ಹಾಗೂ ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆ ಗದಗ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

### • ಕರ್ತವ್ಯ ಲೋಪದ ಕುರಿತು ಸ್ವಯಂ ಪ್ರೇರಿತ ದೂರು ದಾಖಲು ಮಾಡಿಕೊಳ್ಳಲು ಸೂಚನೆ

## ಪಾಲಿಕೆ ಕಡತ ನಿರ್ವಹಣೆ ಖಾಸಗಿ ವ್ಯಕ್ತಿ ಕೈಯಲ್ಲಿ: ಉಪ ಲೋಕಾಯುಕ್ತ ಗರಂ

• ಉದಯವಾಹಿನಿ ದಾವಣಗೆರೆ

ದಾವಣಗೆರೆ ಪ್ರವಾಸದಲ್ಲಿದ್ದ ಕರ್ನಾಟಕದ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ದಾವಣಗೆರೆ ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಗೆ ಭೇಟಿ ನೀಡಿದರು. ಕಛೇರಿಯಲ್ಲಿ ಅಧಿಕಾರಿಗಳ ಕರ್ತವ್ಯ ನಿರ್ವಹಣೆಯ ಲೋಪವನ್ನು ಗುರುತಿಸಿದ ಅವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಕರ್ತವ್ಯ ಲೋಪದ ಕುರಿತು ಸ್ವಯಂ ಪ್ರೇರಿತ ದೂರು ದಾಖಲು ಮಾಡಿಕೊಳ್ಳಲು ಸೂಚನೆ ನೀಡಿದರು.

ನ್ಯಾಯಮೂರ್ತಿ ಬಿ. ವೀರಪ್ಪ ಅನಿರೀಕ್ಷಿತವಾಗಿ ದಾವಣಗೆರೆ ಮಹಾನಗರ ಪಾಲಿಕೆಯ ಕಚೇರಿಗೆ ಭೇಟಿ ನೀಡಿ ಅಲ್ಲಿನ ವಿವಿಧ ಶಾಖೆಗಳ ಕಡತ ಹಾಗೂ ಇತರೆ ದಾಖಲೆಗಳ ಪರಿಶೀಲನೆ ನಡೆಸಿದರು. ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿಗಳ ಹಾಜರಾತಿ ಪುಸ್ತಕ, ಚಲನ-ವಲನ ವಹಿ ಮತ್ತು ನಗದು ಘೋಷಣಾ ವಹಿಗಳ ಬಗ್ಗೆ ವಿಚಾರಿಸಿ ಮಾಹಿತಿ ಪಡೆದುಕೊಂಡರು.

ಕಡತಗಳನ್ನು ಸರಿಯಾಗಿ ನಿರ್ವಹಿಸದಿರುವ ಕುರಿತು ಅಧಿಕಾರಿಗಳ ಮೇಲೆ ಅಸಮಾಧಾನ ವ್ಯಕ್ತಪಡಿಸಿದರು. ಅಭಿಯಂತರರು ವಿಭಾಗ ಶಾಖೆಗಳಿಗೆ ನೀಡಿ ಪರಿಶೀಲಿಸಿ, ಸೂಕ್ತ ದಾಖಲೆಗಳು ನೀಡದ ಕಾರಣ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲಿಸಲು ನಿರ್ದೇಶನ ನೀಡಿದರು.

ಕಸ ಸಂಗ್ರಹ, ವಿಲೇವಾರಿ, ಅಧಿಕಾರಿಗಳ ವಾಹನ ಸೇರಿ ದಾವಣಗೆರೆ ಮಹಾನಗರ ಪಾಲಿಕೆ ಬಳಿ 200 ವಾಹನಗಳು ಕಾರ್ಯಚರಣೆ ನಡೆಸುತ್ತಿವೆ. ಆದರೆ ನ್ಯಾ. ಬಿ. ವೀರಪ್ಪ ಮಹಾನಗರ ಪಾಲಿಕೆಯ ಒಟ್ಟು ವಾಹನಗಳು ಎಷ್ಟು?, ಅವುಗಳಲ್ಲಿ ಎಷ್ಟು ವಾಹನಗಳಿಗೆ ಎಫ್‌ಸಿ ಮುಗಿದಿದೆ ಎಂದು ಪ್ರಶ್ನಿಸಿದಾಗ ಸಂಬಂಧ ಪಟ್ಟ ಅಧಿಕಾರಿ 200ಕ್ಕೂ ವಾಹನಗಳು ಇದ್ದು ಇದರಲ್ಲಿ 15 ವಾಹನಗಳ ಎಫ್‌ಸಿ ಮುಗಿದಿದೆ ಎಂದು ತಪ್ಪಾಗಿ ಮಾಹಿತಿ ನೀಡಿದರು.

ಆಗ ಉಪ ಲೋಕಾಯುಕ್ತರು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಮಹಾನಗರ ಪಾಲಿಕೆಯ ಒಟ್ಟು ವಾಹನಗಳ ಪರಿಶೀಲನೆ ನಡೆಸುವಂತೆ ಸೂಚಿಸಿ, ಒಂದೆರಡು ಗಂಟೆಯಲ್ಲಿ ವರದಿ ನೀಡುವಂತೆ ಸೂಚಿಸಿದರು.

ಸಂಜೆಯ ವೇಳೆ ಸಾರಿಗೆ ಅಧಿಕಾರಿಗಳ ವರದಿ ನೀಡಿ, ಮಹಾನಗರ ಪಾಲಿಕೆಯ 200 ವಾಹನಗಳಲ್ಲಿ 115 ವಾಹನಗಳಿಗೆ ಎಫ್‌ಸಿ ಮುಗಿದಿದೆ ಎಂದು ತಿಳಿಸಿದರು. ಇದರ ಮೇರೆಗೆ ಪಾಲಿಕೆ 115 ವಾಹನಗಳ ಜಪ್ತಿಗೆ ನ್ಯಾ. ಬಿ. ವೀರಪ್ಪ ಸೂಚಿಸಿದರು.


ಉದಯವಾಹಿನಿ ಚಿತ್ರ

**ಅಧಿಕಾರಿಗಳ ಮೇಲೆ ಅಸಮಾಧಾನ**

### ಖಾಸಗಿ ವ್ಯಕ್ತಿ ಕೈಯಲ್ಲಿ ಪಾಲಿಕೆ ಕಡತ

ವಲಯ 3ರ ಅಧಿಕಾರಿ ಕಚೇರಿಯಲ್ಲಿ ಖಾಸಗಿ ವ್ಯಕ್ತಿಯೋರ್ವ ಯಾವುದೇ ರೀತಿಯ ಅಧಿಕಾರ ಇಲ್ಲದೆ ಮಹಾನಗರ ಪಾಲಿಕೆ ಕಡತಗಳನ್ನು ನಿರ್ವಹಣೆ ಮಾಡುತ್ತಿರುವ ಕುರಿತು, ವಿಡಿಯೋ ತುಣುಕು ಹರಿದಾಡುತ್ತಿದೆ. ಈ ಸಂಬಂಧ ಮಹಾನಗರ ಪಾಲಿಕೆ ಅಯುಕ್ತರು ಏನು ಕ್ರಮಕ್ಕೆಗೊಂಡಿದ್ದೀರಿ? ಎಂದು ನ್ಯಾ. ಬಿ. ವೀರಪ್ಪ ಪ್ರಶ್ನಿಸಿದರು. ಆಯುಕ್ತೆ ರೇಣುಕಾ ಉತ್ತರ ನೀಡಿ, ಕಚೇರಿಯ ಸಂಬಂಧಪಟ್ಟ ಅಧಿಕಾರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಪೊಲೀಸ್ ಇಲಾಖೆಗೆ ವಿಡಿಯೋ ಸತ್ಯಾಸತ್ಯತೆ ತಿಳಿಯಲು ಪತ್ರ ಬರೆದಿರುವುದಾಗಿ ಮಾಹಿತಿ ನೀಡಿದರು.

### ಆಯುಕ್ತರಿಗೆ ನಿರ್ದೇಶನ

ಆಯುಕ್ತ ಉತ್ತರಕ್ಕೆ ಅಸಮಾಧನಗೊಂಡ ನ್ಯಾ. ಬಿ. ವೀರಪ್ಪ, ಸಂಬಂಧ ಪಟ್ಟ ಅಧಿಕಾರಿಯನ್ನು ಈ ಕೂಡಲೇ ಇಲಾಖೆ ವಿಚಾರಣೆ ಕಾಯ್ದಿರಿಸಿ ಅಮಾನತು ಮಾಡಬೇಕು. ಖಾಸಗಿ ವ್ಯಕ್ತಿಯ ವಿರುದ್ಧ ಪೊಲೀಸ್ ದೂರು ದಾಖಲಿಸಬೇಕು ಎಂದು ಆಯುಕ್ತರಿಗೆ ನಿರ್ದೇಶನ ನೀಡಿದರು. ಈ ಸೂಚನೆಯಂತೆ ವಲಯ 3ರ ಉಪ ಆಯುಕ್ತೆ ಈರಮ್ಮ ಹಾಗೂ ವಿಷಯ ನಿರ್ವಾಹಕಿ ನೇತ್ರಾ ಅವರನ್ನು ಅಮಾನತು ಮಾಡುವಂತೆ ಆಯುಕ್ತರು ಶಿಫಾರಸು ಮಾಡಿದರು.

### ಪ್ರಧಾನಿ ಶೆಹಬಾಜ್ ಷರೀಫ್ ಈವರೆಗೆ ಘಟನೆಯನ್ನು ಖಂಡಿಸದಿರುವುದಕ್ಕೆ ದಾನಿಶ್ ಕನೇರಿಯಾ ಕಿಡಿ

# ಪಾಕಿಸ್ತಾನ ಪ್ರಧಾನಿಗೆ ಬೆಂಡೆತ್ತಿದ ಪಾಕ್ ಮಾಜಿ ಕ್ರಿಕೆಟಿಗ




**ಪಾಕಿಸ್ತಾನ:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಪಾಕಿಸ್ತಾನದ ಮಾಜಿ ಕ್ರಿಕೆಟಿಗ ದಾನಿಶ್ ಕನೇರಿಯಾ ಪ್ರತಿಕ್ರಿಯಿಸಿದ್ದು, ಪಾಕಿಸ್ತಾನದ ಪಾತ್ರದ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದಾರೆ. ಪ್ರಧಾನಿ ಶೆಹಬಾಜ್ ಷರೀಫ್ ಈವರೆಗೆ ಘಟನೆಯನ್ನು ಖಂಡಿಸದಿರುವುದು ಮತ್ತು ಸೇನೆಯ ಅಲರ್ಟ್ ಆಗಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದಿದ್ದಾರೆ. ಭಯೋತ್ಪಾದಕರು ಹಿಂದೂಗಳನ್ನು ಗುರಿಯಾಗಿಸುತ್ತಿರುವುದನ್ನು ಕನೇರಿಯಾ ಖಂಡಿಸಿದ್ದು, ಭಯೋತ್ಪಾದನೆಯನ್ನು ಬೆಂಬಲಿಸುವವರನ್ನು ಟೀಕಿಸಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಹಲವು ಪ್ರಶ್ನೆಗಳು ಎದ್ದಿದ್ದು, ಪಾಕಿಸ್ತಾನದ ಪಾತ್ರದ ಬಗ್ಗೆಯೂ ಚರ್ಚೆಗಳು ನಡೆಯುತ್ತಿವೆ. ಈ ದಾಳಿಯಲ್ಲಿ ಹಿಂದೂಗಳನ್ನು ಗುರಿಯಾಗಿಸಿಕೊಂಡ ಬಗ್ಗೆಯೂ ಆಕ್ರೋಶ ವ್ಯಕ್ತವಾಗಿದ್ದು, ಇದೀಗ ಪಾಕಿಸ್ತಾನದ ಮಾಜಿ ಕ್ರಿಕೆಟಿಗರೊಬ್ಬರು ಇದಕ್ಕೆ ಧ್ವನಿಗೂಡಿಸಿದ್ದಾರೆ.

ಪಹಲ್ಗಾಮ್ ದಾಳಿ ಹಿನ್ನೆಲೆಯಲ್ಲಿ ಸರಣಿ ಟ್ವೀಟ್ ಮಾಡಿರುವ ಅವರು, ಭಯೋತ್ಪಾದಕರು ಎಂದಿಗೂ ಸ್ಥಳೀಯ ಕಾಶ್ಮೀರಿಗಳನ್ನು ಗುರಿಯಾಗಿಸಿಕೊಳ್ಳದೆ, ನಿರಂತರವಾಗಿ ಹಿಂದೂಗಳ ಮೇಲೆ ದಾಳಿ ಮಾಡುತ್ತಿದ್ದಾರೆ – ಅದು ಕಾಶ್ಮೀರಿ ಪಂಡಿತರೇ ಆಗಿರಲಿ ಅಥವಾ ಭಾರತದ ಹಿಂದೂ ಪ್ರವಾಸಿಗರಾಗಿರಲಿ. ಭಯೋತ್ಪಾದನೆ ಅದು ಎಷ್ಟೇ ವೇಷ ಧರಿಸಿದ್ದರೂ ಒಂದು ಸಿದ್ಧಾಂತವನ್ನು ಅನುಸರಿಸುತ್ತದೆ – ಮತ್ತು ಇಡೀ ಜಗತ್ತು ಅದಕ್ಕೆ ಬೆಲೆ ತೆರುತ್ತಿದೆ, ಎಂದು ಕಿಡಿಕಾರಿದ್ದಾರೆ. ನಾನು ಪಾಕಿಸ್ತಾನ

> ಪಹಲ್ಗಾಮ್‌ನಲ್ಲಿ ನಡೆದ ಭಯಾನಕ ದಾಳಿಯ ಬಗ್ಗೆ ಪ್ರತಿಕ್ರಿಯೆ ನೀಡಿರುವ ದಾನಿಶ್ ಕನೇರಿಯಾ, ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ನಿಜವಾಗಿಯೂ ಪಾಕಿಸ್ತಾನದ ಪಾತ್ರವಿಲ್ಲದಿದ್ದರೆ, ಪ್ರಧಾನಿ ಶೆಹಬಾಜ್ ಷರೀಫ್ ಇನ್ನೂ ಯಾಕೆ ಇದನ್ನು ಖಂಡಿಸಿಲ್ಲ? ನಿಮ್ಮ ಸೇನಾ ಪಡೆಗಳು ಇದ್ದಕ್ಕಿದ್ದಂತೆ ಅಲರ್ಟ್ ಆಗಿದ್ದೇಕೆ? ಏಕೆಂದರೆ ನಿಮಗೆ ನಿಜವಾದ ಕಾರಣ, ಸತ್ಯ ತಿಳಿದಿದೆ – ನೀವು ಭಯೋತ್ಪಾದಕರಿಗೆ ಆಶ್ರಯ ನೀಡುತ್ತಿದ್ದೀರಿ ಮತ್ತು ಪೋಷಿಸುತ್ತಿದ್ದೀರಿ. ನಿಮಗೆ ನಾಚಿಕೆಯಾಗಬೇಕು, ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಇನ್ನೂ ಯಾಕೆ ಖಂಡಿಸಿಲ್ಲ?**

ಅಥವಾ ಅದರ ಜನರ ವಿರುದ್ಧ ಮಾತನಾಡುತ್ತಿಲ್ಲ ಎಂದಿರುವ ಕನೇರಿಯಾ, ಪಾಕಿಸ್ತಾನದ ಜನತೆ ಭಯೋತ್ಪಾದನೆಯ ಕೈಯಲ್ಲಿ ಹೆಚ್ಚು ನಷ್ಟ ಅನುಭವಿಸಿದೆ. ಅವರು ಶಾಂತಿಗಾಗಿ ನಿಲ್ಲುವ ನಾಯಕತ್ವಕ್ಕೆ ಅರ್ಹರಿದ್ದಾರೆ. ಭಯೋತ್ಪಾದಕರಿಗೆ ಆಶ್ರಯ ನೀಡುವ ಅಥವಾ ಅಮಾಯಕರ ಹತ್ಯೆಯಾದಾಗ ಮೌನವಾಗಿರುವುದು ನಾಯಕತ್ವವಲ್ಲ, ಎಂದಿದ್ದಾರೆ. ನಾನು ಪಾಕಿಸ್ತಾನದ ಜೆರ್ಸಿಯನ್ನು ಹೆಮ್ಮೆಯಿಂದಲೇ ಧರಿಸಿದ್ದೆ. ಕ್ರಿಕೆಟ್ ಮೈದಾನದಲ್ಲಿ ನಾನು ನನ್ನ ಬೆವರು ಮತ್ತು ರಕ್ತವನ್ನು ನೀಡಿದ್ದೇನೆ. ಆದರೆ ಕೊನೆಯಲ್ಲಿ, ಪಹಲ್ಗಾಮ್ ದಾಳಿಯ ಬಲಿಪಶುಗಳಿಗಿಂತ ಭಿನ್ನವಾಗಿ ನನ್ನನ್ನು ನಡೆಸಿಕೊಳ್ಳಲಾಯಿತು. ಅದು ಕೇವಲ ಹಿಂದೂ ಎಂಬ ಕಾರಣಕ್ಕೆ, ಎಂದು ಬೇಸರ ತೋಡಿಕೊಂಡಿದ್ದಾರೆ.

ಇದಕ್ಕೂ ಮೊದಲು, ಪಹಲ್ಗಾಮ್ ದಾಳಿ ಬೆನ್ನಲ್ಲೇ ದಿವಾನ್ ಸಚಲ್ ಎನ್ನುವವರು, ಪಾಕಿಸ್ತಾನದ ಬಲೂಚಿಸ್ತಾನದಲ್ಲಿ ಭಾರತ ಭಯೋತ್ಪಾದನೆಯನ್ನು ಪ್ರಾಯೋಜಿಸುತ್ತಿದೆ. ಬಹುಶಃ ಭಾರತೀಯ ರಾ ತನ್ನ ಕರ್ಮದಿಂದ ಪಾಠ ಕಲಿಯಬಹುದು, ಎಂದು ಟ್ವೀಟ್ ಮಾಡಿದ್ದರು. ಇದಕ್ಕೆ ತಿರುಗೇಟು ನೀಡಿರುವ ಕನೇರಿಯಾ, ಬಲೂಚ್ ಜನರ ನೋವಿಗೆ ಕಾರಣರಾದವರ ಪರವಾಗಿ ನಿಂತಿದ್ದಕ್ಕೆ ನಿಮಗೆ ನಾಚಿಕೆಯಾಗಬೇಕು. ಭಾರತದ ವಿರುದ್ಧ ಸುಳ್ಳು ಆರೋಪಗಳನ್ನು ಹರಡಿದ್ದಕ್ಕೆ ನಿಮಗೆ ನಾಚಿಕೆಯಾಗಬೇಕು, ಎಂದು ಹೇಳಿದ್ದಾರೆ.

ನೀವು ನಮ್ಮ ಸಮುದಾಯದ ಮೌಲ್ಯಗಳನ್ನು ಪ್ರತಿನಿಧಿಸುವುದಿಲ್ಲ. ಯಾವುದೇ ರೂಪದಲ್ಲಿ ಭಯೋತ್ಪಾದನೆಯನ್ನು ಸಮರ್ಥಿಸಿಕೊಳ್ಳುವುದು ನಾಚಿಕೆಗೇಡಿನ ಸಂಗತಿ, ಎಂದು ಹರಿಹಾಯ್ದಿದ್ದಾರೆ.

- ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನದ ಪಾತ್ರದ ಕುರಿತು ಆಕ್ರೋಶ ವ್ಯಕ್ತಪಡಿಸಿದ ಪಾಕಿಸ್ತಾನದ ಮಾಜಿ ಕ್ರಿಕೆಟಿಗ
- ಪ್ರಧಾನಿ ಶೆಹಬಾಜ್ ಷರೀಫ್ ಈವರೆಗೆ ಘಟನೆಯನ್ನು ಖಂಡಿಸದಿರುವುದಕ್ಕೆ ದಾನಿಶ್ ಕನೇರಿಯಾ ಕಿಡಿ
- ಸೇನೆಯ ಅಲರ್ಟ್ ಆಗಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದ ಪಾಕಿಸ್ತಾನದ ಹಿಂದೂ ಕ್ರಿಕೆಟಿಗ
- ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ವಿರುದ್ಧ ದಾನಿಶ್ ಕನೇರಿಯಾ ಕಿಡಕಾರಿದ್ದಾರೆ.

**ದುಷ್ಟರ ಪರವಾಗಿ ನಿಲ್ಲಬೇಡಿ**


ಭಯೋತ್ಪಾದನೆಯನ್ನು ಸಮರ್ಥಿಸುವವರಿಗೆ ನಾಚಿಕೆಯಾಗಬೇಕು ಎಂದು ಹೇಳಿರುವ ಕನೇರಿಯಾ, ಕೊಲೆಗಾರರನ್ನು ರಕ್ಷಿಸುವವರಿಗೆ ನಾಚಿಕೆಯಾಗಬೇಕು, ಎಂದು ಬರೆದಿದ್ದಾರೆ. ನಾನು ಸತ್ಯದ ಪರವಾಗಿ ನಿಲ್ಲುತ್ತೇನೆ. ನಾನು ಮಾನವೀಯತೆಯ ಪರವಾಗಿ ನಿಲ್ಲುತ್ತೇನೆ ಎಂದಿರುವ ಅವರು, ಮತ್ತು 'ಪಾಕಿಸ್ತಾನದ ಜನರು ಸಹ ಹಾಗೆ ಮಾಡುತ್ತಾರೆ ಎಂದು ನಾನು ನಂಬುತ್ತೇನೆ. ಅವರನ್ನು ದಾರಿ ತಪ್ಪಿಸಬೇಡಿ. ದುಷ್ಟರ ಪರವಾಗಿ ನಿಲ್ಲಬೇಡಿ' ಎಂದು ಮನವಿ ಮಾಡಿದ್ದಾರೆ.

## 133 ವಿದ್ಯಾರ್ಥಿಗಳ ಕಾನೂನುಬದ್ಧ ವಾಸ್ತವ್ಯ ಮರುಸ್ಥಾಪಿಸಿದ ಯುಎಸ್

**ವಾಷಿಂಗ್ಟನ್ ಡಿಸಿ:** ಅಮೆರಿಕದ ಜಾರ್ಜಿಯಾ ನ್ಯಾಯಾಲಯವು, 133 ಅಂತಾರಾಷ್ಟ್ರೀಯ ವಿದ್ಯಾರ್ಥಿಗಳ ಸೆವಿಸ್ ದಾಖಲೆಗಳನ್ನು ತಾತ್ಕಾಲಿಕವಾಗಿ ಮರುಸ್ಥಾಪಿಸಿದೆ. ಈ ವಿದ್ಯಾರ್ಥಿಗಳಲ್ಲಿ ಹೆಚ್ಚಿನವರು ಭಾರತೀಯರಾಗಿರುವುದು ವಿಶೇಷ.

ಅಮೆರಿಕದ ವಿದೇಶಾಂಗ ಇಲಾಖೆ ಮತ್ತು ವಲಸೆ ಮತ್ತು ಕಸ್ಟಮ್ಸ್ ಜಾರಿ ಇಲಾಖೆಗಳು ಈ ವಿದ್ಯಾರ್ಥಿಗಳ ದಾಖಲೆಗಳನ್ನು ರದ್ದು ಮಾಡಿ, ವೀಸಾಗಳನ್ನು ಹಿಂಪಡೆದಿದ್ದವು. ಇದರಿಂದ ತೊಂದರೆಗೊಳಗಾದ ವಿದ್ಯಾರ್ಥಿಗಳು ನ್ಯಾಯಾಲಯದ ಮೊರೆ ಹೋಗಿದ್ದರು. ಟ್ರಂಪ್ ಆಡಳಿತವು ವಿದ್ಯಾರ್ಥಿಗಳನ್ನು ಸೆವಿಸ್ ನಿಂದ ತೆಗೆದುಹಾಕುವ ಮೂಲಕ ಅವರ ಕಾನೂನು ಬದ್ಧ ಸ್ಥಾನಮಾನವನ್ನು ರದ್ದುಪಡಿಸಿದೆ.

ಕೆಲವು ವಿದ್ಯಾರ್ಥಿಗಳು ಕಾನೂನು ಜಾರಿ ಅಧಿಕಾರಿಗಳೊಂದಿಗೆ ಸಣ್ಣಪುಟ್ಟ ತೊಂದರೆಗಳನ್ನು ಹೊಂದಿದ್ದರೂ, ಅವರ ವಿರುದ್ಧ ಯಾವುದೇ ಕ್ರಿಮಿನಲ್ ಮೊಕದ್ದಮೆಗಳಿಲ್ಲ ಎಂದು ದೂರಿನಲ್ಲಿ



ತಿಳಿಸಲಾಗಿದೆ. ಏಪ್ರಿಲ್ 18ರಂದು, ಫೆಡರಲ್ ನ್ಯಾಯಾಲಯವು ತಾತ್ಕಾಲಿಕ ತಡೆಯಾಜ್ಞೆ ಹೊರಡಿಸಿ, ಏಪ್ರಿಲ್ 22ರೊಳಗೆ ವಿದ್ಯಾರ್ಥಿಗಳ ಸ್ಥಾನಮಾನವನ್ನು ಮರುಸ್ಥಾಪಿಸಲು ಆದೇಶ ನೀಡಿದೆ.

ವಿದ್ಯಾರ್ಥಿಗಳನ್ನು ಪ್ರತಿನಿಧಿಸಿದ ವಕೀಲರಾದ ಚಾರ್ಲ್ಸ್ ಕುಕ್, ಎಲ್ಲಾ ವಿದ್ಯಾರ್ಥಿಗಳ ಕಾನೂನು ಬದ್ಧ ವಾಸ್ತವ್ಯವನ್ನು ಮರುಸ್ಥಾಪಿಸಲಾಗಿದೆ. ಈಗ ಅವರು ಐಚ್ಛಿಕ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದ ಅಡಿಯಲ್ಲಿ, ತಮ್ಮ ಅಧ್ಯಯನ ಅಥವಾ ಕೆಲಸವನ್ನು ಮುಂದುವರಿಸಬಹುದು ಎಂದು ಸ್ಪಷ್ಟಪಡಿಸಿದ್ದಾರೆ. ಈ ಪ್ರಕರಣದ ಮುಂದಿನ ವಿಚಾರಣೆ ಶೀಘ್ರದಲ್ಲೇ ನಡೆಯಲಿದೆ.

ಟ್ರಂಪ್ ಆಡಳಿತವು ಟ್ರಾಫಿಕ್ ನಿಯಮ ಉಲ್ಲಂಘನೆ ಅಥವಾ ವಿಶ್ವವಿದ್ಯಾಲಯದ ನಿಯಮಗಳ ಉಲ್ಲಂಘನೆಯಂತಹ ಸಣ್ಣ ಕಾರಣಗಳಿಗೂ, ವಿದ್ಯಾರ್ಥಿಗಳ ಸೆವಿಸ್ ದಾಖಲೆಗಳನ್ನು ರದ್ದು ಮಾಡಿರುವುದು ಗಮನ ಸೆಳೆದಿದೆ.

> ಅಮೆರಿಕದ ವಲಸೆ ವಕೀಲರ ಸಂಘದ ಪ್ರಕಾರ, ಜನವರಿ 20, 2025ರಿಂದ ಸುಮಾರು 4,736 ಅಂತಾರಾಷ್ಟ್ರೀಯ ವಿದ್ಯಾರ್ಥಿಗಳ ಸೆವಿಸ್ ದಾಖಲೆಗಳನ್ನು ರದ್ದು ಮಾಡಿದೆ. ಇವರಲ್ಲಿ ಹೆಚ್ಚಿನವರು ಭಾರತೀಯ ವಿದ್ಯಾರ್ಥಿಗಳಾಗಿದ್ದು, ಚೀನಾ, ನೇಪಾಳ, ದಕ್ಷಿಣ ಕೊರಿಯಾ ಮತ್ತು ಬಾಂಗ್ಲಾದೇಶದ ವಿದ್ಯಾರ್ಥಿಗಳನ್ನೂ ಸಹ ಗುರಿಯಾಗಿಸಲಾಗಿದೆ.

## ಉಗ್ರರ ದಾಳಿಯನ್ನು ಕೇಕ್ ಕತ್ತರಿಸಿ ಸಂಭ್ರಮಿಸಿದ ಪಾಪಿಗಳು

**ನವದೆಹಲಿ:** ಜಮು ಮತ್ತು ಕಾಶೀರದ ಪೆಹಲ್ಗಾಮ್ ನಲ್ಲಿ ನಡೆದ ಬೀಭತ್ಸ ಘಟನೆಗೆ ದೇಶಕ್ಕೆ ದೇಶವೇ ಮಮಲ ಮರುಗುತ್ತಿರುವಾಗಲೇ ಪಾಕಿಸ್ತಾನದ ಹೈಕಮೀಷನರ್ ಘಟನೆಗೆ ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾರೆಂಬ ಆರೋಪ ಕೇಳಿಬಂದಿದೆ. ದೆಹಲಿಯಲ್ಲಿರುವ ಪಾಕಿಸ್ತಾನದ ಹೈಕಮೀಷನರ್ ಕಚೇರಿಯಲ್ಲಿ ಪುಹಲ್ಗಾಮ್ ಘಟನೆ ಸಂಭವಿಸಿದ ನಂತರ ಹೈಕಮೀಷನರ್ ಜೊತೆ ಅಲ್ಲಿನ ಸಿಬ್ಬಂದಿ ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾರೆ ಎಂಬ ಸುದ್ದಿ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಈ ಸುದ್ದಿ ಹೊರಬೀಳುತ್ತಿದ್ದಂತೆ ಇಂದು ಬೆಳಗ್ಗೆ ದೆಹಲಿ ಹೈಕಮೀಷನರ್ ಕಚೇರಿ ಮುಂದೆ ಆಕ್ರೋಶಗೊಂಡ ಸಾವಿರಾರು ಸಂಖ್ಯೆಯ ಭಾರತೀಯರು ಧಿಕ್ಕಾರದ ಘೋಷಣೆಗಳನ್ನು ಕೂಗಿ ತಕ್ಷಣವೇ ದೇಶ ಬಿಟ್ಟು ತೊಲಗುವಂತೆ ಎಚ್ಚರಿಕೆ ಕೊಟ್ಟಿದ್ದಾರೆ.

ಇಲ್ಲಿನ ಅನ್ನ, ಗಾಳಿ, ನೀರು ಸೇವಿಸಿ ಭಯೋತ್ಪಾದನೆ ಕೃತ್ಯಕ್ಕೆ ಬೆಂಬಲ ಕೊಡುವ ದೇಶದ್ರೋಹಿ ಹೈಕಮೀಷನರ್ ನಮ್ಮ ದೇಶದಲ್ಲಿ ಇರಲು ನಾಲಾಯಕ್. ಕೂಡಲೇ ನಿಮ ಸಿಬ್ಬಂದಿ ಜೊತೆ ಗಂಟುಮೂಟೆ ಕಟ್ಟಿಕೊಂಡು ದೇಶಬಿಟ್ಟು ತೆರಳುವಂತೆ ಆಕ್ರೋಶ ಹೊರಹಾಕಿದ್ದಾರೆ.




ಪಹಲ್ಗಾಮ್‌ನಲ್ಲಿ ದಾಳಿ ನಡೆಯುತ್ತಿದ್ದಂತೆ, ಭಾರತದಲ್ಲಿರುವ ಹೈಕಮಿಷನ್ ಬಂದ್ ಮಾಡುವಂತೆ ಸೂಚನೆ ನೀಡಲಾಯಿತು. ಈ ದಾಳಿಯ ನಡುವೆ ದೆಹಲಿಯಲ್ಲಿರುವ ಪಾಕಿಸ್ತಾನ ಹೈಕಮಿಷನ್‌ನಲ್ಲಿ ನಿಯೋಜಿತರಾಗಿದ್ದ ಉದ್ಯೋಗಿಯೊಬ್ಬರು ಕೇಕ್ ತೆಗೆದುಕೊಂಡು ಒಳಗೆ ಹೋಗುತ್ತಿದ್ದರು. ಅದನ್ನು ಮಾಧ್ಯಮದವರು ಪ್ರಶ್ನಿಸಿದ್ದಕ್ಕೆ ಯಾವುದೇ ಉತ್ತರವನ್ನು ಕೂಡ ಅವರು ನೀಡಲಿಲ್ಲ.

ಪಹಲ್ಗಾಮ್ ದಾಳಿಯ ಬಗ್ಗೆ ಪಾಕ್ ಸಂತೋಷಗೊಂಡಿದ್ದು, ಅದನ್ನು ಸಂಭ್ರಮಿಸಲು ಭಾರತದಲ್ಲೇ ಕೇಕ್ ಕತ್ತರಿಸುತ್ತಿದೆಯೇ ಎನ್ನುವ ಊಹಾಪೋಹಗಳು ಎದ್ದಿವೆ. ಸತ್ಯ ಏನೇ ಇರಲಿ, ಪಾಕಿಸ್ತಾನಿ ಉದ್ಯೋಗಿ ಪ್ರತಿಕ್ರಿಯಿಸಲು ವಿಫಲರಾಗಿರುವುದು ಹಲವು ಪ್ರಶ್ನೆಗಳನ್ನು ಹುಟ್ಟು ಹಾಕಿದೆ.

## ಛತ್ತಿಸ್‌ಗಢ-ತೆಲಂಗಾಣ ಗಡಿಯಲ್ಲಿ ಕೆಂಪು ಉಗ್ರರ ಹತ್ಯೆ

**ರಾಯ್ಪುರ:** ಛತ್ತಿಸ್‌ಗಢ ತೆಲಂಗಾಣ ಗಡಿಯಲ್ಲಿ ಭದ್ರತಾ ಪಡೆಗಳು ನಡೆಸಿದ ಎಂಟರ್‌ನಲ್ಲಿ ಮೂವರು ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಛತ್ತೀಸಗಢದ ಬಿಜಾಪುರ ಜಿಲ್ಲೆಯ ಕರೇಗುಟ್ಟಾ ಬೆಟ್ಟಗಳ ಅರಣ್ಯದಲ್ಲಿ ಬೆಳಿಗ್ಗೆ ಭದ್ರತಾ ಪಡೆಗಳ ಜಂಟಿ ತಂಡವು ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾಗ ಗುಂಡಿನ ಚಕಮಕಿ ನಡೆದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇಲ್ಲಿಯವರೆಗೆ, ಎಕೌಂಟರ್ ಸ್ಥಳದಿಂದ ಮೂವರು ನಕ್ಸಲರ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ಭೀಕರ ಗುಂಡಿನ ಕಾಳಗದಲ್ಲಿ ಹಲವಾರು ಮಾವೋವಾದಿಗಳು ಸಹ ಸಾವನ್ನಪ್ಪಿದ್ದಾರೆ ಎಂದು ಶಂಕಿಸಲಾಗಿದೆ ಎಂದು ಅವರು ಹೇಳಿದರು. ಬಸ್ತಾರ್ ಪ್ರದೇಶದಲ್ಲಿ ಪ್ರಾರಂಭಿಸಲಾದ ಅತಿದೊಡ್ಡ ಬಂಡಾಯ ನಿಗ್ರಹ ಕ್ರಮಗಳಲ್ಲಿ ಒಂದಾದ ಈ ಕಾರ್ಯಾಚರಣೆಯಲ್ಲಿ ಜಿಲ್ಲಾ ರಿಸರ್ವ್ ಗಾರ್ಡ್, ಬಸ್ತಾರ್ ಫೈಟರ್ಸ್, ವಿಶೇಷ ಕಾರ್ಯಪಡೆ , ರಾಜ್ಯ ಪೊಲೀಸರ ಎಲ್ಲಾ ಘಟಕಗಳು, ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಅದರ ಗಣ್ಯ ಕಮಾಂಡೋ



ಬೆಟಾಲಿಯನ್ಸ್ ಫಾರ್ ರೆಸಲ್ಯೂಟ್ ಆಕ್ಷನ್ (ಕೋಬ್ರಾ) ಸೇರಿದಂತೆ ವಿವಿಧ ಘಟಕಗಳಿಗೆ ಸೇರಿದ ಸುಮಾರು 10,000 ಭದ್ರತಾ ಸಿಬ್ಬಂದಿ ಭಾಗವಹಿಸಿದ್ದರು.


ತೆಲಂಗಾಣ ಪೊಲೀಸರು ಸಹ ಕಾರ್ಯಾಚರಣೆಯಲ್ಲಿ ಸಹಾಯ ಮಾಡುತ್ತಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮಾವೋವಾದಿಗಳ ಪ್ರಬಲ ಮಿಲಿಟರಿ ರಚನೆಯಾದ ಬೆಟಾಲಿಯನ್ ಸಂಖ್ಯೆ 1 ರ ಹಿರಿಯ ಕಾರ್ಯಕರ್ತರು ಮತ್ತು ಮಾವೋವಾದಿಗಳ ತೆಲಂಗಾಣ ರಾಜ್ಯ ಸಮಿತಿಯ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು ಮತ್ತು ಇದು ಹಲವಾರು ದಿನಗಳವರೆಗೆ ಇರುತ್ತದೆ ಎಂದು ಅವರು ಹೇಳಿದರು.

## ಭಯೋತ್ಪಾದನೆಯ ನಂತರ ಪ್ರತಿಧ್ವನಿಸುತ್ತದೆ ಮಗುವಿನ ಪ್ರಶ್ನೆ

**ಕೋಲ್ಕತ್ತಾ:** ಪ್ರತಿ ಬಾರಿ ಮಗು ನಿದ್ರೆಯಿಂದ ಎಚ್ಚರವಾದಾಗ, ಅಪ್ಪ ಎಲ್ಲಿ ? ಎಲ್ಲೋ ಹೋಗಿದ್ದಾರೆ. ಆ ಧ್ವನಿ, ಅದೇ ಕಾಡುವ ಪ್ರಶ್ನೆಗಳಿಂದ ನಾನು ನಡುಗುತ್ತಿದ್ದೇನೆ, ಇದಕ್ಕೆ ಯಾವುದೇ ಉತ್ತರವಿಲ್ಲ, ಆ ಮಾತುಗಳು ಚೂರುಚೂರಾದ ಗಾಜಿನಂತೆ ನಿಶ್ಚಲತೆಯನ್ನು ಸೀಳಿದಾಗ ನೀಡಬಹುದಾದದ್ದು ಕಣ್ಣೀರು ಮಾತ್ರ. ಮೂರುವರೆ ವರ್ಷದ ಮಗುವಿನ ತಂದೆ ಬಿಟನ್ ಅಧಿಕಾರಿಯನ್ನು ಕಾಶ್ಮೀರದ ಪಹಲ್ಯಾಮ್‌ನಲ್ಲಿ ಭಯೋತ್ಪಾದಕರು ಗುಂಡಿಕ್ಕಿ ಕೊಂದರು. ಸಂತೋಷದಾಯಕ ಕುಟುಂಬ ರಜಾ ದಿನವಾಗಲು ಉದ್ದೇಶಿಸಲಾಗಿದ್ದದ್ದು ಜೀವಮಾನದ ದುಃಸ್ವಪ್ನವಾಗಿ ಮಾರ್ಪಟ್ಟಿತು.

ಮೂಲತಃ ಪಶ್ಚಿಮ ಬಂಗಾಳದವರಾದ ಬಿಟನ್ ಅಧಿಕಾರಿ ಕೆಲವು ವರ್ಷಗಳ ಹಿಂದೆ ತನ್ನ ಕುಟುಂಬದೊಂದಿಗೆ ಅಮೆರಿಕದ ಫ್ಲೋರಿಡಾದಲ್ಲಿ ನೆಲೆಸಿದ್ದರು. ಅವರು ಕಳೆದ ಏಪ್ರಿಲ್ 8 ರಂದು

ಅವನು ಭಯದಿಂದ ಎಚ್ಚರಗೊಂಡು, ನನ್ನ ಕೈ ಹಿಡಿದು, ತಂದೆ ಎಲ್ಲಿದ್ದಾರೆ? ಎಂದು ಬೇಡಿ



ಕೊಳ್ಳುತ್ತಾನೆ ಕೋಲ್ಕತ್ತಾದಲ್ಲಿ ಮನೆಗೆ ಹಿಂತಿರುಗಿದ್ದು, ದುಃಖ ಇನ್ನೂ ಆಳವಾಗಿ ಹರಿಯುತ್ತದೆ. ಬಿಟಾನ್ ಒಬ್ಬ ಶ್ರದ್ಧಾಭರಿತ ಪತಿ ಮತ್ತು ತಂದೆ ಮಾತ್ರವಲ್ಲ, ವಿದೇಶದಲ್ಲಿ ವಾಸಿಸುತ್ತಿದ್ದರೂ, ಅವನ ವಯಸ್ಸಾದ ಮತ್ತು ಅಸ್ವಸ್ಥ ಪೋಷಕರಿಗೆ ಪ್ರಾಥಮಿಕ ಆರೈಕೆದಾರರಾಗಿದ್ದರು.

ಅವರ ತಂದೆ, 87 ವರ್ಷದ ಬೀರೇಶ್ವರ ಅಧಿಕಾರಿ ಮತ್ತು ಅವರ 75 ವರ್ಷದ ತಾಯಿ, ಮಾಯಾ ಅಧಿಕಾರಿ ಇಬ್ಬರೂ ಅನಾರೋಗ್ಯದಿಂದ ಬಳಲುತ್ತಿದ್ದಾರೆ.ಅವರ ವೈದ್ಯಕೀಯ ವೆಚ್ಚವನ್ನು ನಿರ್ವಹಿಸಿದವರು, ಅವರು ಎಂದಿಗೂ ಔಷಧಿಯ ಡೋಸ್ ಅಥವಾ ವೈದ್ಯರ ಅಪಾಯಿಂಟೆಂಟ್ ಅನ್ನು ತಪ್ಪಿಸಿಕೊಳ್ಳದಂತೆ ನೋಡಿಕೊಳ್ಳಲು ವಿದೇಶದಿಂದ ಹಣವನ್ನು ಕಳುಹಿಸಿದರು.

> **ಒಬ್ಬೊಬ್ಬರಾಗಿ ಗುಂಡು ಹಾರಿಸಿದರು**
>
> ಸಂಬಂಧಿಕರನ್ನು ಭೇಟಿ ಮಾಡಲು ಕೋಲ್ಕತ್ತಾಗೆ ಬಂದಿದ್ದರು ಮತ್ತು ದಾಳಿಯ ಸಮಯದಲ್ಲಿ ತಮ್ಮ ಕುಟುಂಬದೊಂದಿಗೆ ಕಾಶ್ಮೀರದಲ್ಲಿ ರಜೆಯಲ್ಲಿದ್ದರು. ನಾವು ಎಲ್ಲಿಂದ ಬಂದವರು ಎಂದು ಅವರು ಉಗ್ರರು ಕೇಳಿದರು, ನಂತರ ನಮ್ಮನ್ನು ಬೇರ್ಪಡಿಸಿದರು. ಅವರ ಧರ್ಮವನ್ನು ಕೇಳಿದರು ನಂತರ ಸಾಲಾಗಿ ನಿಲ್ಲಿಸಿ ಒಬ್ಬೊಬ್ಬರಾಗಿ ಗುಂಡು ಹಾರಿಸಿದರು. ನನ್ನ ಗಂಡನನ್ನು ನಮ್ಮ ಮಗುವಿನ ಮುಂದೆಯೇ ಕೊಲ್ಲಲಾಯಿತು. ನಾನು ಅವನಿಗೆ ಇದನ್ನು ಹೇಗೆ ವಿವರಿಸಲಿ ಎಂದು ಕಣ್ಣೀರಿಟ್ಟ ಪತ್ನಿ.

## ಭಾರತ ಪ್ರವಾಸ ಮುಗಿಸಿ ಅಮೆರಿಕಾಗೆ ಮರಳಿದ ವ್ಯಾನ್ಸ್ ಕುಟುಂಬ

**ಜೈಪುರ:** ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ತಮ್ಮ ಭಾರತ ಪ್ರವಾಸ ಮುಗಿಸಿ ತಮ್ಮ ದೇಶಕ್ಕೆ ವಾಪಸ್ಸಾದರು. ವ್ಯಾನ್ಸ್, ಅವರ ಪತ್ನಿ ಉಷಾ ವ್ಯಾನ್ಸ್ ಮತ್ತು ಅವರ ಮೂವರು ಮಕ್ಕಳು ಜೈಪುರ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದಲ್ಲಿ ವಾಷಿಂಗ್ಟನ್ ಗೆ ತೆರಳಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವ್ಯಾನ್ಸ್ ಕುಟುಂಬ ರಾತ್ರಿ ದೆಹಲಿಯಿಂದ ಜೈಪುರಕ್ಕೆ ಆಗಮಿಸಿತು. ರ್ಯಕ್ರಮವೊಂದರಲ್ಲಿ ವ್ಯಾನ್ಸ್ ಭಾರತ-ಯುಎಸ್ ಸಂಬಂಧದ ಬಗ್ಗೆ ಭಾಷಣ ಮಾಡುವ ಮೊದಲು ಅವರು ಅಂಬರ್ ಕೋಟೆಗೆ ಭೇಟಿ ನೀಡಿದ್ದರು. ಜೈಪುರಕ್ಕೆ ಮರಳುವ ಮೊದಲು ಅವರು ಆಗ್ರಾದ ತಾಜ್ ಮಹಲ್ ಗೆ ಭೇಟಿ ನೀಡಿದರು.

ಪ್ರಧಾನಿ ನರೇಂದ್ರ ಮೋದಿಯವರನ್ನು ರಾಜಧಾನಿಯಲ್ಲಿರುವ ಅವರ ನಿವಾಸದಲ್ಲಿ ಭೇಟಿಯಾಗುವ ಮೊದಲು ವ್ಯಾನ್ಸ್ ದೆಹಲಿಯ ಅಕ್ಷರಧಾಮ ದೇವಾಲಯಕ್ಕೆ ಭೇಟಿ ನೀಡುವ ಮೂಲಕ ತಮ್ಮ ಭಾರತ ಪ್ರವಾಸವನ್ನು ಪ್ರಾರಂಭಿಸಿದ್ದರು. ಇದೀಗ ತಮ್ಮ ಮೂರು ದಿನಗಳ ಭಾರತ ಪ್ರವಾಸದಿಂದ ಅವರು ಅಮೆರಿಕಕ್ಕೆ ವಾಪಸ್ಸಾಗಿದ್ದಾರೆ.

## ಮುಸ್ಲಿಮನಾಗಿರುವುದು ನಾಚಿಕೆ ಗಾಯಕ ಸಲೀಂ ಮರ್ಚೆಂಟ್

**ಮುಂಬೈ:** ಪಹಲ್ಗಾಮ್‌ನಲ್ಲಿ ನಡೆದ ಕ್ರೂರ ಭಯೋತ್ಪಾದಕ ದಾಳಿಯ ನಂತರ ಸಂಗೀತ ಸಂಯೋಜಕ ಮತ್ತು ಹಿನ್ನೆಲೆ ಗಾಯಕ ಸಲೀಂ ಮರ್ಚೆಂಟ್ ಕೂಡ ದುಃಖ ಮತ್ತು ಕೋಪವನ್ನು ವ್ಯಕ್ತಪಡಿಸಿದ್ದಾರೆ. ಸಲೀಂ ಖಾನ್ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಭಾವನಾತ್ಮಕ ವೀಡಿಯೊವನ್ನು ಪೋಸ್ಟ್ ಮಾಡಿದ್ದಾರೆ, ಅದರಲ್ಲಿ ಸಲೀಂ ದಾಳಿಯನ್ನು ಬಲವಾಗಿ ಖಂಡಿಸಿದ್ದಾರೆ. ಪಹಲ್ಗಾಮ್‌ನಲ್ಲಿ ಮುಗ್ಧ ಜನರು ಹಿಂದೂಗಳಾಗಿ



ದ್ದರಿಂದ ಕೊಲ್ಲಲ್ಪಟ್ಟರು. ಹಂತಕರು ಮುಸ್ಲಿಮರೇ? ಇಲ್ಲ, ಅವರು ಭಯೋತ್ಪಾದಕರು ಎಂದು ಸಲೀಂ ಹೇಳಿದ್ದಾರೆ.

ಮುಸ್ಲಿಂ ಆಗಿರುವ ನನಗೆ ಇದೆಲ್ಲದಕ್ಕೂ ಸಾಕ್ಷಿಯಾಗಬೇಕಾಗಿ ಬಂದಿರುವುದಕ್ಕೆ ನಾಚಿಕೆ ಹಾಗೂ ಅತ್ಯಂತ ದುರ್ದೈವದ ಸಂಗತಿ ಎಂದು ಹೇಳಿದ್ದಾರೆ. ಆ ಹಂತಕರು ಮುಸ್ಲಿಮರಲ್ಲ, ಭಯೋತ್ಪಾದಕರು ಎಂದು ಅವರು ಹೇಳಿದ್ದಾರೆ.

### ಕ್ರೈಮಿಯಾವನ್ನು ರಷ್ಯಾದ ಭಾಗ ಎಂದು ಒಪ್ಪಿಕೊಳ್ಳುವಂತೆ ಝೆಲೆನ್ಸ್ಕಿ ಮೇಲೆ ಒತ್ತಡ ಹಾಕಿದ ಟ್ರಂಪ್


# ಟಾಮ್ ಜೆರ್ರಿ ರೀತಿಯಲ್ಲೇ ಇದೆ ಟ್ರಂಪ್ ಝೆಲೆನ್ಸ್ಕಿ ಜಗಳ ಕಾಯುವ ಪರಿ

**ವಾಷಿಂಗ್ಟನ್ ಡಿಸಿ:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ನಡುವೆ ಮತ್ತೆ ವಾಗ್ವಾದ ನಡೆದಿದೆ. ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸುವ ಬಗ್ಗೆ ಮಾತುಕತೆ ನಡೆಯುತ್ತಿರುವಾಗಲೇ, ಕ್ರೈಮಿಯಾ ಕುರಿತು ಉಭಯ ನಾಯಕರ ನಡುವೆ ಭಿನ್ನಾಭಿಪ್ರಾಯ ಉಂಟಾಗಿದೆ.

ಕ್ರೈಮಿಯಾವನ್ನು ರಷ್ಯಾದ ಭಾಗವೆಂದು ಒಪ್ಪಿಕೊಳ್ಳಬೇಕು ಎಂದು ಡೊನಾಲ್ಡ್ ಟ್ರಂಪ್ ಅವರು ವೊಲೊಡಿಮಿರ್ ಝೆಲೆನ್ಸ್ಕಿ ಅವರ ಮೇಲೆ ಒತ್ತಡ ಹೇರಿದ್ದಾರೆ. ಆದರೆ ಟ್ರಂಪ್ ಅವರ ಈ ಒತ್ತಾಯಕ್ಕೆ ಮಣಿಯದ ಝೆಲೆನ್ಸ್ಕಿ, ಕ್ರೈಮಿಯಾ ಕುರಿತು ಉಕ್ರೇನ್ ತನ್ನ ಮೂಲ ತತ್ವಗಳಿಗೆ ಬದ್ಧವಾಗಿರುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇದರಿಂದ ಸಹಜವಾಗಿ ಕೆರಳಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ವೊಲೊಡಿಮಿರ್ ಝೆಲೆನ್ಸ್ಕಿ ಅವರ ಹಠಮಾರಿ ಧೋರಣೆಯಿಂದ ರಷ್ಯಾ-ಉಕ್ರೇನ್ ಕದನ ವಿರಾಮ ಒಪ್ಪಂದ ಸಾಧ್ಯವಾಗುತ್ತಿಲ್ಲ ಎಂದು ಹರಿಹಾಯ್ದಿದ್ದಾರೆ. ಅಲ್ಲದೇ ಝೆಲೆನ್ಸ್ಕಿ ಇದೇ ವರ್ತನೆ ಮುಂದುವರೆಸಿದರೆ, ಕದನ ವಿರಾಮ ಒಪ್ಪಂದ ಮಧ್ಯಸ್ಥಿಕೆ ಜವಾಬ್ದಾರಿಯಿಂದ ಹಿಂದೆ ಸರಿಯುವುದಾಗಿಯೂ ಟ್ರಂಪ್ ಬೆದರಿಕೆ ಹಾಕಿದ್ದಾರೆ. ರಷ್ಯಾ ಕ್ರೈಮಿಯಾವನ್ನು ಆಕ್ರಮಿಸಿ ದಶಕಗಳೇ ಉರುಳಿವೆ. ಹೀಗಾಗಿ ಉಕ್ರೇನ್ ಈಗ ಕ್ರೈಮಿಯಾವನ್ನು ರಷ್ಯಾದ ಭಾಗ ಎಂದು ಒಪ್ಪಿಕೊಳ್ಳಬೇಕು ಎಂಬುದು ಡೊನಾಲ್ಡ್ ಟ್ರಂಪ್ ಅವರ ವಾದವಾಗಿದೆ. ಆದರೆ ಈ ಆಗ್ರಹವನ್ನು ತಿರಸ್ಕರಿಸಿರುವ ಝೆಲೆನ್ಸ್ಕಿ, ಕ್ರೈಮಿಯಾ ಮೇಲಿನ ರಷ್ಯಾದ ಅತಿಕ್ರಮಣವನ್ನು ಉಕ್ರೇನ್ ಎಂದಿಗೂ ಒಪ್ಪುವುದಿಲ್ಲ.

ಇದು ನಮ್ಮ ಸಂವಿಧಾನಕ್ಕೆ ವಿರುದ್ಧವಾಗಿದೆ ಎಂದು ಹೇಳಿದ್ದಾರೆ. ಆದರೆ



> ರಷ್ಯಾ-ಉಕ್ರೇನ್ ನಡುವಿನ ಕದನ ವಿರಾಮಕ್ಕೆ ಸಂಬಂಧಿಸಿದಂತೆ ಲಂಡನ್ ನಲ್ಲಿ ನಡೆಯುತ್ತಿರುವ ಮಾತುಕತೆ ವೇಳೆ, ಅಮೆರಿಕವು ಎರಡು ಪ್ರಮುಖ ಅಂಶಗಳನ್ನು ಉಕ್ರೇನ್ ಮುಂದಿಟ್ಟಿದೆ. ಮೊದಲನೆಯದಾಗಿ, ಕ್ರೈಮಿಯಾವನ್ನು ರಷ್ಯಾದ ಭಾಗವೆಂದು ಅಧಿಕೃತವಾಗಿ ಉಕ್ರೇನ್ ಒಪ್ಪಿಕೊಳ್ಳಬೇಕು. ಎರಡನೆಯದಾಗಿ, ಉಕ್ರೇನ್ ಎಂದಿಗೂ ನ್ಯಾಟೋ ಸದಸ್ಯತ್ವ ಪಡೆಯಬಾರದು. ಆದರೆ ಈ ಎರಡೂ ಅಂಶಗಳನ್ನು ಉಕ್ರೇನ್ ತಿರಸ್ಕರಿಸಿದೆ.

**ಭುಗಿಲೆದ್ದ ಕ್ರೈಮಿಯಾ ವಿವಾದ**

ಡೊನಾಲ್ಡ್ ಟ್ರಂಪ್ ಮಾತ್ರ ಕ್ರೈಮಿಯಾ ವಿವಾದ ಬಗೆಹರಿದರೆ, ರಷ್ಯಾ-ಉಕ್ರೇನ್ ನಡುವಿನ ಕದನ ವಿರಾಮ ಒಪ್ಪಂದವನ್ನು ಜಾರಿಗೊಳಿಸುವುದು ಸುಲಭವಗುತ್ತದೆ ಎಂದು ವಾದಿಸುತ್ತಿದ್ದಾರೆ.

ಇದಕ್ಕೆ ವ್ಯತಿರಿಕ್ತವಾಗಿ ಕ್ರೈಮಿಯಾ ಬಗ್ಗೆ ಮಾತುಕತೆ ನಡೆಸುವುದೇ ನಿಷ್ಪ್ರಯೋಜಕ ಎಂದು ತಿರುಗೇಟು ನೀಡಿದ್ದಾರೆ. ಝೆಲೆನ್ಸ್ಕಿ ಅವರಿಗೆ ಮತ್ತೆ ಬುದ್ಧಿವಾದ ಹೇಳಿರುವ ಟ್ರಂಪ್, ಅಮೆರಿಕವು ನಿಮ್ಮ ದೇಶದಲ್ಲಿ ನಡೆಯುತ್ತಿರುವ ಹತ್ಯಾಕಾಂಡವನ್ನು ನಿಲ್ಲಿಸಲು ಪ್ರಯತ್ನಿಸುತ್ತಿದೆ. ನಾವು ಶಾಂತಿ ಒಪ್ಪಂದಕ್ಕೆ ಹತ್ತಿರವಾಗಿದ್ದೇವೆ. ಈ ಸಂದರ್ಭದಲ್ಲಿ ಅತ್ಯಂತ ಎಚ್ಚರಿಕೆಯ ಹೆಜ್ಜೆಗಳನ್ನಿಡಿ ಎಂದು ಕಿವಿಮಾತು ಹೇಳಿದ್ದಾರೆ.

- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲನ್ಸ್ಕಿ ನಡುವೆ ಹೊಸ ವಿವಾದ
- ಕ್ರೈಮಿಯಾವನ್ನು ರಷ್ಯಾದ ಭಾಗ ಎಂದು ಒಪ್ಪಿಕೊಳ್ಳುವಂತೆ ವೊಲೊಡಿಮಿರ್ ಝೆಲೆನ್ಸ್ಕಿ ಮೇಲೆ ಒತ್ತಡ ಹಾಕಿದ ಡೊನಾಲ್ಡ್ ಟ್ರಂಪ್
- ಕ್ರೈಮಿಯಾ ಮೇಲಿನ ರಷ್ಯಾದ ಅತಿಕ್ರಮಣವನ್ನು ಒಪ್ಪಿಕೊಳ್ಳಲು ನಮ್ಮ ಸಂವಿಧಾನ ಅವಕಾಶ ನೀಡಲ್ಲ ಎಂದ ಉಕ್ರೇನ್ ಅಧ್ಯಕ್ಷ
- ಡೊನಾಲ್ಡ್ ಟ್ರಂಪ್-ವೊಲೊಡಿಮಿರ್ ಝೆಲೆನ್ಸ್ಕಿ

ವೊಲೊಡಿಮಿರ್ ಝೆಲೆನ್ಸ್ಕಿ ಅವರ ಹಠಮಾರಿ ಧೋರಣೆಯಿಂದ ಮಾತುಕತೆಗಳು ಸ್ಥಗಿತಗೊಳ್ಳುವ ಹಂತಕ್ಕೆ ತಲುಪಿವೆ ಎಂದು ಡೊನಾಲ್ಡ್ ಟ್ರಂಪ್ ದೂರಿದ್ದಾರೆ. ರಷ್ಯಾ 2014 ರಲ್ಲಿ ಕ್ರೈಮಿಯಾವನ್ನು ಯಾವುದೇ ಪ್ರತಿರೋಧವಿಲ್ಲದೆ ವಶಪಡಿಸಿಕೊಂಡಿತ್ತು.

## ಮಿನಿ ನ್ಯೂಸ್

### ಕಾಶ್ಮೀರದ ಉಧಂಪುರದಲ್ಲಿ ಗುಂಡಿನ ಚಕಮಕಿ, ಯೋಧ ಹುತಾತ್ಮ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಉಧಂಪುರದಲ್ಲಿ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಯೋಧ ಹುತಾತ್ಮರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಯೋತ್ಪಾದಕರ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ ಪ್ರಾರಂಭಿಸಲಾದ ಕಾರ್ಡನ್ ಮತ್ತು ಶೋಧ ಕಾರ್ಯಾಚರಣೆಯ ಸಮಯದಲ್ಲಿ ದುಡು-ಬಸಂತ್‌ಗರ್ ಪ್ರದೇಶದಲ್ಲಿ ಗುಂಡಿನ ದಾಳಿ ನಡೆದಿದೆ ಎಂದು ಅವರು ಹೇಳಿದರು.

ನಿರ್ದಿಷ್ಟ ಗುಪ್ತಚರ ಮಾಹಿತಿಯ ಆಧಾರದ ಮೇಲೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆಯನ್ನು ಇಂದು ಉಧಂಪುರದ ಬಸಂತ್‌ಗಢದಲ್ಲಿ ಪ್ರಾರಂಭಿಸಲಾಯಿತು.

ಉಗ್ರರೊಂದಿಗೆ ಸಂಪರ್ಕವನ್ನು ಸ್ಥಾಪಿಸಲಾಯಿತು ಮತ್ತು ಭೀಕರ ಗುಂಡಿನ ಚಕಮಕಿ ನಡೆಯಿತು. ಆರಂಭಿಕ ವಿನಿಮಯದಲ್ಲಿ ನಮ್ಮ ಧೈರ್ಯಶಾಲಿಗಳಲ್ಲಿ ಒಬ್ಬರು ತೀವ್ರವಾಗಿ ಗಾಯಗೊಂಡರು ಮತ್ತು ನಂತರ ಉತ್ತಮ ವೈದ್ಯಕೀಯ ಪ್ರಯತ್ನಗಳ ಹೊರತಾಗಿಯೂ ನಿಧನರಾದರು ಎಂದು ಸೇನೆಯ ಜಮು ಮೂಲದ ವೈಟ್ ನೈಟ್ ಕಾಪ್ಸ್ 9 ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

### ಡ್ರಗ್ಸ್ ಹೊಂದಿದ್ದ ಪೆಡ್ಲರ್ ಬಂಧನ

**ಗುವಾಹಟಿ:** ಅಸ್ಸಾನ ಕಚಾರ್ ಜಿಲ್ಲೆಯಲ್ಲಿ 3 ಕೋಟಿ ರೂ. ಮೌಲ್ಯದ ಮಾದಕ ದ್ರವ್ಯಗಳೊಂದಿಗೆ ಶಂಕಿತ ಪೆಡ್ಲರ್ ನನ್ನು ಬಂಧಿಸಲಾಗಿದೆ. ಡ್ರಗ್ಸ್ ಪೆಡ್ಲರ್ ಬಂಧನವನ್ನು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಸ್ಪಷ್ಟಪಡಿಸಿದ್ದಾರೆ.ಜಿಲ್ಲೆಯ ಸಿಲ್ಚುಬಿ ಪ್ರದೇಶದಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಅವರು ಹೇಳಿದರು.

ಸಿಲ್ಚುಬಿಯಲ್ಲಿ ಪ್ರಮುಖ ಮಾದಕವಸ್ತು ದಾಳಿ 3 ಕೋಟಿ ರೂ.ಗಳ ಮೌಲ್ಯದ 10,000 ಯಾಬಾ ಮಾತ್ರೆಗಳನ್ನು ವಶಪಡಿಸಿಕೊಂಡಿದೆ. ಒಬ್ಬ ಪೆಡ್ಲರ್ ನನ್ನು ಬಂಧಿಸಲಾಗಿದೆ ಎಂದು ಶರ್ಮಾ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಯಾಬಾ ಮಾತ್ರೆಗಳು ಭಾರತದಲ್ಲಿ ಕಾನೂನುಬಾಹಿರವಾಗಿವೆ ಏಕೆಂದರೆ ಇದರಲ್ಲಿ ನಿಯಂತ್ರಿತ ಪದಾರ್ಥಗಳ ಕಾಯ್ದೆಯಡಿ ಶೆಡ್ಯೂಲ್ ವಸ್ತುವಾದ ಮೆಥಾಂಫೆಟಮೈನ್ ಇದೆ.

### ಅಕ್ರಮ ಹಣ ವರ್ಗಾವಣೆ

#### ಎಫ್‌ಐಐಟಿ ಜೆಇಇ ಕೇಂದ್ರದ ಮೇಲೆ ಇಡಿ ದಾಳಿ

**ನವದೆಹಲಿ:** ಕೋಚಿಂಗ್ 'ಇನ್ಸಿಟ್ಯೂಟ್ ಇನಿ. ಎಫ್‌ಐಐಟಿ ಜೆಇಇ ವಿರುದ್ಧ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯವು ದಿಲ್ಲಿ-ಎನ್‌ಸಿಆರ್‌ನ ಹಲವು ಸ್ಥಳಗಳ ಮೇಲೆ ಇಂದು ದಾಳಿ ನಡೆಸಿದೆ.

ಕೋಚಿಂಗ್ ಇನ್ಸಿಟ್ಯೂಟ್‌ನ ಪ್ರವರ್ತಕರು ಸೇರಿದಂತೆ ದೆಹಲಿ ಮತ್ತು ನೆರೆಯ ನೋಯ್ಡಾ ಮತ್ತು ಗುರುಗ್ರಾಮದ ಸ್ಥಳಗಳಲ್ಲಿ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮನಿ ಲಾಂಡರಿಂಗ್ ತಡೆ ಕಾಯ್ದೆ ಅಡಿಯಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದೆ.

ಎಫ್‌ಐಐಟಿ ಜೆಇಇ ಕೇಂದ್ರಗಳು ಇದ್ದಕ್ಕಿದ್ದಂತೆ ಮುಚ್ಚಲ್ಪಟ್ಟಿವೆ ಮತ್ತು ತಮ್ಮ ಮಕ್ಕಳನ್ನು ಮೂಲೆಗುಂಪು ಮಾಡಿವೆ ಎಂದು ಕೆಲವು ಪೋಷಕರು ಜನವರಿಯಲ್ಲಿ ನೀಡಿದ ದೂರಿನ ಮೇರೆಗೆ ನೋಯ್ಡಾ ಮತ್ತು ದೆಹಲಿ ಪೊಲೀಸರು ದಾಖಲಿಸಿದ ಎಫ್‌ಐಆರ್‌ಗಳ ಆಧಾರದ ಮೇಲೆ ಈ ಪ್ರಕರಣ. ಹುಟ್ಟಿಕೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೋಷಕರು ಲಕ್ಷಾಂತರ ರೂ. ಶುಲ್ಕವಾಗಿ ಠೇವಣಿ ಇಟ್ಟರು ಆದರೆ ಅವರಿಗೆ ಯಾವುದೇ ಸೇವೆ ಅಥವಾ ಮರುಪಾವತಿ ಸಿಗಲಿಲ್ಲ ಎಂದು ಅವರು ಹೇಳಿದರು. ಎಫ್‌ಐಐಟಿ ಜೆಇಇ ಎಂಜಿನಿಯರಿಂಗ್ ಆಕಾಂಕ್ಷಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುತ್ತದೆ ಮತ್ತು ದೇಶಾದ್ಯಂತ 73 ಕೇಂದ್ರಗಳನ್ನು ಹೊಂದಿದೆ.

### ಶಾಲೆಯ ಮೇಲೆ ದಾಳಿ ಹತ್ತು ಸಾವು

**ಗಾಜಾ:** ಗಾಜಾ ನಗರದ ಜಾಫಾ ಶಾಲೆಯ ಮೇಲೆ ಇಸ್ರೇಲ್ ನಡೆಸಿದ ವಾಯುದಾಳಿಯಲ್ಲಿ ಹತ್ತು ಜನರು ಸಾವನ್ನಪ್ಪಿದ್ದಾರೆ. ಈ ಶಾಲೆಯು ಸ್ಥಳಾಂತರಗೊಂಡ ಕುಟುಂಬಗಳಿಗೆ ಆಶ್ರಯ ನೀಡುತ್ತಿತ್ತು. ಈ ದಾಳಿಯು ಪ್ಯಾಲೆಸ್ಟೀನಿಯನ್ ಭಯೋತ್ಪಾದಕ ಗುಂಪುಗಳಾದ ಹಮಾಸ್ ಮತ್ತು ಇಸ್ಲಾಮಿಕ್ ಜಿಹಾದ್‌ನ ಉಗ್ರಗಾಮಿಗಳನ್ನು ಗುರಿಯಾಗಿಸಿಕೊಂಡಿದೆ ಮತ್ತು ನಾಗರಿಕರಿಗೆ ಆಗುವ ಹಾನಿಯನ್ನು ಕಡಿಮೆ ಮಾಡಲು ಪ್ರಯತ್ನಗಳನ್ನು ಮಾಡಲಾಗಿದೆ ಎಂದು ಇಸ್ರೇಲಿ ಸೇನೆ ತಿಳಿಸಿದೆ. ಪ್ರತ್ಯಕ್ಷದರ್ಶಿಗಳು ಈ ಭೀಕರ ದೃಶ್ಯ ವಿವರಿಸಿದ್ದಾರೆ, ಉಮ್ ಮೊಹಮ್ಮದ್ ಅಲ್-ಹ್ವೈಟಿ ಜನರು ಸಂತ್ರಸ್ತರನ್ನು ರಕ್ಷಿಸಲು ಬೆಂಕಿಯ ಮೂಲಕ ಹೇಗೆ ಓಡಿಹೋದರು ಎಂಬುದನ್ನು ವಿವರಿಸಿದ್ದಾರೆ.

ನಾವು ನಿದ್ರಿಸುತ್ತಿದ್ದಾಗ ಇದ್ದಕ್ಕಿದ್ದಂತೆ ಏನೋ ಸ್ಫೋಟಗೊಂಡಿದೆ, ಏನು ಎಂದು ನಾವು ಹುಡುಕಲು ಪ್ರಾರಂಭಿಸಿದ್ದಾಗ ಇಡೀ ಶಾಲೆ ಉರಿಯುತ್ತಿರುವುದನ್ನು, ಡೇರೆಗಳು ಉರಿಯುತ್ತಿರುವುದನ್ನು, ಎಲ್ಲವೂ ಉರಿಯುತ್ತಿರುವುದನ್ನು ನಾವು ನೋಡಿದೆವು ಎಂದು ಹ್ವೈಟಿ ಭಯಾನಕ ಘಟನೆ ವಿವರ ನೀಡಿದ್ದಾರೆ.

### ಪ್ಲೀಸ್ ಕಾಶ್ಮೀರಿಗಳು ನಿಮ್ಮ ಶತ್ರುಗಳೆಂದು ಭಾವಿಸಬೇಡಿ: ಒಮರ್ ಅಬ್ದುಲ್ಲಾ



**ಶ್ರೀನಗರ:** ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ವಿರುದ್ಧ ದೇಶದಾದ್ಯಂತ ಶೋಕ ಮತ್ತು ಖಂಡನೆ ವ್ಯಕ್ತವಾಗುತ್ತಿರುವ ನಡುವೆ, ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಕಾಶ್ಮೀರಿಗಳು ನಿಮ್ಮ ಶತ್ರುಗಳು ಎಂಬ ಭಾವನೆಗೆ ಒಳಗಾಗಬೇಡಿ ಎಂದು ಗುರುವಾರ ದೇಶದ ಜನರಿಗೆ ಮನವಿ ಮಾಡಿದ್ದಾರೆ.

ಸುದ್ದಿಸಂಸ್ಥೆ ಜೊತೆ ಮಾತನಾಡಿದ ಅವರು, ದಾಳಿಯಲ್ಲಿನ ಸಂತ್ರಸ್ತರೊಂದಿಗೆ ನಾವಿದ್ದೇವೆ ಮತ್ತು ಈ ಘಟನೆಗೆ ಕಾಶ್ಮೀರಿಗಳನ್ನು ದೂಷಿಸುವುದನ್ನು ನಿಲ್ಲಿಸುವಂತೆ ದೇಶದ ಜನರಿಗೆ ಮನವಿ ಮಾಡಿದರು.

ದಾಳಿಯನ್ನು ಖಂಡಿಸಿ ವಿರೋಧ ವ್ಯಕ್ತಪಡಿಸಿದ ಕಾಶ್ಮೀರಿ ಜನರ ಪ್ರಯತ್ನಗಳನ್ನು ಶ್ಲಾಘಿಸಿದ ಅವರು, ಇದು ಸ್ಥಳೀಯ ಜನರಿಂದ ಆಗಿದ್ದಲ್ಲ, ಬಾಹ್ಯ ಅಂಶಗಳಿಂದ ನಡೆಸಲ್ಪಟ್ಟ ದಾಳಿಯಾಗಿದೆ ಎಂದು ಹೇಳಿದರು. ಇಂತಹ ದುರಂತ ಘಟನೆಯನ್ನು ಎದುರಿಸಬೇಕಾದ ಸಂತ್ರಸ್ತ ಕುಟುಂಬಗಳಿಗೆ ನಾನು ಒಗ್ಗಟ್ಟನ್ನು ತೋರಿಸಲು ಬಯಸುತ್ತೇನೆ... ಇಲ್ಲಿಗೆ ತಮ್ಮ ರಜೆಯನ್ನು ಆನಂದಿಸಲು ಬಂದ ನಮ್ಮ 25 ಅತಿಥಿಗಳು ಅಥವಾ ಅಲ್ಲಿನ ಜನರನ್ನು ರಕ್ಷಿಸಲು ತನ್ನ ಪ್ರಾಣ ತ್ಯಾಗ ಮಾಡಿದ ನಮ್ಮ ಕಣಿವೆಯ ಒಬ್ಬ ವ್ಯಕ್ತಿಯ ಕುಟುಂಬಗಳಿಗೆ ಸಂತಾಪ ಸೂಚಿಸುತ್ತೇವೆ. ದಾಳಿಯನ್ನು ಖಂಡಿಸಿದ ಕಾಶ್ಮೀರದ ಜನರಿಗೆ ನಾನು ಕೃತಜ್ಞನಾಗಿದ್ದೇನೆ' ಎಂದು ಅಬ್ದುಲ್ಲಾ ಹೇಳಿದರು.

